

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 28 ಬುಧವಾರ 2024

ಸಂಪುಟ: 45 | ಸಂಚಿಕೆ: 133 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಬೊಮ್ಮಾಯಿ ಸರ್ಕಾರ ಸಿಎಂ ಸಿದ್ದರಾಮಯ್ಯ ಪತ್ನಿಗೆ

14 ನಿವೇಶನ ನೀಡಿಲ್ಲ; ಮುಡಾ ಸಭೆಯೂ ಅನುಮೋದಿಸಿಲ್ಲ

● ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೊಸ ಬಾಂಬ್ ● ನಮ್ಮದೇ ಪಕ್ಷದಲ್ಲಿದ್ದರೂ ಅಂದಿನ ಮುಡಾ ಅಧ್ಯಕ್ಷ ರಾಜೀವ್ ಸಿಎಂ ಸಿದ್ದರಾಮಯ್ಯ ಆಪ್ತ! ● ಅದ್ಹೇಗೆ 14 ನಿವೇಶನ ಅವರಿಗೆ ದಕ್ಕಿದವು; ಅಚ್ಚರಿ!

ಬೆಂಗಳೂರು, ಆ.27(ಕೆಎಂಶಿ)–ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಕುಟುಂಬಕ್ಕೆ ಪಡೆದಿರುವ 14 ನಿವೇಶನಗಳನ್ನು ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರ ನೀಡಿಲ್ಲ ಎಂದು ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೊಸ ಬಾಂಬ್ ಸಿಡಿಸಿದ್ದಾರೆ.

ಸರ್ಕಾರ ಅಷ್ಟೇ ಅಲ್ಲ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಮಂಡಳಿ ಸಭೆಯಲ್ಲೂ ಇದಕ್ಕೆ ಅನುಮೋದನೆ ನೀಡಿಲ್ಲ ಎಂದಿದ್ದಾರೆ. ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರ ಭೇಟಿ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದಿನ ಮುಡಾ ಅಧ್ಯಕ್ಷರಾಗಿದ್ದ ರಾಜೀವ್, ನಮ್ಮ ಪಕ್ಷದವರೇ ಆಗಿದ್ದರೂ ಅವರು ಮುಖ್ಯಮಂತ್ರಿ ಆಪ್ತ ಸ್ನೇಹಿತರು. ಸರ್ಕಾರ ಮತ್ತು ಮುಡಾ ಮಂಡಳಿ ಅನುಮತಿ ನೀಡದೆ ಸಿದ್ದರಾಮಯ್ಯ ಅವರ ಕುಟುಂಬಕ್ಕೆ ಈ ನಿವೇಶನಗಳು ಹೇಗೆ ದೊರೆತವು ಎಂದು ಆಶ್ಚರ್ಯ ವ್ಯಕ್ತಪಡಿಸಿದರು.


ಬಿ.ವೈ.ವಿಜಯೇಂದ್ರ

ಸಿದ್ದರಾಮಯ್ಯ ಅಂದು ವಿಧಾನಸಭೆಯ ಪ್ರತಿಪಕ್ಷದ ನಾಯಕರಾಗಿ ಕಾರ್ಯ ನಿರ್ವಹಿಸುತ್ತಿದ್ದರು. 14 ನಿವೇಶನಗಳು ತಮ್ಮ ಕುಟುಂಬಕ್ಕೆ ಬರುವುದನ್ನು ತಿಳಿದಿದ್ದರೂ ಅಂದು ಅವರು ಅದನ್ನು ತಡೆಯಲು ಪ್ರಯತ್ನಿಸಲಿಲ್ಲ.

ಆ ಜಮೀನೇ ಮುಡಾಗೆ ಸೇರಿದ್ದೋ ಅಥವಾ ದೇವರಾಜ್ ಎಂಬ ವ್ಯಕ್ತಿಗೆ ಸೇರಿದ್ದೋ ಎಂಬ ಬಗ್ಗೆ ದಾಖಲೆಗಳಲ್ಲೇ ಗೊಂದಲ ಇದೆ. ಇದೆಲ್ಲವನ್ನೂ ತಿಳಿದಿದ್ದರೂ ತಮ್ಮ ಕುಟುಂಬಕ್ಕೆ ಬೆಲೆ ಬಾಳುವ ■6ನೇ ಪುಟಕ್ಕೆ

ಕೇಂದ್ರ ಸಚಿವ ಕುಮಾರಸ್ವಾಮಿ, ಮಾಜಿ ಸಚಿವರಾದ ಜನಾರ್ಧನ ರೆಡ್ಡಿ, ಮುರುಗೇಶ್ ನಿರಾಣಿ, ಶಶಿಕಲಾ ಜೊಲ್ಲೆ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರ ಅನುಮತಿಗೆ ಆಗ್ರಹಿಸಿ

ಆ.31ರಂದು ರಾಜಭವನಕ್ಕೆ ಕಾಂಗ್ರೆಸ್ ಶಾಸಕರ ಪರೇಡ್

ಬೆಂಗಳೂರು, ಆ.27(ಕೆಎಂಶಿ)– ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವರಾದ ಜನಾರ್ಧನ ರೆಡ್ಡಿ, ಮುರುಗೇಶ್ ನಿರಾಣಿ, ಶಶಿಕಲಾ ಜೊಲ್ಲೆ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರ ಅನುಮತಿ ಕೋರಿ ಕಾಂಗ್ರೆಸ್ ಶಾಸಕರು ಆಗಸ್ಟ್ 31ರಂದು ರಾಜಭವನಕ್ಕೆ ಪರೇಡ್ ನಡೆಸಲಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಪ್ರದೇಶ ಕಾಂಗ್ರೆಸ್ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಅಂದು ಪಕ್ಷದ ಎಲ್ಲಾ ಶಾಸಕರು, ವಿಧಾನಪರಿಷತ್ ಸದಸ್ಯರು, ಲೋಕಸಭೆ ಮತ್ತು ರಾಜ್ಯಸಭೆ ಸದಸ್ಯರು


ಕುಮಾರಸ್ವಾಮಿ


ಶಶಿಕಲಾ ಜೊಲ್ಲೆ


ನಿರಾಣಿ


ಜನಾರ್ಧನ ರೆಡ್ಡಿ

ವಿಧಾನಸೌಧದ ಮಹಾತ್ಮ ಗಾಂಧಿ ಪ್ರತಿಮೆ ಬಳಿಯಿಂದ ಕಾಲ್ನಡಿಗೆಯಲ್ಲಿ ರಾಜಭವನಕ್ಕೆ ತೆರಳಿ ಒತ್ತಾಯ ಮಾಡುತ್ತೇವೆ ಎಂದರು.

ಶಾಸಕಾಂಗ ಪಕ್ಷದ ನಾಯಕರಾಗಿರುವ ಸಿದ್ದರಾಮಯ್ಯ ಅವರ ನಾಯಕತ್ವದಲ್ಲಿ ಬೆಳಗ್ಗೆ 10ರಿಂದ 10–30ರ ನಡುವೆ ಪಕ್ಷದ ಎಲ್ಲಾ ಜನಪ್ರತಿನಿಧಿಗಳು ಒಟ್ಟಿಗೆ ತೆರಳಿ ರಾಜ್ಯಪಾಲರನ್ನು ಭೇಟಿ ಮಾಡುತ್ತೇವೆ, ಭೇಟಿಗೆ ಸಮಯಾವಕಾಶ ಕೋರಿ ಇಂದೇ ಪತ್ರ ಬರೆಯುವುದಾಗಿ ತಿಳಿಸಿದರು. ನಮ್ಮ ಪರೇಡ್‌ನಿಂದ ವಾಹನಗಳ ಸಂಚಾರಕ್ಕೆ ಅಡ್ಡಿ ಆಗುವುದಿಲ್ಲ, ಕೇವಲ 250 ಮೀಟರ್ ನಡಿಗೆ ಮೂಲಕ ತೆರಳಿ ರಾಜ್ಯಪಾಲರಿಗೆ ಮನವಿ ಸಲ್ಲಿಸುತ್ತೇವೆ. ■9ನೇ ಪುಟಕ್ಕೆ

ರಾಜಾತಿಥ್ಯ ಫೋಟೋ ವೈರಲ್ ಆದ ಬೆನ್ನಲ್ಲೇ

ಬಳ್ಳಾರಿ ಜೈಲಿಗೆ ನಟ ದರ್ಶನ್ ಸ್ಥಳಾಂತರ

● ಬೆಂಗಳೂರು 24ನೇ ಎಸಿಎಂಎಂ ಕೋರ್ಟ್ ಆದೇಶ ● ಮುಖ್ಯಮಂತ್ರಿ ಸಿದ್ದರಾಮಯ್ಯರಿಂದಲೂ ದರ್ಶನ್ ಗ್ಯಾಂಗ್ ಸ್ಥಳಾಂತರಕ್ಕೆ ಸೂಚನೆ

ಬೆಂಗಳೂರು, ಆ.27– ಪರಪ್ಪನ ಅಗ್ರಹಾರ ಜೈಲಿನಲ್ಲಿ ನಟ ದರ್ಶನ್‌ಗೆ ರಾಜಾತಿಥ್ಯ ಫೋಟೋ ವೈರಲ್ ಆದ ಬೆನ್ನಲ್ಲೇ ಅವರನ್ನು ಬಳ್ಳಾರಿ ಜೈಲಿಗೆ ಸ್ಥಳಾಂತರಿಸುವಂತೆ ಬೆಂಗಳೂರಿನ 24ನೇ ಎಸಿಎಂಎಂ ಕೋರ್ಟ್ ಆದೇಶ ನೀಡಿದೆ. ನಟ ದರ್ಶನ್ ಸೇರಿದಂತೆ ರೇಣುಕಾಸ್ವಾಮಿ ಕೊಲೆ ಪ್ರಕರಣದ ಹಲವು ಆರೋಪಿಗಳನ್ನು ಸಹ ಬೇರೆ ಬೇರೆ ಜೈಲಿಗೆ ಸ್ಥಳಾಂತರಿಸುವಂತೆ ಬೆಂಗಳೂರಿನ 24ನೇ ಎಸಿಎಂಎಂ ಕೋರ್ಟ್ ಆದೇಶಿಸಿದೆ. ಅದರಂತೆ ದರ್ಶನ್‌ರನ್ನು ಬಳ್ಳಾರಿ ಜೈಲಿಗೆ ಸ್ಥಳಾಂತರಿಸಲಾಗುತ್ತಿದೆ. ನ್ಯಾಯಾಲಯದ ಆದೇಶದ ಪ್ರತಿ ಸಿಗುತ್ತಿದ್ದಂತೆ ಜೈಲು ಸಿಬ್ಬಂದಿ ದರ್ಶನ್‌ರನ್ನು ಸ್ಥಳಾಂತರಿಸಲಿದ್ದಾರೆ. ಬಳ್ಳಾರಿ ಜೈಲಿನಲ್ಲಿ ವಿಡಿಯೋ ಕಾನ್ಫರೆನ್ಸ್ ವ್ಯವಸ್ಥೆ ಇದೆ. ಹೀಗಾಗಿ ಮುಂದೆ ನ್ಯಾಯಾಲಯದ ವಿಚಾರಣೆಗಳಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಒಳಪಡಿಸಲಾಗುತ್ತದೆ.


ನಟ ದರ್ಶನ್

ಉಳಿದ ಆರೋಪಿಗಳು ಸ್ಥಳಾಂತರ

- ಪವನ್, ರಾಘವೇಂದ್ರ, ನಂದೀಶ್ ಮೈಸೂರು ಜೈಲು
- ಜಗದೀಶ್, ಲಕ್ಷ್ಮಣ ಶಿವಮೊಗ್ಗ ಜೈಲು
- ಧನರಾಜ್ ಧಾರವಾಡ ಜೈಲು
- ವಿನಯ್ ವಿಜಯಪುರ ಜೈಲು
- ನಾಗರಾಜ್ ಕಲಬುರಗಿ ಜೈಲು
- ಪ್ರದೋಶ್ ಬೆಳಗಾವಿ ಜೈಲು
- ಪವಿತ್ರಾಗೌಡ, ಅನುಕುಮಾರ್, ದೀಪಕ್ ಪರಪ್ಪನ ಅಗ್ರಹಾರ ಜೈಲೇ
- ರವಿ, ಕಾರ್ತಿಕ್, ನಿಕಿಲ್, ಕೇಶವ ಮೂರ್ತಿ ತುಮಕೂರು ಜೈಲ್‌ನಲ್ಲಿದ್ದಾರೆ

ಬಳ್ಳಾರಿಗೆ ಸ್ಥಳಾಂತರಕ್ಕೆ ಸಿಎಂ ಸೂಚನೆ: ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿ ದರ್ಶನ್‌ರನ್ನು ಬಳ್ಳಾರಿ ಸೆರೆಮನೆಗೆ ಸ್ಥಳಾಂತರಿಸುವಂತೆ ■9ನೇ ಪುಟಕ್ಕೆ


ದರ್ಶನ್ ಮತ್ತಿನ್ಯಾರ ಜೊತೆ ಮಾತಾಡ್ಬೇಕು!

ಬೆಂಗಳೂರು: ಜೈಲಿನಲ್ಲಿ ವಿಐಪಿ ಆರೋಪಿಗಳಿಗೆ ರಾಜಾತಿಥ್ಯ ಸಿಗುತ್ತಿರುವುದು ಇದೇ ಮೊದಲಲ್ಲ. ಈ ಹಿಂದೆಯೇ ಈ ಬಗ್ಗೆ ಆರೋಪಗಳು ಸಾಕಷ್ಟು ಕೇಳಿಬಂದಿದ್ದವು. ಈಗ ದರ್ಶನ್ ವಿಚಾರದಲ್ಲಿ ಮಾತ್ರ ಏಕೆ ಸುದ್ದಿಯಾಗುತ್ತಿದೆ ಎಂದು ಮಾಜಿ ಸಂಸದೆ, ಚಿತ್ರನಟಿ ಸುಮಲತಾ ಅಂಬರೀಷ್ ಅಚ್ಚರಿಯ ಹೇಳಿಕೆ ನೀಡಿದ್ದಾರೆ.



ಪರಪ್ಪನ ಅಗ್ರಹಾರದಲ್ಲಿ ನಟ ದರ್ಶನ್ ಕೈಯಲ್ಲಿ ಚಹಾ ಮಗ್ ಮತ್ತು ಸಿಗರೇಟ್ ಹಿಡಿದುಕೊಂಡು ಕುಳಿತಿರುವುದು ನಂತರ ರೌಡಿಶೀಟರ್ ಸತ್ಯನ ಜೊತೆ ವಿಡಿಯೊ ಕಾಲ್ ಮಾಡುತ್ತಿರುವ ಫೋಟೋ–ವಿಡಿಯೊ ವ್ಯಾಪಕವಾಗಿ ವೈರಲ್ ಆದ ಬಳಿಕ ದರ್ಶನ್ ಜೈಲಿನಲ್ಲಿದ್ದರೂ ರಾಜಾತಿಥ್ಯ ಸಿಗುತ್ತಿದೆ. ಇಚ್ಛೆಪಟ್ಟಾಗಲೆಲ್ಲ ನಾನ್‌ವೆಜ್ ಬಿರಿಯಾನಿ, ಧೂಮಪಾನ, ಮದ್ಯಪಾನ ಪೂರೈಕೆಯಾಗುತ್ತಿದೆ ಎಂದು ಜೈಲಿನ ಅವ್ಯವಸ್ಥೆ ಬಗ್ಗೆ ಆಕ್ರೋಶ ವ್ಯಕ್ತವಾದ ಹಿನ್ನೆಲೆಯಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳು ಸುಮಲತಾ ಅವರ ಬಳಿ ಪ್ರತಿಕ್ರಿಯೆ ಕೇಳಿದರು. ಜೈಲಲ್ಲಿ ಸ್ವಲ್ಪ ಹಣ ಖರ್ಚು ಮಾಡಿದರೆ ಅವರಿಗೆ ಎಲ್ಲ ಸಿಗುತ್ತೆ ಅನ್ನೋದು ಎಲ್ಲರಿಗೂ ಗೊತ್ತಿರುವ ವಿಚಾರ. ಫೋನ್, ಸಿಗರೇಟ್, ಡ್ರಗ್ಸ್, ಡ್ರಿಂಕ್ಸ್ ವ್ಯವಸ್ಥಿತವಾಗಿ ■9ನೇ ಪುಟಕ್ಕೆ









ಭ್ರಷ್ಟಾಚಾರದ ಕೂಪವಾಗಿರುವ

ಮುಡಾದಲ್ಲಿ ಆಡಳಿತವೂ ಅಧ್ವಾನ!

● 2022–23ರ ಲೆಕ್ಕಪತ್ರ ಪರಿಶೋಧನೆಯಲ್ಲಿ 67 ನ್ಯೂನತೆ ● ಆಕ್ಷೇಪಣೆ ಮೊತ್ತ ಪಾವತಿಸಲು ಮುಡಾಗೆ ಲೆಕ್ಕಪತ್ರ ಇಲಾಖೆ ಸೂಚನೆ ● ಆಸ್ತಿ ತೆರಿಗೆ ಮೇಲಿನ ಉಪಕರಣಗಳನ್ನು ಸರ್ಕಾರದ ಲೆಕ್ಕ ಶೀರ್ಷಿಕೆಗೆ ಪಾವತಿಸದ ಮುಡಾ ● ಹರಾಜಿನಲ್ಲಿ ನಿವೇಶನ ಮಾರಿರುವ ವರದಿ ನೀಡದೇ ನಿರ್ಲಕ್ಷ್ಯ ● ತುಂಡು ಜಾಗ ಮಂಜೂರಾತಿಯಲ್ಲಿ ಸಂದಾಯವಾದ ಹಣದ ಕಡತವೇ ನಾಪತ್ತೆ ● ಅನುಮೋದಿತ ಕ್ರಿಯಾ ಯೋಜನೆ ಹಣವನ್ನು ತುಂಡು ಗುತ್ತಿಗೆ ನೀಡಿ ಉಲ್ಲಂಘನೆ ● ಹಳೇ ಟೆಂಡರ್‌ನಲ್ಲೇ ಹೊರಗುತ್ತಿಗೆ ಆಧಾರದಲ್ಲಿ ಗ್ರೂಪ್ 'ಡಿ' ಸಿಬ್ಬಂದಿ ಮುಂದುವರಿಸಿ ಕೆಟಿಪಿಪಿ ನಿಯಮ ಉಲ್ಲಂಘನೆ ● ಅಮಾನತ್ತಾದ ಅವಧಿಯಲ್ಲಿ ಅಧಿಕಾರಿ, ಸಿಬ್ಬಂದಿಗೆ ಪೂರ್ಣ ವೇತನ ನೀಡಿದ ಮುಡಾ ● ಆ.23ರಂದು ಲೆಕ್ಕ ಪರಿಶೋಧನೆ ಸಭೆಯಲ್ಲಿ ನ್ಯೂನತೆಗಳ ಬಗ್ಗೆ ಪ್ರಾಧಿಕಾರದ ಅಧಿಕಾರಿಗಳಿಗೆ ಲೆಕ್ಕಪತ್ರ ಇಲಾಖೆ ಅಪರ ನಿರ್ದೇಶಕರಿಂದ ಛೀಮಾರಿ

ಎಸ್.ಟಿ.ರವಿಕುಮಾರ್

ಮೈಸೂರು, ಆ. 27– ನಿಯಮ, ಕಾನೂನುಗಳನ್ನು ಗಾಳಿಗೆ ತೂರಿ ಮನಬಂದಂತೆ ಸಾವಿರಾರು ನಿವೇಶನಗಳನ್ನು ಶೇ. 50:50ರ ಅನುಪಾತದಡಿ ಹಂಚಿಕೆ ಮಾಡಿ ಬ್ರಹ್ಮಾಂಡ ಭ್ರಷ್ಟಾಚಾರ ನಡೆಸಿರುವ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ಆಡಳಿತದಲ್ಲೂ ಲೋಪವೆಸಗಿರುವುದು ಲೆಕ್ಕ ಪರಿಶೋಧನೆಯಿಂದ ಬೆಳಕಿಗೆ ಬಂದಿದೆ.


ಆಗಸ್ಟ್ 23ರಂದು ಮುಡಾ ಕಚೇರಿ ಸಭಾಂಗಣದಲ್ಲಿ ಲೆಕ್ಕ ಪರಿಶೋಧಿಸಿದ ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ ಮೈಸೂರು ಪ್ರಾಂತೀಯ ಕಚೇರಿ ಹೆಚ್ಚುವರಿ ನಿರ್ದೇಶಕರು, 2022–23ನೇ ಸಾಲಿನಲ್ಲಿ 67 ಬಗೆಯ ನ್ಯೂನತೆಗಳು ಕಂಡುಬಂದ ಹಿನ್ನೆಲೆಯಲ್ಲಿ 9,41,46,048 ರೂ. ಆಕ್ಷೇಪಣಾ ಮೊತ್ತದ ಪೈಕಿ 96,54,054 ರೂಗಳನ್ನು ವಸೂಲು ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ಲೆಕ್ಕ ಪರಿಶೋಧನಾ ಸಭೆಯಲ್ಲಿ ಹಾಜರಿದ್ದ ಮುಡಾ ಕಾರ್ಯದರ್ಶಿ ಪ್ರಸನ್ನಕುಮಾರ್, ಸೂಪರಿಂಟೆಂಡಿಂಗ್ ಇಂಜಿನಿಯರ್ ಎಂ. ಮುರಳೀಧರ, ಮುಖ್ಯ ಲೆಕ್ಕಾಧಿಕಾರಿ ಮಂಜುಳಾ, ಎಲ್ಲಾ ವಲಯಾಧಿಕಾರಿಗಳು, ವಿಶೇಷ ತಹಸೀಲ್ದಾರರುಗಳನ್ನು ಈ ನ್ಯೂನತೆಗಳ ಬಗ್ಗೆ ಹೆಚ್ಚುವರಿ ನಿರ್ದೇಶಕರು ತೀವ್ರ ತರಾಟೆಗೆ ತೆಗೆದುಕೊಂಡರು ಎಂದು ಮುಡಾ ಅಧಿಕಾರಿ ಮೂಲಗಳು ತಿಳಿಸಿವೆ.

67 ನ್ಯೂನತೆಗಳು: ವಾರ್ಷಿಕ ಬಜೆಟ್ ಮತ್ತು ವಾಸ್ತವ ಲೆಕ್ಕಪತ್ರಗಳಲ್ಲಿ ಭಾರಿ ವ್ಯತ್ಯಾಸ, ಲೋಪದೋಷ, ನಿಶ್ಚಿತ ಠೇವಣಿ ಅವಧಿ ಮುಗಿದಿರುವ ಮೊತ್ತದಲ್ಲಿ ಆದಾಯ ತೆರಿಗೆ ಹಣವನ್ನು ಹಿಂಪಡೆಯದಿರುವುದು, ನರ್ಮ್ ಯೋಜನೆಯಡಿ ಬಿಡುಗಡೆಯಾದ ಅನುದಾನವನ್ನು ನಿಶ್ಚಿತ ಠೇವಣಿಯಾಗಿ ಹೂಡಿಕೆ ಮಾಡಿರುವುದು, ಆಸ್ತಿ ತೆರಿಗೆ ಮೇಲಿನ ಉಪಕರಣಗಳನ್ನು ಸರ್ಕಾರದ ಲೆಕ್ಕ ಶೀರ್ಷಿಕೆಗೆ ಸಂದಾಯ ಮಾಡದಿರುವುದು ಲೆಕ್ಕ ಪರಿಶೋಧನೆ ವೇಳೆ ಕಂಡುಬಂದಿದೆ.

ಅಭಿವೃದ್ಧಿಪಡಿಸಿದ ಬಡಾವಣೆಗಳ ನಿವೇಶನ ಮತ್ತು ಕಟ್ಟಡಗಳಿಗೆ ನಿಯಮಬಾಹಿರವಾಗಿ ತೆರಿಗೆ ವಿಧಿಸಿ ವಸೂಲಿ ಮಾಡುತ್ತಿದ್ದು, ಆಸ್ತಿ ತೆರಿಗೆಯ ಬೇಡಿಕೆ, ಸಂಗ್ರಹಣೆ ಮತ್ತು ■6ನೇ ಪುಟಕ್ಕೆ



ಕೆ.ಆರ್.ಕ್ಷೇತ್ರದಲ್ಲಿ 3 ಕೋಟಿ ವೆಚ್ಚದ ಕಾಮಗಾರಿ ಪ್ರಗತಿ ಪರಿಶೀಲಿಸಿದ ಶಾಸಕ ಶ್ರೀವತ್ಸ


ಕೆ.ಆರ್.ಕ್ಷೇತ್ರದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸಿದರು.

ಮೈಸೂರು, ಆ.27(ಎಸ್‌ಪಿಎನ್)– ಕೆ.ಆರ್.ಕ್ಷೇತ್ರ ವ್ಯಾಪ್ತಿಯಲ್ಲಿ ಸುಮಾರು ಮೂರು ಕೋಟಿ ರೂ. ವೆಚ್ಚದ ಕಾಮಗಾರಿಗಳು ಪ್ರಾರಂಭವಾಗಿದ್ದು, ಅದರ ಪರಿಶೀಲನೆಯನ್ನು ಶಾಸಕ ಟಿ.ಎಸ್.ಶ್ರೀವತ್ಸ ಅಧಿಕಾರಿಗಳೊಂದಿಗೆ ನಡೆಸಿದರು. ವಾರ್ಡ್ ನಂ.50ರ ಕಾಶಿಪತಿ ಅಗ್ರಹಾರ, ಲಕ್ಷ್ಮಿ ಚಿತ್ರ ಮಂದಿರದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ನೀರಿನ ಸಮಸ್ಯೆ ಇದ್ದು, ಈ ಸಮಸ್ಯೆ ಕುರಿತು ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲಿಸಿ, ಆದಷ್ಟು ಬೇಗನೆ ಬಗೆಹರಿಸುವಂತೆ ತಾಕೀತು ಮಾಡಿದರು.

ಈ ವೇದಿಕೆ ವಲಯ ಕಚೇರಿ ಅಭಿವೃದ್ಧಿ ಅಧಿಕಾರಿ ಚೇತನ, ಇಂಜಿನಿಯರ್ ಅಂಕಯ್ಯ, ಆರೋಗ್ಯ ಅಧಿಕಾರಿ ಶೋಭಾ, ಸೌಮ್ಯ, ಮುಖಂಡರಾದ ಜೋಗಿ ಮಂಜು, ರಘು, ಅರಸು, ಕೃಷ್ಣನಾಯಕ, ಜೋಗಪ್ಪ, ವಿಜಯ್‌ನಾಯಕ್, ಮಂಜುನಾಥ ನಾಯಕ್, ಅರುಣ್, ರಾಕೇಶ್‌ಗೌಡ, ಪ್ರದೀಪ್, ಕಿಶೋರ್ ಮುಂತಾದವರಿದ್ದರು.

ಸಿ.ಎಚ್.ವಿಜಯಶಂಕರ್‌ಗೆ ಅಭಿನಂದನೆ...


ಮಾಜಿ ಮೇಯರ್ ಆರ್.ಲಿಂಗಪ್ಪ, ಮೇಘಾಲಯದ ರಾಜ್ಯಪಾಲ ಸಿ.ಎಚ್.ವಿಜಯಶಂಕರ್ ಅವರನ್ನು ಮೈಸೂರಿನ ಅವರ ನಿವಾಸದಲ್ಲಿ ನೆನಪಿನ ಕಾಣಿಕೆ ನೀಡಿ, ಆತ್ಮೀಯವಾಗಿ ಅಭಿನಂದಿಸಿದರು. ಈ ವೇಳೆ ಮುಖಂಡರಾದ ರವಿ ಪ್ರಭಾಕರ್, ಸುಮಂತ್ ರಾಜೇಶ್ ಬೋರೆ ಹಾಗೂ ಸುನಿಲ್ ಉಪಸ್ಥಿತರಿದ್ದರು.

ಜಿಂದಾಲ್‌ಗೆ ಭೂಮಿ: ರೈತ ಸಂಘ ಖಂಡನೆ



ಮೈಸೂರು, ಆ.27(ಎಸ್‌ಪಿಎನ್)– ಬೆಲೆಬಾಳುವ ಭೂಮಿಯನ್ನು ಜಿಂದಾಲ್ ಕಂಪನಿಗೆ ಅತೀ ಕಡಿಮೆ ಬೆಲೆಗೆ ಮಾರಾಟ ಮಾಡಲು ಮುಂದಾಗಿರುವ ರಾಜ್ಯ ಸರ್ಕಾರದ ಕ್ರಮವನ್ನು ಕರ್ನಾಟಕ ರಾಜ್ಯ ರೈತ ಸಂಘ ತೀವ್ರವಾಗಿ ಖಂಡಿಸಿದೆ

ಮೈಸೂರು ಜಲದರ್ಶಿನಿ ಸರ್ಕಾರಿ ಅತಿಥಿಗೃಹದಲ್ಲಿ ಮಾಧ್ಯಮಗಳೊಂದಿಗೆ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಮಾತನಾಡಿ, ಜೀವನೋಪಾಯಕ್ಕಾಗಿ ತುಂಡು ಭೂಮಿ ಉಳುಮೆ ಮಾಡುತ್ತಿರುವ ರೈತರನ್ನು ಒಕ್ಕಲೆಬ್ಬಿಸುವ ನೀತಿ ಸರ್ಕಾರದ್ದು, ಈ ಹಿಂದೆ ಬಿಜೆಪಿ ಸರ್ಕಾರವಿದ್ದಾಗ ಈ ನೀತಿಯನ್ನು ವಿರೋಧ ಮಾಡಿದವರೇ ಈಗ ಅದೇ ಕಂಪನಿಗೆ ಮಾರಾಟ ಮಾಡಲು ಮುಂದಾಗಿದ್ದಾರೆ. ಈಗ ಎಲ್ಲಾ ಪಕ್ಷಗಳು ತಾ ಮುಂದು–ನಾ ಮುಂದು ಎಂಬಂತೆ ಬಂಡವಾಳ ಶಾಹಿಗಳ ಋಣ ತೀರಿಸಲು ಮುಂದಾಗಿದ್ದಾರೆ ಎಂದು ಆರೋಪಿಸಿದರು.

ಎಕರೆ ಕೇವಲ 1,22,200 ರೂ. ಮತ್ತು 1,50,635 ರೂಗಳಿಗೆ ಜಿಂದಾಲ್ ಕಂಪನಿಗೆ ಮಾರಾಟ ಮಾಡಲು ಸರ್ಕಾರ ಮುಂದಾಗಿರುವುದು ಖಂಡನೀಯ ಎಂದ ಅವರು, ಈ ಜಾಗವನ್ನು ರೈತರು ಹತ್ತುಪಟ್ಟು ಬೆಲೆ ನೀಡಿ ಖರೀದಿಸಲು ಸಿದ್ಧರಿದ್ದು, ಈ ಭೂಮಿಯನ್ನು ರೈತರಿಗೆ ನೀಡುವಂತೆ ಒತ್ತಾಯಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ರೈತ ಮುಖಂಡರಾದ ರಮೇಶರಾಗಿ, ನಾಗೇಂದ್ರ, ಪ್ರಸನ್ನ ಎನ್.ಗೌಡ ಸೇರಿದಂತೆ ಇತರರಿದ್ದರು.

ವಿಕಲಚೇತನ ಮಕ್ಕಳಿಗೆ ಶೈಕ್ಷಣಿಕ ಪರಿಕರಗಳ ವಿತರಣೆ


ಸಮರ್ಥನಂ ಬುದ್ಧಿ ವಿಕಲಚೇತನ ಮಕ್ಕಳ ಶಾಲೆಯ ವಿಶೇಷ ಮಕ್ಕಳಿಗೆ ವಿವಿಧ ಶೈಕ್ಷಣಿಕ ಪರಿಕರಗಳನ್ನು ವಿತರಣೆ ಮಾಡಲಾಯಿತು.

ಮೈಸೂರು,ಆ.27–ಮೈಸೂರು ನಗರದ ವಿಜಯನಗರ ಎರಡನೇ ಹಂತದಲ್ಲಿರುವ ಸಮರ್ಥನಂ ಬುದ್ಧಿ ವಿಕಲಚೇತನ ಮಕ್ಕಳ ಶಾಲೆಯ ವಿಶೇಷ ಮಕ್ಕಳಿಗೆ ಬ್ಯಾಗ್, ಸಮವಸ್ತ್ರ, ಪೆನ್, ಶೂ, ನೋಟ್‌ಬುಕ್ಸ್, ಪೆನ್ಸಿಲ್, ರಬ್ಬರ್, ಜಾಮಿಟ್ರಿ ಬಾಕ್ಸ್, ಬೆಲ್ಟ್, ಪೌಚ್ ಸೇರಿದಂತೆ ವಿವಿಧ ಶೈಕ್ಷಣಿಕ ಪರಿಕರಗಳನ್ನು ವಿತರಣೆ ಮಾಡಲಾಯಿತು.

ಶ್ರೀ ಸಾಯಿ ರಾಮ್ ಸರ್ವಿಸ್ ಸ್ಟೇಷನ್ ಮಾಲೀಕ ಗಣೇಶ್ ಪರಿಕರಗಳ ವಿತರಿಸಿ ಮಾತನಾಡುತ್ತ ಸಮರ್ಥನಂ ಅಂಗವಿಕಲರ ಸಂಸ್ಥೆ ವಿಶೇಷಚೇತನರ ಕ್ಷೇಮಾಭಿವೃದ್ಧಿಗೆ ದುಡಿಯುತ್ತಿದೆ. ಬುದ್ಧಿ ವಿಕಲಚೇತನ ಮಕ್ಕಳಿಗೆ ಉಚಿತ ಶಿಕ್ಷಣ ನೀಡುವುದರ ಜೊತೆಗೆ ಉನ್ನತ ವ್ಯಾಸಂಗ ಮಾಡುತ್ತಿರುವ ವಿಶೇಷ ಚೇತನ ಹೆಣ್ಣು ಮಕ್ಕಳಿಗೆ ಉಚಿತ ಹಾಸ್ಟೆಲ್ ಸೌಲಭ್ಯ, ಸಾರಿಗೆ ವ್ಯವಸ್ಥೆ ಕಲ್ಪಿಸಿಕೊಟ್ಟಿರುವುದು ಶ್ಲಾಘನೀಯವಾಗಿದೆ ಎಂದರು.


ಸಮರ್ಥನಂ ಸಂಸ್ಥೆಯ ಮೈಸೂರು ವಿಭಾಗೀಯ ಸಂಯೋಜಕ ಶಿವರಾಜು, ಶಾಲೆಯ ಮುಖ್ಯೋಪಾಧ್ಯಾಯಿನಿ ಭ್ರಮರಾಂಭ, ವಿಶೇಷ ಶಿಕ್ಷಕರಾದ ಪದ್ಮ, ವಿದ್ಯಾವತಿ, ಬೃಂದ ಬಾಯಿ, ಸುಮಾ ಗಣೇಶ್, ಸಿಬ್ಬಂದಿ ಮಂಜುಳ ಇನ್ನಿತರರಿದ್ದರು.

ಆ.30ರಿಂದ ಸೆ.5ರವರೆಗೆ ಸಪ್ತರಾತ್ರೋತ್ಸವ

ಮೈಸೂರು, ಆ.27–ನಗರದ ಅಗ್ರಹಾರ (ಖಿಲ್ಲೆ ಮೊಹಲ್ಲಾ)ದಲ್ಲಿರುವ ಶ್ರೀ ಉತ್ತರಾದಿ ಮಠ ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನದಲ್ಲಿ ಶ್ರೀ ಧನ್ವಂತರಿ ಜಯಂತಿ ಪ್ರಯುಕ್ತ ಆ.30ರಿಂದ ಸೆ.5ರವರೆಗೆ 'ಸಪ್ತ ರಾತ್ರೋತ್ಸವ'ವನ್ನು ಆಯೋಜಿಸಲಾಗಿದೆ. ಪ್ರತಿದಿನ ಧನ್ವಂತರಿ ದೇವರಿಗೆ ಒಂದೊಂದು ಬಗೆಯ ವಿಶೇಷ ಅಲಂಕಾರ, ಪ್ರತಿದಿನ ಸಂಜೆ 6ರಿಂದ 7ರವರೆಗೆ ಪ್ರವಚನ, ನಂತರ ಸಂಜೆ 7ರಿಂದ ರಾಜ ಬೀದಿಯಲ್ಲಿ ವಾಹನೋತ್ಸವ, ಸ್ವಸ್ತಿವಾಚನ ಮಹಾಮಂಗಳಾರತಿ ಹಾಗೂ ಮುಂತಾದ ಕಾರ್ಯಕ್ರಮಗಳು ಜರುಗಲಿವೆ. ಭಗವದ್ಭಕ್ತರು ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮಠದ ಪ್ರಧಾನ ವ್ಯವಸ್ಥಾಪಕರಾದ ಪಂಡಿತ್ ಶ್ರೀ ಅನಿರುದ್ಧಾಚಾರ್ಯ ಪಾಂಡುರಂಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಮೊಬೈಲ್ 9448147459 ಸಂಪರ್ಕಿಸಬಹುದು.

ನಿಧನ

ಕುಳ್ಳೇಗೌಡ



ಮೈಸೂರು, ಆ. 27– ಮೈಸೂರಿನ ಸರಸ್ವತಿಪುರಂ ನಿವಾಸಿ ಕುಳ್ಳೇಗೌಡ (88) ಸೋಮವಾರ ರಾತ್ರಿ ಹೃದಯಾಘಾತದಿಂದ ನಿಧನರಾದರು. ಇವರು ಸೀನಿಯರ್ ಆಡಿಟರ್ ಆಗಿ ಲೋಕಲ್ ಆಡಿಟ್ ಸರ್ಕಲ್‌ನಲ್ಲಿ ಸೇವೆ ಸಲ್ಲಿಸಿ, ನಿವೃತ್ತರಾಗಿದ್ದರು. ಮೂಲತಃ ಹುಣಸೂರು ತಾಲೂಕು ಹರವೆ ಕಲ್ಲಹಳ್ಳಿಯವರಾಗಿದ್ದು, ಮೂವರು ಹೆಣ್ಣು ಮಕ್ಕಳು, ಇಬ್ಬರು ಗಂಡು ಮಕ್ಕಳು, ಮೊಮ್ಮಕ್ಕಳು, ಮರಿ ಮಕ್ಕಳು ಮತ್ತು ಅಪಾರ ಬಂಧು–ಬಳಗ, ಸ್ನೇಹಿತರನ್ನು ಅಗಲಿದ್ದಾರೆ. ಕುಳ್ಳೇಗೌಡರು ಕುವೆಂಪು ನಗರ ನಾಗರಿಕ ವೇದಿಕೆಯಲ್ಲಿ ಕಾರ್ಯದರ್ಶಿಯಾಗಿ ಹಲವಾರು ವರ್ಷ ಸೇವೆ ಸಲ್ಲಿಸಿದ್ದಾರೆ. ಅಂತ್ಯಕ್ರಿಯೆ ನಾಳೆ (ಆ.28) ಮಧ್ಯಾಹ್ನ 1.30 ಗಂಟೆಗೆ ಕೆ.ಜಿ.ಕೊಪ್ಪಲು ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮಾನಸಗಂಗೋತ್ರಿಯಲ್ಲಿ ಯುವೋತ್ಸವಕ್ಕೆ ಚಾಲನೆ

ದೇಶದ ಅಭಿವೃದ್ಧಿಯಲ್ಲಿ ಯುವ ಜನರ ಪಾತ್ರ ಪ್ರಮುಖ


ಮೈಸೂರಿನ ಮಾನಸಗಂಗೋತ್ರಿಯ ವಿಜ್ಞಾನಭವನದಲ್ಲಿ ಆಯೋಜಿಸಿದ್ದ 'ಯುವೋತ್ಸವ'ಕ್ಕೆ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಂಗಳವಾರ ಚಾಲನೆ ನೀಡಿದರು. ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಹೆಚ್‌ಎಸ್‌ಎಫ್‌ಐನ ಭಾರತದ ಪ್ರತಿನಿಧಿ ಜುದಿತ್ ವೈನ್ಬರ್ಗರ್ ಸಿಂಗ್, ಡಾ.ಆರ್.ಬಸವರಾಜು, ಸಮಾಜ ಕಾರ್ಯ ಅಧ್ಯಯನ ವಿಭಾಗದ ಡಾ.ಹೆಚ್.ಪಿ.ಜ್ಯೋತಿ ಅವರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಆ.27(ಜಿಎ)–ಅಂತಾರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಗ್ರಾಮ್ ಸಂಸ್ಥೆಯು ಮೈಸೂರು ವಿಶ್ವ ವಿದ್ಯಾನಿಲಯದ ಸಮಾಜ ಕಾರ್ಯ ಅಧ್ಯಯನ ವಿಭಾಗ ಹಾಗೂ ಜಿಎಸ್‌ಎಸ್ ಸಂಸ್ಥೆಗಳ ಸಹಯೋಗದಲ್ಲಿ ಮಾನಸ ಗಂಗೋತ್ರಿಯ ವಿಜ್ಞಾನಭವನದಲ್ಲಿ ಆಯೋಜಿಸಿದ್ದ 'ಯುವೋತ್ಸವ'ಕ್ಕೆ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಂಗಳವಾರ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಸರ್ಕಾರದ ನೀತಿ ನಿಯಮಗಳ ಜಾರಿಯಲ್ಲಿ ಯುವ ಜನರ ಪಾತ್ರ ಬಹಳ ಮುಖ್ಯ. ಮೈಸೂರಿನಲ್ಲಿ ಹಲವು ಸಮಸ್ಯೆಗಳ ಬಗ್ಗೆ ಸಮೀಕ್ಷೆ ನಡೆಸುತ್ತಿರುವುದು ಉತ್ತಮ ಬೆಳವಣಿಗೆ. ಜನಪ್ರತಿನಿಧಿಗಳ ಜೊತೆ ಜನರ ಸಹಭಾಗಿತ್ವ ಅವಶ್ಯವಾಗಿದ್ದು, ಭಾರತದ ಅಭಿವೃದ್ಧಿಯಲ್ಲಿ ಯುವ ಜನರು ಪ್ರಮುಖ ಪಾತ್ರವಹಿಸುತ್ತಾರೆ. ಆದರೆ, ಹಿರಿಯರ ಮಾರ್ಗದರ್ಶನದಲ್ಲಿ ಅವರು ಮುಂದುವರಿಯಬೇಕು. ಉತ್ತಮ ಸಮಾಜದ ನಿರ್ಮಾಣದಲ್ಲಿ ಯುವ ಜನರೇ ಮುಖ್ಯ ಎಂದರು.

ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಮಾತನಾಡಿ, ಸದಾ ಸಕಾರಾತ್ಮಕ ವಿಚಾರಗಳ ಬಗ್ಗೆ ಯೋಚನೆ ಮಾಡಿ. ಭಾರತದಲ್ಲಿ 3 ಕೋಟಿ ಜನರು ಉನ್ನತ ಶಿಕ್ಷಣ ಪಡೆಯುತ್ತಿದ್ದು, ಅವರ ಪಾತ್ರ ಪ್ರಮುಖವಾದುದು. ಸಮಾಜದ ಸುತ್ತಲಿನ ಸಮಸ್ಯೆಗಳಿಗೆ ಸ್ಪಂದಿಸಬೇಕು. ಮಾಹಿತಿ ಮತ್ತು ತಂತ್ರಜ್ಞಾನವನ್ನು ಒಳಿತಿಗೆ ಬಳಸಿಕೊಳ್ಳಬೇಕು. ಕೃತಕ ಬುದ್ಧಿಮತ್ತೆಯನ್ನು ನಮ್ಮ ಕೆಲಸಕ್ಕೆ ಪೂರಕವಾಗಿ ಬಳಸಿಕೊಳ್ಳಬೇಕು. ಸಾಂಪ್ರದಾಯಿಕ ಉದ್ಯೋಗ ಕಡಿಮೆ ಆಗುತ್ತಿದ್ದು, ಡಿಜಿಟಲ್ ಉದ್ಯೋಗ ಹೆಚ್ಚುತ್ತಿದೆ. ವಿದ್ಯಾರ್ಥಿಗಳು ಅದಕ್ಕೆ ತಕ್ಕಂತೆ ಕೌಶಲ ಬೆಳೆಸಿಕೊಳ್ಳಬೇಕು. 17 ಸುಸ್ಥಿರ ಅಭಿವೃದ್ಧಿ ಗುರಿ ಇದ್ದು, ಅದರ ಸಾಧನೆಗೆ ಗಮನ ಕೊಡಬೇಕಿದೆ. ಭಾರತದಲ್ಲಿ ಶೇ.12ರಷ್ಟು ವಿದ್ಯಾರ್ಥಿಗಳಿಗೆ ಮಾತ್ರ ಉದ್ಯೋಗ ದೊರಕುತ್ತಿದೆ. ಯುವಜನರಲ್ಲಿನ ಕೌಶಲದ ಕೊರತೆಯೂ ಅದಕ್ಕೆ ಕಾರಣವಾಗಿದೆ ಎಂದು ತಿಳಿಸಿದರು.

ಹೆಚ್‌ಎಸ್‌ಎಫ್‌ಐನ ಭಾರತದ ಪ್ರತಿನಿಧಿ ಜುದಿತ್ ವೈನ್ಬರ್ಗರ್ ಸಿಂಗ್ ಮಾತನಾಡಿ, ಆಡಳಿತದಲ್ಲಿ ಯುವಜನರ ಭಾಗಿ ಅತ್ಯಗತ್ಯ. ಭಾರತದ ಒಟ್ಟು ಜನಸಂಖ್ಯೆಯಲ್ಲಿ ಶೇ.50 ಮಂದಿ 25 ವರ್ಷಕ್ಕಿಂತ ಕಡಿಮೆ ಇದೆ. ಇವರು ಸುಸ್ಥಿರ ಅಭಿವೃದ್ಧಿಗೆ ತಮ್ಮದೇ ಕೊಡುಗೆ ನೀಡಬಲ್ಲರು. ಡಿಜಿಟಲ್ ತಂತ್ರಜ್ಞಾನ, ಹೊಸ ಸಂಶೋಧನೆಗಳಿಗೆ ಅವರು ಆದ್ಯತೆ ನೀಡಬೇಕು. ತಂತ್ರಜ್ಞಾನವನ್ನು ಸಮಾಜದ ಒಳಿತಿಗೆ ಬಳಸಬೇಕು. ನೀವು ಡಿಜಿಟಲ್ ಜಗತ್ತಿನ ನಿಜವಾದ ಶಿಲ್ಪಿಗಳು ಎಂದರು.

ಕಾರ್ಯಕ್ರಮದಲ್ಲಿ 'ಸುಸ್ಥಿರ ಮೈಸೂರಿಗಾಗಿ ಯುವ ಸಹಭಾಗಿತ್ವ' ಕುರಿತು ಶಾಸಕ ದರ್ಶನ್ ಧ್ರುವನಾರಾಯಣ್ ಮತ್ತು ಸಂಸದ ಯದುವೀರ್ ಒಡೆಯರ್ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ನಂತರ ಸಾಮಾಜಿಕ ನ್ಯಾಯ, ಶಿಕ್ಷಣ ಆರ್ಥಿಕ ಸಬಲೀಕರಣ, ಹವಾಮಾನ ಬದಲಾವಣೆ ಕುರಿತಂತೆ ಬೀದಿ ನಾಟಕ ಸ್ಪರ್ಧೆ, ಪೋಸ್ಟರ್ ಪ್ರಸ್ತುತಿ ಸ್ಪರ್ಧೆ, ರಸಪ್ರಶ್ನೆ ಸ್ಪರ್ಧೆ, ರೀಲ್ ಸ್ಪರ್ಧೆ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಗ್ರಾಮ್ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ಡಾ.ಆರ್.ಬಸವರಾಜು, ಸಮಾಜ ಕಾರ್ಯ ಅಧ್ಯಯನ ವಿಭಾಗದ ಡಾ.ಹೆಚ್.ಪಿ. ಜ್ಯೋತಿ ಉಪಸ್ಥಿತರಿದ್ದರು.

ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜು ವಿದ್ಯಾರ್ಥಿನಿ ನಾಪತ್ತೆ

ತಂದೆಯಿಂದ ಪೊಲೀಸರಿಗೆ ದೂರು

ಮೈಸೂರು,ಆ.27(ಎಸ್‌ಪಿಎನ್)– ಮೈಸೂರಿನ ವಿಜಯನಗರ 2ನೇ ಹಂತದ ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ಪ್ರಥಮ ವರ್ಷದ ಬಿಸಿಎ ವಿದ್ಯಾರ್ಥಿನಿ ಸಿ.ವರ್ಷಿತ(19) ನಾಪತ್ತೆಯಾಗಿದ್ದಾರೆ.

ಮೂಲತಃ ಚಿಕ್ಕಮಗಳೂರು ಜಿಲ್ಲೆ ಚಿಕ್ಕಪಟ್ಟಣಗೆರೆ ನಿವಾಸಿ ಸಿ.ಎಸ್.ಮಂಜುನಾಥ್ ಅವರ ಪುತ್ರಿ ವರ್ಷಿತ ವಿದ್ಯಾವರ್ಧಕ ಕಾಲೇಜಿನಲ್ಲಿ ಪ್ರಥಮ ವರ್ಷದ ಬಿಸಿಎಗೆ ದಾಖಲಾಗಿ ಕಾಲೇಜಿನ ವಸತಿ ನಿಲಯದಲ್ಲಿ ವಾಸವಿದ್ದರು. ಆದರೆ, ಆ.23ರಂದು ವಸತಿ ನಿಲಯದಿಂದ ನಾಪತ್ತೆಯಾಗಿದ್ದಾರೆ. ಆಕೆಗೆ ಹಲವು ಬಾರಿ ಅವರ ತಂದೆ ಕರೆ ಮಾಡಿದ್ದು ಮೊಬೈಲ್ ಸ್ವಿಚ್ ಆಫ್ ಆಗಿದ್ದು, ಮೈಸೂರಿಗೆ ಆಗಮಿಸಿದ ಮಂಜುನಾಥ್ ಅವರು, ತಮ್ಮ ಪರಿಚಿತರ ಮನೆಯಲ್ಲಿ ಹುಡುಕಾಡಿದರೂ ಪತ್ತೆಯಾಗಿಲ್ಲ ಎಂದು ವಿಜಯನಗರ ಠಾಣೆಗೆ ದೂರು ನೀಡಿದ್ದು, ಈಕೆ ಬಗ್ಗೆ ಸುಳಿವು ದೊರೆತಲ್ಲಿ ಮೊ.ಸಂ: 9480802241 ಅಥವಾ ಮೈಸೂರು ಪೊಲೀಸ್ ಕಂಟ್ರೋಲ್ ರೂಂ: 0821–2418339ಗೆ ಸಂಪರ್ಕಿಸಬಹುದು.

ಉಚಿತ ಯೋಗಾಸನ ತರಗತಿ

ಮೈಸೂರು: ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ, ಮೈಸೂರು ಶಾಖೆ ವತಿಯಿಂದ ವಿಜಯ ವಿಠ್ಠಲ ಶಾಲೆ ಆವರಣದಲ್ಲಿ ಸೆ.2ರಿಂದ ಉಚಿತ ಯೋಗಾಸನ, ಪ್ರಾಣಾಯಾಮ, ಧ್ಯಾನ ತರಗತಿ ಹಮ್ಮಿಕೊಳ್ಳಲಾಗಿದೆ. ತರಬೇತಿಯು ಬೆಳಗ್ಗೆ 6ರಿಂದ 7ರವರೆಗೆ ನಡೆಯಲಿದೆ. ಮಾಹಿತಿಗೆ ಮೊ. 9945759762, 8050807887.

ಗ್ರಾಮೀಣ ಕೃಷಿ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರಿಗೆ ವಿಶೇಷ ತರಬೇತಿ ಕಾರ್ಯಕ್ರಮ


ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಸಹಕಾರ ಒಕ್ಕೂಟ, ಬೆಂಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಹಾಗೂ ಸಹಕಾರ ಇಲಾಖೆ ಸಂಯುಕ್ತಾಶ್ರಯದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರಿಗೆ ದೇವನಹಳ್ಳಿಯಲ್ಲಿರುವ ಖಾಸಗಿ ರೆಸಾರ್ಟ್‌ನಲ್ಲಿ ಆಯೋಜಿಸಿದ್ದ ರಾಜ್ಯ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಚಾಮುಂಡೇಶ್ವರಿ ಕ್ಷೇತ್ರದ ಶಾಸಕರೂ, ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ.ದೇವೇಗೌಡರು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಸಹಕಾರ ಸಂಘಗಳ ಅಪರ ನಿಬಂಧಕ ದಿವಾಕರ್, ಮಹಾಮಂಡಳದ ಕಾರ್ಯದರ್ಶಿ ಲಕ್ಷ್ಮೀಪತಯ್ಯ, ಮಹಾಮಂಡಳದ ನಿರ್ದೇಶಕ ಎ.ಸಿ.ನಾಗರಾಜ್, ಹಾಗೂ ಡಿಸಿಸಿ ಬ್ಯಾಂಕ್ ನಿರ್ದೇಶಕರು, ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕರು, ಅಧಿಕಾರಿಗಳು ಭಾಗವಹಿಸಿದ್ದರು.

ಆ.31, ಬೆಂಗಳೂರಲ್ಲಿ ಡಾ.ವಿಕ್ರಮ್ ಸಂಪತ್ ಅವರ 'ಶಿವನಿಗಾಗಿ ಕಾಯುತ್ತ' ಕೃತಿ ಬಿಡುಗಡೆ

ಮೈಸೂರು,ಆ.27(ಪಿಎಂ)– ಅಂತಾರಾಷ್ಟ್ರೀಯ ಖ್ಯಾತಿಯ ಇತಿಹಾಸಕಾರ ಡಾ.ವಿಕ್ರಮ್ ಸಂಪತ್ ಅವರ 'ವೇಟಿಂಗ್ ಫಾರ್ ಶಿವ; ಅನ್‌ಅರ್ಥಿಂಗ್ ದಿ ಟ್ರೂತ್ ಆಫ್ ಕಾಶಿಸ್ ಗ್ಯಾನ್‌ವಾಪಿ' ಆಂಗ್ಲ ಕೃತಿಯ ಕನ್ನಡದ ಆಪ್ತ ಅವತರಣಿಕೆ 'ಶಿವನಿಗಾಗಿ ಕಾಯುತ್ತ; ಕಾಶಿ ಜ್ಞಾನವಾಪಿಯ ಸತ್ಯದ ಅನಾವರಣ' ಪುಸ್ತಕದ ಲೋಕಾರ್ಪಣೆ ಮತ್ತು ಕೃತಿ ಕರ್ತೃ ಅವರೊಂದಿಗೆ ಸಂವಾದ ಕಾರ್ಯಕ್ರಮವನ್ನು ಆ.31ರಂದು ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗಿದೆ. ಬಸವನಗುಡಿಯ ಬಿ.ಪಿ.ವಾಡಿಯ ರಸ್ತೆಯಲ್ಲಿರುವ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್‌ನಲ್ಲಿ ಅಂದು ಬೆಳಗ್ಗೆ 11ರಿಂದ ಮಧ್ಯಾಹ್ನ 1ರವರೆಗೆ ಕಾರ್ಯಕ್ರಮ ನಡೆಯಲಿದೆ. ಹುಬ್ಬಳ್ಳಿಯ ಸಾಹಿತ್ಯ ಪ್ರಕಾಶನ ಆಯೋಜಿಸಿರುವ ಈ ಕಾರ್ಯಕ್ರಮವನ್ನು ಪತ್ರಕರ್ತ ಅಜಿತ್ ಹನುಮಕ್ಕನವರ್ ನಡೆಸಿಕೊಡಲಿದ್ದಾರೆ. ಜಿ.ಎಲ್.ಶೇಖರ್, ಎಸ್.ಎಸ್.ನರೇಂದ್ರ ಕುಮಾರ್ ಸದರಿ ಆಂಗ್ಲ ಕೃತಿಯನ್ನು ಕನ್ನಡಕ್ಕೆ ಅನುವಾದಿಸಿದ್ದಾರೆ.

ನಾಳೆ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು, ಆ. 27–ಮೈಸೂರಿನ ಲಕ್ಷ್ಮೀಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಆ.29ರಂದು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆಯವರೆಗೆ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಮಾಹಿತಿಗೆ ದೂ. 0821–4249259 ಸಂಪರ್ಕಿಸಬಹುದು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಮಹಿಳೆಯರಲ್ಲಿ ಆರ್ಥಿಕ ಸಾಕ್ಷರತೆ

ಶ್ರೀರಾಂಪುರ ವಲಯ ಮಟ್ಟದ ಲಕ್ಷ್ಮೀ ಪೂಜೆ, ಧಾರ್ಮಿಕ ಸಭಾ ಕಾರ್ಯಕ್ರಮದಲ್ಲಿ ವಿಜಯಕುಮಾರ್ ನಾಗನಾಳ ಅಭಿಮತ


ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್, ಶ್ರೀರಾಂಪುರ ವಲಯ ಪ್ರಗತಿಬಂಧು ಸ್ವಸಹಾಯ ಸಂಘಗಳ ಒಕ್ಕೂಟಗಳ ಆಶ್ರಯದಲ್ಲಿ ನಾಗಮ್ಮ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ್ದ ವಲಯ ಮಟ್ಟದ ಲಕ್ಷ್ಮೀ ಪೂಜೆ, ಧಾರ್ಮಿಕ ಸಭೆಯನ್ನು ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಉದ್ಘಾಟಿಸಿದರು. ಟ್ರಸ್ಟಿನ ಹಿರಿಯ ನಿರ್ದೇಶಕ ವಿಜಯಕುಮಾರ್ ನಾಗನಾಳ, ಕೆಲ್ಲಹಳ್ಳಿ ಗ್ರಾಪಂ ಸದಸ್ಯ ಭೈರೇಶ್, ಎನ್.ಶಕುಂತಲಾ, ಅಮಿತಾ, ಸುಮಿತ್, ಶಾಂತಾ ರಾಮಕೃಷ್ಣ, ಆರ್.ಸುರೇಶ್ ಉಪಸ್ಥಿತರಿದ್ದಾರೆ.

ಮೈಸೂರು,ಆ.27–ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಮಹಿಳೆಯರಲ್ಲಿ ಆರ್ಥಿಕ ಸಾಕ್ಷರತೆ ಹೆಚ್ಚುತ್ತಿದೆ ಎಂದು ಬಿ.ಸಿ. ಟ್ರಸ್ಟಿನ ಜಿಲ್ಲಾ ಹಿರಿಯ ನಿರ್ದೇಶಕ ವಿಜಯಕುಮಾರ್ ನಾಗನಾಳ ಹೇಳಿದರು.


ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್, ಶ್ರೀರಾಂಪುರ ವಲಯ ಪ್ರಗತಿಬಂಧು ಸ್ವಸಹಾಯ ಸಂಘಗಳ ಒಕ್ಕೂಟದ ಆಶ್ರಯದಲ್ಲಿ ನಾಗಮ್ಮ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಏರ್ಪಡಿಸಿದ್ದ ವಲಯ ಮಟ್ಟದ ಲಕ್ಷ್ಮೀ ಪೂಜೆ ಹಾಗೂ ಧಾರ್ಮಿಕ ಸಭಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಧರ್ಮಸ್ಥಳ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಹಾಗೂ ಮಾತೃಶ್ರೀ ಹೇಮಾವತಿ ಹೆಗ್ಗಡೆ ಅವರು ಈ ಉದ್ದೇಶದಿಂದಲೇ ಮಹಿಳಾ ಸ್ವಸಹಾಯ ಸಂಘಗಳನ್ನು ಸ್ಥಾಪಿಸಿದ್ದಾರೆ ಎಂದರು.

ಈಗ ಮಹಿಳೆಯರು ಜಾಗೃತರಾಗಿದ್ದಾರೆ. ಬ್ಯಾಂಕುಗಳಲ್ಲಿ ಖಾತೆಗಳನ್ನು ತೆರೆದು, ಹಣಕಾಸಿನ ವ್ಯವಹಾರಗಳ ಬಗ್ಗೆ ಅರಿವು ಮೂಡಿಸಿಕೊಂಡಿದ್ದಾರೆ. ಮೈಸೂರು, ನಂಜನಗೂಡು, ಎಚ್.ಡಿ.ಕೋಟೆ ಹಾಗೂ ಟಿ.ನರಸೀಪುರ ತಾಲೂಕುಗಳಲ್ಲಿ 19 ಸಾವಿರ ಮಹಿಳಾ ಸ್ವಸಹಾಯ ಸಂಘಗಳಿದ್ದು, ಕಳೆದ ಹದಿಮೂರು ವರ್ಷಗಳಲ್ಲಿ 95 ಕೋಟಿ ರೂ. ಉಳಿತಾಯ ಮಾಡಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿ, ಪ್ರಸ್ತುತ ಭೂಮಿಯಿಂದ ಬಾಹ್ಯಾಕಾಶದವರೆಗೆ ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ತಮ್ಮ ಹೆಜ್ಜೆ ಗುರುತು ಮೂಡಿಸುತ್ತಿದ್ದಾರೆ. ಶಿಕ್ಷಣ, ಉದ್ಯೋಗದಲ್ಲಿಯೂ ಮುಂದೆ ಇದ್ದಾರೆ. ಮನೆಯ ಯಜಮಾನಿಯಾಗಿ ಕುಟುಂಬದ ಆರ್ಥಿಕ ನಿರ್ವಹಣೆಯನ್ನು ಮಾಡುತ್ತಾ, ಮಕ್ಕಳ ಶಿಕ್ಷಣ, ಮನೆಯ ಸದಸ್ಯರ ಆರೋಗ್ಯದ ಕಡೆ ಗಮನ ನೀಡುತ್ತಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಕೆಲ್ಲಹಳ್ಳಿ ಗ್ರಾಪಂ ಸದಸ್ಯ ಹಾಗೂ ಪೂಜಾ ಸಮಿತಿ ಅಧ್ಯಕ್ಷ ಭೈರೇಶ್ ಅಧ್ಯಕ್ಷತೆ ವಹಿಸಿದ್ದರು. ಸಮಾಜ ಸೇವಕ ಸುಮಿತ್, ಕುವೆಂಪುನಗರ ಕ್ಷೇತ್ರ ಯೋಜನಾಧಿಕಾರಿ ಎನ್.ಶಕುಂತಲಾ, ಆರ್.ಸುರೇಶ್, ಪಾರ್ಥಸಾರಥಿ ಮೊದಲಾದವರು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

28.08.2024 ಬುಧವಾರ, ಮಳೆ ನಕ್ಷತ್ರ: ಮಖ 17.08.2024 ರಿಂದ 30.08.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ,
ತಿಥಿ: ದಶಮಿ, ನಕ್ಷತ್ರ: ಮೃಗಶಿರ, ರಾಹುಕಾಲ : ಮಧ್ಯಾಹ್ನ 12 ರಿಂದ 1.30 ರವರೆಗೆ

- **ವೀರಭದ್ರಸ್ವಾಮಿ ಹಾಗೂ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನ:** ಶ್ರೀ ವೀರಭದ್ರೇಶ್ವರಸ್ವಾಮಿಯ ಜಯಂತ್ಯುತ್ಸವ, ಮಹಾರಥೋತ್ಸವ ಹಾಗೂ ಶ್ರಾವಣ ಮಾಸದ ಪೂಜಾ ಕಾರ್ಯಕ್ರಮ, ಸ್ಥಳ: ದೇವಸ್ಥಾನದ ಪ್ರಾಂಗಣ, ಡಿ.ಬನುಮಯ್ಯ ರಸ್ತೆ, ಕೆ.ಆರ್.ಮೊಹಲ್ಲಾ, ಬೆಳಗ್ಗೆಯಿಂದ.
- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಹೈಪೋಥೈರಾಯ್ಡಿಸಮ್ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ ಸಂಜೆ 4.30ರವರೆಗೆ
- **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್, ಬೆಳಗ್ಗೆ 10ರಿಂದ.
- **ಹಿರಣ್ಮಯಿ ಪ್ರತಿಷ್ಠಾನ ಮತ್ತು ಕಾವೇರಿ ಬಳಗ, ಮೈಸೂರು:** ರಾಷ್ಟ್ರೀಯ ಕ್ರೀಡಾ ದಿನಾಚರಣೆ. ಸ್ಥಳ ಸರ್ಕಾರಿ ಪ್ರಾಥಮಿಕ ಶಾಲೆ, ಎಂಸಿಸಿ ಕಾಲೋನಿ, ಮೈಸೂರು ಉತ್ತರ, ಬೆಳಗ್ಗೆ 11 ಗಂಟೆಗೆ.
- **ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾ ವಿದ್ಯಾಲಯ–ಕನ್ನಡ ವಿಭಾಗ:** ನುಡಿರತ್ನ ಕನ್ನಡ ಸಂಘ ಉದ್ಘಾಟನೆ, ವಿಶೇಷ ಉಪನ್ಯಾಸ. ಸ್ಥಳ: ಕಾಲೇಜು ಸಭಾಂಗಣ, ಕೃಷ್ಣಮೂರ್ತಿಪುರಂ. ಬೆಳಗ್ಗೆ 11ಕ್ಕೆ.
- **ಕರ್ನಾಟಕ ಜಾನಪದ ಅಕಾಡೆಮಿ, ಬೆಂಗಳೂರು, ಪ್ರಾದೇಶಿಕ ಜಾನಪದ ಅಧ್ಯಯನ ಮತ್ತು ಜನಪದ ಕಲಿಕಾ ಕೇಂದ್ರ, ಕರ್ನಾಟಕ ಜಾನಪದ ವಿಶ್ವವಿದ್ಯಾನಿಲಯ, ಏಕತಾರಿ ಸಾಂಸ್ಕೃತಿಕ ಸಂಘಟನೆ :** ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಜನಪದ ನೃತ್ಯಗಳು ಮತ್ತು ಜನಪದ ಗೀತೆಗಳ ಕಲಿಕಾ ತರಬೇತಿ ಶಿಬಿರ, ಸ್ಥಳ: ಕಿರು ರಂಗಮಂದಿರ ಆವರಣ, ಕಲಾಮಂದಿರ, ಸಂಜೆ 4ರಿಂದ 6ರವರೆಗೆ.
- **ಶರಣ ಸಾಹಿತ್ಯ ಪರಿಷತ್ತು (ಮೈಸೂರು ನಗರ ಘಟಕ), ಕದಳಿ ಮಹಿಳಾ ವೇದಿಕೆ :** ವಚನ–ಶ್ರಾವಣ, ಮನೆ ಮನೆಗೆ ಶ್ರಾವಣ ಮಾಸದ ಶರಣ ಸಂದೇಶ, ಜೆಎಸ್‌ಎಸ್ ಮಹಿಳಾ ಪದವಿಪೂರ್ವ ಕಾಲೇಜು ಅಧ್ಯಾಪಕ ಹೆಚ್.ಬಿ.ಶ್ರೀಧರ್ ಅವರಿಂದ ಕಟ್ಟಬೇಕು ಮನವ, ಮೆಟ್ಟಬೇಕು ಮದವ–ಹಡಪದ ಅಪ್ಪಣ್ಣ ಕುರಿತು ಉಪನ್ಯಾಸ, ಸ್ಥಳ: ಶ್ರೀಮತಿ ಗೀತಾ ಈಶ್ವರ್, ಶಾರದಾದೇವಿನಗರ, ಸಂಜೆ 5.30ಕ್ಕೆ.
- **ಶ್ರೀ ಸುತ್ತೂರು ಮಠ, ಮೈಸೂರು ಶಾಖೆ:** ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ವಿದುಷಿ ಧರಿತ್ರಿ ಆನಂದರಾವ್ ಅವರಿಂದ ವಾಚನ, ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ.ಕೆ.ಅನಂತರಾಮು ಅವರಿಂದ ಪ್ರವಚನ, ಸಂಜೆ 6ಕ್ಕೆ ಸಾಮೂಹಿಕ ಪ್ರಾರ್ಥನೆ, ಸಂಜೆ 6.30ಕ್ಕೆ ಪ್ರವಚನ, ಸ್ಥಳ: ಶ್ರೀ ಸುತ್ತೂರು ಮಠ, ಚಾಮುಂಡಿ ಬೆಟ್ಟದ ತಪ್ಪಲು, ಸಂಜೆ 6.30 ರಿಂದ.
- **ಶ್ರೀ ತ್ಯಾಗರಾಜ ಸಂಗೀತ ಸಭಾ ಚಾರಿಟಬಲ್ ಟ್ರಸ್ಟ್:** ಆಗಸ್ಟ್ ತಿಂಗಳ ಮೂರನೇ ಸಂಗೀತ ಕಾರ್ಯಕ್ರಮ. ವಿ| ರಘು ಸಿಂಹ–ವೇಣುವಾದನ, ವಿ| ಹೆಚ್.ಎಸ್. ತಾಂಡವಮೂರ್ತಿ–ಪಿಟೀಲು, ವಿ| ಜಿ.ಟಿ.ಸ್ವಾಮಿ–ಮೃದಂಗ, ವಿ| ಎಂ.ಆರ್. ಮೋಹನ್–ಮೋರ್ಚಿಂಗ್. ಸ್ಥಳ: ಶ್ರೀರಾಮ ಮಂದಿರ, ಜಯನಗರ. ಸಂಜೆ 6 ಗಂಟೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 'ವಾದ್ಯ ವೈಭವ' ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ–ಚೈತ್ರಿಕಾ, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎ.ಎಸ್.ನಾಗಲಕ್ಷ್ಮೀ, ಎ.ಎನ್.ಶೀಲಾ, ವ್ಯಾಖ್ಯಾನ–ಪ್ರೊ.ಮೈಸೂರು ಕೃಷ್ಣಮೂರ್ತಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು–ರತ್ನಮಾಲಾ ಪ್ರಕಾಶ್, 8.30 ಚಿತ್ರಗೀತೆಗಳು, 9.00 ರಾಷ್ಟ್ರೀಯ ಬಾಹ್ಯಾಕಾಶ ದಿನದ ಸಂದರ್ಭದಲ್ಲಿ ವಿಶೇಷ ಕಾರ್ಯಕ್ರಮ ಸರಣಿ 'ಬಾಹ್ಯಾಕಾಶ ವಿಸ್ಮಯ', 9.05 ವೃತ್ತಿ ಮಾರ್ಗದರ್ಶನ: ರಾಷ್ಟ್ರೀಯ ಕ್ರೀಡಾ ದಿನಾಚರಣೆ ಸಂದರ್ಭದಲ್ಲಿ 'ಅಥ್ಲೆಟಿಕ್ಸ್ ಕ್ರೀಡೆಗಳಲ್ಲಿರುವ ಅವಕಾಶಗಳು' ಕುರಿತು ರಾಷ್ಟ್ರಮಟ್ಟದ ಅಥ್ಲೆಟಿಕ್ಸ್ ಕೂಟಗಳಲ್ಲಿ ಭಾಗವಹಿಸಿದ್ದ ಮೈಸೂರಿನ ಅಥ್ಲೆಟಿಕ್ ಕೋಚ್ ಸುಮಂತ್ ಕೆ.ಪಿ. ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 10.00 ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ: ಪಂಡಿತ್. ರವೀಂದ್ರ ಸೊರ್ಗಾವಿ–ಹಾಡುಗಾರಿಕೆ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ **ಮಧ್ಯಾಹ್ನ:** 12.30 ಆಯುಷವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.35 ದೇವರನಾಮ–ಎಂ.ಆರ್.ಉದಯಕುಮಾರ್, 12.45 ಜನಪದ ಸಂಗೀತ, 1.20 ಭಾವಗೀತೆಗಳು–ರೋಹಿಣಿ ಸುಧಾಮ್ ಮತ್ತು ರೇವತಿ ರಾಘವೇಂದ್ರ, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ನಾಗೇಂದ್ರಪ್ಪ. ಬಿ–ಕ್ಲಾರಿಯೋನೆಟ್ ವಾದನ, 4.00 ಮಹಿಳಾರಂಗ 'ಹೀಗಿದೆ ನೋಡಿ ನಮ್ ಜೋಡಿ', ಪ್ರಸ್ತುತಿ: ಅಬ್ದುಲ್ ರಶೀದ್, 4.45 ಹಿಂದಿ ಪಾಠ–ಶಾಂತಾ ಕಿಣಿ, 6.50 ಕೃಷಿರಂಗ, ಕೃಷಿ ದೀವಿಗೆ– 'ಸಂಶೋಧನಾ ಸಂಸ್ಥೆಯೊಂದಿಗೆ ಕೃಷಿ ಕಲಿಕೆ' ಕುರಿತ ಬಾನುಲಿ ಸರಣಿ ಸುಧಾರಿತ ಹೈನುಗಾರಿಕೆ ಕುರಿತ ನೇರ ಫೋನ್ ಇನ್ ಕಾರ್ಯ ಕ್ರಮ ಭಾಗವಹಿಸುತ್ತಾರೆ–ಮಂಡ್ಯದ ವಿ.ಸಿ.ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕ ಡಾ.ಮಹದೇವಯ್ಯ ಹಾಗೂ ಸಹ ಸಂಶೋಧನಾ ನಿರ್ದೇಶಕರಾದ ಡಾ.ಎನ್.ಶಿವಕುಮಾರ್, ಪ್ರಸ್ತುತಿ: ಎನ್.ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ, 8.00 ಕ್ಷಿತಿಜ ಲಿಟರರಿ ಗುರು–ಸಾಹಿತ್ಯ ಸಾಧಕರೊಂದಿಗೆ ಸಂವಾದ, 9.30 ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ: ಪಂಡಿತ್. ಉಸ್ತಾದ್ ಬಡೆ ಗುಲಾಮ್ ಅಲಿಖಾನ್–ಗಾಯನ, 10.00 ಜನಪದ ಸಂಗೀತ, 10.30 ಸವಿನೆನಪು

ಬಿಜೆಪಿ ಸದಸ್ಯತ್ವ ನೋಂದಣಿ ಯಶಸ್ಸಿಗೆ ಕೈ ಜೋಡಿಸಿ

ಕಾರ್ಯಕರ್ತರಿಗೆ ಬಿಜೆಪಿ ರಾಜ್ಯ ಕಾರ್ಯದರ್ಶಿ ಡಾ.ಲಕ್ಷ್ಮೀ ಅಶ್ವಿನ್‌ಗೌಡ ಮನವಿ



ಮೈಸೂರು ಬಿಜೆಪಿ ಕಚೇರಿಯಲ್ಲಿ ಮಂಗಳವಾರ ನಡೆದ ಸದಸ್ಯತ್ವ ನೋಂದಣಿ ಅಭಿಯಾನದ ಕಾರ್ಯಾಗಾರದಲ್ಲಿ ಬಿಡುಗಡೆಗೊಳಿಸಿದ ಮಾಹಿತಿಯ ಕಿರು ಹೊತ್ತಿಗೆಯನ್ನು ಮುಖಂಡರಿಗೆ ವಿತರಿಸಲಾಯಿತು.

ಮೈಸೂರು, ಆ.27(ಎಸ್‌ಬಿಡಿ)– ಮಾಜಿ ಪ್ರಧಾನಿ ದಿವಂಗತ ಅಟಲ್ ಬಿಹಾರಿ ವಾಜಪೇಯಿ ಅವರ ನೂರನೇ ಜನ್ಮ ದಿನಾಚರಣೆ ಸಂದರ್ಭದಲ್ಲಿ ನಡೆಯುತ್ತಿರುವ ಬಿಜೆಪಿ ಸದಸ್ಯತ್ವ ನೋಂದಣಿ ಅಭಿಯಾನ ಯಶಸ್ವಿಯಾಗಲು ಪ್ರತಿಯೊಬ್ಬರೂ ಕೈ ಜೋಡಿಸಬೇಕು ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ, ಮಾಜಿ ಐಆರ್‌ಎಸ್ ಅಧಿಕಾರಿ ಡಾ.ಲಕ್ಷ್ಮೀ ಅಶ್ವಿನ್ ಗೌಡ ಮನವಿ ಮಾಡಿದರು.

ಮೈಸೂರಿನ ಬಿಜೆಪಿ ಕಚೇರಿಯಲ್ಲಿ ನಗರಾಧ್ಯಕ್ಷ ಎಲ್.ನಾಗೇಂದ್ರ ಅಧ್ಯಕ್ಷತೆಯಲ್ಲಿ ಮಂಗಳವಾರ ನಡೆದ ಸದಸ್ಯತ್ವ ಅಭಿಯಾನದ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಬಿಜೆಪಿ ವಿಶ್ವದಲ್ಲೇ ಅತೀ ಹೆಚ್ಚು ಸದಸ್ಯರನ್ನು ಹೊಂದಿರುವ ಅತೀ ದೊಡ್ಡ ಪಕ್ಷ ಎನ್ನುವುದು ಎಲ್ಲರಿಗೂ ತಿಳಿದಿದೆ. ಹಾಗೆಯೇ ಗ್ರಾಮ ಪಂಚಾಯ್ತಿಯಿಂದ ಸಂಸತ್‌ವರೆಗೆ ಅತೀ ಹೆಚ್ಚು ಜನಪ್ರತಿನಿಧಿಗಳು ಬಿಜೆಪಿಯಿಂದ ಆಯ್ಕೆಯಾಗಿದ್ದಾರೆ ಎನ್ನುವುದು ಗಮನಾರ್ಹ. ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ರಾಜಕೀಯ ತಂತ್ರಗಾರಿಕೆ ನಡುವೆಯೂ ಸತತ ಮೂರು ಬಾರಿ ಸರ್ಕಾರ ರಚಿಸಿರುವ ಬಲಿಷ್ಠ ಪಕ್ಷವೂ ಹೌದು. ಇದಕ್ಕೆ ಪ್ರಧಾನಿ ಮೋದಿ ಅವರ ಆಡಳಿತ ಹಾಗೂ ಪಕ್ಷದ ಎಲ್ಲಾ ಹಂತಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರ ಪರಿಶ್ರಮ ಕಾರಣ ಎಂದರು.

ಆರು ವರ್ಷಗಳಿಗೊಮ್ಮೆ ಪಕ್ಷದ ಸದಸ್ಯತ್ವ ನೋಂದಣಿ ನಡೆಯುತ್ತದೆ. ಆದರೆ ಮಾಜಿ ಪ್ರಧಾನಿ ವಾಜಪೇಯಿ ಅವರ ನೂರನೇ ಜನ್ಮದಿನ ಆಚರಿಸುವ ಪ್ರಸಕ್ತ ವರ್ಷದಲ್ಲಿ ನಡೆಯುತ್ತಿರುವ ಅಭಿಯಾನ ಅತ್ಯಂತ ಮಹತ್ವಪೂರ್ಣವಾದದ್ದು. ಬೂತ್ ಮಟ್ಟದಿಂದ ಹಿಡಿದು ಎಲ್ಲಾ ಹಂತಗಳಲ್ಲೂ ನೋಂದಣಿ ಅಭಿಯಾನ ಯಶಸ್ವಿಯಾಗಬೇಕು. ಈಗ ನಮ್ಮ ಪಕ್ಷಕ್ಕೆ ವಿರೋಧಿಗಳಂತಿರುವವರು ಮುಂದಿನ ದಿನಗಳಲ್ಲಿ ಬೆಂಬಲ ನೀಡಬಹುದು. ಹಾಗಾಗಿ ಎಲ್ಲರನ್ನೂ ಸಂಪರ್ಕಿಸಿ ಸದಸ್ಯರನ್ನಾಗಿ ನೋಂದಣಿ ಮಾಡಿಸಬೇಕು. ಬಿಜೆಪಿ ರಾಜಕೀಯದ ಜೊತೆಗೆ ಸಾಮಾಜಿಕ ಬದ್ಧತೆಯುಳ್ಳ ಪಕ್ಷ. ಹಾಗಾಗಿ ಜನಸಂಪರ್ಕಕ್ಕೆ ಆದ್ಯತೆ ನೀಡಿ, ಇತರೆ ಕಾರ್ಯಕ್ರಮಗಳನ್ನೂ ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಬಿಜೆಪಿ ಭದ್ರಕೋಟೆಯಾಗಬೇಕು: ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಸದಸ್ಯರ ಸಂಖ್ಯೆ ಹೆಚ್ಚುವುದರ ಜೊತೆಗೆ ಸಂಘಟನೆಯೂ ಗಟ್ಟಿಯಾಗಬೇಕು. ಹಾಗಾಗಿ ಸದಸ್ಯತ್ವ ನೋಂದಣಿ ಅಭಿಯಾನವನ್ನು ಗಂಭೀರವಾಗಿ ಪರಿಗಣಿಸಬೇಕು. ಮೈಸೂರು ಬಿಜೆಪಿಯ ಭದ್ರಕೋಟೆಯಾಗಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ದೇಶದ ಮುಂದಿನ ಪೀಳಿಗೆಗೆ ಒಳ್ಳೆಯ ವಾತಾವರಣ ನಿರ್ಮಿಸುವ ಸಾಮಾಜಿಕ ಜವಾಬ್ದಾರಿಯೊಂದಿಗೆ ಎಲ್ಲರೂ ಒಟ್ಟಾಗಿ ಮುಂದುವರೆಯಬೇಕು ಎಂದು ಹೇಳಿದರು.

ಶೇ.20ರಷ್ಟು ಜನ ಸದಸ್ಯರಾಗಬೇಕು: ವಿಧಾನಪರಿಷತ್ ಮಾಜಿ ಸದಸ್ಯ ತೋಂಟದಾರ್ಯ ಮಾತನಾಡಿ, ಯಾವುದೇ ಚುನಾವಣಾ ಕ್ಷೇತ್ರದ ಒಟ್ಟು ಮತದಾರರಲ್ಲಿ ಶೇ.20ರಷ್ಟು ಮಂದಿ ಬಿಜೆಪಿ ಸದಸ್ಯರಾದರೆ ಚುನಾವಣೆ ಯಾವಾಗ ಎದುರಾದರೂ ಯಶಸ್ವಿಯಾಗಿ ಎದುರಿಸಬಹುದು. ಆದರೆ ನೋಂದಣಿ ಸರ್ವವ್ಯಾಪಿ ಸರ್ವಸ್ಪರ್ಶಿಯಾಗಿರಬೇಕು ಅಂದರೆ ನೋಂದಾಯಿತರಲ್ಲಿ ಎಲ್ಲಾ ಜಾತಿ, ವರ್ಗದವರೂ ಇರಬೇಕು ಎಂದು ಕಿವಿಮಾತು ಹೇಳಿದರು.

ಗುರಿ ಸಾಧಿಸೋಣ: ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಮಾತನಾಡಿ, ಸದಸ್ಯತ್ವ ನೋಂದಣಿ ಅಭಿಯಾನ ಪಕ್ಷದ ಸಂಘಟನೆಗೆ ಪೂರಕವಾದುದು. ಅಭಿಯಾನ ಯಶಸ್ವಿಗೆ ನಾವೆಲ್ಲರೂ ಒಗ್ಗಟ್ಟಿನಿಂದ ಶ್ರಮಿಸೋಣ. ಮಿಸ್ಡ್ ಕಾಲ ಮೂಲಕ ನೋಂದಣಿ ಜೊತೆಗೆ ಮನೆ ಮನೆಗೆ ತೆರಳಿ ಗುರಿ ಸಾಧಿಸೋಣ ಎಂದು ನೆರೆದಿದ್ದ ಮುಖಂಡರು ಹಾಗೂ ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ದಾಖಲೆಗಲ್ಲ ಸಂಘಟನೆಗೆ: ಮಾಜಿ ಮೇಯರ್ ಸಂದೇಶ್ ಸ್ವಾಮಿ ಮಾತನಾಡಿ, ಸದಸ್ಯತ್ವ ನೋಂದಣಿ ದಾಖಲೆಗೆ ಸೀಮಿತವಾಗಬಾರದು. ಸದಸ್ಯರು ಹಾಗೂ ಪಕ್ಷದ ನಡುವೆ ಉತ್ತಮ ಬಾಂಧವ್ಯ ಸೃಷ್ಟಿಯಾಗುವ ನಿಟ್ಟಿನಲ್ಲಿ ಗಮನಹರಿಸಬೇಕು. ಅತೀ ಹೆಚ್ಚು ಸದಸ್ಯತ್ವ ಹೊಂದಿದ ಪಕ್ಷವಾದರೂ ಕಳೆದ ಚುನಾವಣೆಯಲ್ಲಿ ನಿರೀಕ್ಷಿತ ಸಾಧನೆ ಸಾಧ್ಯವಾಗದಿರುವ ಬಗ್ಗೆಯೂ ಅವಲೋಕಿಸಿ, ಸುಧಾರಣೆಗೆ ಕ್ರಮ ವಹಿಸಬೇಕು ಎಂದರು. ಮೈಸೂರು ವಿಭಾಗದ ಪ್ರಭಾರಿ ಮೈ.ವಿ.ರವಿಶಂಕರ್, ಪ್ರಕೋಷ್ಠಗಳ ಸಂಚಾಲಕ ಎನ್.ವಿ.ಫಣೀಶ್ ಮಾತನಾಡಿದರು. ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ, ನಗರ ಪ್ರಧಾನ ಕಾರ್ಯದರ್ಶಿಗಳಾದ ಗಿರಿಧರ್, ಬಿ.ಎಂ.ರಘು, ಮುಖಂಡ ಕೇಬಲ್ ಮಹೇಶ್, ಸಂತೋಷ್‌ಕುಮಾರ್ ಮತ್ತಿತರರು ಸಭೆಯಲ್ಲಿ ಭಾಗವಹಿಸಿದ್ದರು.

ಮಕ್ಕಳ ವ್ಯಕ್ತಿತ್ವ ನಿರ್ಮಾಣಕ್ಕೆ ರಂಗಭೂಮಿ ಸಹಕಾರಿ

ನಿವೃತ್ತ ಡಿಡಿಪಿಐ ಮಂಜುಳಾ ಅಭಿಮತ



ಮೈಸೂರಿನ ಕಿರುರಂಗ ಮಂದಿರದಲ್ಲಿ ಸಂಚಲನ ಯುವರಂಗ ತರಬೇತಿ ಶಿಬಿರದ ಎರಡು ದಿನಗಳ ಸಮಾರೋಪ ಸಮಾರಂಭ ಮತ್ತು ನಾಟಕ ಪ್ರದರ್ಶನಕ್ಕೆ ಮಂಗಳವಾರ ಚಾಲನೆ ನೀಡಲಾಯಿತು.

ಮೈಸೂರು,ಆ.27(ಪಿಎಂ)– ಮಕ್ಕಳ ವ್ಯಕ್ತಿತ್ವ ನಿರ್ಮಾಣಕ್ಕೆ ರಂಗಭೂಮಿ ಅತ್ಯಂತ ಸಹಕಾರಿ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ನಿವೃತ್ತ ಉಪನಿರ್ದೇಶಕಿ ಮಂಜುಳಾ ಅಭಿಪ್ರಾಯಪಟ್ಟರು.

ಮೈಸೂರಿನ ಕಲಾಮಂದಿರ ಆವರಣದ ಕಿರುರಂಗ ಮಂದಿರದಲ್ಲಿ ಸಂಚಲನ ಮೈಸೂರು ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ಸಂಚಲನ ಯುವರಂಗ ತರಬೇತಿ ಶಿಬಿರದ ಎರಡು ದಿನಗಳ ಸಮಾರೋಪ ಸಮಾರಂಭ ಮತ್ತು ನಾಟಕ ಪ್ರದರ್ಶನ ಉದ್ಘಾಟಿಸಿ ಅವರು ಮಾತನಾಡಿದರು. ನಮ್ಮ ಎಲ್ಲಾ ಕಲೆಗಳನ್ನು ಉಳಿಸಿ ಬೆಳೆಸಬೇಕಿದೆ. ಶಾಲೆಗಳಲ್ಲಿ ನಾಲ್ಕು ಗೋಡೆ ಮಧ್ಯೆ ಮಕ್ಕಳ ಪರಿಪೂರ್ಣ ವ್ಯಕ್ತಿತ್ವ ನಿರ್ಮಾಣ ಅಸಾಧ್ಯ. ಹಾಗಾಗಿ ಅವರನ್ನು ರಂಗಭೂಮಿಯಲ್ಲಿ ತೊಡಗಿಸುವುದು ಅಗತ್ಯ. ಇದರಿಂದ ಅವರಲ್ಲಿ ಶುದ್ಧ ಭಾಷೆ, ನಡವಳಿಕೆ ಮೂಡಿಬರಲಿದೆ. ಅಲ್ಲದೆ, ಶೈಕ್ಷಣಿಕವಾಗಿ ಮಕ್ಕಳ ಪರಿಣಾಮಕಾರಿ ಕಲಿಕೆಗೂ ರಂಗಭೂಮಿ ಸಹಕಾರಿ ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಂಚಲನ ಮೈಸೂರು ಅಧ್ಯಕ್ಷ ದೀಪಕ್ ಮೈಸೂರು, 72 ದಿನಗಳ ಶಿಬಿರದಲ್ಲಿ ಪಾಲ್ಗೊಂಡಿದ್ದ 24 ಯುವಜನರು ತಾವು ಶಿಬಿರದಲ್ಲಿ ಕಲಿತ ಕಲೆಯನ್ನು ನಾಟಕ ಪ್ರದರ್ಶನ ಮೂಲಕ ಅನಾವರಣಗೊಳಿಸಲಿದ್ದಾರೆ ಎಂದು ತಿಳಿಸಿದರು. ಬಳಿಕ ಶಿಬಿರಾರ್ಥಿಗಳಿಂದ 'ಚಿತ್ರತುರಗ ನ್ಯಾಯ ಅರ್ಥಾತ್ ಕೀರ್ತಿಯ ಅವಾಂತರ' ನಾಟಕ ಪ್ರದರ್ಶನ (ಟಿಕೆಟ್ ದರ 100 ರೂ.) ನಡೆಯಿತು. ರಂಗ ನಿರ್ದೇಶಕ ದಿಗ್ವಿಜಯ ಹೆಗ್ಗೋಡು ಮತ್ತಿತರರು ಹಾಜರಿದ್ದರು.

ಬೆಂಗಳೂರು ಜೈಲಿನಲ್ಲಿ ನಟ ದರ್ಶನ್‌ಗೆ ಐಷಾರಾಮಿ ಸೌಕರ್ಯ ಭಾರಿ ವಿವಾದ ಹಿನ್ನೆಲೆ

ಮೈಸೂರು ಜೈಲ್ ಮೇಲೆ ಪೊಲೀಸರ ದಿಢೀರ್ ದಾಳಿ



ಡಿಸಿಪಿಗಳಾದ ಎಂ. ಮುತ್ತುರಾಜ್, ಎಸ್. ಜಾಹ್ನವಿ ನೇತೃತ್ವದಲ್ಲಿ ಮಂಗಳವಾರ ಬೆಳಗ್ಗೆ ನಗರ ಪೊಲೀಸ್ ತಂಡ ಮೈಸೂರು ಜೈಲ್ ಮೇಲೆ ದಾಳಿ ನಡೆಸಿತು.

ಮೈಸೂರು, ಆ. 27(ಆರ್‌ಕೆ)– ಕೊಲೆ ಆರೋಪದಡಿ ನ್ಯಾಯಾಂಗ ಬಂಧನದಲ್ಲಿರುವ ನಟ ದರ್ಶನ್ ಹಾಗೂ ಸಹಚರರಿಗೆ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿ ಐಷಾರಾಮಿ ಸೌಲಭ್ಯದ ಫೋಟೋ ವೈರಲ್ ಆದ ಹಿನ್ನೆಲೆಯಲ್ಲಿ ಎಚ್ಚೆತ್ತ ಮೈಸೂರು ಪೊಲೀಸರು ಇಂದು ಬೆಳಗ್ಗೆ ಇಲ್ಲಿನ ಕೇಂದ್ರ ಕಾರಾಗೃಹಕ್ಕೆ ದಿಢೀರ್ ದಾಳಿ ಮಾಡಿ ಶೋಧ ನಡೆಸಿದರು.

ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ನಿರ್ದೇಶನದಂತೆ ಡಿಸಿಪಿಗಳಾದ ಎಂ. ಮುತ್ತುರಾಜು, ಎಸ್.ಜಾಹ್ನವಿ ನೇತೃತ್ವದಲ್ಲಿ ಎಸಿಪಿಗಳಾದ ಸಿ.ಪಿ. ಅಶ್ವಥನಾರಾಯಣ, ಎಸ್.ಜಿ. ಗಜೇಂದ್ರಪ್ರಸಾದ್, ರಮೇಶ್‌ಕುಮಾರ್, ಇನ್ಸ್‌ಪೆಕ್ಟರ್‌ಗಳಾದ ನಾಗೇಶ, ಲಕ್ಷ್ಮೀಕಾಂತ ತಳವಾರ್, ದಿವಾಕರ, ಮಹದೇವಸ್ವಾಮಿ, ಪ್ರಸಾದ್ ಸೇರಿದಂತೆ 138 ಪೊಲೀಸರು ಬೆಳಗ್ಗೆ 6ರಿಂದ 8 ಗಂಟೆವರೆಗೆ ಜೈಲಿನಲ್ಲಿ ಶೋಧ ಕಾರ್ಯಾಚರಣೆ ನಡೆಸಿದರು. ಎಲ್ಲಾ ಬಂಧಿಖಾನೆ, ಅಡುಗೆ ಮನೆ, ಜೈಲು ಆವರಣ, ಕಾಂಪೌಂಡ್ ಹೊರಗೆ ಶೋಧಿಸಿದರೂ, ಆಯುಧಗಳಾಗಲೀ, ಮಾದಕ ವಸ್ತುಗಳಾಗಲೀ ಸಿಗದೇ ಪೊಲೀಸರು ಬರಿಗೈಲಿ ಹಿಂದಿರುಗಿದರು. ಶ್ವಾನದಳ, ವಿಧ್ವಂಸಕ ಕೃತ್ಯದ ಪತ್ತೆ ದಳ, ಕಮಾಂಡೋ ಪಡೆಯ ಪೊಲೀಸರೂ ಶೋಧ ಕಾರ್ಯದಲ್ಲಿ ಪಾಲ್ಗೊಂಡಿದ್ದರು.

ಎರಡು ಗಂಟೆ ಶೋಧ; ಯಾವುದೇ ಅಕ್ರಮದ ಸುಳಿವಿಲ್ಲ

ದಾಳಿ ಕುರಿತು 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯಿಸಿದ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಲ್ಲಿ ನಟ ದರ್ಶನ್ ಮತ್ತು ಸಹಚರರು ಐಷಾರಾಮಿ ಸೌಕರ್ಯ ಹೊಂದಿರುವ ಫೋಟೋಗಳು ವೈರಲ್ ಆದ ಕಾರಣ ಮುಂಜಾಗ್ರತೆಗಾಗಿ ಮೈಸೂರು ಜೈಲಿನ ಪರಿಸ್ಥಿತಿ ಸುಧಾರಿಸಲು ದಾಳಿ ನಡೆಸಿ, ಪರಿಶೀಲಿಸಲಾಯಿತು. ಆದರೆ ಅಲ್ಲಿ ಯಾವುದೇ ವಸ್ತುಗಳೂ ಸಿಗಲಿಲ್ಲ. ಆದರೆ ಎಚ್ಚರಿಕೆ ಸಂದೇಶ ನೀಡಲಾಗಿದೆ ಎಂದರು.

ಈ ಹಿಂದೆ ಫೆಬ್ರವರಿ 6ರಂದು ಜೈಲಿನ ಮೇಲೆ ದಾಳಿ ನಡೆಸಿದಾಗ ಸಿಮ್ ಕಾರ್ಡ್‌ಗಳು, 2 ಚಾಕು, ಮೊಬೈಲ್ ಫೋನ್ ಚಾರ್ಜರ್‌ಗಳು ಸೆಲ್‌ನಲ್ಲಿ ಪತ್ತೆಯಾಗಿದ್ದನ್ನು ಇಲ್ಲಿ ಸ್ಮರಿಸಬಹುದು.

ಆರ್‌ಬಿಐ ನಿವೃತ್ತ ಎಂಡಿ ಮನೆಯಲ್ಲಿ ಕಳವು

ಬಾಗಿಲು ಮುರಿದು 50 ಲಕ್ಷ ಮೌಲ್ಯದ 800 ಗ್ರಾಂ ಚಿನ್ನಾಭರಣ ಲೂಟಿ

ಮೈಸೂರು, ಆ. 27(ಆರ್‌ಕೆ)– ಆರ್‌ಬಿಐ ನಿವೃತ್ತ ವ್ಯವಸ್ಥಾಪಕ ನಿರ್ದೇಶಕರ ಮನೆ ಬಾಗಿಲು ಮುರಿದು 50 ಲಕ್ಷ ರೂ. ಮೌಲ್ಯದ 800 ಗ್ರಾಂ ಚಿನ್ನಾಭರಣ ಕಳವು ಮಾಡಿರುವ ಘಟನೆ ಮೈಸೂರಿನ ವಿಜಯನಗರ 4ನೇ ಹಂತದಲ್ಲಿ ಸಂಭವಿಸಿದೆ. ಬೆಂಗಳೂರು ನಿವಾಸಿಯಾಗಿದ್ದು ಆರ್‌ಬಿಐನಲ್ಲಿ ಎಂಡಿಯಾಗಿ ನಿವೃತ್ತರಾಗಿರುವ ರವಿಕುಮಾರ್ ಮೈಸೂರಿನ ವಿಜಯನಗರ 4ನೇ ಹಂತದಲ್ಲಿ ಮನೆ ನಿರ್ಮಿಸಿ, ಕಳೆದ ಎರಡು ವರ್ಷಗಳಿಂದ ನೆಲೆಸಿದ್ದಾರೆ. ಮುಂದಿನ ತಿಂಗಳು ಕಿರಿಯ ಪುತ್ರಿ ಮದುವೆ ನಿಗದಿಯಾಗಿರುವುದರಿಂದ ಸಂಬಂಧಿಕರಿಗೆ ಆಹ್ವಾನ ಪತ್ರ ತಲುಪಿಸಲೆಂದು ಪುತ್ರಿ, ಪತ್ನಿಯೊಂದಿಗೆ ಆಗಸ್ಟ್ 24ರಂದು ಬೆಂಗಳೂರಿಗೆ ತೆರಳಿದ್ದರು.

ನಿನ್ನೆ (ಆ. 26) ಸಂಜೆ ಸುಮಾರು 7.30 ಗಂಟೆಗೆ ಹಿಂದಿರುಗಿದಾಗ ಮನೆ ಮುಂದಿನ ಸಿಸಿ ಕ್ಯಾಮರಾಗಳನ್ನು ಒಡೆದು ಹಾಕಲಾಗಿತ್ತಲ್ಲದೇ, ಹಿಂದಿನ ಬಾಗಿಲ ಬೀಗ ಮುರಿದಿರುವುದು ಕಂಡುಬಂದಿತು. ಗಾಬರಿಗೊಂಡು, ರವಿಕುಮಾರ್ ಹಾಗೂ ಪತ್ನಿ ಒಳಗೆ ಹೋಗಿ ನೋಡಿದಾಗ ಮನೆಯನ್ನೆಲ್ಲಾ ಶೋಧಿಸಿ ಅಲ್ಮೇರಾವನ್ನು ಪಕ್ಕದಲ್ಲೇ ಇಟ್ಟಿದ್ದ ಕೀಯಿಂದ ತೆಗೆದು ಅದರಲ್ಲಿದ್ದ 800 ಗ್ರಾಂ ಚಿನ್ನದ ಆಭರಣಗಳು ಹಾಗೂ 25,000 ರೂ. ನಗದನ್ನು ಕಳವು ಮಾಡಿರುವುದು ಕಂಡುಬಂದಿತು.

ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ವಿಜಯನಗರ ಠಾಣೆ ಇನ್ಸ್‌ಪೆಕ್ಟರ್ ಸುರೇಶ್‌ಕುಮಾರ್ ಹಾಗೂ ಸಿಬ್ಬಂದಿ, ಮಹಜರು ಮಾಡಿದಾಗ ಮೂವರು ಆಸಾಮಿಗಳು ಆಗಸ್ಟ್ 25ರಂದು ರಾತ್ರಿ ಸುಮಾರು 7.05 ಗಂಟೆ ವೇಳೆಗೆ ಬಂದು ಮೊದಲು ಮನೆ ಮುಂದಿನ ಸಿಸಿ ಕ್ಯಾಮರಾಗಳನ್ನು ಕಿತ್ತು ಬಿಸಾಡಿ, ನಂತರ ಹಿಂದಿನ ಕ್ಯಾಮರಾಗಳನ್ನೂ ಒಡೆದು ಹಾಕಿದ ಬಳಿಕ ಬಾಗಿಲು ಮುರಿದು ಮನೆಗೆ ನುಗ್ಗಿ ಶೋಧ ನಡೆಸಿ, ನಗದು ಹಾಗೂ ಚಿನ್ನಾಭರಣ ದೋಚಿ ಪರಾರಿಯಾಗಿರುವುದು ಸಿಸಿ ಕ್ಯಾಮರಾ ಫುಟೇಜ್‌ಗಳಿಂದ ತಿಳಿದುಬಂದಿದೆ. ಡಿಸಿಪಿ ಎಸ್.ಜಾಹ್ನವಿ, ವಿಜಯನಗರ ಉಪವಿಭಾಗದ ಎಸಿಪಿ ಎಸ್.ಜಿ. ಗಜೇಂದ್ರ ಪ್ರಸಾದ್ ಸಹ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿಗಳ ಪತ್ತೆಗಾಗಿ ಶೋಧ ನಡೆಸುತ್ತಿದ್ದಾರೆ.

ಶ್ರೀಕೃಷ್ಣಧಾಮದಲ್ಲಿ ಶ್ರೀಕೃಷ್ಣ ಲೀಲೋತ್ಸವ, ವಿಟ್ಲ ಪಿಂಡಿ ಉತ್ಸವ

ಕೃಷ್ಣನ ಉತ್ಸವ ಮೂರ್ತಿ ಭವ್ಯ ಮೆರವಣಿಗೆ; ಕೃಷ್ಣನ ಬಾಲಲೀಲೆ ಅನಾವರಣ



ಮೈಸೂರಿನ ಸರಸ್ವತಿಪುರಂನಲ್ಲಿ ಮಂಗಳವಾರ ವಿಜೃಂಭಣೆಯಿಂದ ನಡೆದ ಶ್ರೀಕೃಷ್ಣನ ರಥೋತ್ಸವದಲ್ಲಿ ವಿಟ್ಲ ಪಿಂಡಿ ಉತ್ಸವ (ಮೊಸರು ತುಂಬಿದ ಮಡಿಕೆ ಹೊಡೆಯುವುದು) ನಡೆಯಿತು.

ಮೈಸೂರು,ಆ.27(ಪಿಎಂ)– ಸರಸ್ವತಿಪುರಂನಲ್ಲಿರುವ ಶ್ರೀಕೃಷ್ಣಧಾಮದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಮಂಗಳವಾರ ಶ್ರೀಕೃಷ್ಣ ಲೀಲೋತ್ಸವ, ಶ್ರೀಕೃಷ್ಣನ ಉತ್ಸವ ಮೂರ್ತಿಯ ಭವ್ಯ ಮೆರವಣಿಗೆ ಮತ್ತು ವಿಟ್ಲ ಪಿಂಡಿ ಉತ್ಸವ ವಿಜೃಂಭಣೆಯಿಂದ ಜರುಗಿತು.

ಶ್ರೀ ಕೃಷ್ಣ ಟ್ರಸ್ಟ್ ವತಿಯಿಂದ ಪ್ರತಿವರ್ಷದಂತೆ ಆಯೋಜಿಸಿದ್ದ ಈ ಉತ್ಸವದಲ್ಲಿ ನೂರಾರು ಭಕ್ತರು ಪಾಲ್ಗೊಂಡು ಶ್ರೀಕೃಷ್ಣ ಪರಮಾತ್ಮನ ಕೃಪೆಗೆ ಪಾತ್ರರಾದರು. ಶ್ರದ್ಧಾಭಕ್ತಿಯಿಂದ ಉತ್ಸವ ಮೂರ್ತಿ ಹೊತ್ತು ಸಾಗಿದ ರಥೋತ್ಸವದಲ್ಲಿ ಭಾಗವಹಿಸಿ ಭಕ್ತಿಯ ಪರಾಕಾಷ್ಠೆ ಮೆರೆದರು.

ಶ್ರೀಕೃಷ್ಣಧಾಮದ ದೇವಾಲಯದಿಂದ ಉತ್ಸವ ಮೂರ್ತಿಯನ್ನು ಹೊತ್ತು ತಂದು ರಥದಲ್ಲಿ ಪ್ರತಿಷ್ಠಾಪಿಸಿ ರಥೋತ್ಸವಕ್ಕೆ ಸಜ್ಜುಗೊಳಿಸುವ ಲೀಲೋತ್ಸವ ಭಕ್ತರಲ್ಲಿ ಸಡಗರ ಸಂಭ್ರಮ ಉಂಟು ಮಾಡಿತು. ಬಳಿಕ ಸಾಹುಕಾರ್ ಚೆನ್ನಯ್ಯ ರಸ್ತೆ, ವಿಶ್ವಮಾನವ ಜೋಡಿ ರಸ್ತೆ ಹಾಗೂ ಕಾಮಾಕ್ಷಿ ಆಸ್ಪತ್ರೆ ರಸ್ತೆಯಲ್ಲಿ ನೂರಾರು ಭಕ್ತರೊಂದಿಗೆ ರಥೋತ್ಸವ ಸಾಗಿತು. ಈ ವೇಳೆ ಮಂಗಳವಾದ್ಯ ಮತ್ತಷ್ಟು ಮೆರಗು ನೀಡಿತು.

ಬಳಿಕ ಶ್ರೀಕೃಷ್ಣಧಾಮದ ಮುಖ್ಯ ದ್ವಾರಕ್ಕೆ ರಥೋತ್ಸವ ಹಿಂತಿರುಗುತ್ತಿದ್ದಂತೆ ವಿಟ್ಲ ಪಿಂಡಿ (ಮೊಸರು ಕುಡಿಕೆ ಹೊಡೆಯುವುದು) ಉತ್ಸವ ಭಕ್ತರಲ್ಲಿ ಉತ್ಸವ ತಂದಿತು. ಆ ಮೂಲಕ ಶ್ರೀಕೃಷ್ಣ ಬಾಲಲೀಲೆಯನ್ನು ಅನಾವರಣಗೊಳಿಸಿ, ಮತ್ತೆ ಲೀಲೋತ್ಸವ ಮೂಲಕ ರಥದಿಂದ ದೇವಾಲಯಕ್ಕೆ ಉತ್ಸವ ಮೂರ್ತಿ ಕೊಂಡೊಯ್ಯಲಾಯಿತು. ನಂತರ ಮಹಾ ಮಂಗಳಾರತಿ ನೆರವೇರಿಸಿ ದೇವರ ಕೃಪೆಗೆ ಭಕ್ತರು ಪಾತ್ರರಾದರು.

ನಂತರ ಶ್ರೀಕೃಷ್ಣಧಾಮದ ಸಭಾಭವನದಲ್ಲಿ ಕರ್ನಾಟಕ ಮಹಿಳಾ ಯಕ್ಷಗಾನ ಬೆಂಗಳೂರು ಕಲಾವಿದರಿಂದ ಶ್ರೀಕೃಷ್ಣ ಲೀಲೆ–ಕಂಸವಧೆ ಎಂಬ ಯಕ್ಷಗಾನ ಪ್ರದರ್ಶನ ನಡೆಯಿತು. ಶ್ರೀಕೃಷ್ಣ ಟ್ರಸ್ಟ್‌ನ ಉಪಾಧ್ಯಕ್ಷರಾದ ರವಿಶಾಸ್ತ್ರಿ, ಪಿ.ಎಸ್.ಚಂದ್ರಶೇಖರ್, ಗೌರವ ಕಾರ್ಯದರ್ಶಿ ಕೆ.ವಿ.ಶ್ರೀಧರ, ಮಿತ್ರಮಂಡಳಿ ಅಧ್ಯಕ್ಷ ಪ್ರವೀಣ್, ಕಾರ್ಯದರ್ಶಿ ರಾಘವೇಂದ್ರ ಸೇರಿದಂತೆ ಭಕ್ತರು ಉತ್ಸವದಲ್ಲಿ ಪಾಲ್ಗೊಂಡಿದ್ದರು.

ನಕ್ಕರೆ ಅದೇ ಸ್ವರ್ಗ

ಮಗಳು : ಅಮ್ಮಾ ನನಗೆ ಅರ್ಜೆಂಟ್ ತಮ್ಮ ಬೇಕು.
ಅಮ್ಮ : ಆಗಲ್ಲ ಮಗಳೇ, ನಿಮ್ಮಪ್ಪ ದುಬೈನಲ್ಲಿದ್ದಾರೆ.
ಮಗಳು : ಅಪ್ಪನಿಗೆ ಸರ್‌ಪ್ರೈಜ್ ಕೊಡೋಣ ಅಮ್ಮ!

ಮೈಸೂರು ಮಿತ್ರ

ಬುಧವಾರ, 28 ಆಗಸ್ಟ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ನಿಮ್ಮ ವಿಚಾರಗಳನ್ನು ಎತ್ತರಿಸಬೇಕೇ ಹೊರತು, ದನಿಯನ್ನಲ್ಲ. ಮಳೆ ನೀರಿನಿಂದ ಮರಗಳು ಬೆಳೆಯುತ್ತವೆಯೇ ಹೊರತು ಗುಡುಗು, ಸಿಡಿಲಿನಿಂದಲ್ಲ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹಲ್ಲಿರುವ ತನಕ ಊಟ
ಕಣ್ಣಿರುವ ತನಕ ನೋಟ.

ನಿಮ್ಮ ಪತ್ರಗಳು

■ ಪತ್ರಿಕೆಯಲ್ಲಿನ ಮನವಿಗೂ ಸ್ಪಂದಿಸದ ಪಾಲಿಕೆ

ಮಾನ್ಯರೆ,

ಮೈಸೂರಿನ ವಿಜಯನಗರ ಒಂದನೇ ಹಂತ, 2ನೇ ಮುಖ್ಯ ರಸ್ತೆ, 2ನೇ ತಿರುವು (ಆಧಾರ್ ಸೆಂಟರ್ ರಸ್ತೆ) ಇಲ್ಲಿ ನಗರಪಾಲಿಕೆ ಬೋರ್‌ವೆಲ್ ಬಳಿ ಒಳಚರಂಡಿಯ ತೆರೆದ ಬಾಯಿಗೆ ಮುಚ್ಚಳಕ್ಕೆ ಬದಲಾಗಿ ಹಾಕಿರುವ ತಾತ್ಕಾಲಿಕ ಕಲ್ಲಿನ ಚಪ್ಪಡಿ ಕಿರಿದಾಗಿದ್ದು, ತಿಳಿಯದೆ ಯಾರಾದರೂ ಕಾಲಿಟ್ಟರೆ ಕಲ್ಲಿನೊಂದಿಗೆ ಅವರು ಕೂಡಾ ಕುಸಿಯುವ ಸಂಭವವಿರುವುದರಿಂದ ಕಾಳಿದಾಸ ರಸ್ತೆಯ ಕೊನೆಯಲ್ಲಿ ಇತ್ತೀಚೆಗೆ ಮೋರಿ ನಿರ್ಮಿಸುವ ಸಂದರ್ಭದಲ್ಲಿ ಚಪ್ಪಡಿಗಳನ್ನು ತೆರವುಗೊಳಿಸಿದ್ದು, ಅವುಗಳಲ್ಲಿ ಅನುಪಯುಕ್ತವಾಗಿ ಬಿದ್ದಿರುವ ಎರಡು ಚಪ್ಪಡಿಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತಂದು ಹಾಕುವ ಮೂಲಕ ಕ್ರಮ ಕೈಗೊಳ್ಳುವಂತೆ 'ಮೈಸೂರು ಮಿತ್ರ' ದಲ್ಲಿ ಆ. 11 ರಂದು 'ನಿಮ್ಮ ಪತ್ರಗಳು' ವಿಭಾಗದಲ್ಲಿ ಕೋರಲಾಗಿತ್ತು. ಆದರೆ ನಗರಪಾಲಿಕೆಯವರು ಇದುವರೆವಿಗೂ ಈ ಬಗ್ಗೆ ಕ್ರಮ ಕೈಗೊಂಡಿಲ್ಲ. ಪತ್ರಿಕೆಯಲ್ಲಿ ವಿಷಯ ಪ್ರಕಟಗೊಂಡಿದ್ದರೂ ತಲೆ ಕೆಡಿಸಿಕೊಳ್ಳದೆ ದಿವ್ಯ ನಿರ್ಲಕ್ಷ್ಯದಿಂದ ನಿರ್ಲಿಪ್ತವಾಗಿರುವ ದಪ್ಪ ಚರ್ಮದ ಪಾಲಿಕೆ ಅಧಿಕಾರಿಗಳು ಇನ್ನು ಸಾಮಾನ್ಯ ನಾಗರಿಕನ ಪತ್ರಕ್ಕೆ ಹೇಗೆ ಸ್ಪಂದಿಸಬಹುದು ಎಂಬುದನ್ನು ಊಹಿಸಿಕೊಳ್ಳಬಹುದು. ಈಗಲಾದರೂ ಈ ಬಗ್ಗೆ ಕ್ರಮ ಕೈಗೊಂಡು ಸಂಭವನೀಯ ಅಪಾಯವನ್ನು ತಡಗಟ್ಟುವುದು ಅವಶ್ಯ.

–ಕೆ.ಎಂ. ನಾಗರಾಜು, ವಿಜಯನಗರ 1ನೇ ಹಂತ, ಮೈಸೂರು

■ ರಾಜ್ಯಪಾಲರು ನ್ಯಾಯಾಧೀಶರ ಹಾಗೆ ಕರ್ತವ್ಯ ನಿರ್ವಹಿಸಬೇಕಾಗಿದೆ

ಮಾನ್ಯರೆ,

ರಾಜ್ಯದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ನಂತರ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳು ಸಾಕಷ್ಟು ಸದ್ದು ಮಾಡುತ್ತಿವೆ. ರಾಜ್ಯಪಾಲರ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರು ರಾಜ್ಯಾದ್ಯಂತ ಪ್ರತಿಭಟನೆಗಳನ್ನು ನಡೆಸಿದ್ದಾರೆ. ರಾಜ್ಯಪಾಲರ ವಿರುದ್ಧ ಕೀಳು ಅಭಿರುಚಿಯ ಭಾಷಾ ಪ್ರಯೋಗ ಕೂಡ ನಡೆಯುತ್ತಿದೆ. ಇದು ಸರಿಯಲ್ಲ.

ಕೆಲವು ಬಿಜೆಪಿ ಹಾಗೂ ಜೆಡಿಎಸ್ ನಾಯಕರ ವಿರುದ್ಧ ಲೋಕಾಯುಕ್ತ ಪೊಲೀಸರು ಹೂಡಿರುವ ಪ್ರಕರಣಗಳಿಗೆ ಸಂಬಂಧಿಸಿದ ಹಾಗೆ ಅಂತಹವರ ವಿರುದ್ಧ ಅಭಿಯೋಜನೆಗೆ ಕೋರಿ ಲೋಕಾಯುಕ್ತ ಪೊಲೀಸರು ಸಲ್ಲಿಸಿರುವ ಮನವಿಯನ್ನು ರಾಜ್ಯಪಾಲರು ಪುರಸ್ಕರಿಸದೇ ಇರುವುದು ರಾಜ್ಯಪಾಲರು ಪಕ್ಷಪಾತ ಧೋರಣೆ (partisan attitude) ಅನುಸರಿಸುತ್ತಿದ್ದಾರೇನೋ ಎಂಬ ಸಂದೇಹ ಉಂಟು ಮಾಡುತ್ತದೆ.

ಮುಖ್ಯವಾಗಿ ರಾಜ್ಯಪಾಲರು, ಪಕ್ಷಾತೀತರಾಗಿರಬೇಕಾಗಿದ್ದು ಹಾಗೂ ಸಂವಿಧಾನದ ಆಶಯಗಳಿಗೆ ಪೂರಕವಾಗಿ ನಡೆದುಕೊಳ್ಳಬೇಕಾಗುತ್ತದೆ. ಹಾಗೆ ಮಾಡದಿದ್ದರೆ, ಅದು ಅವರ ಹುದ್ದೆಗೆ ಬಗೆದ ದ್ರೋಹವಾಗುತ್ತದೆ. ಇಲ್ಲಿ ವ್ಯಕ್ತಿ ಮುಖ್ಯವಲ್ಲ. ವ್ಯಕ್ತಿ ಅಲಂಕರಿಸಿರುವ ಹುದ್ದೆ ಮುಖ್ಯವಾಗುತ್ತದೆ. ರಾಜ್ಯಪಾಲರು, ರಾಷ್ಟ್ರಪತಿಗಳ ಪ್ರತಿನಿಧಿಯಾಗಿ, ಯಾವುದೇ ರಾಗ ದ್ವೇಷಗಳಿಗೆ ಅವಕಾಶ ಕೊಡದೇ, ಪಕ್ಷಾತೀತರಾಗಿ, ಓರ್ವ ನ್ಯಾಯಾಧೀಶರ ಹಾಗೇ ಕರ್ತವ್ಯ ನಿರ್ವಹಿಸಬೇಕು. ಇದೇ ಸಂವಿಧಾನದ ಆಶಯ ಕೂಡ ಹೌದು.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

■ ಕುವೆಂಪುನಗರದ ಕೆಹೆಚ್‌ಬಿ ಬಡಾವಣೆಯಲ್ಲಿ ಅವ್ಯವಸ್ಥೆ

ಮಾನ್ಯರೆ,

ಮೈಸೂರಿನ ಕುವೆಂಪುನಗರ ಕೆಹೆಚ್‌ಬಿ ಕಾಲೋನಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿದೆ. ಈ ಬಡಾವಣೆಯಲ್ಲಿ ಕುಡಿಯುವ ನೀರನ್ನು ತಮಗೆ ಇಷ್ಟ ಬಂದ ಸಮಯದಲ್ಲಿ ಬಿಡುತ್ತಾರೆ. ಇದರಿಂದ ತುಂಬಾ ತೊಂದರೆಯಾಗುತ್ತಿದೆ. ಇಲ್ಲಿ ಇದೇ ಸಮಸ್ಯೆ ಪದೇ ಪದೆ ಮರುಕಳಿಸುತ್ತಲೇ ಇರುತ್ತದೆ. ಪತ್ರಿಕೆಗಳಲ್ಲಿ ವರದಿ ಬಂದಾಗ ಮಾತ್ರ ಸ್ವಲ್ಪ ದಿನ ಸರಿಯಾಗಿ ನೀರು ಬಿಡುತ್ತಾರೆ. ನಂತರ ಅದೇ ಸಮಸ್ಯೆ ಮುಂದುವರೆಯುತ್ತದೆ. ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸಿದರೆ ಪ್ರಯೋಜನವೇ ಇಲ್ಲದಂತಾಗಿದೆ. ನಂತರ ಇದೇ ಸ್ಥಳದಲ್ಲಿ ಹೊಂಗೇವನ ಎಂಬ ಉದ್ಯಾನವನ ಇದೆ. ಅನೇಕ ನಾಗರಿಕರು ಇಲ್ಲಿ ವಾಯುವಿಹಾರ ಮಾಡುತ್ತಾರೆ. ಆದರೆ ಇಲ್ಲಿ ಅವ್ಯವಸ್ಥೆ ತಾಂಡವವಾಡುತ್ತಿದ್ದು ಯಾವುದೇ ಅಭಿವೃದ್ಧಿ ಆಗಿಲ್ಲ. ಒಳಭಾಗ ಮತ್ತು ಹೊರಭಾಗದಲ್ಲಿ ಸರಿಯಾದ ನಿರ್ವಹಣೆ ಇಲ್ಲದೆ ಇಲಿ ಹೆಗ್ಗಣಗಳ ವಾಸಸ್ಥಾನವಾಗಿದೆ. ಟೈಲ್ಸ್‌ಗಳನ್ನು ಅಳವಡಿಸಿದರೆ ಇದಕ್ಕೆ ಮುಕ್ತಿ ಸಿಗಬಹುದೇನೋ, ರಾತ್ರಿ ಮತ್ತು ಮುಂಜಾನೆ ಆದರೆ ಸಾಕು ಕೆಲವು ವಿದ್ಯಾವಂತರೇ ತಮ್ಮ ಸಾಕುನಾಯಿಗಳನ್ನು ಪಾರ್ಕ್ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮಲ ಮೂತ್ರಗಳನ್ನು ಮಾಡಿಸಿ ಗಬ್ಬೆದ್ದು ನಾರುವಂತೆ ಮಾಡುತ್ತಿದ್ದಾರೆ. ಪ್ರಶ್ನಿಸಿದವರನ್ನು ಜೋರು ಮಾಡಿ ತಮ್ಮ ಕೆಲಸ ಕಾರ್ಯಗಳನ್ನು ಮುಗಿಸಿ ಕೊಳ್ಳುತ್ತಿದ್ದಾರೆ. ಈ ಎಲ್ಲಾ ಸಮಸ್ಯೆಗಳಿಂದ ಮುಕ್ತಿ ನೀಡುವ ಸಲುವಾಗಿ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸ್ಥಳೀಯ ಶಾಸಕರು ಗಮನ ಹರಿಸಬೇಕಾಗಿ ಮನವಿ.

–ಶಶಿಕುಮಾರ್, ನಾಗರಿಕರು, ಮೈಸೂರು.

■ ಪರ್ಯಾಯ ನಾಯಕ ದಲಿತನಾಗಿರಲಿ

ಮಾನ್ಯರೆ,

ಮುಡಾ ಮುಳ್ಳಿಗೆ ಸಿಲುಕಿರುವ ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆ. ಹಾಗೊಂದು ವೇಳೆ ಸಿದ್ದರಾಮಯ್ಯರಿಗೆ ಕೋರ್ಟ್ ತೀರ್ಪು ವ್ಯತಿರಿಕ್ತವಾಗಿ ಪರಿಣಮಿಸಿದರೆ ಪರ್ಯಾಯ ನಾಯಕನ ಆಯ್ಕೆ ಪ್ರಕ್ರಿಯೆ ಸಹಜವಾಗಿ ಬರುತ್ತದೆ. ಒಂದು ವೇಳೆ ಇಂತಹ ಸನ್ನಿವೇಶ ಸೃಷ್ಟಿಯಾದರೆ ಪರ್ಯಾಯ ನಾಯಕ ದಲಿತರಾಗಿರಲಿ. ಇದು ದಲಿತ ಸಮುದಾಯದ ಬಹುದಿನಗಳ ಕೂಗು ಮತ್ತು ಒತ್ತಾಯವು ಹೌದು.

ದಲಿತ ಮುಖ್ಯಮಂತ್ರಿ ಕೂಗಿಗೆ ಕಾಂಗ್ರೆಸ್ ಈಗಲಾದರೂ ಸಿದ್ದರಾಮಯ್ಯ ಕೆಳಗಿಳಿದರೆ ದಲಿತರಿಗೆ ಅವಕಾಶ ನೀಡುವುದೇ ಎಂಬುದನ್ನು ಸಮುದಾಯದ ಜನ ಎದುರು ನೋಡುತ್ತಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಅಥವಾ ಡಾ.ಜಿ. ಪರಮೇಶ್ವರ್, ಪ್ರಿಯಾಂಕ್ ಖರ್ಗೆ ಅವರನ್ನು ಸಿಎಂ ಗಾದಿಗೆ ಕಾಂಗ್ರೆಸ್ ಪರಿಗಣಿಸಲಿ. ಅ ಮೂಲಕ ಸಾಮಾಜಿಕ ನ್ಯಾಯ ಎತ್ತಿಹಿಡಿಯಲಿ. ಮುಡಾ ಪ್ರಕರಣದಲ್ಲಿ ಸಿದ್ದು ನಿರಪರಾಧಿಯಾದರೆ ಅವರೇ ಮುಂದುವರಿಯಲಿ.

–ದಡದಹಳ್ಳಿ ರಮೇಶ್, ಚಂದಕವಾಡಿ ಹೋಬಳಿ, ಚಾಮರಾಜನಗರ ಜಿಲ್ಲೆ.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಭಗವದ್ಗೀತೆಯ ಪ್ರಸ್ತುತತೆ ಅಂದು, ಇಂದು, ಮುಂದೆ–3

ಭಗವದ್ಗೀತೆಯು ರಚನೆಯಾದ ಅಂದು ಅದು ಪ್ರಸ್ತುತವಾಗಿತ್ತೆಂಬುದನ್ನೂ, ಇಂದೂ ಅದು ಪ್ರಸ್ತುತವೇ ಆಗಿದೆ ಎಂಬುದನ್ನು ಹಿಂದಿನ ಎರಡು ಲೇಖನಗಳಲ್ಲಿ ನೋಡಿದೆವು. ಮುಂದೆ, ಎಂದರೆ ಭವಿಷ್ಯತ್ಕಾಲದಲ್ಲಿ ಅದು ಪ್ರಸ್ತುತವಾಗಿರುವುದೇ ಎಂದು ವಿಚಾರ ಮಾಡೋಣ.


ಮುಂದೆ ಪ್ರಪಂಚ ಹೇಗಿರುವುದು, ಜನರು ನೂರು ವರ್ಷಗಳಾದ ಮೇಲೆ ಯಾವ ರೀತಿಯ ಜೀವನವನ್ನು ಮಾಡುವರು, ವಿಜ್ಞಾನದ ಹೊಸ ಆವಿಷ್ಕಾರಗಳ ಪರಿಣಾಮ ಜನರ ಮೇಲೆ ಏನಾಗುವುದು ಎಂದು ಈಗ ಹೇಳುವುದು ಅಸಾಧ್ಯವೇ. ಈ ರೀತಿಯ ಯೋಚನೆಗಳನ್ನು ನಮ್ಮ ಹಿಂದಿನವರೂ ಮಾಡಿದ್ದರು. ಅಷ್ಟಾದಶ ಮಹಾ ಪುರಾಣಗಳಲ್ಲಿ ಭವಿಷ್ಯ ಪುರಾಣ, ಭವಿಷ್ಯೋತ್ತರ ಪುರಾಣ ಎಂಬವೂ ಇವೆ. ಕಾಲಜ್ಞಾನ ಎಂಬ ಪುಸ್ತಕಗಳಲ್ಲಿ ಮುಂದೆ ಜರುಗುವ ಮುಖ್ಯ ಘಟನೆಗಳನ್ನೆಲ್ಲ ಹೇಳಿದ್ದಾರೆಂದು ನಂಬುವ ಜನರೂ ನಮ್ಮ ಮಧ್ಯೆ ಇದ್ದಾರೆ. ಆದರೆ ಅವುಗಳಲ್ಲೆಲ್ಲ ಹೇಳಿದ ವಿಷಯಗಳು ಸಾಮಾನ್ಯ ರೂಪದಲ್ಲಿರುತ್ತವೆ. ದೇಶಕ್ಕೆ ದೊಡ್ಡ ವಿಪತ್ತು ಬರುತ್ತದೆ ಎಂದು ಕಾಲಜ್ಞಾನದಲ್ಲಿ ಹೇಳಿದೆ ಎಂದಿಟ್ಟು ಕೊಳ್ಳೋಣ. ಅದನ್ನು ನಂಬುವವರು ಹೆಚ್ಚು ಮಳೆ ಬಂದು ಹುಚ್ಚು ಹೊಳೆ ಬಂದರೂ ಅದನ್ನೇ ಆ ಮಹಾವಿಪತ್ತು ಎಂದು ವ್ಯಾಖ್ಯಾನಿಸುತ್ತಾರೆ. ಜಗತ್ತಿನಲ್ಲಿ ಇಂತಹ ಘಟನೆಗಳು ಎಲ್ಲಾದರೂ ಸಂಭವಿಸುವ ಸಾಧ್ಯತೆ ಇದ್ದೇ ಇರುವುದರಿಂದ ಭವಿಷ್ಯ ಹೇಳಿದವರು ಯಾವಾಗಲೂ ಬಚಾವ್ ಆಗುತ್ತಾರೆ. ಈ ವರ್ಷ ದೊಡ್ಡ ನಾಯಕನೊಬ್ಬನು ಸಾಯುತ್ತಾನೆ ಎಂದು ಅವರು ಹೇಳುತ್ತಾರೆ, ಆ ನಾಯಕನು ಯಾರೆಂದು ಹೇಳುವುದಿಲ್ಲ. ಇಷ್ಟು ದೇಶಗಳು, ಎಷ್ಟೋ ನಾಯಕರು ಇರುವಾಗ ಯಾರಾದರೊಬ್ಬರು, ಇಬ್ಬರು ಸಾಯುವುದು ಖಚಿತ. ಹೀಗೆ ಭವಿಷ್ಯವಾದ ಸತ್ಯವಾಯಿತೆಂದು ಅವರ ಬೆಂಬಲಿಗರು ಹೇಳಿಕೊಳ್ಳುತ್ತಾರೆ. ಆದ್ದರಿಂದ ಭವಿಷ್ಯವನ್ನು ಹೇಳುವುದು ವೃತ್ತಿ ಮಾತ್ರ. ದೃಢವಾಗಿ ಏನನ್ನೂ ಹೇಳಲಾಗದು.

ಕೃತ್ರಿಮ ಬುದ್ಧಿಮತ್ತೆ (Artificial Intelligence) ಇಷ್ಟು ಬೇಗ ಬರುತ್ತದೆ. ಅದು ಅದ್ಭುತ ಕಾರ್ಯಗಳನ್ನು ಕ್ಷಣಾರ್ಧದಲ್ಲಿ ಸಾಧಿಸಿ ತೋರಿಸುತ್ತದೆ ಎಂದು ನಾವು ಯಾರೂ ಹಿಂದಿನ ಶತಮಾನದಲ್ಲಿ ಊಹಿಸಿರಲಿಲ್ಲ. ಆದರೂ ಅದು ಬಂದಿದೆ, ನಮಗೆ ಬೇಕಾದ ವಿಷಯದಲ್ಲಿ ಆಶುಕವಿಯಂತೆ ಪದ್ಯಗಳನ್ನು ರಚಿಸಿಕೊಡುತ್ತದೆ, ಪ್ರಬಂಧಗಳನ್ನೂ ಬರೆದು ಕೊಡುತ್ತದೆ. ಈ ಶತಮಾನದ ಕೊನೆಗೆ ಇನ್ನೇನೇನು ಬರು ವುದೋ ನಾವು ಕಾಣೆವು. ಹೀಗಿರುವಾಗ ಭವಿಷ್ಯತ್ಕಾಲದಲ್ಲಿ ಗೀತೆಯ ಪ್ರಸ್ತುತತೆಯ ಬಗೆಗೆ ಹೇಳುವುದು ಸಾಹಸವೇ ಸರಿ. ಸಕಾರಣ ತರ್ಕವನ್ನು ನಾವು ಮಾಡಬಹುದು. ಅದು ಸತ್ಯವಾಗುವುದೋ ಇಲ್ಲವೋ ಎಂದು ಪರೀಕ್ಷಿಸಲು ಆಗ ನಾವಿರುವುದಿಲ್ಲವೆಂಬ ವಿಷಯವಂತೂ ಸತ್ಯ.

ಯಾವ ಬದಲಾವಣೆಗಳು ಪ್ರಪಂಚದಲ್ಲಿ ಉಂಟಾದರೂ, ವೈಜ್ಞಾನಿಕ ಪ್ರಗತಿ ಎಷ್ಟೊಂದು ಬಂದರೂ ಮನುಷ್ಯನ ಸ್ವಾಭಾವಿಕ ಗುಣದೋಷಗಳು ಹಾಗೇ ಇರುತ್ತವೆ ಎಂಬುದು ಅನೇಕ ಶತಮಾನಗಳ ಮಾನವೇತಿಹಾಸವನ್ನು ನೋಡಿದಾಗ ವಿದಿತವಾಗುತ್ತದೆ. ತನಗೆ, ತನ್ನವರಿಗೆ ಒಳ್ಳೆಯದಾಗಬೇಕು, ಬೇರೆಯವರಿಗೆ ಏನಾದರೂ ಸರಿ ಎನ್ನುವ ಮನೋಭಾವ ಎಲ್ಲರಲ್ಲೂ ಇರುವುದು ಎಲ್ಲ ಪ್ರಾಣಿಗಳಲ್ಲಿ ಸಹಜವಾಗಿರುವ ಪ್ರವೃತ್ತಿ. ತನ್ನ ಮರಿಗಳ ಪ್ರಾಣದ ರಕ್ಷಣೆಗಾಗಿ, ಅವುಗಳ ಯೋಗಕ್ಷೇಮಕ್ಕಾಗಿ ಹೋರಾಡುವ ಹುಲಿ ಬೇರೆ ಪ್ರಾಣಿಗಳು ದೊಡ್ಡವಾಗಿರಲಿ, ಚಿಕ್ಕವಾಗಿರಲಿ, ಗಂಡಾಗಿರಲಿ, ಹೆಣ್ಣಾಗಿರಲಿ, ಕೊಂದು ತಿನ್ನುತ್ತದೆ. ಈ ಪ್ರವೃತ್ತಿ ಮಾನವನಲ್ಲೂ ಸಹಜವಾಗಿರುತ್ತದೆ. ಇದನ್ನು ತಗ್ಗಿಸಿ ಎಲ್ಲವನ್ನೂ ಸಮದೃಷ್ಟಿಯಿಂದ ನೋಡುವ ಸ್ವಭಾವವನ್ನು ಬೆಳೆಸುವುದು ಧರ್ಮಗ್ರಂಥಗಳ ಉದ್ದೇಶ.

ವಿದ್ಯಾವಿನಯಸಂಪನ್ನೇ ಬ್ರಾಹ್ಮಣೇ ಗವಿ ಹಸ್ತಿನಿ।
ಶುನಿ ಚೈವ ಶ್ವಪಾಕೇ ಚ ಪಂಡಿತಾಃ ಸಮದರ್ಶಿನಃ॥ (5.18)

ಎಂದು ಈ ತತ್ತ್ವವನ್ನು ಭಗವದ್ಗೀತೆ ಒತ್ತಿ ಹೇಳಿದೆ. ಯಾವನೋ ಒಬ್ಬನು ವಿದ್ಯಾವಿನಯಸಂಪನ್ನನಾಗಿರಬಹುದು. ಅವನಿಗೆ ಒದಗಿ ಬಂದ ಸಾಮಾಜಿಕ ಪರಿಸ್ಥಿತಿ, ಸಂದರ್ಭದ ಅನುಕೂಲತೆ ಅದಕ್ಕೆ ಕಾರಣ. ಇನ್ನೊಬ್ಬನಿಗೆ ಆ ಪರಿಸ್ಥಿತಿ, ಅಂತಹ ಸಂದರ್ಭ ಒದಗಿಬರುವುದಿಲ್ಲ. ಆದರೆ ಅಷ್ಟು ಮಾತ್ರದಿಂದ ಒಬ್ಬನು ಶ್ರೇಷ್ಠ, ಇನ್ನೊಬ್ಬನು ಹೀನ ಎನ್ನಬಾರದು. ಒಬ್ಬನು ಬ್ರಾಹ್ಮಣ ಕುಲದಲ್ಲಿ ಹುಟ್ಟಿರಬಹುದು, ಇನ್ನೊಬ್ಬನು ಇನ್ನು



ಯಾವುದೋ ಕುಲದಲ್ಲಿ ಹುಟ್ಟಿರಬಹುದು. ಅದರಿಂದ ಮೇಲುಕೀಳು ಭಾವನೆಗಳಿರಕೂಡದು. ಎಲ್ಲರೂ ತಾಯಿಯೆಂದು ಪೂಜಿಸುವ ಗೋವೇ ಆಗಲಿ, ರಾಜನ ಅಂಬಾರಿಯನ್ನು ಹೊರುವ ಆನೆಯಾಗಲಿ, ಬಾಗಿಲನ್ನು ಕಾಯುವ ನಾಯಿಯಾಗಲಿ, ನಾಯಿಯ ಮಾಂಸವನ್ನು ತಿನ್ನುವವನಾಗಲಿ ಎಲ್ಲರಲ್ಲೂ ಸಮದೃಷ್ಟಿಯನ್ನಿಡಬೇಕು. ಎಲ್ಲವೂ ಆತ್ಮಚೈತನ್ಯದ ಅಭಿವ್ಯಕ್ತಿ. ಯಾರು ಸಮದರ್ಶಿಗಳೋ ಅವರೇ ಪಂಡಿತರು. ಪಂಡಿತರೆಂದರೆ ಪ್ರಜ್ಞೆಯನ್ನು ಬೆಳೆಸಿಕೊಂಡವರು. ಅವರು ಎಲ್ಲರನ್ನೂ ಸಮದೃಷ್ಟಿಯಿಂದ ನೋಡುತ್ತಾರೆ ಎನ್ನುವುದು ಭಗವದ್ಗೀತೆ ಕಲಿಸುವ ಪಾಠ. ಮಾನವ ಕುಲ ಜಗತ್ತಿನಲ್ಲಿ ಶಾಂತಿಯಿಂದ ಉಳಿಯಬೇಕಾದರೆ ಭಗವದ್ಗೀತೆಯ ಈ ಚಿಂತನೆ ಭವಿಷ್ಯತ್ಕಾಲದಲ್ಲೂ ಬೇಕು. ಜಾತಿಯ ಕಾರಣದಿಂದ, ಚರ್ಮದ ಬಣ್ಣದ ಕಾರಣದಿಂದ, ಸಿರಿವಂತ–ಬಡವ ಎಂಬ ಕಾರಣದಿಂದ ಯಾರೂ ಉತ್ತಮರಾಗಲಿ ಅಧಮರಾಗಲಿ ಆಗುವುದಿಲ್ಲ. ಈ ಸಮದರ್ಶಿತ್ವವನ್ನು ಬೋಧಿಸಲು ಭಗವದ್ಗೀತೆಯು ಸಾರ್ವಕಾಲಗಳಲ್ಲೂ ಬೇಕು.

ಮಾನವ ಜೀವನಕ್ಕೆ ನಾಲ್ಕು ಆಯಾಮಗಳಿವೆ. ದೈಹಿಕ, ಮಾನಸಿಕ, ಬೌದ್ಧಿಕ, ಆಧ್ಯಾತ್ಮಿಕ ಎಂಬವು ಆ ನಾಲ್ಕು ಆಯಾಮಗಳು. ಏನನ್ನು ಸಾಧಿಸಬೇಕಾದರೂ ದೇಹವು ಮೊದಲು ಆವಶ್ಯಕ. ದುರ್ಬಲವಾದ, ರೋಗಗಳಿಂದ ನರಳುತ್ತಿರುವ ವ್ಯಕ್ತಿ ಏನನ್ನೂ ಸಾಧಿಸಲಾರನು. ಭಗವದ್ಗೀತೆಯು ಈ ಬಗೆಗೆ ಗಮನವನ್ನಿತ್ತು ಆರೋಗ್ಯವನ್ನು ಸಾಧಿಸಿಕೊಳ್ಳಬೇಕಾದರೆ ಆವಶ್ಯಕವಾದ ಆಹಾರವನ್ನೂ ಬದುಕಿನ ನಿಯಮಗಳನ್ನೂ ತಿಳಿಸಿದೆ.

ಯುಕ್ತಾಹಾರವಿಹಾರಸ್ಯ ಯುಕ್ತಚೇಷ್ಟಸ್ಯ ಕರ್ಮಸು ।
ಯುಕ್ತಸ್ವಪ್ನಾವಬೋಧಸ್ಯ ಯೋಗೋ ಭವತಿ ದುಃಖಹಾ॥
(6.17)

ಆಹಾರ ವಿಹಾರಗಳು ಸರಿಯಾಗಿರಬೇಕು. ಕೆಲಸ ಕಾರ್ಯಗಳು ಯುಕ್ತವಾಗಿರಬೇಕು. ನಿದ್ದೆ ಮತ್ತು ಎಚ್ಚರಗೊಳ್ಳುವಿಕೆ ಯೋಗ್ಯವಾಗಿರಬೇಕು. ಆಗಲೇ ಯೋಗದ ಸಿದ್ಧಿ. ಅದರಿಂದಲೇ ದುಃಖ ದೂರವಾಗುವುದು ಎಂದು ಹೇಳಿ ಆಹಾರವು ಸಾತ್ತ್ವಿಕ, ರಾಜಸ, ತಾಮಸವೆಂದು ಮೂರು ವಿಧ, ನೀನು ಸಾತ್ತ್ವಿಕಾಹಾರವನ್ನೇ ಸೇವಿಸು ಎಂಬ ಉಪದೇಶವನ್ನು ಭಗವದ್ಗೀತೆಯು ಮಾಡಿದೆ.

ಇನ್ನು ಮಾನಸಿಕ ಅಯಾಮವನ್ನು ನೋಡುವುದಾದರೆ, ಭಗವದ್ಗೀತೆಯು ಅದಕ್ಕೆ ಅತ್ಯಂತ ಹೆಚ್ಚು ಪ್ರಾಮುಖ್ಯವನ್ನು ನೀಡಿದೆ. ದೈಹಿಕವಾಗಿ ಮನುಷ್ಯನು ಎಷ್ಟು ಸುಂದರನಾಗಿದ್ದರೂ ಎಷ್ಟು ಬಲಶಾಲಿಯಾಗಿದ್ದರೂ ಅವನಿಗೆ ಮಾನಸಿಕ ಸ್ಥಿಮಿತತೆ ಇಲ್ಲದಿದ್ದರೆ, ಅವನು ಹುಚ್ಚ ಎಂದಾದರೆ ಅವನಿಗೆ ಸಮಾಜದಲ್ಲಿ ಯಾವ ಸ್ಥಾನವೂ ಇರುವುದಿಲ್ಲ. ಅವನಿಂದ ಲೋಕಕ್ಕೆ ಯಾವ ಉಪಕಾರವೂ ಆಗದು. ಆದ್ದರಿಂದಲೇ ಪತಂಜಲಿ ಮಹರ್ಷಿಗಳು ಯೋಗಃ ಚಿತ್ತವೃತ್ತಿನಿರೋಧಃ (ಯೋಗ ಎಂದರೆ ಮನಸ್ಸಿನ ಹೊಯ್ದಾಟಗಳ ನಿಯಂತ್ರಣ) ಎಂದು ಹೇಳಿದ್ದಾರೆ. ಇದನ್ನೇ ಭಗವದ್ಗೀತೆಯು –

ಯತೋಯತೋ ನಿಶ್ಚರತಿ ಮನಶ್ಚಂಚಲಮಸ್ಥಿರಮ್।
ತತಸ್ತತೋ ನಿಯಮ್ಯೈತದಾತ್ಮನ್ಯೇವ ವಶಂ ನಯೇತ್ ॥
(6.26)

ಚಂಚಲವಾದ ಮನಸ್ಸು ಭಗವಂತನಲ್ಲಿ ಸ್ಥಿರವಾಗಿ ನಿಲ್ಲದೆ ಎಲ್ಲೆಲ್ಲೋ ಓಡಾಡುತ್ತದೆ. ಆಗ ಅದನ್ನು ಆ ಬೇರೆ ವಸ್ತುಗಳ ಕಡೆಗೆ ಹೋಗದಂತೆ ನಿಯಂತ್ರಿಸಿ ಪರಮಾತ್ಮನಲ್ಲೇ ನಿಲ್ಲಿಸಬೇಕು – ಎಂದು ಸ್ಪಷ್ಟಪಡಿಸಿದೆ.

ಮೂರನೆಯದು ಬೌದ್ಧಿಕ ಆಯಾಮ. ದೇಹ ಮನಸ್ಸುಗಳು ಎಲ್ಲ ಪ್ರಾಣಿಗಳಲ್ಲಿದ್ದರೂ ಬುದ್ಧಿ ವಿಶೇಷದಿಂದ ಮನುಷ್ಯನು ಸೃಷ್ಟಿಯ ಶಿಖರವಾಗಿದ್ದಾನೆ. ಈ ಬುದ್ಧಿಯಿಂದಲೇ ಜ್ಞಾನ–ವಿಜ್ಞಾನ–ಶಾಸ್ತ್ರ–ಕಲೆ ಇತ್ಯಾದಿಗಳು. ಬುದ್ಧಿಯಿಂದಲೇ ಸಮಸ್ತ ಪ್ರಗತಿ. ಈ ಕಾರಣದಿಂದಲೇ ಭಗವದ್ಗೀತೆಯು ಬುದ್ಧಿ ಯೋಗಕ್ಕೆ ಪ್ರಥಮ ಸ್ಥಾನವನ್ನು ಕೊಟ್ಟಿದೆ. ಶ್ರೀ ಕೃಷ್ಣನು ಹೇಳುತ್ತಾನೆ–

ತೇಷಾಂ ಸತತಯುಕ್ತಾನಾಂ ಭಜತಾಂ ಪ್ರೀತಿಪೂರ್ವಕಮ್ ।
ದದಾಮಿ ಬುದ್ಧಿಯೋಗಂ ತಂ ಯೇನ ಮಾಮುಪಯಾಂತಿ ತೇ॥
(10.10)

ನನ್ನ ಭಕ್ತರು ಸತತವಾಗಿ ಯೋಗದಲ್ಲಿದ್ದು, ನನ್ನನ್ನೇ ಆಶ್ರಯಿಸುವರು. ಅವರಿಗೆ ನಾನು ಬುದ್ಧಿಯೋಗವನ್ನು ಕೊಡುವೆನು. ಅದನ್ನು ಅವಲಂಬಿಸಿ ನನ್ನಲ್ಲಿ ಲೀನರಾಗುವರು. ಕೇವಲ ಕರ್ಮಗಳಲ್ಲಿ ಮುಳುಗಿರುವ ಕರ್ಮ ಯೋಗಿಗಳಿಗಿಂತ ಬುದ್ಧಿಯೋಗಿಗಳು ಹೆಚ್ಚಿನ ಲೋಕೋಪಕಾರವನ್ನು ಮಾಡುವುದು ಅನುಭವಸಿದ್ಧವಾಗಿದೆ. ಹೊಸ ಯಂತ್ರಗಳ ಆವಿಷ್ಕಾರ, ಇರುವ ಯಂತ್ರಗಳನ್ನು ಉತ್ತಮಪಡಿಸುವುದು–ಇತ್ಯಾದಿಗಳೆಲ್ಲ ಬುದ್ಧಿಯೋಗದ ಪ್ರಯೋಜನಗಳು. ಇದನ್ನು ಉದ್ದೇಶಿಸಿ ಶ್ರೀಕೃಷ್ಣನು ಹೇಳಿದ್ದಾನೆ–

ದೂರೇಣ ಹ್ಯವರಂ ಕರ್ಮ ಬುದ್ಧಿಯೋಗಾದ್ ಧನಂಜಯ।
ಬುದ್ಧೌ ಶರಣಮನ್ವಿಚ್ಛ ಕೃಪಣಾಃ ಫಲಹೇತವಃ ॥ (2.49)

ಬುದ್ಧಿಯೋಗಕ್ಕೆ ಹೋಲಿಸಿ ನೋಡಿದರೆ ಕರ್ಮವು ಬಹು ಕೆಳಗಿನದು. ಬುದ್ಧಿಯೋಗದಲ್ಲಿ ನೀನು ತೊಡಗು. ತಾತ್ಕಾಲಿಕ ಪ್ರಯೋಜನಕ್ಕಾಗಿ ಹಾತೊರೆದು ಕರ್ಮಗಳಲ್ಲೇ ಆಸಕ್ತರಾದವರು ಕೃಪಣರು, ಸ್ವಾರ್ಥಿಗಳು. ಹೀಗೆ ಬೌದ್ಧಿಕ ಆಯಾಮವನ್ನೂ ಭಗವದ್ಗೀತೆಯು ವಿವರಿಸಿದೆ.

ಇನ್ನು ನಾಲ್ಕನೆಯದು ಆಧ್ಯಾತ್ಮಿಕ ಆಯಾಮ. ಅನೇಕರು ಇದರ ಕಡೆಗೆ ಗಮನವನ್ನೇ ನೀಡದೆ ಧನ–ಕನಕ–ಭೂಮಿ–ಅಧಿಕಾರಗಳನ್ನು ಪಡೆದುಕೊಂಡಿದ್ದರೂ ಅಪೂರ್ಣತೆಯ ಭಾವನೆಯಿಂದ ನೆಮ್ಮದಿಯಿಲ್ಲದೆ ಜೀವನವನ್ನು ಕಳೆಯುತ್ತಾರೆ. ತಾನು ಯಾರೆಂದು ತಿಳಿಯದೆ ಎಷ್ಟು ಅಲೆದಾಡಿದರೆ ಏನು ಫಲ?

ಆತ್ಮಜ್ಞಾನವಿಹೀನಾ ಮೂಢಾಃ
ತೇ ಪಚ್ಯಂತೇ ನರಕನಿಗೂಢಾಃ

ಎಂದು ಶಂಕರರು ಹೇಳಿದ್ದಾರೆ. ಭಗವದ್ಗೀತೆಯು ಆತ್ಮಸ್ವರೂಪವನ್ನು ತಿಳಿಸಿ ಆತ್ಮಬ್ರಹ್ಮಯೋಗವನ್ನು ವಿಶದಪಡಿಸುತ್ತದೆ. ಆದ್ದರಿಂದಲೇ ಭಗವದ್ಗೀತೆಯನ್ನು ಬ್ರಹ್ಮವಿದ್ಯೆ ಎಂದು ಕರೆಯುವುದು. ಭಗವದ್ಗೀತೆಯ ಅಧ್ಯಯನದ ಫಲ ಬ್ರಹ್ಮನಿರ್ವಾಣ. ಬ್ರಹ್ಮದಲ್ಲಿ ಲೀನನಾಗಿ ಶಾಶ್ವತ ಆನಂದದಲ್ಲಿರುವ ಸ್ಥಿತಿ ಬ್ರಹ್ಮ ನಿರ್ವಾಣ. ಇದು ಮಾನವ ಜೀವನದ ಪರಮೋದ್ದೇಶ.

ಯೋಽಂತಃಸುಖೋಽಂತರಾರಾಮಸ್ತಥಾಂತ ರ್ಜ್ಯೋತಿರೇವ ಯಃ
ಸ ಯೋಗೀ ಬ್ರಹ್ಮನಿರ್ವಾಣಂ ಬ್ರಹ್ಮಭೂತೋಽಧಿಗಚ್ಛತಿ ॥
(5.24)

ಯೋಗಿಗೆ ಬಾಹ್ಯವಾದ ಇಂದ್ರಿಯ ಸುಖಗಳು ಬೇಕಾಗುವುದಿಲ್ಲ. ಅಂತರಾತ್ಮ ದರ್ಶನದಿಂದ ಆಗುವ ಆನಂದವೇ ಅವನ ಸುಖ. ಅವನು ಕಾಣುವುದು ಅಂತರ್ಜ್ಯೋತಿಯನ್ನು. ಅವನೇ ಒಳಗಿನ ಬೆಳಕು. ಅವನು ಬ್ರಹ್ಮವೇ ಆಗಿ ಬ್ರಹ್ಮರೂಪವಾದ ನಿರ್ವಾಣವನ್ನು ಅನುಭವಿಸುತ್ತಾನೆ.

ಹೀಗೆ ಸಕಲ ಆಯಾಮಗಳನ್ನೂ ತಿಳಿಸಿ ಬದುಕಿಗೆ ಅರ್ಥವನ್ನೂ ನೆಮ್ಮದಿಯನ್ನು ಕೊಡುವ ಭಗವದ್ಗೀತೆ ಮಾನವತೆಯ ಭವಿಷ್ಯದ್ ಗ್ರಂಥವೂ ಆಗಿದೆ. ಬೇರೆ ಏನನ್ನೂ ಸಾಧಿಸಿದರೂ ಪೂರ್ಣತ್ವವನ್ನು ಸಾಧಿಸದ ಧರ್ಮ ಸಾರ್ವಕಾಲಿಕ ಧರ್ಮವಲ್ಲ. ಭಗವದ್ಗೀತೆ ಅಂತಹ ಧರ್ಮವನ್ನು ಬೋಧಿಸಿ ಅಂದೂ ಇಂದೂ ಮುಂದೆಯೂ ಪ್ರಸ್ತುತ.

ಯತ್ರ ಯೋಗೇಶ್ವರಃ ಕೃಷ್ಣೋ ಯತ್ರ ಪಾರ್ಥೋ ಧನುರ್ಧರಃ।
ತತ್ರ ಶ್ರೀರ್ವಿಜಯೋ ಭೂತಿರ್ಧ್ರುವಾ ನೀತಿರ್ಮತಿರ್ಮಮ॥

ಸಿದ್ಧಾರ್ಥ ವಿಹಾರ ಶಿಕ್ಷಣ ಟ್ರಸ್ಟ್‌ಗೆ ಕೆಐಎಡಿಬಿ ಜಮೀನು ಪಡೆದ ಆರೋಪ

ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಛಲವಾದಿ ನಾರಾಯಣಸ್ವಾಮಿ ದೂರು

ಬೆಂಗಳೂರು, ಆ.27– ಮುಖ್ಯಮಂತ್ರಿ ಸಿದ್ದರಾಮಯ್ಯ ಬಳಿಕ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧವೂ ಹಗರಣ ಆರೋಪವೊಂದು ಕೇಳಿ ಬಂದಿದ್ದು, ಈ ಸಂಬಂಧ ಪ್ರಿಯಾಂಕ್ ಖರ್ಗೆಯವರ ವಿರುದ್ಧ ವಿಧಾನಪರಿಷತ್ತಿನ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಮಂಗಳವಾರ ದೂರು ನೀಡಿದ್ದಾರೆ.

ರಾಜ್ಯಪಾಲರಿಗೆ ದೂರು ಸಲ್ಲಿಸುವುದಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ತೀವ್ರವಾಗಿ ಕಿಡಿಕಾರಿದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಕುಟುಂಬದವರು ಸಿದ್ಧಾರ್ಥ ವಿಹಾರ ಶಿಕ್ಷಣ ಟ್ರಸ್ಟ್‌ಗೆ ಕೆಐಎಡಿಬಿಯಿಂದ ಐದು ಎಕರೆ ಜಾಗ ಪಡೆದುಕೊಂಡಿದ್ದಾರೆ. ಸಚಿವರಾಗಿ ಪ್ರಿಯಾಂಕ್ ಖರ್ಗೆ ಅಧಿಕಾರ ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ಆರೋಪಿಸಿದರು.

ಕೈಗಾರಿಕಾ ನಿವೇಶನ ಪಡೆಯುವ ಹಕ್ಕು ಎಲ್ಲರಿಗೂ ಇದೆ. ಆದರೆ, ಸಿಎ ಸೈಟ್ ಪಡೆಯಲು ಕೆಲವು ಕಾನೂನುಗಳಿವೆ. ಸಾಮಾಜಿಕ ಚಟುವಟಿಕೆ, ರಂಗಮಂದಿರ, ಆಸ್ಪತ್ರೆ–ಹೀಗೆ ನಿಗದಿತ ಉದ್ದೇಶಕ್ಕೆ ನಮೂದಾಗಿರುತ್ತದೆ. ಇದನ್ನು ಇತರ ಅರ್ಜಿಗಳನ್ನು ತಿರಸ್ಕರಿಸಿ ಪ್ರಬಲರಿಗೆ ಕೊಡಲಾಗಿದೆ. ಇದರಿಂದ ಅನುಮಾನ ಶುರುವಾಗಿದೆ.

ಸಚಿವ ಪ್ರಿಯಾಂಕ್ ಖರ್ಗೆ, ರಾಜ್ಯಸಭಾ ವಿಪಕ್ಷ ನಾಯಕ– ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಂಸದ ರಾಧಾಕೃಷ್ಣ ಅವರ ಖಾಸಗಿ, ಒಂದೇ ಮನೆಗೆ ಸೀಮಿತ ಟ್ರಸ್ಟಿಗೆ ನಿವೇಶನ ಕೊಡಲಾಗಿದೆ.

ಬುದ್ಧ ವಿಹಾರ ಕಟ್ಟಲು ಸಿದ್ಧಾರ್ಥ ವಿಹಾರ ಟ್ರಸ್ಟ್ ಕಲಬುರ್ಗಿಯಲ್ಲಿ ನೋಂದಣಿ ಮಾಡಿದ್ದಾರೆ. ಇದೊಂದು



ಪ್ರಿಯಾಂಕ್ ಖರ್ಗೆ ನಾರಾಯಣಸ್ವಾಮಿ

ಧಾರ್ಮಿಕ ಉದ್ದೇಶದ ಟ್ರಸ್ಟ್. ಆದರೆ, ಏರೋಸ್ಪೇಸ್ ಸಂಬಂಧಿಸಿ ನಿವೇಶನ ಪಡೆದಿದ್ದಾರೆ ಎಂದು ಛಲವಾದಿ ನಾರಾಯಣಸ್ವಾಮಿ ಆಕ್ಷೇಪ ವ್ಯಕ್ತಪಡಿಸಿದರು.

ಒಂದೇ ಕುಟುಂಬಕ್ಕೆ ಹಲವು ಎಕರೆ ಜಮೀನು ಕೊಟ್ಟಿದ್ದಾರೆ. ಅದು ಕೂಡ ಏರೋಸ್ಪೇಸ್ ಹೆಸರಲ್ಲಿ ತೆಗೆದುಕೊಂಡಿದ್ದಾರೆ. ಇತರೆ ಟ್ರಸ್ಟ್‌ಗೂ ಅರ್ಧ ಎಕರೆ ಸಿಕ್ಕಿದ್ದರೂ ಅನುಕೂಲ ಆಗುತ್ತಿತ್ತು. ಇದು ನಂಬಿಕೆಯ ಪ್ರಶ್ನೆ. ಇದು ಮತ್ತೊಂದು ಮುಡಾ ಕೇಸ್ ಆಗಲಿದೆ. ಆ ಜಾಗ ಬೇಕು ಅಂತ ಅನೇಕರು ಅರ್ಜಿ ಸಲ್ಲಿಸಿದ್ದಾರೆ. ಖರ್ಗೆ ಕುಟುಂಬ ಒಂದೇ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಕುಟುಂಬವಲ್ಲ. ಈ ಬಗ್ಗೆ ಸಂಪೂರ್ಣ ದಾಖಲೆ ಇಟ್ಟು ಮಾತನಾಡುತ್ತೇನೆ. ನಾನು ಹಿಟ್ ಅಂಡ್ ರನ್ ಮಾಡುವುದಿಲ್ಲ ಎಂದರು.

ಸಿಎಂಗೆ ಕಾವಿ ಕಂಡರೆ ಆಗ್ತಿರಲಿಲ್ಲ!: ಸಿದ್ದರಾಮಯ್ಯ ಅವರೇ ಜಾತ್ಯಾತೀತ ತತ್ವ ಎಲ್ಲಿ ಉಳಿಸಿಕೊಂಡಿದ್ದೀರಿ. ಹಿಂದೆ ಕಾವಿಧಾರಿಗಳನ್ನು ಕಂಡರೇ ಆಗುತ್ತಿರಲಿಲ್ಲ. ಈಗ ಕಾವಿಧಾರಿಗಳನ್ನೂ ಕೂಡ ತಮ್ಮ ರಕ್ಷಣೆಗೆ ಬಳಸಿಕೊಳ್ಳುತ್ತಿದ್ದಾರೆ. ಕಾವಿಧಾರಿ ಸ್ವಾಮೀಜಿಗಳು ರಾಜಕಾರಣವನ್ನು ತೊಳೆದು ಸ್ವಚ್ಛ ಮಾಡಬೇಕು. ಅದನ್ನು ಬಿಟ್ಟು ಭ್ರಷ್ಟಾಚಾರ ಮಾಡಿದವರ ರಕ್ಷಣೆಗೆ ಸ್ವಾಮೀಜಿಗಳು ಮುಂದಾಗುವುದು ಎಷ್ಟು ಸರಿ. ದಲಿತ ಸಮುದಾಯಕ್ಕೆ ಅನ್ಯಾಯ ಆದಾಗ ಪ್ರಶ್ನೆ ಮಾಡಬೇಕು. ಯಾರು ದಲಿತರಿಗೆ ಅನ್ಯಾಯ ಮಾಡಿದ್ದಾರೆ ಅವರ ಪರವಾಗಿ ನಿಲ್ಲುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಸರ್ಕಾರ ದಲಿತರ ಸಂಹಾರ, ದಲಿತರಿಗೆ ಮೋಸ, ದಲಿತರ ಸಮಾಧಿ ಕಟ್ಟುತ್ತಿದೆ. ಮಠಾಧೀಶರು ಈ ಬಗ್ಗೆ ಪ್ರಶ್ನೆ ಮಾಡಬೇಕಿತ್ತು. ಸ್ವಾಮೀಜಿಗಳು ದಲಿತ ವರ್ಗದ ಪರವಾಗಿ ನಿಲ್ಲಿ, ಅನ್ಯಾಯ ಮಾಡಿದವರ ಪರ ನಿಲ್ಲಬೇಡಿ. ದಲಿತ ಸಂಘಟನೆಗಳು ಒಡೆದು ಹೋಗಿವೆ. ಮೋಸ ಮಾಡಿದವರ ಪರವಾಗಿ ಕೆಲವು ದಲಿತ ಸಂಘಟನೆಗಳು ನಿಂತಿವೆ ಎಂದರು. ದಲಿತರಿಗೆ ಮೀಸಲಿಟ್ಟ ಹಣವನ್ನೇ ಲೂಟಿ ಮಾಡಿದವರ ಪರ ಯಾಕೆ ನಿಂತಿದ್ದಾರೆ. ನಿಜವಾಗಿ ಅಂಬೇಡ್ಕರ್ ಬಗ್ಗೆ ವಿಶ್ವಾಸ ಇದ್ದರೆ ದಲಿತರಿಗೆ ಆದ ಅನ್ಯಾಯದ ವಿರುದ್ಧ ಹೋರಾಟ ಮಾಡಬೇಕು. ದಲಿತ ಸಂಘಟನೆಗಳು ಕಾಂಗ್ರೆಸ್‌ನ ಹುಚ್ಚಾಟಕ್ಕೆ ಬಲಿಯಾಗಿವೆ ಎಂದು ವಾಗ್ದಾಳಿ ಮಾಡಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಸೆ.8ರಂದು ಕೈಲ್ ಪೊಳ್ದ್ ಸಂಭ್ರಮ

ಮೈಸೂರು,ಆ.27-ಮೈಸೂರಿನ ವಿಜಯನಗರ 1ನೇ ಹಂತದಲ್ಲಿರುವ ಕೊಡವ ಸಮಾಜದಲ್ಲಿ ಸೆ.8ರಂದು ಕೈಲ್ ಪೊಳ್ದ್ ಹಬ್ಬವನ್ನು ಭಕ್ತಿಭಾವ ಹಾಗೂ ಸಂಭ್ರಮದಿಂದ ಆಚರಿಸಲಾಗುವುದು.

ಅಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ಇಡೀ ದಿನ ನಡೆಯುವ ಕಾರ್ಯಕ್ರಮವು ಆಯುಧ ಪೂಜಾ, ಆಟೋಟ, ಲಕ್ಕಿ ಡಿಪ್, ಕೊಡವ ಗಣ್ಯರಿಗೆ ಸನ್ಮಾನ ಮತ್ತು ವಿದ್ಯಾರ್ಥಿ ವೇತನ ವಿತರಣಾ ಕಾರ್ಯಕ್ರಮವನ್ನು ಒಳಗೊಂಡಿದೆ.

ಮೈಸೂರಿನಲ್ಲಿ ವ್ಯಾಸಂಗ ಮಾಡುವ 44 ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗುವುದು. ಕೊಡವ ಸಮಾಜದ ಸದಸ್ಯರ ಮಕ್ಕಳು ವಿದ್ಯಾರ್ಥಿ ವೇತನಕ್ಕೆ ಅರ್ಹರಾಗಿರುತ್ತಾರೆ. 7ನೇ ತರಗತಿ, ಎಸ್ಎಸ್ಎಲ್‌ಸಿ, ಎಸ್ಎಸ್ಎಲ್‌ಸಿ (ಇಂಗ್ಲಿಷ್), ಎಸ್ಎಸ್ಎಲ್‌ಸಿ (ಸಿಬಿಎಸ್‌ಇ), ಎಸ್ಎಸ್ಎಲ್‌ಸಿ (ಆರ್ಥಿಕವಾಗಿ ಹಿಂದುಳಿದ ವಿಭಾಗ), ಪಿಯುಸಿ, ಬಿ.ಎ., ಬಿ.ಕಾಂ., ಬಿ.ಎಸ್ಸಿ (ಕಂಪ್ಯೂಟರ್ ಸೈನ್ಸ್, ಗಣಿತ), ಬಿಬಿಎಂ, ಬಿಬಿಎ, ಕಾನೂನು, ಎಂ.ಎ., ಎಂ.ಕಾಂ., ಎಂ.ಎಸ್ಸಿ (ಪಿಇಎಂ/ಸಿಬಿಜಡ್), ಬಿ.ಇ., ಬಿ.ಇ. (ಮೆಕ್ಯಾನಿಕಲ್), ಬಿ.ಇ. (ಆರ್ಕಿ), ಬಿ.ಇ. (ಕಂಪ್ಯೂಟರ್ ಸೈನ್ಸ್), ಬಿಡಿಎಸ್, ಎಂಬಿಬಿಎಸ್, ಬಿ.ಎಸ್ಸಿ, ಎಂ.ಎಸ್ಸಿ (ಅಗ್ರಿ), ಡಿಪ್ಲೊಮಾ ಇನ್ ಕಮರ್ಷಿಯಲ್ (ಸೆಕ್ರೆಟರಿ ಪ್ರಾಕ್ಟೀಸ್) ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿಯನ್ನು ಸಂಬಂಧಪಟ್ಟ ಅಂಕಪಟ್ಟಿಯೊಂದಿಗೆ ಆ.31ರಂದು ಸಂಜೆ 5 ಗಂಟೆಯೊಳಗೆ ಕಾರ್ಯದರ್ಶಿ, ಕೊಡವ ಸಮಾಜ ಇವರಿಗೆ ಸಲ್ಲಿಸಲು ಕೋರಲಾಗಿದೆ.

ಮೈಸೂರಲ್ಲಿ ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ಯದುವೀರ್ ಚಾಲನೆ



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಸಂಸದ ಯದುವೀರ್ ಒಡೆಯರ್, ಸದಸ್ಯತ್ವ ಅಭಿಯಾನ ಕಾರ್ಯಾಗಾರಕ್ಕೆ ಚಾಲನೆ ನೀಡಿದರು.

ಮೈಸೂರು,ಆ.27(ಜಿಎ)-ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಮೈಸೂರು ನಗರ ಮತ್ತು ಗ್ರಾಮಾಂತರ ಜಿಲ್ಲೆ ಬಿಜೆಪಿ ಸದಸ್ಯತ್ವ ಅಭಿಯಾನದ ಕಾರ್ಯಾಗಾರಕ್ಕೆ ಮೈಸೂರು-ಕೊಡಗು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಭಾರತದಲ್ಲಿ ಇಂದು ಬಿಜೆಪಿ ಅಪಾರ ಶಕ್ತಿಯನ್ನು ಹೊಂದಿದ್ದು, ಈ ಶಕ್ತಿಯನ್ನು ಮತ್ತಷ್ಟು ಹೆಚ್ಚಿಸಲು ಅಭಿಯಾನ ಸಹಕಾರಿಯಾಗಲಿದೆ. ನಾವೆಲ್ಲರೂ ಸಮಗ್ರ ಅಭಿವೃದ್ಧಿ ಮಾಡಲು ಸೇರಿದ್ದು, ಈ ಅಭಿಯಾನದಿಂದ ಬಿಜೆಪಿಗೆ ಲಾಭವಾಗಲಿದೆ ಎಂದು ಹೇಳಿದರು.

ಮೈಸೂರಲ್ಲಿ ಮತ್ತಷ್ಟು ಅಭಿವೃದ್ಧಿ ಕೆಲಸ ಆಗಬೇಕಿದೆ. ಈ ಅಭಿಯಾನ ಮೂಲಕ ಗ್ರಾಮಾಂತರದಲ್ಲೂ ಪಕ್ಷ ಬಲಗೊಳ್ಳಲಿದೆ. ಸ್ಥಳೀಯ ನಾಯಕರಿಗೆ ಈ ಅಭಿಯಾನದ ಬಗ್ಗೆ ತಿಳಿಸಿ, ಅವರನ್ನು ಪಕ್ಷಕ್ಕೆ ಕರೆತನ್ನಿ. ಜನರಿಗೆ ಪಕ್ಷದಿಂದ ದೇಶದಲ್ಲಿ ಆಗಿರುವ ಅಭಿವೃದ್ಧಿ ಬಗ್ಗೆ ಹೆಚ್ಚು ಹೆಚ್ಚು ಅರಿವು ಮೂಡಿಸಿ ಗ್ರಾಮಾಂತರ ಪ್ರದೇಶದಲ್ಲಿ ಪಕ್ಷವನ್ನು ಸುಭದ್ರಗೊಳಿಸಿ ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ರಾಜ್ಯ ಉಪಾಧ್ಯಕ್ಷ ರಾಜೇಂದ್ರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಮುಡಾ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಿ ತನಿಖೆಗೆ ಸಹಕರಿಸಬೇಕು

ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆಗ್ರಹ

ಮೈಸೂರು, ಆ.27(ಜಿಎ)-ಮುಡಾ ಹಗರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜೀನಾಮೆ ಕೊಟ್ಟು ತನಿಖೆಗೆ ಸಹಕರಿಸಬೇಕು ಎಂದು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಆಗ್ರಹಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ದಿನಗಣನೆ ಆರಂಭವಾಗುತ್ತಿದೆ ಎಂದಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿಕೆ ವಿಚಾರವಾಗಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಾನು ಈಗಾಗಲೇ ಹೇಳಿದ್ದೇನೆ. ರಾಜೀನಾಮೆ ಕೊಟ್ಟು ತನಿಖೆ ಮಾಡಿಸಿ ಅಂತ. ರಾಜೀನಾಮೆ ಕೊಟ್ಟು ತನಿಖೆ ಮಾಡಿಸುವುದು ಸೂಕ್ತ ಎಂದರು.

ನಟ ದರ್ಶನ್‌ಗೆ ಜೈಲಿನಲ್ಲಿ ವಿಶೇಷ ಆತಿಥ್ಯ ವಿಚಾರವಾಗಿ ಪ್ರತಿಕ್ರಿಯೆ ನೀಡಿ, ಈ ಬಗ್ಗೆ ಗೃಹ ಸಚಿವರನ್ನು ಕೇಳಿ, ಯಾರೇ ಆಗಿದ್ದರೂ ಎಲ್ಲರಿಗೂ ಒಂದೇ ರೀತಿಯಲ್ಲಿ ನೋಡಬೇಕು. ಜೈಲಿನಲ್ಲಿ ಯಾವ ರೀತಿ ಶಿಸ್ತು ಇದೆಯೋ ಅದರಂತೆ ನಡೆಯಬೇಕು. ಜೈಲಿನ ರೂಲ್ಸ್‌ನಂತೆ ಎಲ್ಲರನ್ನು ಒಂದೇ ರೀತಿ ನೋಡಬೇಕು ಎಂದು ತಿಳಿಸಿದರು.

ಬೃಹತ್ ಬೆಂಗಳೂರಿನಂತೆ ಬೃಹತ್ ಮೈಸೂರು ನಿರ್ಮಾಣದ ಕುರಿತು ಶಾಸಕರು ಒತ್ತಾಯಿಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಮೈಸೂರು ನಗರ ಇಂದು ಬೆಳೆಯುತ್ತಿದ್ದು, ಅಭಿವೃದ್ಧಿಗೆ ಅನುಕೂಲಕ್ಕೆ ತಕ್ಕಂತೆ ಪಾರಂಪರಿಕತೆಯನ್ನು ಗಮನದಲ್ಲಿಟ್ಟುಕೊಂಡು ಬೃಹತ್ ಮೈಸೂರು ಮಹಾನಗರ ಮಾಡಬೇಕಿದೆ ಎಂದರು.

ವಿಶ್ವ ಹಿಂದೂ ಪರಿಷತ್‌ನ ಸಂಸ್ಥಾಪನಾ ದಿನ



ಮೈಸೂರಿನ ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣಧಾಮದಲ್ಲಿ ಏರ್ಪಡಿಸಿದ್ದ ವಿಶ್ವ ಹಿಂದೂ ಪರಿಷತ್‌ನ ಸಂಸ್ಥಾಪನಾ ದಿನ ಕಾರ್ಯಕ್ರಮವನ್ನು ಶ್ರೀ ವಿವೇಕ ಬಾಲೋದ್ಯಾನ ಪಬ್ಲಿಕ್ ಶಾಲೆ ಅಧ್ಯಕ್ಷ ಆರೂರು ವಾಸುದೇವ್‌ರಾವ್ ಉದ್ಘಾಟಿಸಿದರು.

ಮೈಸೂರು, ಆ. 27- ಮೈಸೂರಿನ ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣ ಧಾಮದಲ್ಲಿ ವಿಶ್ವ ಹಿಂದೂ ಪರಿಷತ್‌ನ ಸಂಸ್ಥಾಪನಾ ದಿನ ಹಾಗೂ ಷಷ್ಠಿ ಪೂರ್ತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿ ಶ್ರೀ ವಿವೇಕ ಬಾಲೋದ್ಯಾನ ಪಬ್ಲಿಕ್ ಶಾಲೆಯ ಅಧ್ಯಕ್ಷ ಆರೂರು ವಾಸುದೇವ್ ರಾವ್ ಮಾತನಾಡಿ, ಭಾರತದಲ್ಲಿ ಧರ್ಮ ಜಾಗೃತಿಯಾಗುತ್ತಿದೆ ಅಂದರೆ ಅದು ವಿಶ್ವ ಹಿಂದೂ ಪರಿಷತ್ ನಂತಹ ಸಂಘಟನೆಗಳಿಂದ ಮಾತ್ರ ಸಾಧ್ಯ. 60 ವರ್ಷಗಳಿಂದ ಭಾರತದಲ್ಲಿ ಸಂಘಟನೆ, ಧರ್ಮ ಪ್ರಚಾರ, ಧರ್ಮ ಜಾಗೃತಿ ಮಾಡುತ್ತಿರುವ ವಿಶ್ವ ಹಿಂದೂ ಪರಿಷತ್ ಕಾರ್ಯ ಶ್ಲಾಘನೀಯ ಎಂದು ತಿಳಿಸಿದರು.

ದಿವ್ಯ ಸಾನ್ನಿಧ್ಯವನ್ನು ವಹಿಸಿದ್ದ ಮೇಲುಕೋಟೆಯ ವಂಗೀಪುರದ ನಂಬೀ ಮಠದ ಇಳೈ ಆಳ್ವಾರ್ ಸ್ವಾಮೀಜಿಯವರು ಮನೆ ಮನೆಗಳಲ್ಲಿ ಇಂದು ಧರ್ಮ ಉಳಿಸುವ ಕೆಲಸ ಮಾಡದಿದ್ದರೆ ನಾಳೆ ಭವಿಷ್ಯ ಕಷ್ಟವಾಗಲಿದೆ ಎಂದು ತಿಳಿಸಿದರು.

ಆಶೀರ್ವಚನ ನೀಡಿದ ಶ್ರೀ ಶಾರದಾ ವಿಶ್ವಭಾವೈಕ್ಯ ಆಶ್ರಮದ ಮಾತಾ ಅಮೋಘಮಯಿ ಅವರು ಭಗವದ್ಗೀತೆಯ ಸಂದೇಶ ತಿಳಿಸಿದರು. ಭಗವದ್ಗೀತೆಯನ್ನು ಕಲಿತವರು ಎಂದೂ ಸಮಾಜಘಾತುಕರಾಗಲಾರರು ಎಂದು ತಿಳಿಸಿದರು.

ವಿಶ್ವ ಹಿಂದೂ ಪರಿಷತ್ ಮೈಸೂರು ಅಧ್ಯಕ್ಷ ಮಹೇಶ್ ಕಾಮತ್ ಮಾತನಾಡಿ, ವಿಶ್ವ ಹಿಂದೂ ಪರಿಷತ್ ಹಲವು ವಿಭಾಗಗಳಲ್ಲಿ ಕೆಲಸ ಮಾಡುತ್ತಿದೆ. ಭಾರತವನ್ನು ಮತ್ತೊಮ್ಮೆ ಧಾರ್ಮಿಕವಾಗಿ ಸದೃಢ ಮಾಡಲು ಸಾರ್ವಜನಿಕರು ವಿಶ್ವ ಹಿಂದೂ ಪರಿಷತ್ ಜೊತೆ ಕೈಜೋಡಿಸಿ ಸಂಘಟನೆಯನ್ನು ಬಲಪಡಿಸಲು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಶ್ವ ಹಿಂದೂ ಪರಿಷತ್ ಉಪಾಧ್ಯಕ್ಷ ಜಗದೀಶ್ ಹೆಬ್ಬಾರ್, ಅಂಬಿಕಾ ಜೀವನ್, ಸುಬ್ರಹ್ಮಣ್ಯ ಜಟ್ಟಪ್ಪ, ಜನಾರ್ದನರಾವ್, ಮಧು ಶಂಕರ್, ಪುನೀತ್ ಜಿ ಕೂಡ್ಲೂರು, ಶಿವು, ವಿಜಯೇಂದ್ರ, ಶ್ರೀಮತಿ ಸುಪ್ರಭಾ ಎಸ್.ಭಟ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವಿವಿಧ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

ಮೈಸೂರು,ಆ.27-2024-25ನೇ ಸಾಲಿನ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಡಿಪ್ಲೊಮಾ ಪ್ರವೇಶಕ್ಕಾಗಿ ವಿವಿಧ ಕೋರ್ಸ್‌ಗಳಿಗೆ ಪ್ರವೇಶಾತಿ ಪ್ರಾರಂಭಿಸಿದ್ದು, ಎಸ್‌ಎಸ್‌ಎಲ್‌ಸಿ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಪಾಸಾದ ಅಭ್ಯರ್ಥಿಗಳಿಗೆ ಡಿಪ್ಲೊಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೊಮಾ ಇನ್ ಪ್ರಿಶಿಷನ್ ಮ್ಯಾನುಫ್ಯಾಕ್ಚರಿಂಗ್ ಹಾಗೂ ಡಿಪ್ಲೊಮೊ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ಕೋರ್ಸ್‌ಗಳು ಲಭ್ಯವಿದ್ದು, ಮೂರು ವರ್ಷ ಕೋರ್ಸ್ ಹಾಗೂ ಕಡ್ಡಾಯ ಒಂದು ವರ್ಷದ ಇಂಟರ್ನ್‌ಶಿಪ್ ತರಬೇತಿ ನೀಡಲಾಗುವುದು. ಅರ್ಜಿ ಸಲ್ಲಿಸಲು ಆ.31 ಕೊನೇ ದಿನ. ಹೆಚ್ಚಿನ ಮಾಹಿತಿಗಾಗಿ ಬೆಳಗೊಳ ಕೈಗಾರಿಕಾ ಪ್ರದೇಶದ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ದೂ.ಸಂ: 821-2582750 ಹಾಗೂ ಸಹಾಯವಾಣಿ: 155267, ಮೊ.ನಂ:99805 57205, 86601 39259, 9141630315, 9880068986 ಅಥವಾ https://gttc.karnataka.gov.in ಹಾಗೂ http://cetonline. karnataka.gov.in/kea ಅನ್ನು ಸಂಪರ್ಕಿಸಬಹುದು.

ನೈಪುಣ್ಯದಲ್ಲಿ ಸಡಗರದ ಕೃಷ್ಣ ಜನ್ಮಾಷ್ಟಮಿ...



ಮೈಸೂರಿನ ಕನಕದಾಸನಗರ (ದಟ್ಟಗಳ್ಳಿ)ದ ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಶಾಲೆಯಲ್ಲಿ ಎಲ್‌ಕೆಜಿ ವಿಭಾಗದ ಮಕ್ಕಳಿಂದ ಕೃಷ್ಣ ಜನ್ಮಾಷ್ಟಮಿಯನ್ನು ಸಡಗರದಿಂದ ಆಚರಿಸಲಾಯಿತು. ಕೃಷ್ಣ-ರಾಧೆಯರ ವಿವಿಧ ವೇಷ-ಭೂಷಣ ತೊಟ್ಟ ಚಿಣ್ಣರು, ಕೃಷ್ಣನ ಬಾಲ್ಯ ನೆನಪಿಸುವ ಆಟೋಟ ಮತ್ತು ನೃತ್ಯದಲ್ಲಿ ಭಾಗವಹಿಸಿದ್ದರು.

ಮೈಸೂರಲ್ಲಿ ಸದ್ದಿಲ್ಲದೆ ತಲೆ ಎತ್ತುತ್ತಿದೆ ಮತ್ತೊಂದು ಗಾಂಧಿ ಭವನ

ವಾರ್ತಾ ಮತ್ತು ಪ್ರಚಾರ ಇಲಾಖೆ ಉಸ್ತುವಾರಿಯಲ್ಲಿ ಹೊಸ ಜಿಲ್ಲಾಧಿಕಾರಿ ಆವರಣದಲ್ಲಿ ನಿರ್ಮಾಣ





ಮೈಸೂರಿನ ಸಿದ್ದಾರ್ಥನಗರದಲ್ಲಿರುವ ನೂತನ ಜಿಲ್ಲಾಧಿಕಾರಿ ಕಚೇರಿ ಸಮೀಪ ನೂತನವಾಗಿ ನಿರ್ಮಿಸಲಾಗುತ್ತಿರುವ ಗಾಂಧಿ ಭವನದ ಕಾಮಗಾರಿ ಭರದಿಂದ ಸಾಗಿದೆ.

ಮೈಸೂರು, ಆ.27(ಎಂಟಿವೈ)- ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ವಿಚಾರಧಾರೆಯನ್ನು ಮೈಸೂರು ನಿವಾಸಿಗಳು, ಪ್ರವಾಸಿಗರು ಹಾಗೂ ಗಾಂಧಿವಾದಿಗಳಿಗೆ ತಿಳಿಸುವ ನಿಟ್ಟಿನಲ್ಲಿ ಸಾಂಸ್ಕೃತಿಕ ನಗರಿ ಮೈಸೂರಲ್ಲಿ 'ಗಾಂಧಿಭವನ' ತ್ವರಿತಗತಿಯಲ್ಲಿ ನಿರ್ಮಾಣವಾಗುತ್ತಿದೆ.

ಸ್ವಾತಂತ್ರ್ಯ ಚಳುವಳಿಯಲ್ಲಿ ಸಾಂಸ್ಕೃತಿಕ ನಗರಿ ಮೈಸೂರಿನ ಹೆಗ್ಗುರುತು ಅಚ್ಚಳಿಯದೇ ಉಳಿದಿರುವ ಹಿನ್ನೆಲೆಯಲ್ಲಿ ಮೈಸೂರಲ್ಲಿ ಹೊಸ ಗಾಂಧಿಭವನ ನಿರ್ಮಾಣ ಬೇಡಿಕೆ ವ್ಯಕ್ತವಾಗಿತ್ತು. ಇದೀಗ ಸರ್ಕಾರ ಸದ್ದಿಲ್ಲದೆ ನಿರ್ಮಾಣ ಕಾರ್ಯ ತ್ವರಿತಗೊಳಿಸಿದ್ದು, ವರ್ಷಾಂತ್ಯಕ್ಕೆ ಪ್ರವಾಸಿಗರ ವೀಕ್ಷಣೆಗೆ ಲಭ್ಯವಾಗಲಿದೆ.

ಹೊಸ ಜಿಲ್ಲಾಧಿಕಾರಿ ಕಚೇರಿ ಬಳಿ ಗಾಂಧಿಭವನ: ಮೈಸೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ ಗಾಂಧಿ ಭವನ, ಅದರ ಆವರಣದಲ್ಲಿರುವ ಗಾಂಧೀಜಿ ಅವರ ವಿವಿಧ ಪ್ರತಿಮೆಗಳು ಗಮನ ಸೆಳೆಯುತ್ತಿವೆ. ಇದೀಗ ಮತ್ತೊಂದು ಸುಸಜ್ಜಿತ ಗಾಂಧಿಭವನ ನಿರ್ಮಾಣವಾಗುತ್ತಿದ್ದು, ಅವರ ವಿಚಾರಧಾರೆಗಳ ಅನಾವರಣ ಮಾಡಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೊದಲ ಬಾರಿ ಸಿಎಂ ಆಗಿದ್ದ ವೇಳೆ 2016-17ನೇ ಸಾಲಿನ ಬಜೆಟ್‌ನಲ್ಲಿ ಪ್ರತಿ ಜಿಲ್ಲಾ ಕೇಂದ್ರದಲ್ಲಿ ಗಾಂಧಿಭವನ ನಿರ್ಮಾಣಕ್ಕೆ ಹಣ ಮೀಸಲಿಟ್ಟಿದ್ದರು. ಈ ಹಿನ್ನೆಲೆಯಲ್ಲಿ ಸಿದ್ದಾರ್ಥನಗರದಲ್ಲಿರುವ ನೂತನ ಜಿಲ್ಲಾಧಿಕಾರಿ ಕಚೇರಿ ಪಕ್ಕದಲ್ಲಿ ಒಂದು ಎಕರೆ ಜಾಗವನ್ನು ಗಾಂಧಿಭವನ



ನಿರ್ಮಾಣಕ್ಕೆ ಗುರುತಿಸಲಾಗಿತ್ತು. ಇದೀಗ 3 ಕೋಟಿ ರೂ. ವೆಚ್ಚದಲ್ಲಿ 100X100 ಅಡಿ ವಿಸ್ತೀರ್ಣದಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ಶೇ.70ರಷ್ಟು ಕಾಮಗಾರಿ ಪೂರ್ಣಗೊಂಡಿದೆ.

ಉದ್ದೇಶ: ಈ ನೂತನ ಗಾಂಧಿ ಭವನದಲ್ಲಿ ಮಹಾತ್ಮ ಗಾಂಧಿಯವರ ಚಿಂತನೆಗಳು, ತತ್ವ, ಆದರ್ಶ, ಸ್ವಾತಂತ್ರ್ಯ ಹೋರಾಟಕ್ಕೆ ಅವರು ನೀಡಿದ ಕೊಡುಗೆ, ಅವರ ಸರಳ ಜೀವನ, ಸತ್ಯಾಗ್ರಹದಲ್ಲಿ ಪಾಲ್ಗೊಂಡಿದ್ದು, ಗುಡಿ ಕೈಗಾರಿಕೆಗಳಿಗೆ ನೀಡಿದ ಪ್ರೋತ್ಸಾಹ, ಮಕ್ಕಳು, ಮಹಿಳೆಯರು, ದಲಿತರು, ಹಿಂದುಳಿದ ವರ್ಗದವರ ಮೇಲಿದ್ದ ಕಾಳಜಿ ಸೇರಿದಂತೆ ಹೋರಾಟಗಳು ಹೀಗೆ ಅಪರೂಪದ ಮಾಹಿತಿಯನ್ನು ಅನಾವರಣಗೊಳಿಸುವುದರೊಂದಿಗೆ ಜನಸಾಮಾನ್ಯರಿಗೆ ದೇಶಕ್ಕೆ ಗಾಂಧೀಜಿ ನೀಡಿದ ಕೊಡುಗೆ ಬಗ್ಗೆ ತಿಳಿಸುವ ಉದ್ದೇಶದೊಂದಿಗೆ ಗಾಂಧಿ ಭವನ ನಿರ್ಮಿಸಲಾಗುತ್ತಿದೆ.

ಭವನದಲ್ಲಿ ಏನೇನು ಇರುತ್ತೆ: ನಿರ್ಮಾಣವಾಗುತ್ತಿರುವ ನೂತನ ಗಾಂಧಿಭವನದಲ್ಲಿ ಗ್ರಂಥಾಲಯ, ವಾಚನಾಲಯ, ವಿವಿಧೋದ್ದೇಶ ಸಭಾಂಗಣ, ತರಬೇತಿ ಕೇಂದ್ರ, ಗಾಂಧಿಜಿಯವರ ಜೀವನದ ವಿವಿಧ ಹಂತಗಳ ಪೋಟೋ ಗ್ಯಾಲರಿ, 100 ಜನ ಕುಳಿತುಕೊಳ್ಳಬಹುದಾದ ಸಭಾಂಗಣ, ಸುಂದರ ಆಕೃತಿಗಳ ಒಳಾಂಗಣ, ಕಚೇರಿ ಕೊಠಡಿ ಇರಲಿದೆ. ಕಟ್ಟಡದ ಹಿಂಭಾಗದಲ್ಲಿ ಶೌಚಾಲಯ, ವಿಕಲಚೇತನರಿಗೆ ರ್‍ಯಾಂಪ್ ವ್ಯವಸ್ಥೆ ಇರಲಿದೆ. ಕಟ್ಟಡದ ಮುಂಭಾಗದ ಆವರಣದಲ್ಲಿ ಹುಲ್ಲುಹಾಸಿನ ನಡುವೆ ಗಾಂಧಿಯವರ ವಿವಿಧ ಕಲಾಕೃತಿಗಳು, ಸ್ವಾತಂತ್ರ್ಯ ಸಂಗ್ರಾಮದ ಫೋಟೋಗಳು, ದೆಹಲಿಯ ಪಾರ್ಲಿಮೆಂಟ್ ಮುಂಭಾಗದಲ್ಲಿರುವಂತೆ ಗ್ಯಾರಾ ಮೂರ್ತಿ ಆಕೃತಿ ನಿರ್ಮಿಸಲಾಗುತ್ತದೆ. ನೂತನ ಗಾಂಧಿ ಭವನದಲ್ಲಿ ವರ್ಷವಿಡೀ ಚಟುವಟಿಕೆ ಹಾಗೂ ತರಬೇತಿ ಕಾರ್ಯಾಗಾರ ನಡೆಸಲು ಉದ್ದೇಶಿಸಲಾಗಿದೆ. ಸಭೆ ಸಮಾರಂಭಗಳನ್ನು ನಡೆಸಿ ಗಾಂಧೀಜಿಯವರ ವಿಚಾರಧಾರೆಗಳನ್ನು ಯುವ ಪೀಳಿಗೆಗೆ ತಲುಪಿಸುವ ಕಾರ್ಯ ಮಾಡಲಾಗುತ್ತದೆ.

ನಿರ್ವಹಣಾ ಸಮಿತಿ: ನೂತನ ಗಾಂಧಿಭವನದ ಕಟ್ಟಡ ನಿರ್ಮಾಣದ ಜವಾಬ್ದಾರಿಯನ್ನು ವಾರ್ತಾ ಮತ್ತು ಪ್ರಚಾರ ಇಲಾಖೆ ನೀಡಲಾಗಿದೆ. ಆದರೆ ಗಾಂಧಿ ಭವನ ನಿರ್ವಹಣೆಗಾಗಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾಮಟ್ಟದ ಸಮಿತಿ ರಚಿಸಲಾಗಿದ್ದು, ಜಿ.ಪಂ ಸಿಇಒ, ಪೊಲೀಸ್ ವರಿಷ್ಠಾಧಿಕಾರಿ ಸದಸ್ಯರಾಗಿರುತ್ತಾರೆ. ಜಿಲ್ಲಾ ವಾರ್ತಾಧಿಕಾರಿಗಳು ಸಮಿತಿ ಸದಸ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

ಸೆ.3ರಿಂದ 18ರವರೆಗೆ ಸಂಪೂರ್ಣ ಭಾಗವತ ಪ್ರವಚನ

ಮೈಸೂರು, ಆ.27-ನಗರದ ಶ್ರೀರಾಂಪುರದಲ್ಲಿರುವ ಉತ್ತರಾದಿ ಮಠಕ್ಕೆ ಸಂಬಂಧಿಸಿದ ಶ್ರೀ ವೆಂಕಟೇಶ್ವರ ಧ್ಯಾನ ಕೇಂದ್ರದಲ್ಲಿ ಸೆ.3ರಿಂದ 18ರವರೆಗೆ ಪ್ರತಿದಿನ ಸಂಜೆ 6ರಿಂದ 7ರವರೆಗೆ ಶ್ರೀ ಉತ್ತರಾದಿ ಮಠದ ಮಠಾಧೀಶರಾದ ಶ್ರೀ 1008 ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರ ಆಜ್ಞಾನಾಸಾರ ನಾಡಿನ ಪ್ರಸಿದ್ಧ ವಿದ್ವಾಂಸರಾದ ಪಂ.ಶ್ರೀ ಪುರುಷೋತ್ತಮಾಚಾರ್ಯ ಪುರೋಹಿತ್ ಅವರಿಂದ ಸಂಪೂರ್ಣ ಭಾಗವತ ಪ್ರವಚನವನ್ನು ಆಯೋಜಿಸಲಾಗಿದೆ.

ಸೆ.17ರಂದು ಮಂಗಳವಾರ ಬೆಳಿಗ್ಗೆ ಅನಂತಪದ್ಮನಾಭ ವ್ರತವನ್ನು ಏರ್ಪಡಿಸಲಾಗಿದೆ. ಸೆ.18ರಂದು ಬುಧವಾರ ಮಂಗಳ ಮಹೋತ್ಸವದ ಪರ್ವಕಾಲದಲ್ಲಿ ಬೆಳಿಗ್ಗೆ 'ವಾಸುದೇವ ಮಂತ್ರ ಹೋಮ'ವನ್ನು ಏರ್ಪಡಿಸಲಾಗಿದೆ. ಭಾಗವತವು ಪರಮ ಪಾವನ, ಪರಮ ಮಂಗಳವಾದ ಗ್ರಂಥ. ಇದರ ಶ್ರವಣವು ಸಕಲ ಅನಿಷ್ಟಗಳನ್ನು ನಿವೃತ್ತಿ ಮಾಡುವ, ಸಕಲ ಅಭೀಷ್ಟಗಳನ್ನು ನೀಡುವ, ವಿವಾಹ ಯೋಗವನ್ನೂ ನೀಡುವ ಗ್ರಂಥವಾಗಿದೆ.

ಭಾಗವತವು ಭಗವಂತನನ್ನು ಮೆಚ್ಚಿಸುವುದರಲ್ಲಿ ಎತ್ತಿದ ಕೈ. ಇಂತಹ 'ಪ್ರೋಷ್ಠಪದಿ ಸಂಪೂರ್ಣ ಭಾಗವತ ಪ್ರವಚನ' ಅತ್ಯಂತ ಸುದುರ್ಲಭ. ಅತ್ಯಂತ ಭಕ್ತಿಯ ಈ ಸಾಧನ ಪತ್ರದಲ್ಲಿ ತಾವೆಲ್ಲರೂ ಆಗಮಿಸಿ ಸಜ್ಜನರ ಈ ಸಮಾಗಮದಲ್ಲಿ ಸೇರಿಕೊಂಡು ಆ ಭಗವಂತನ, ದೇವತೆಗಳ, ಗುರುಗಳ ಕೃಪೆಗೆ ಪಾತ್ರರಾಗಿ ಭಕ್ತಿಯ ರಸದೌತಣವನ್ನು ಚೆನ್ನಾಗಿ ಆಸ್ವಾದಿಸಿ ವಿಷ್ಣುವಿನ ವಿಶೇಷ ಅನುಗ್ರಹವನ್ನು ಪಡೆಯಬೇಕೆಂದು ಶ್ರೀ ವೆಂಕಟೇಶ್ವರ ಧ್ಯಾನ ಕೇಂದ್ರದ ಪ್ರಧಾನ ವ್ಯವಸ್ಥಾಪಕರಾದ ಪಂ.ಹೇಮಂತಾಚಾರ್ಯ ಗುಡಿಯವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಮೊಬೈಲ್ 81472 05326 ಸಂಪರ್ಕಿಸಬಹುದು.

ನಾಳೆ ರಾಮಕೃಷ್ಣ ಹೆಗಡೆ ಜನ್ಮದಿನಾಚರಣೆ



ಮೈಸೂರು, ಆ.27-ಕೃಷ್ಣರಾಜ ಯುವ ಬಳಗದ ವತಿಯಿಂದ ಮಾಜಿ ಮುಖ್ಯಮಂತ್ರಿ, ರಾಷ್ಟ್ರೀಯ ನೇತಾರ ರಾಮಕೃಷ್ಣ ಹೆಗಡೆ ಜನ್ಮದಿನಾಚರಣೆ ಕಾರ್ಯಕ್ರಮ #1149 ವಿಷ್ಣುವರ್ಧನ ರಸ್ತೆ ಚಾಮರಾಜಪುರಂ ಕಚೇರಿಯಲ್ಲಿ ಆ.29ರ ಬೆಳಗ್ಗೆ 11 ಗಂಟೆಗೆ ಏರ್ಪಡಿಸಲಾಗಿದೆ.

ಮುಖ್ಯ ಅತಿಥಿಗಳಾಗಿ ಮಾಜಿ ಮೇಯರ್ ಸಂದೇಶ್ ಸ್ವಾಮಿ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣ ಗೌಡ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಹಿರಿಯ ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ, ಕಾಂಗ್ರೆಸ್ ಯುವ ಮುಖಂಡ ಎನ್.ಎಂ.ನವೀನ್‌ಕುಮಾರ್, ಪಾಲಿಕೆ ಮಾಜಿ ಸದಸ್ಯ ಮಾ.ವಿ.ರಾಮ ಪ್ರಸಾದ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಕೆ.ಆರ್.ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಜೆಡಿಎಸ್ ನಗರ ಕಾರ್ಯಾಧ್ಯಕ್ಷ ಪ್ರಕಾಶ್ ಪ್ರಿಯದರ್ಶನ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್ ಇನ್ನಿತರರು ಭಾಗವಹಿಸಲಿದ್ದಾರೆ

ಮಕ್ಕಳ ಚಿತ್ರಕಲಾ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ



ಚಿತ್ರಕಲಾ ಸ್ಪರ್ಧೆ ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು.

ಮೈಸೂರು, ಆ. 27- ಮೈಸೂರಿನ ಕುವೆಂಪುನಗರದ ಆದಿಚುಂಚನಗಿರಿ ರಸ್ತೆಯಲ್ಲಿರುವ ಅಥರ್ವ ಲೈಫ್ ಸ್ಕಿಲ್ಸ್ ಫೌಂಡೇಶನ್ ವತಿಯಿಂದ ಆಯೋಜಿಸಿದ್ದ ಭಾರತದ ಧ್ವಜ ಹಾಗೂ ಸ್ವಾತಂತ್ರ್ಯ ಹೋರಾಟಗಾರರ ಚಿತ್ರ ಬಿಡಿಸುವ ಚಿತ್ರಕಲಾ ಸ್ಪರ್ಧೆಯಲ್ಲಿ 50ಕ್ಕೂ ಹೆಚ್ಚು ಮಕ್ಕಳು ಸ್ಪರ್ಧಿಸಿದ್ದು, ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಎಲ್‌ಕೆಜಿ ವಿಭಾಗ: ಸುದ್ದಿ ಮುಕ್ತಕ (ಪ್ರಥಮ), ಈಶನ ಬಿ.ಗೌಡ (ದ್ವಿತೀಯ). 1ನೇ ತರಗತಿಯಿಂದ 3ನೇ ತರಗತಿಯ ವಿಭಾಗ: ತನ್ವಿ ಎಸ್.ಪಿ. (ಪ್ರಥಮ), ವಿಶಾಲ್ ಆರ್.ಗೌಡ (ದ್ವಿತೀಯ), ಆರ್ಣ ಎಂ.ಎ (ತೃತೀಯ), 4ನೇ ತರಗತಿಯಿಂದ 6ನೇ ತರಗತಿಯ ವಿಭಾಗ: ಧೀರಜ್ (ಪ್ರಥಮ), ಅದ್ವೈತ ಜಿ. (ದ್ವಿತೀಯ), ವಿಪ್ರತ (ತೃತೀಯ). 7ನೇ ತರಗತಿಯಿಂದ 8ನೇ ತರಗತಿ ವಿಭಾಗದಲ್ಲಿ ವಿಜೇತರಾದ ನಿತ್ಯಕ್ಲಿನ ಶಿಲ್ಪ ಅವರಿಗೆ ಬಹುಮಾನ ವಿತರಿಸಲಾಯಿತು. ಇದೇ ಸಂದರ್ಭದಲ್ಲಿ ಸ್ಪರ್ಧಿಸಿದ್ದ ಎಲ್ಲಾ ಸ್ಪರ್ಧಾಳುಗಳಿಗೆ ನೆನಪಿನ ಕಾಣಿಕೆ ಹಾಗೂ ಪ್ರಮಾಣ ಪತ್ರ ವಿತರಿಸಲಾಯಿತು. ಅಥರ್ವ ಲೈಫ್ ಸ್ಕಿಲ್ಸ್ ಫೌಂಡೇಶನ್ ಅಧ್ಯಕ್ಷೆ ಪುಷ್ಪ, ಹಿರಿಯ ಪತ್ರಕರ್ತ ಅನಿಲ್‌ಕುಮಾರ್, ರುಕ್ಮಿಣಿ, ಮೇನಕ, ಲಾವಣ್ಯ, ಅನುಷಾ, ಸನತ್, ಚಾರುಲತಾ ಪ್ರಿಯಾಂಕ ಹಾಗೂ ಇನ್ನಿತರರು ಹಾಜರಿದ್ದರು.

ರಂಗಭೂಮಿ ಕಲಾವಿದರಿಂದ ಅರ್ಜಿ ಆಹ್ವಾನ

ಮೈಸೂರು,ಆ.27-ರಂಗಾಯಣವು ಸಿದ್ಧಪಡಿಸುವ ನಾಟಕಗಳಿಗೆ ಹಾಗೂ ರಂಗ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ರಂಗಭೂಮಿಯಲ್ಲಿ ಅನುಭವವಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ರಾಷ್ಟ್ರೀಯ ನಾಟಕ ಶಾಲೆಯ ಪದವಿ/ರಾಜ್ಯದ ಯಾವುದೇ ರಂಗಶಿಕ್ಷಣ ಕೇಂದ್ರದಿಂದ ರಂಗಶಿಕ್ಷಣ ಪದವಿ/ಡಿಪ್ಲೊಮಾ ಪಡೆದವರಾಗಿರಬೇಕು. ರಂಗಭೂಮಿ ಅನುಭವ ಕಡ್ಡಾಯವಾಗಿದ್ದು, ಅರ್ಹ 22ರಿಂದ 35 ವರ್ಷದೊಳಗಿನ ವಯೋಮಿತಿಯುಳ್ಳ ಕಲಾವಿದರನ್ನು ರಂಗಾಯಣದ ನಿಯಮಾನುಸಾರ ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಅರ್ಜಿ ನಮೂನೆಯನ್ನು www. rangayanamysore.kar nataka.gov.inನಿಂದ ಡೌನ್‌ಲೋಡ್ ಮಾಡಿ ಕೊಂಡು ರಂಗಾಯಣದ ನಿರ್ದೇಶಕರ ವಿಳಾಸಕ್ಕೆ ಅರ್ಜಿ ಸಲ್ಲಿಸಬಹುದು.

ದಸರಾ ಸಾಂಸ್ಕೃತಿಕ ಕಾರ್ಯಕ್ರಮ; ಕಲಾವಿದರು, ಕಲಾತಂಡಗಳಿಂದ ಅರ್ಜಿ ಆಹ್ವಾನ

ಮೈಸೂರು,ಆ.27(ಪಿಎಂ)- ಪ್ರಸಕ್ತ ಸಾಲಿನ ದಸರಾ ಮಹೋತ್ಸವದಲ್ಲಿ ಅರಮನೆ ಹಾಗೂ ಇತರೆ ವೇದಿಕೆಗಳಲ್ಲಿ ವಿವಿಧ ಕಲಾ ಪ್ರಕಾರಗಳ ಸಾಂಸ್ಕೃತಿಕ ಕಾರ್ಯಕ್ರಮ ನೀಡಲು ಕಲಾವಿದರು ಹಾಗೂ ಕಲಾ ತಂಡಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆ.27ರಿಂದ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಸೆ.10 ಅರ್ಜಿ ಸಲ್ಲಿಸಲು ಕೊನೆ ದಿನವಾಗಿದೆ. ಅರ್ಜಿಗಳನ್ನು ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಕಲಾಮಂದಿರ, ವಿನೋಬಾ ರಸ್ತೆ, ಮೈಸೂರು-570005 ಇಲ್ಲಿಗೆ ನೇರವಾಗಿ ಅಥವಾ ಅಂಚೆ ಮೂಲಕ ಅರ್ಜಿ ಸಲ್ಲಿಸಬಹುದು. ಇ ಮೇಲ್ ಮೂಲಕವೂ (ccdasara23@gamail.com) ಅರ್ಜಿ ಸಲ್ಲಿಸಲು ಅವಕಾಶವಿದೆ. ಹೆಚ್ಚಿನ ಮಾಹಿತಿಗೆ ಕಚೇರಿ ದೂರವಾಣಿ ಸಂಖ್ಯೆ: 0821-2513225ಗೆ ಸಂಪರ್ಕಿಸಬಹುದು. ಕಲಾವಿದರಿಗೆ ಕಾರ್ಯಕ್ರಮ ಕೊಡಿಸುವುದಾಗಿ ಯಾವುದೇ ಮಧ್ಯವರ್ತಿಗಳು ಸಂಪರ್ಕಿಸಿ, ಹಣದ ಬೇಡಿಕೆ ಇಟ್ಟಲ್ಲಿ ತಕ್ಷಣ ಮಾಹಿತಿ ಸಮೇತ ಮೇಲ್ಕಾಣಿಸಿದ ಸಹಾಯಕ ನಿರ್ದೇಶಕರ ಕಚೇರಿಗೆ ದೂರು ಸಲ್ಲಿಸಲು ಕೋರಿರುವುದಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರೂ ಆದ ದಸರಾ ಸಾಂಸ್ಕೃತಿಕ ಉಪಸಮಿತಿ ಕಾರ್ಯದರ್ಶಿ ಸುದರ್ಶನ್ ತಿಳಿಸಿದ್ದಾರೆ.

ಆ.31ರಂದು 'ಕೃಷ್ಣಾರ್ಪಣಮಸ್ತು' ನೃತ್ಯ ರೂಪಕ

ಮೈಸೂರು:ಶ್ರೀ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಗೋಕುಲಂನ ಶ್ರೀ ಕೃಷ್ಣ ಸೇವಾ ಸಮಿತಿ ಚಾರಿಟಬಲ್ ಟ್ರಸ್ಟ್‌ನ ಆಳ್ವಾರ್ ಕಲಾಭವನದಲ್ಲಿ ಆ.31ರಂದು ಸಂಜೆ 6.30ಕ್ಕೆ "ಕೃಷ್ಣಾರ್ಪಣಮಸ್ತು" ನೃತ್ಯ ರೂಪಕವನ್ನು ಡಾ ಕೆ.ಕುಮಾರ್ ಅವರ ನೃತ್ಯ ನಿರ್ದೇಶನದಲ್ಲಿ ನಡೆಸಿಕೊಡಲಿದ್ದಾರೆ.

'ರಾಜಭವನ ಚಲೋ'ದಲ್ಲಿ ಮೈಸೂರಿನ ಸಾವಿರಾರು ಮಂದಿ ಭಾಗಿ





ಮುಖ್ಯಮಂತ್ರಿ ಸಿದ್ದರಾಮಯ್ಯನವರ ತೇಜೋವಧೆ ಖಂಡಿಸಿ ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ, ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟ ಹಾಗೂ ಸಿದ್ದರಾಮಯ್ಯನವರ ಅಭಿಮಾನಿಗಳ ಬಳಗದ ಸಹಯೋಗದಲ್ಲಿ ಬೆಂಗಳೂರಿನಲ್ಲಿ ಮಂಗಳವಾರ ಫ್ರೀಡಂ ಪಾರ್ಕ್‌ನಿಂದ 'ರಾಜಭವನ ಚಲೋ' ನಡೆಸಲಾಯಿತು. ಅದರಲ್ಲಿ ಮೈಸೂರಿನ ಸಾವಿರಾರು ಮಂದಿ ಭಾಗಿಯಾಗಿದ್ದರು.

ಸಮನ್ಸ್ ನೀಡದೆ ಪತ್ರಕರ್ತರಿಬ್ಬರನ್ನು ಬಲವಂತವಾಗಿ ನ್ಯಾಯಾಲಯಕ್ಕೆ ಹಾಜರುಪಡಿಸಿದ ಪೊಲೀಸರು

ಎಸ್ಪಿ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟಿಸಿದ ಪತ್ರಕರ್ತರು



ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟಿಸಿದ ಪತ್ರಕರ್ತರು.

ಮಂಡ್ಯ, ಆ.27– ಪತ್ರಕರ್ತರಿಬ್ಬರನ್ನು ಯಾವುದೇ ಸಮನ್ಸ್ ನೀಡದೇ ಅಕ್ರಮವಾಗಿ ವಶಕ್ಕೆ ಪಡೆದು ನ್ಯಾಯಾಲಯಕ್ಕೆ ಹಾಜರುಪಡಿಸುವ ಮೂಲಕ ಮಾನಸಿಕ ದೌರ್ಜನ್ಯ ನಡೆಸಿದ ಪ್ರಕರಣವನ್ನು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ನೇತೃತ್ವದಲ್ಲಿ ಪದಾಧಿಕಾರಿಗಳು ಹಾಗೂ ಸದಸ್ಯರು ಖಂಡಿಸಿ, ಎಸ್ಪಿ ಕಚೇರಿಗೆ ಮುತ್ತಿಗೆ ಹಾಕಿ ಮನವಿ ಸಲ್ಲಿಸಿದರು.

ಮಂಗಳವಾರ ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಗೆ ತೆರಳಿದ ಪತ್ರಕರ್ತರ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಅವರಿಗೆ ಮನವಿ ಸಲ್ಲಿಸಿ ಪತ್ರಕರ್ತರಿಬ್ಬರನ್ನು ಮೇಲಾಧಿಕಾರಿಗಳು ಕರೆಯುತ್ತಿದ್ದಾರೆಂದು ಸುಳ್ಳು ಹೇಳಿ ಅಕ್ರಮವಾಗಿ ವಶಕ್ಕೆ ಪಡೆದ ಪೊಲೀಸ್ ಅಧಿಕಾರಿಗಳು ಹಾಗೂ ಪೇದೆಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯರಾದ ರಾಜ್ಯಮಟ್ಟದ ಪತ್ರಿಕೆಯ ಜಿಲ್ಲಾ ವರದಿಗಾರ ಹಾಗೂ ಪ್ರಾದೇಶಿಕ ಪತ್ರಿಕೆಯ ಜಿಲ್ಲಾ ವರದಿಗಾರರ ಸಮನ್ಸ್ ನೀಡದೆ ಹಾಗೂ ಬಂಧನದ ವಾರೆಂಟ್ ಇಲ್ಲದೆ ಅಕ್ರಮವಾಗಿ ವಶಕ್ಕೆ ಪಡೆದು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ. ಇದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯದರ್ಶಿ ಮತ್ತೀಕೆರೆ ಜಯರಾಂ ಮಾತನಾಡಿ, ಇಬ್ಬರು ಪತ್ರಕರ್ತರು ಯಾವುದೇ ಕೊಲೆ ಆರೋಪಿಗಳಲ್ಲ. ಆದರೂ ಪೊಲೀಸರು ಅವರನ್ನು ವಶಕ್ಕೆ ಪಡೆದು ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದು, ಎಷ್ಟು ಸರಿ?, ನ್ಯಾಯಾಲಯವೇ ಅವರಿಗೆ ಸಮನ್ಸ್ ಅನ್ನು ಸೆಪ್ಟೆಂಬರ್ ತಿಂಗಳಿಗೆ ಹೊರಡಿಸಿದ್ದರೂ ಯಾವ ಒತ್ತಡಕ್ಕೆ ಮಣಿದು ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದೀರಾ ಎಂದು ಪ್ರಶ್ನಿಸಿದರು.

ಇಬ್ಬರು ಪತ್ರಕರ್ತರ ಪೈಕಿ ಒಬ್ಬರಿಗೆ ಬಂಧನ ವಾರಂಟ್ ಜಾರಿಯಾಗಿಲ್ಲ. ಮತ್ತೊಬ್ಬರಿಗೆ ಮೊದಲ ಮೂರು ಸಮನ್ಸ್ ಕೂಡ ತಲುಪಿಲ್ಲ. ಹೀಗಿದ್ದರೂ ಹೇಗೆ ನೀವು ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದೀರಾ. ಹಾಗಾದರೆ ಜಿಲ್ಲೆಯಲ್ಲಿ ಈ ರೀತಿ ಪ್ರಕರಣದಲ್ಲಿ ಪೊಲೀಸರು ಎಷ್ಟು ಪಾರದರ್ಶಕತೆಯಿಂದ ನಡೆದುಕೊಂಡಿದ್ದಾರೆ ಎಂಬ ಬಗ್ಗೆ ಪತ್ರಕರ್ತರಿಗೆ ದಾಖಲೆ ಒದಗಿಸಬೇಕು ಎಂದು ಆಗ್ರಹಿಸಿದರು.

ಸಂಘದ ಮನವಿ ಸ್ವೀಕರಿಸಿದ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಮಾತನಾಡಿ, ಹಲವು ಜಿಲ್ಲೆಗಳಲ್ಲಿ ಪೊಲೀಸ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ ನಾನು ಪತ್ರಕರ್ತರ ಮೇಲೆ ಅಪಾರ ಗೌರವ ಇಟ್ಟುಕೊಂಡಿದ್ದೇನೆ. ಯಾರೋ ಒಬ್ಬ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಗಳ ಕರ್ತವ್ಯ ಲೋಪದಿಂದ ಇಷ್ಟೆಲ್ಲ ಬೆಳವಣಿಗೆ ನಡೆದಿದೆ. ಇದು ಖಂಡನೀಯವಾಗಿದ್ದು, ಮುಂದೆ ಈ ರೀತಿಯ ಬೇಜವಾಬ್ದಾರಿ ಘಟನೆಗಳು ಮರುಕಳಿಸದಂತೆ ಮುನ್ನೆಚ್ಚರಿಕೆ ವಹಿಸಲಾಗುವುದು. ಇಬ್ಬರು ಪತ್ರಕರ್ತರ ವಿಚಾರದಲ್ಲಿ ನಮ್ಮ ಸಿಬ್ಬಂದಿಗಳು ಹಾಗೆ ನಡೆದುಕೊಳ್ಳಬಾರದಿತ್ತು. ಅವರ ಮನಸ್ಸಿಗೆ ಬೇಸರವಾಗಿದ್ದರೆ ಇಲಾಖೆ ವತಿಯಿಂದ ಕ್ಷಮೆ ಯಾಚಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ಪಿ. ಪ್ರಕಾಶ್, ಉಪಾಧ್ಯಕ್ಷ ನವೀನ್‌ಕುಮಾರ್, ಪ್ರಧಾನ ಕಾರ್ಯದರ್ಶಿ ಆನಂದ್, ಮಾಜಿ ಅಧ್ಯಕ್ಷ ಎಸ್.ಕೃಷ್ಣಸ್ವರ್ಣಸಂದ್ರ, ಕೆ.ಎನ್.ರವಿ, ನವೀನ್ ಚಿಕ್ಕಮಂಡ್ಯ, ಕಾರ್ಯದರ್ಶಿ ಲೋಕೇಶ್ ಚಿನಕುರಳಿ, ರಾಷ್ಟ್ರೀಯ ಮಂಡಳಿ ಸದಸ್ಯ ಜೆ.ಎಂ.ಬಾಲಕೃಷ್ಣ, ಹಿರಿಯ ಪತ್ರಕರ್ತ ಬಸವರಾಜ ಹೆಗ್ಗಡೆ, ನಿರ್ದೇಶಕರಾದ ಶ್ರೀನಿವಾಸ್, ಆನಂದ್, ನಂದನ್, ಚನ್ನಮಾದೇಗೌಡ, ರಾಘವೇಂದ್ರ, ನಾಗೇಶ್, ಪ್ರಶಾಂತ್, ಅಶೋಕ್, ಮದ್ದೂರು ಪುಟ್ಟಸ್ವಾಮಿ, ಶ್ರೀರಂಗಪಟ್ಟಣ ಗಂಜಾಂ ಮಂಜು, ಅಣ್ಣೂರು ಸತೀಶ್, ಮಳವಳ್ಳಿಯ ಲಿಂಗರಾಜು, ಬೆಳಕವಾಡಿ ಉಮೇಶ್ ಸೇರಿದಂತೆ ನೂರಾರು ಪತ್ರಕರ್ತರು ಭಾಗವಹಿಸಿದ್ದರು.

ಬೀದಿ ನಾಯಿಗಳ ದಾಳಿ: 20ಕ್ಕೂ ಅಧಿಕ ಕುರಿಗಳು ಬಲಿ



ನಾಯಿ ದಾಳಿಯಿಂದ ಸಾವನ್ನಪ್ಪಿರುವ ಕುರಿಗಳು.

ಪಾಂಡವಪುರ, ಆ.27– ಮನೆ ಮುಂದೆ ಕಟ್ಟಿಹಾಕಿದ್ದ ಕುರಿ ಗುಂಪಿನ ಮೇಲೆ ಬೀದಿ ನಾಯಿಗಳ ಗುಂಪು ದಾಳಿ ನಡೆಸಿದ ಪರಿಣಾಮ 20ಕ್ಕೂ ಅಧಿಕ ಕುರಿಗಳು ಸಾವನ್ನಪ್ಪಿರುವ ಘಟನೆ ತಾಲೂಕಿನ ಸುಂಕಾತೊಣ್ಣೂರು ಗ್ರಾಮದಲ್ಲಿ ಮಂಗಳವಾರ ನಡೆದಿದೆ.

ಗ್ರಾಮದ ಶಿವಣ್ಣೇಗೌಡ ಎಂಬುವರಿಗೆ ಸೇರಿ 20ಕ್ಕೂ ಅಧಿಕ ಕುರಿಗಳು ಸಾವನ್ನಪ್ಪಿದ್ದು, ಲಕ್ಷಾಂತರ ರೂ.ನಷ್ಟವಾಗಿದೆ. ರೈತ ಶಿವಣ್ಣೇಗೌಡ ಅವರು ತಮ್ಮ ಮನೆಯ ಮುಂದೆ ಕುರಿಗಳನ್ನು ಕಟ್ಟಿ ಬೆಳಿಗ್ಗೆಯೇ ಇಡೀ ಕುಟುಂಬ ಹೂ ಕುಯ್ಯಲು ಜಮೀನಿಗೆ ತೆರಳಿದ್ದಾರೆ. ಈ ವೇಳೆ ಬೀದಿ ನಾಯಿಗಳ ಹಿಂಡು ಕುರಿಗಳ ಗುಂಪಿನ ಮೇಲೆ ದಾಳಿ ನಡೆಸಿವೆ. ನಾಯಿಗಳ ದಾಳಿಯಿಂದ 20ಕ್ಕೂ ಅಧಿಕ ಕುರಿಗಳು ಸ್ಥಳದಲ್ಲಿಯೇ ಸಾವನ್ನಪ್ಪಿವೆ. ನಾಯಿ ದಾಳಿಯಿಂದ ಕುರಿಗಳ ಕಿರುಚಾಟ ಕೇಳಿ ಅಕ್ಕಪಕ್ಕದ ಮನೆಯವರು ನೋಡಿ ನಾಯಿಗಳನ್ನು ಓಡಿಸಿದ್ದಾರೆ.

ಅಷ್ಟರಲ್ಲಿ 20ಕ್ಕೂ ಅಧಿಕ ಕುರಿಗಳು ಸಾವನ್ನಪ್ಪಿದ್ದು, ಹಲವು ಗಾಯಗೊಂಡಿವೆ. ವಿಷಯ ತಿಳಿದ ಗ್ರಾಪಂ ಮಾಜಿ ಅಧ್ಯಕ್ಷ ಜೆ. ದೇವೇಗೌಡ ಸ್ಥಳಕ್ಕೆ ಆಗಮಿಸಿ ವೀಕ್ಷಿಸಿದರು. ರೈತ ಶಿವಣ್ಣೇಗೌಡ ಅವರು ಕುರಿ ಗಳನ್ನೇ ನೆಚ್ಚಿಕೊಂಡು ಜೀವನ ನಡೆಸು ತ್ತಿದ್ದರು. ಘಟನೆಯಿಂದ ಆ ಕುಟುಂಬಕ್ಕೆ ಲಕ್ಷಾಂತರ ರೂ.ನಷ್ಟವಾಗಿದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಕುಟುಂಬಕ್ಕೆ ಸೂಕ್ತ ಪರಿಹಾರ ದೊರಕಿಸಿ ಕೊಡಬೇಕೆಂದು ಒತ್ತಾಯಿಸಿದರು.

ಪಶು ವೈದ್ಯಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ಸ್ಥಳದಲ್ಲಿಯೇ ಕುರಿಗಳ ಪಂಚನಾಮೆ ನಡೆಸಿದರು, ಇಲಾಖೆಯಿಂದ ರೈತ ಶಿವಣ್ಣೇಗೌಡ ಅವರ ಕುಟುಂಬಕ್ಕೆ ಸೂಕ್ತ ಪರಿಹಾರ ದೊರಕಿಸಿಕೊಡಲಾಗುವುದು ಎಂದು ಭವರಸೆ ನೀಡಿದರು. ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ದೂರವಾಣಿ ಕರೆ ಮಾಡಿ ರೈತ ಶಿವಣ್ಣೇಗೌಡರಿಗೆ ಸಾಂತ್ವನ ಹೇಳಿದರು. ಪ್ರಕರಣ ಸಂಬಂಧವಾಗಿ ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಪರಿಹಾರ ದೊರಕಿಸಿಕೊಡಲಾಗುವುದು ಎಂದು ಭರವಸೆ ನೀಡಿದರು. ರೈತ ನಾಯಕಿ ಸುನೀತ ಪುಟ್ಟಣ್ಣಯ್ಯ ಭೇಟಿ ಕೊಟ್ಟು ಕುರಿ ಮಾಲೀಕ ರೈತ ಶಿವಣ್ಣೇಗೌಡ ಅವರಿಗೆ ಸಾಂತ್ವನ ಹೇಳಿದರು.


ಶತಾಯುಷಿ ವೆಂಕಟಲಕ್ಷ್ಮಮ್ಮ ನಿಧನ



ಕಿಕ್ಕೇರಿ, ಆ.27– ಪಟ್ಟಣದ ವಿಪ್ರ ಸಮಾಜದ ಹಿರಿಯ ನಾಗರಿಕರಾದ ಶತಾಯುಷಿ ವೆಂಕಟಲಕ್ಷ್ಮಮ್ಮ(102) ಸೋಮವಾರ ನಿಧನರಾದರು. ಮೃತರು 3 ದಶಕಗಳ ಹಿಂದೆ ಗುಂಡಪ್ಪ ಹೋಟೆಲ್ ಖಾಲಿ ಬೆಣ್ಣೆ ದೋಸೆ ಎಂದು ರಾಜ್ಯಾದ್ಯಂತ ಪ್ರಸಿದ್ಧಿ ಪಡೆದಿದ್ದ ದಿವಂಗತ ಗುಂಡಪ್ಪನವರ ಪತ್ನಿಯಾಗಿದ್ದಾರೆ.

ಮೈಸೂರು–ಶಿವಮೊಗ್ಗ ಮಾರ್ಗ ಓಡಾಡುವ ಸಾರಿಗೆ, ಖಾಸಗಿ ವಾಹನಗಳ ಸವಾರರು, ಪ್ರಯಾಣಿಕರು ದೋಸೆ ಸವಿಯಲು ಇವರ ಹೋಟೆಲಿಗೆ ಆಗಮಿಸುತ್ತಿದ್ದರು. ಎಲ್ಲರಿಗೂ ಪ್ರೀತಿಯಿಂದ ಬೆಣ್ಣೆ ದೋಸೆ ಸವಿ ಉಣಬಡಿಸುತ್ತಿದ್ದರು. ನೂರಾರು ಕಾರ್ಮಿಕರಿಗೆ ಆಶ್ರಯ ದಾತರಾಗಿದ್ದರು. ಮೃತರಿಗೆ ಇಬ್ಬರು ಪುತ್ರರು, ಮೂವರು ಪುತ್ರಿಯರಿ ದ್ದಾರೆ. ಕೋಡಿಮಾರನಹಳ್ಳಿಯ ಮೃತರ ಜಮೀನಿನಲ್ಲಿ ಮಂಗಳವಾರ ಅಂತ್ಯಕ್ರಿಯೆ ನಡೆಯಿತು.

ರಾಮಶೆಟ್ಟಿ



ಕೆ.ಆರ್.ಪೇಟೆ, ಆ.27– ತಾಲೂಕಿನ ಅಗ್ರಹಾರಬಾಚಹಳ್ಳಿ ಗ್ರಾಮದ ಶಿವಜ್ಯೋತಿಪಣ ಸಮುದಾಯದ ಹಿರಿಯ ಮುಖಂಡರು, ದಿನಸಿ ವ್ಯಾಪಾರಿಗಳಾದ ರಾಮಶೆಟ್ಟಿ (75) ಮಂಗಳವಾರ ರಾತ್ರಿ ನಿಧನರಾದರು. ಮೃತರು ಪತ್ರಕರ್ತರು ಹಾಗೂ ಗ್ರಾಪಂ ಸದಸ್ಯ ಆರ್.ಶ್ರೀನಿವಾಸ್, ರಂಗಭೂಮಿ ಕಲಾವಿದ ಅಬಾರಾಶೆ ಚಂದ್ರಶೇಖರ್ ಸೇರಿದಂತೆ ಮೂವರು ಪುತ್ರರು, ಮೂವರು ಪುತ್ರಿಯರು ಮತ್ತು ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಆ.28 (ಬುಧವಾರ)ರ ಮಧ್ಯಾಹ್ನ 1.30ಕ್ಕೆ ಹುಟ್ಟೂರು ಅಗ್ರಹಾರ ಬಾಚಹಳ್ಳಿ ಗ್ರಾಮದ ಮೃತರ ತೋಟದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೃತರ ನಿಧನಕ್ಕೆ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘ, ತಾಲೂಕು ಗ್ರಾಪಂ ಸದಸ್ಯರ ಒಕ್ಕೂಟ, ವಿವಿಧ ಗಣ್ಯರು ಸಂತಾಪ ಸೂಚಿಸಿದ್ದಾರೆ.

ಲಕ್ಷ್ಮಮ್ಮ



ಶ್ರೀರಂಗಪಟ್ಟಣ, ಆ.27– ತಾಲೂಕಿನ ಪಾಲಹಳ್ಳಿ ಬಿಜೆಪಿ ಮುಖಂಡ ಟೈಲರ್ ತಿಮ್ಮರಾಜು ಅವರ ತಾಯಿ ಲಕ್ಷ್ಮಮ್ಮ (85) ನಿಧನರಾಗಿದ್ದಾರೆ. ದಿವಂಗತರು 6 ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಬುಧವಾರ (ಆ.28) ಬೆಳಗ್ಗೆ 11 ಗಂಟೆಗೆ ಪಾಲಹಳ್ಳಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಬೈಕ್ ಡಿಕ್ಕಿ: ಪಾದಚಾರಿ ಸಾವು



ಭಾರತೀನಗರ, ಆ.27– ಬೈಕೊಂದು ಡಿಕ್ಕಿ ಹೊಡೆದ ಪರಿಣಾಮ ಪಾದಚಾರಿಯೊಬ್ಬರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಇಲ್ಲಿಗೆ ಸಮೀಪದ ಮುಡೀನಹಳ್ಳಿ ಗೇಟ್ ಬಳಿ ಜರುಗಿದೆ.

ತೊರೆಬೊಮ್ಮನಹಳ್ಳಿ ಗ್ರಾಮದ ಟಿ.ಸಿ.ಶ್ರೀನಿವಾಸ್ (46) ಸ್ಥಳದಲ್ಲೇ ಸಾವನ್ನಪ್ಪಿದ ದುರ್ದೈವಿ. ಶ್ರೀನಿವಾಸ್ ಅವರು ಮುಡೀನಹಳ್ಳಿ ಗೇಟ್ ಬಳಿ ಇರುವ ಶನಿ ದೇವಾಲಯಕ್ಕೆ ಹೋಗಿ ತಮ್ಮ ಗ್ರಾಮವಾದ ತೊರೆಬೊಮ್ಮನಹಳ್ಳಿಗೆ ನಡೆದುಕೊಂಡು ಬರುತ್ತಿದ್ದಾಗ ಹಿಂದಿನಿಂದ ಬಂದ ಬೈಕ್ ಡಿಕ್ಕಿಹೊಡೆದು ಪರಾರಿಯಾಗಿದೆ. ಇದರಿಂದ ಸ್ಥಳದಲ್ಲೇ ಕುಸಿದು ಬಿದ್ದು ಪ್ರಾಣಬಿಟ್ಟಿದ್ದಾರೆ. ಬೈಕ್ ಸವಾರರು ಸಹ ಕೆಳಗೆ ಬಿದ್ದಿದ್ದಾರೆ. ಆದರೆ ಪ್ರಾಣಾಪಾಯದಲ್ಲಿದ್ದ ಶ್ರೀನಿವಾಸ್ ಅವರನ್ನು ಆಸ್ಪತ್ರೆಗೆ ದಾಖಲಿಸುವ ಮಾನವೀಯತೆ ತೋರದೆ ಸ್ಥಳದಿಂದ ಪರಾರಿಯಾಗಿದ್ದಾರೆ. ವಿಷಯ ತಿಳಿದ ಕೆ.ಎಂ.ದೊಡ್ಡಿ ಇನ್ಸ್‌ಪೆಕ್ಟರ್ ಆನಂದ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿ ಬೈಕ್ ಪತ್ತೆಗಾಗಿ ಬಲೆ ಬೀಸಿದ್ದಾರೆ.

ಈ ಸಂಬಂಧ ಕೆ.ಎಂ.ದೊಡ್ಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಶ್ರೀನಿವಾಸ್ ಅವರ ಮೃತದೇಹವನ್ನು ಕೆ.ಎಂ.ದೊಡ್ಡಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಒಪ್ಪಿಸಿದ್ದಾರೆ.

ಪರೀಕ್ಷಾ ಕೇಂದ್ರಗಳಿಗೆ ಡಿಸಿ ಭೇಟಿ

ಮಂಡ್ಯ, ಆ.27– ಕರ್ನಾಟಕ ಲೋಕಸೇವಾ ಆಯೋಗದಿಂದ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ 'ಎ' ಮತ್ತು ಗ್ರೂಪ್ 'ಬಿ' ಹುದ್ದೆಗಳ ಪೂರ್ವಭಾವಿ ಪರೀಕ್ಷೆ ಜಿಲ್ಲೆಯ 12 ಪರೀಕ್ಷಾ ಕೇಂದ್ರಗಳಲ್ಲಿ ನಡೆಯುತ್ತಿದ್ದು, ಜಿಲ್ಲಾಧಿಕಾರಿ ಡಾ: ಕುಮಾರ ಅವರು ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಪರೀಕ್ಷೆಗಳನ್ನು ಪಾರದರ್ಶಕವಾಗಿ ಯಾವುದೇ ಅವ್ಯವಹಾರಗಳಿಗೆ ಆಸ್ಪದ ನೀಡದೆ ನಿಷ್ಪಕ್ಷಪಾತವಾಗಿ ನಡೆಸುತ್ತಿರುವ ಬಗ್ಗೆ ಪರೀಕ್ಷಾ ಕೇಂದ್ರಕ್ಕೆ ನಿಯೋಜನೆಗೊಂಡಿರುವ ಪರೀಕ್ಷಾ ಕೇಂದ್ರದ ಮುಖ್ಯಸ್ಥರಿಂದ ಮಾಹಿತಿ ಪಡೆದುಕೊಂಡರು.

ಇಂದು ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆ

ಮತದಾನದಲ್ಲಿ ಹೆಚ್.ಡಿ.ಕುಮಾರಸ್ವಾಮಿ, ರವಿಕುಮಾರ್ ಗಣಿಗ ಭಾಗಿ



ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರೊಂದಿಗೆ ಮಂಡ್ಯ ನಗರಸಭೆ ಜೆಡಿಎಸ್ ಸದಸ್ಯರು.

ಮಂಡ್ಯ: ತೀವ್ರ ಕುತೂಹಲ ಕೆರಳಿಸಿರುವ ಮಂಡ್ಯ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ನಾಳೆ (ಬುಧವಾರ) ಚುನಾವಣೆ ನಡೆಯಲಿದ್ದು, ಅಧಿಕಾರ ಹಿಡಿಯಲು ಜೆಡಿಎಸ್ ಮತ್ತು ಬಿಜೆಪಿ ನಡುವ ತೀವ್ರ ಹಣಾಹಣಿ ಏರ್ಪಟ್ಟಿದೆ.

ಮಂಡ್ಯ ನಗರಸಭೆಯಲ್ಲಿ ಜೆಡಿಎಸ್‌ಗೆ ಬಹುಮತವಿದ್ದರೂ ರಾಜ್ಯದಲ್ಲಿ ಆಳ್ವಿಕೆ ನಡೆಸುತ್ತಿರುವ ಕಾಂಗ್ರೆಸ್ ಅಧಿಕಾರ ಹಿಡಿಯಬೇಕೆಂದು ಶತಾಯಗತಾಯ ಪ್ರಯತ್ನ ನಡೆಸುತ್ತಿದ್ದು, ಜೆಡಿಎಸ್‌ನ ಮೂರು ಮಂದಿ ಮರಪಿತೃಗಳನ್ನು ಹೈಜಾಕ್ ಮಾಡಿದ್ದರೆ ಅತ್ತ ಜೆಡಿಎಸ್ ಸಹ ತಾನೇನು ಕಮ್ಮಿ ಇಲ್ಲ ಎಂದು ಕಾಂಗ್ರೆಸ್‌ನ ಓರ್ವ ಸದಸ್ಯನನ್ನು ತನ್ನ ಬಳಿಗೆ ಸೆಳೆದಿದೆ.

ತೀವ್ರ ಜಿದ್ದಾಜಿದ್ದಿ ಏರ್ಪಟ್ಟಿರುವುದರಿಂದ ನಾಳೆ ಜೆಡಿಎಸ್ ಪರವಾಗಿ ಮತಚಲಾಯಿಸಲು ಕೇಂದ್ರ ಸಚಿವರೂ ಆಗಿರುವ ಸಂಸದ ಹೆಚ್.ಡಿ.ಕುಮಾರಸ್ವಾಮಿ ಆಗಮಿಸುತ್ತಿದ್ದರೆ ಅತ್ತ ಕಾಂಗ್ರೆಸ್ ಪರ ಮತ ಚಲಾಯಿಸಲು ಶಾಸಕ ರವಿಕುಮಾರ್ ಗಣಿಗ ಬರುತ್ತಿದ್ದಾರೆ.

ಸದ್ಯ ನಗರಸಭೆಯ ಬಲಾಬಲ ಗಮನಿಸಿದರೆ, 18 ಸದಸ್ಯರ ಬಲವೊಂದಿದ್ದ ಜೆಡಿಎಸ್‌ನಲ್ಲಿ ಮೂರು ಮಂದಿ ಸದಸ್ಯರು ಕಾಂಗ್ರೆಸ್ ಜೊತೆಗೆ ಗುರುತಿಸಿಕೊಂಡಿರುವುದರಿಂದ ಅವರ ಬಲ 15ಕ್ಕೆ ಕುಸಿದಿದೆ. 15 ಸದಸ್ಯರ ಜೊತೆಗೆ ಮೈತ್ರಿ ಪಕ್ಷ ಬಿಜೆಪಿಯ ಇಬ್ಬರು ಸದಸ್ಯರು, ಕಾಂಗ್ರೆಸ್‌ನ ಓರ್ವ ಹಾಗೂ ಸಂಸದರ ಮತ ಸೇರಿ ಜೆಡಿಎಸ್ ಬಲ 19ಕ್ಕೇರಿದರೆ, ಇತ್ತ ಕಾಂಗ್ರೆಸ್‌ನಲ್ಲಿ 10 ಸದಸ್ಯರಿದ್ದರೂ ಓರ್ವರು ಜೆಡಿಎಸ್ ಜೊತೆಗೆ ಹೋಗಿರುವುದರಿಂದ 9 ಮಂದಿ ಸದಸ್ಯರಿದ್ದು, ಇವರೊಂದಿಗೆ ಐದು ಮಂದಿ ಪಕ್ಷೇತರರು ಸೇರಿ, ಜೆಡಿಎಸ್‌ನ ಮೂವರು ಜೊತೆಗೆ ಶಾಸಕರೊಬ್ಬರು ಸೇರಿ 18 ಸದಸ್ಯರಿದ್ದಾರೆ. ಹೀಗಿದ್ದರೂ ಕಡೆ ಗಳಿಗೆಯಲ್ಲಿ ಹಾವು ಏಣಿ ಆಟ ನಡೆಯುವ ಸಾಧ್ಯತೆ ಇರುವುದರಿಂದ ಫಲಿತಾಂಶ ಏನು ಬೇಕಾದರೂ ಆಗಬಹುದು.

ಸಪ್ತರ್ಷಿ ಸೌಹಾರ್ದ ಪತ್ತಿನ ಸಹಕಾರಿ ಸಂಘದ ರಜತ ಮಹೋತ್ಸವ

ಸಹಕಾರ ಕ್ಷೇತ್ರ ಲಾಭ ಗಳಿಕೆಗಷ್ಟೇ ಸೀಮಿತವಾಗದೆ ಜನರ ಸಂಕಷ್ಟಕ್ಕೂ ಸ್ಪಂದಿಸಬೇಕು

ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ



ಮೈಸೂರಿನ ಶಾರದಾವಿಲಾಸ ಕಾಲೇಜು ಶತಮಾನೋತ್ಸವ ಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಸಪ್ತರ್ಷಿ ಸೌಹಾರ್ದ ಪತ್ತಿನ ಸಹಕಾರಿ ಸಂಘದ ರಜತ ಮಹೋತ್ಸವವನ್ನು ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಉದ್ಘಾಟಿಸಿದರು.

ಮೈಸೂರು,ಆ.27(ಪಿಎಂ)– ಸಹಕಾರ ಕ್ಷೇತ್ರ ಕೇವಲ ಲಾಭ ಮಾಡುವುದಕ್ಕೆ ಸೀಮಿತವಾಗದೇ ಜನರ ಸಂಕಷ್ಟಕ್ಕೂ ಸ್ಪಂದಿಸಬೇಕು ಎಂದು ಅವಧೂತ ದತ್ತಪೀಠದ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದ ಕಿರಿಯ ಶ್ರೀಗಳಾದ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಹೇಳಿದರು.

ಮೈಸೂರಿನ ಶಾರದಾವಿಲಾಸ ಕಾಲೇಜು ಶತಮಾನೋತ್ಸವ ಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಸಪ್ತರ್ಷಿ ಸೌಹಾರ್ದ ಪತ್ತಿನ ಸಹಕಾರಿ ಸಂಘದ ರಜತ ಮಹೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಸಪ್ತರ್ಷಿ ಸೌಹಾರ್ದ ಸಹಕಾರ ಸಂಘಕ್ಕೂ ನಮ್ಮ ಆಶ್ರಮಕ್ಕೂ ಅವಿನಾಭಾವ ಸಂಬಂಧವಿದೆ. ನಮ್ಮ ಹಿರಿಯ ಶ್ರೀಗಳಾದ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರು ಈ ಸಹಕಾರಿಯ ಪ್ರಾರಂಭದ ದಿನಗಳಲ್ಲಿ ನಿಶ್ಚಿತ ಠೇವಣಿ ಆರಂಭಿಸುವ ಸಂದರ್ಭದಲ್ಲಿ ಕಾಣಿಕೆಯಾಗಿ ನೀಡಿದ ನಾಣ್ಯವನ್ನು ಇಂದಿಗೂ ಭದ್ರತಾ ಕಪಾಟಿನಲ್ಲಿ ಕಾದಿರಿಸಿದ್ದಾರೆ ಎಂದರು.

ನಮ್ಮ ಹಿರಿಯ ಶ್ರೀಗಳ ಆಶೀರ್ವಾದದ ಫಲವಾಗಿ ಇಂದು ಸುಮಾರು 2 ಕೋಟಿಗೂ ಅಧಿಕ ಷೇರುಧನ ಹೊಂದುವಂತಾಗಿದೆ. ಸುಮಾರು 25 ಕೋಟಿ ಅಧಿಕ ಠೇವಣಿಯನ್ನು ಈ ಸಹಕಾರಿ ಸಂಘ ಹೊಂದಿದೆ ಎಂದು ಹೇಳಿದರು.

ಎನ್.ನಾಗಚಂದ್ರ ಅವರ ಪ್ರಧಾನ ಸಂಪಾದಕತ್ವದಲ್ಲಿ ಹೊರತಂದಿರುವ ರಜತ ಸಪ್ತರ್ಷಿ ಸವಿ ಸಂಚಿಕೆ ಬಿಡುಗಡೆ ಮಾಡಿದ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಅರಮನೆಯಿಂದ ಸಹಕಾರ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಲಾಗಿದೆ. 25 ವರ್ಷಗಳ ರಜತ ಮಹೋತ್ಸವವನ್ನು ಆಚರಿಸಿಕೊಳ್ಳುತ್ತಿರುವ ಈ ಸಹಕಾರಿ ಸಂಘಕ್ಕೆ ಅಗತ್ಯವಿರುವ ಎಲ್ಲಾ ರೀತಿಯ ನೆರವು ನೀಡಲು ಸಿದ್ಧ ಎಂದು ಘೋಷಿಸಿದರು.

ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಮಾತನಾಡಿ, ಸಹಕಾರ ಕ್ಷೇತ್ರವು ಸದಸ್ಯರಿಂದ, ಸದಸ್ಯರಿಗಾಗಿ ಸದಸ್ಯರಿಗೋಸ್ಕರ ಇರುವುದಾಗಿದೆ. ಆದರೆ ಇತ್ತೀಚೆಗೆ ಸಹಕಾರ ಕ್ಷೇತ್ರದಲ್ಲಿ ಸರ್ಕಾರದ ಹಸ್ತಕ್ಷೇಪ ಹೆಚ್ಚುತ್ತಿದೆ. ಇದು ಆತಂಕಕಾರಿಯಾಗಿದ್ದು, ಸರ್ಕಾರದ ಈ ನಡೆ ಸರಿಯಲ್ಲ ಎಂದು ತೀವ್ರ ವಿಷಾದ ವ್ಯಕ್ತಪಡಿಸಿದರು. ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರ ಒಕ್ಕೂಟದ ಅಧ್ಯಕ್ಷ ಜಿ.ನಂಜನಗೌಡ ಮಾತನಾಡಿ, ಸಹಕಾರಿ ಸಂಘ ಹುಟ್ಟು ಹಾಕುವುದು ಸುಲಭ. ಆದರೆ ಅದನ್ನು ಯಶಸ್ವಿಯಾಗಿ ಮುನ್ನಡೆಸುವುದು ಅಷ್ಟು ಸುಲಭವಲ್ಲ. ರಜತ ಮಹೋತ್ಸವ ಆಚರಿಸಿಕೊಳ್ಳುತ್ತಿರುವ ಈ ಸಹಕಾರಿ ಸಂಘವು ಸಹಕಾರ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವುದು ಸಂತೋಷದ ವಿಷಯ. ಆದರೆ ಸಹಕಾರ ಇಲಾಖೆಯ ಕೆಲ ಅಧಿಕಾರಿಗಳು ನಮ್ಮ ಏಳಿಗೆಯನ್ನು ಸಹಿಸುತ್ತಿಲ್ಲ. ಲೋಪ–ದೋಷಗಳನ್ನು ಮಾಡಿದ ಸೌಹಾರ್ದ ಸಹಕಾರಿಗಳಿಗೆ ಕಾನೂನು ಕ್ರಮ ಕೈಗೊಳ್ಳುವುದನ್ನು ಬಿಟ್ಟು ಎಲ್ಲಾ ಸೌಹಾರ್ದ ಸಂಸ್ಥೆಗಳ ಮೇಲೆ ಗದಾಪ್ರಹಾರ ನಡೆಸುತ್ತಿದ್ದು, ಇದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮೈಸೂರು ಸಹಕಾರ ಯೂನಿಯನ್ ಅಧ್ಯಕ್ಷ ಹೆಚ್.ವಿ.ರಾಜೀವ್ ಮಾತನಾಡಿ, ಸಪ್ತರ್ಷಿ ಸೌಹಾರ್ದ ಪತ್ತಿನ ಸಹಕಾರಿ ಸಂಘವು ರಜತ ಮಹೋತ್ಸವದ ಸಂಭ್ರಮದಲ್ಲಿರುವುದು ಸಂತಸ ಉಂಟುಮಾಡಿದೆ. ಈ ಹಂತವನ್ನು ತಲುಪಿರುವುದರ ಹಿಂದೆ ಅಪಾರ ಶ್ರಮವಿದೆ. ಹಾಗಾಗಿ ಆಡಳಿತ ಮಂಡಳಿಯ ಎಲ್ಲರೂ ಅಭಿನಂದನಾರ್ಹರು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕೆ.ಆರ್.ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಈ ಸಹಕಾರಿಗೆ ನಮ್ಮ ಸಂಪೂರ್ಣ ಸಹಕಾರವಿದೆ. 50 ವರ್ಷಗಳ ಸಂಭ್ರಮವನ್ನೂ ಆಚರಿಸುವಂತಾಗಲಿ ಎಂದು ಶುಭ ಹಾರೈಸಿದರು. ಸಪ್ತರ್ಷಿ ಸೌಹಾರ್ದ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಎಂ.ಎಸ್.ಚಂದ್ರಶೇಖರ್, ಉಪಾಧ್ಯಕ್ಷೆ ಎಸ್.ಶ್ಯಾಮಲ, ಗೌರವ ಖಜಾಂಚಿ ಎಂ.ಜಿ. ಕೃಷ್ಣವೇಣಿ, ರಜತ ಮಹೋತ್ಸವದ ಕಾರ್ಯಾಧ್ಯಕ್ಷ ಎನ್.ನಾಗಚಂದ್ರ ಸೇರಿದಂತೆ ಇತರ ನಿರ್ದೇಶಕರು, ಸಿಬ್ಬಂದಿ ವರ್ಗದವರು ಹಾಜರಿದ್ದರು. ಕೃಪಾ ಮಂಜುನಾಥ್ ಕಾರ್ಯಕ್ರಮ ನಿರೂಪಿಸಿದರೆ, ಡಾ.ಟಿ.ವಿ.ಸತ್ಯನಾರಾಯಣ ವಂದಿಸಿದರು.

ಒಂದನೇ ಪುಟದಿಂದ

ಮುಡಾದಲ್ಲಿ ಆಡಳಿತವೂ ಅಧ್ವಾನ!

ಬಾಕಿ ವಿವರದ ವಹಿಯನ್ನೂ ನಿರ್ವಹಿಸಿಲ್ಲ. ಪ್ರಾಧಿಕಾರದ ವಾಣಿಜ್ಯ ಮಳಿಗೆಗಳ ಬಾಡಿಗೆ ಹಣವನ್ನೂ ವಸೂಲಿ ಮಾಡದಿರುವುದು ಕಂಡುಬಂದಿದೆ.

ನಾಲ್ವಡಿ ಕೃಷ್ಣರಾಜ ಒಡೆಯರ್ ಕನ್ವೆನ್ಷನ್ ಹಾಲ್ (ಹೆಬ್ಬಾಳು ಸಿಐಟಿಬಿ ಕಲ್ಯಾಣ ಮಂಟಪ) ಕಟ್ಟಡದ ಲೀಸ್ ಮೊತ್ತ ವಸೂಲಿ ಮಾಡದಿರುವುದು, ಸಿಎ ನಿವೇಶನಗಳ ಹಂಚಿಕೆ ಸಂಬಂಧ ಡಿಸಿಬಿ ವಹಿ ಮತ್ತು ಕಡತ ನಿರ್ವಹಣೆ ಮಾಡಿಲ್ಲ, ಮೂಲೆ ಮತ್ತು ವಾಣಿಜ್ಯ ನಿವೇಶನಗಳ ಲಭ್ಯತೆ, ವಿಲೇವಾರಿ, ಹರಾಜು ಮೂಲಕ ಮಾರಾಟ ಮಾಡಿರುವುದು, ಬಿಡ್ದಾರರು ಶೇ. 25ರಷ್ಟು ಮೊಬಲಗನ್ನು ತಡವಾಗಿ ಜಮಾ ಮಾಡಿದ್ದರೂ ಹಂಚಿಕೆ ಕ್ರಯಪತ್ರ ನೀಡಿರುವುದು, ಭೂಸ್ವಾಧೀನಕ್ಕೆ ಪರಿಹಾರವಾಗಿ ಬದಲಿ ನಿವೇಶನ ನೀಡಿರುವ ಸಂಬಂಧ ಸ್ವಾಧೀನ ಪತ್ರ ವಿತರಿಸಿರುವ ನಿಖರ ಮಾಹಿತಿ ನೀಡಿಲ್ಲ ಎಂದು ಅಡಿಷನಲ್ ಡೈರೆಕ್ಟರ್ ಆಕ್ಷೇಪಿಸಿದ್ದಾರೆ.

ಪ್ರೋತ್ಸಾಹದಾಯಕ ನಿವೇಶನ, ತುಂಡು ಜಾಗಕ್ಕೆ ಪಾವತಿಸಿರುವ ಹಣವನ್ನು ಜಮಾ ಮಾಡದಿರುವುದು, ಆಸ್ತಿಗಳ ಖಾತೆ, ಖಾತಾ ವರ್ಗಾವಣೆ ಶುಲ್ಕ ಪಾವತಿ ಬ್ಯಾಂಕ್ ಚಲನ್ ಹಣವನ್ನು (78,20, 072 ರೂ.) ಪ್ರಾಧಿಕಾರದ ಖಾತೆಗೆ ಜಮೆ ಮಾಡದೆ ನಷ್ಟ ಉಂಟು ಮಾಡಲಾಗಿದೆ. ಅದೇ ರೀತಿ ಇ–ಖಾತಾ ಶುಲ್ಕ ಜಮೆ ಯಾಗದಿದ್ದರೂ (6,15,355 ರೂ.) ಖಾತಾ–ಕಂದಾಯ ಮಾಡಿರುವುದು, ಕಟ್ಟಡ ಪರವಾನಿಗಾಗಿ ಪಾವತಿಸಿದ ಬ್ಯಾಂಕ್ ಚಲನ್ ಮೊತ್ತ (10,41,070 ರೂ.)ವನ್ನು ಮುಡಾ ಖಾತೆಗೆ ಜಮಾ ಮಾಡದೇ ವಂಚಿಸಲಾಗಿದೆ ಎಂದು ಆಡಿಟ್ ಸಭೆಯಲ್ಲಿ ಆಕ್ಷೇಪ ವ್ಯಕ್ತಪಡಿಸಲಾಗಿದೆ.

ಅನುಮೋದಿತ ಕ್ರಿಯಾ ಯೋಜನೆಯ 7,46,557 ರೂ. ಹಣವನ್ನು ವಿಭಜಿಸಿ ತುಂಡು ಗುತ್ತಿಗೆ ನೀಡಿದ್ದು, ಹಿಂದಿನ ಟೆಂಡರ್ ಮುಂದುವರಿಸಿ ಹೊರಗುತ್ತಿಗೆ ಆಧಾರದಲ್ಲಿ ಗ್ರೂಪ್ 'ಡಿ' ಸಿಬ್ಬಂದಿ ಸೇವೆ ಪಡೆದು ಕೆಟಿಪಿಪಿ ನಿಯಮ ಉಲ್ಲಂಘಿ ಸಲಾಗಿದೆ. (66,65,573 ರೂ.), ಹೊರಗುತ್ತಿಗೆ ಮೇಲೆ ಕಂಪ್ಯೂಟರ್ ಆಪರೇಟರ್‌ಗಳ ಸೇವಾ ಅವಧಿ ಮುಗಿದಿದ್ದರೂ ಮುಂದುವರಿಸಲಾಗಿದೆ ಎಂದು ಅಡಿಷನಲ್ ಡೈರೆಕ್ಟರ್ ಆಕ್ಷೇಪಿಸಿದ್ದಾರೆ.

ವೇತನದಲ್ಲಿ ಕಟಾಯಿಸಿರುವ ಎನ್‌ಪಿಎಸ್ ವಂತಿಕೆಯ 64,29,396 ರೂ. ಹಣವನ್ನು ಸರ್ಕಾರದ ಶೀರ್ಷಿಕೆಗೆ ಜಮಾ ಮಾಡದಿರುವುದು, 50,58,809 ರೂ.ಗಳ ರಜಾ ವೇತನ ಮತ್ತು ಪಿಂಚಣಿ ವಂತಿಗೆ ಹಣವನ್ನು ಅಧಿಕಾರಿಗಳು, ನೌಕರರ ಇಲಾಖೆ ಲೆಕ್ಕ ಶೀರ್ಷಿಕೆಗೆ ಜಮಾ ಮಾಡದೇ ಲೋಪವೆಸಗಲಾಗಿದೆ ಎಂಬುದು ಆಡಿಟ್ ವೇಳೆ ಪತ್ತೆಯಾಗಿದೆ. ಮಂಜೂರಾಗಿರುವ ಸಂಖ್ಯೆಗಿಂತ ಅಧಿಕ ಸಿಬ್ಬಂದಿಗಳನ್ನು ಹೊರಗುತ್ತಿಗೆಯಲ್ಲಿ ನೇಮಕ, ಅಮಾನತುಗೊಂಡ ಅವಧಿಗೆ ಪೂರ್ಣ ವೇತನ ಪಾವತಿಸಿರುವುದು, ಸರ್ಕಾರದಿಂದ ಅಧಿಸೂಚಿತವಲ್ಲದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಿರುವ ವೆಚ್ಚದ ಬಿಲ್ ಹಣ ಪಾವತಿಸಿರುವುದು, ಆರೋಗ್ಯ ಯೋಜನೆ ದರಕ್ಕಿಂತ 1,19,538 ರೂ. ಹೆಚ್ಚುವರಿ ಹಣ ಪಾವತಿಸಿರುವುದು ಲೆಕ್ಕಪರಿಶೋಧನೆಯಲ್ಲಿ ಪತ್ತೆಯಾಗಿದೆ. ಆಡಿಟ್ ಪೂರ್ಣಗೊಳಿಸಿದಾಗ 2022–23ನೇ ಸಾಲಿನಲ್ಲಿ ಮುಡಾದಲ್ಲಿ 9,41, 46,048 ರೂ.ಗಳ ಆಕ್ಷೇಪ, ನ್ಯೂನತೆ ಕಂಡುಬಂದಿದ್ದು, ಈ ತಕ್ಷಣ 96,54, 054 ರೂ.ಗಳನ್ನು ಸಂಬಂಧಪಟ್ಟವರಿಂದ ವಸೂಲಿ ಮಾಡಿ ಪ್ರಾಧಿಕಾರಕ್ಕೆ ಜಮಾ ಮಾಡಬೇಕೆಂದೂ ಅವರು ಸೂಚಿಸಿದ್ದಾರೆ.

ಮುಡಾ ಸಭೆಯೂ ಅನುಮೋದಿಸಿಲ್ಲ

ನಿವೇಶನಗಳು ಬಂದರೆ ಬರಲಿ ಎಂದು ಸಿದ್ದರಾಮಯ್ಯ ಮೌನ ವಹಿಸಿದ್ದರು.

ಹಗರಣದಲ್ಲಿ ಮುಖ್ಯಮಂತ್ರಿ ಅವರು ಸಿಲುಕಿದ್ದಾರೆ. ನ್ಯಾಯಾಲಯದ ತೀರ್ಪು ಬರುವುದಕ್ಕೂ ಮುನ್ನವೇ ಅವರು ತಮ್ಮ ಹುದ್ದೆಗೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು. ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಹಗರಣಗಳಲ್ಲೇ ಮುಳುಗಿದೆ, ಅಭಿವೃದ್ಧಿ ಮಾಡುವುದಿರಲಿ, ಅಭಿವೃದ್ಧಿ ಕೆಲಸವನ್ನೇ ಆರಂಭಿಸಿಲ್ಲ, ಗ್ಯಾರಂಟಿ ಗುಮ್ಮವನ್ನು ಇಟ್ಟುಕೊಂಡು ಸರ್ಕಾರವೇ ಸ್ಥಗಿತಗೊಂಡಿದೆ. ಆರ್ಥಿಕ ಮುಗ್ಗಟ್ಟಿನಿಂದ ಬಳಲುತ್ತಿರುವ ಈ ಸರ್ಕಾರದಿಂದ ಬೇಸತ್ತ ಸಚಿವರುಗಳೂ ತಮ್ಮ ಇಲಾಖೆ ಕೆಲಸ–ಕಾರ್ಯ ಮಾಡುವುದನ್ನು ಬಿಟ್ಟಿದ್ದಾರೆ, ಶಾಸಕರು, ಮುಖ್ಯಮಂತ್ರಿಯಿಂದ ದೂರ ಸರಿಯುತ್ತಿದ್ದಾರೆ.

ಸಾರಿಗೆ ಸಂಸ್ಥೆ ಮುಚ್ಚುವ ಹಂತಕ್ಕೆ: ಕರ್ನಾಟಕ ರಸ್ತೆ ಸಾರಿಗೆ ನಿಗಮ ನಷ್ಟದಿಂದ ಬಳಲುತ್ತಿದ್ದು ಇನ್ನು ಎರಡು–ಮೂರು ತಿಂಗಳಲ್ಲೇ ಮುಚ್ಚುವ ಹಂತ ತಲುಪಲಿದೆ. ಶಕ್ತಿ ಯೋಜನೆ ಜಾರಿ ನಂತರ ಸರ್ಕಾರ ಸಾರಿಗೆ ಸಂಸ್ಥೆಗಳಿಗೆ ನೀಡಬೇಕಿದ್ದ 4,000 ಕೋಟಿ ರೂ. ನೀಡದಿರುವುದರಿಂದ ಇಂತಹ ಸ್ಥಿತಿ ನಿರ್ಮಾಣವಾಗಿದೆ.

ಹಿಂದುಳಿದವರ ಮತ್ತು ಪರಿಶಿಷ್ಟರ ಹಣ ನುಂಗುವ ಈ ಸರ್ಕಾರ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಪಾಲುದಾರರಾದ ಕಾಂಗ್ರೆಸ್‌ನ ಇಬ್ಬರು ಶಾಸಕರಿಗೆ ಕ್ಲೀನ್‌ಚಿಟ್ ನೀಡಿದೆ. ಅವರಿಗೆ ಕ್ಲೀನ್‌ಚಿಟ್ ನೀಡದಿದ್ದರೆ, ಹಗರಣ ಮುಖ್ಯಮಂತ್ರಿ ಅವರ ಬುಡಕ್ಕೇ ಬರುತ್ತಿತ್ತು. ಇದನ್ನು ಅರಿತೇ ಎಸ್‌ಐಟಿ ತನಿಖಾ ತಂಡ ಸರ್ಕಾರ ಹೇಳಿದಂತೆ ವರದಿ ನೀಡಿ ಅವರನ್ನು ರಕ್ಷಿಸಿದೆ ಎಂದರು.



ವಿಶ್ವ ಕ್ರಿಕೆಟ್‌ನಲ್ಲಿ ಭಾರತದ ಪ್ರಾಬಲ್ಯ ಐಸಿಸಿ ನೂತನ ಅಧ್ಯಕ್ಷರಾಗಿ ಜಯ್ ಶಾ ಅವಿರೋಧ ಆಯ್ಕೆ

ದುಬೈ: ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಕಾರ್ಯದರ್ಶಿ ಜಯ್ ಶಾ ಅವರು ಅಂತರರಾಷ್ಟ್ರೀಯ ಕ್ರಿಕೆಟ್ ಮಂಡಳಿ(ಐಸಿಸಿ)ಯ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿದ್ದು ಗ್ರೆಗ್ ಬಾರ್ಕ್ಲೇ ಸ್ಥಾನವನ್ನು ವಹಿಸಲಿದ್ದಾರೆ.

ಪ್ರಸ್ತುತ ಐಸಿಸಿ ಅಧ್ಯಕ್ಷ ಗ್ರೆಗ್ ಬಾರ್ಕ್ಲೇ ಅವರ ಅಧಿಕಾರಾವಧಿಯು ನವೆಂಬರ್ 30ರಂದು ಕೊನೆಗೊಳ್ಳಲಿದೆ. ಸತತ ಎರಡನೇ ಬಾರಿಗೆ ಹುದ್ದೆ ಅಲಂಕರಿಸಿದ್ದ ಅವರು ಇತ್ತೀಚೆಗೆ ಮೂರನೇ ಅವಧಿಗೆ ಸ್ಪರ್ಧೆಯಿಂದ ದೂರ ಸರಿದಿದ್ದರು. ಐಸಿಸಿ ಅಧ್ಯಕ್ಷರು ತಲಾ ಎರಡು ವರ್ಷಗಳ ಮೂರು ಅವಧಿಗೆ ಅರ್ಹರಾಗಿರುತ್ತಾರೆ. ಆದರೆ ನ್ಯೂಜಿಲೆಂಡ್ ವಕೀಲ ಗ್ರೆಗ್ ಬಾರ್ಕ್ಲೇ ಇದುವರೆಗೆ 4 ವರ್ಷಗಳನ್ನು ಪೂರ್ಣಗೊಳಿಸಿದ್ದಾರೆ. ಬಾರ್ಕ್ಲೇ ಅವರನ್ನು 2020ರ ನವೆಂಬರ್‌ನಲ್ಲಿ ಐಸಿಸಿಯ ಸ್ವತಂತ್ರ ಅಧ್ಯಕ್ಷರಾಗಿ ನೇಮಿಸಲಾಯಿತು. ನಂತರ 2022ರಲ್ಲಿ ಈ ಹುದ್ದೆಗೆ ಮರು ಆಯ್ಕೆಯಾಗಿದ್ದರು.

ಐಸಿಸಿ ನಿಯಮಗಳ ಪ್ರಕಾರ, ಅಧ್ಯಕ್ಷರ ಚುನಾವಣೆಯಲ್ಲಿ 16 ಮತಗಳಿದ್ದು, ಈಗ ವಿಜೇತರಿಗೆ 9 ಮತಗಳ (51%) ಸರಳ ಬಹುಮತದ ಅಗತ್ಯವಿದೆ. ಈ ಹಿಂದೆ, ಅಧ್ಯಕ್ಷರಾಗಲು, ಹಾಲಿ ಇರುವವರು ಮೂರನೇ ಎರಡರಷ್ಟು ಬಹುಮತವನ್ನು ಹೊಂದಿರಬೇಕಾಗಿತ್ತು. ಪ್ರಸಕ್ತ ನಿರ್ದೇಶಕರು 2024ರ ಆಗಸ್ಟ್ 27ರೊಳಗೆ ಮುಂದಿನ ಅಧ್ಯಕ್ಷಗಾದಿಗೆ ನಾಮನಿರ್ದೇಶನ ಸಲ್ಲಿಸಬೇಕಿತ್ತು ಆದರೆ ಅವರು ಸಲ್ಲಿಸಿಲ್ಲ. ಇನ್ನು ಒಬ್ಬರಿಗಿಂತ ಹೆಚ್ಚು ಅಭ್ಯರ್ಥಿಗಳಿದ್ದರೆ, ಚುನಾವಣೆ ನಡೆಯಲಿತ್ತು. ಆದರೆ ಜಯ್ ಶಾ ಒಬ್ಬರೇ ನಾಮನಿರ್ದೇಶನವಾಗಿದ್ದರಿಂದ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ. ನೂತನ ಅಧ್ಯಕ್ಷರ ಅಧಿಕಾರಾವಧಿಯು 2024ರ ಡಿಸೆಂಬರ್ 1ರಿಂದ ಪ್ರಾರಂಭವಾಗುತ್ತದೆ.

ರಾಜ್ಯ ಸರ್ಕಾರಿ ನೌಕರರಿಗೆ ವೈದ್ಯಕೀಯ ಭತ್ಯೆ ಹೆಚ್ಚಳ

ಬೆಂಗಳೂರು, ಆ. 27: 7ನೇ ವೇತನ ಆಯೋಗದ ವರದಿ ಶಿಫಾರಸುಗಳನ್ನು ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಂಗೀಕರಿಸಿ ಜಾರಿಗೊಳಿಸಿ ರಾಜ್ಯ ಸರ್ಕಾರಿ ನೌಕರರ ಬಹುದಿನಗಳ ಬೇಡಿಕೆಯನ್ನು ಈಡೇರಿಸಿದೆ. ಅಲ್ಲದೇ ಎನ್‌ಪಿಎಸ್ ರದ್ದುಗೊಳಿಸಿ ಓಪಿಎಸ್ ಜಾರಿಗೊಳಿಸುವ ಬಗ್ಗೆಯೂ ಸಮಿತಿಯನ್ನು ರಚಿಸಲಾಗಿದೆ. ಇದರ ಬೆನ್ನಲ್ಲೇ ಇದೀಗ ರಾಜ್ಯ ಸರ್ಕಾರ ಮತ್ತೊಂದು ಸಿಹಿ ಸುದ್ದಿ ನೀಡಿದೆ. ವೈದ್ಯಕೀಯ ಭತ್ಯೆ ಹೆಚ್ಚಳ ಮಾಡಿ ಆದೇಶ ಹೊರಡಿಸಿದೆ. ಆರೋಗ್ಯ ಸಂಜೀವಿನಿ ಯೋಜನೆ ಜಾರಿವರೆಗೂ ಮಾಸಿಕ 200 ರೂಪಾಯಿಂದ 500 ರೂ.ಗೆ ಹೆಚ್ಚಿಸಿ ಆದೇಶಿಸಿದೆ.

ಈ ಬಗ್ಗೆ ಆರ್ಥಿಕ ಇಲಾಖೆಯ ಜಂಟಿ ಕಾರ್ಯದರ್ಶಿ ಆದೇಶ ಹೊರಡಿಸಿದ್ದು, ರಾಜ್ಯ ಸರ್ಕಾರದ ನೀತಿ ನಿರ್ಣಯದಂತೆ 05–09–2022ರ ಸರ್ಕಾರಿ ಆದೇಶದಲ್ಲಿ ನಗದುರಹಿತ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು (ಕೆ.ಎ.ಎಸ್.ಎಸ್) ಅನುಷ್ಠಾನಗೊಳಿಸಲು ಆದೇಶ ಹೊರಡಿಸಲಾಗಿದೆ. ಅದರಂತೆ, ಸರ್ಕಾರದ ನೀತಿಯಲ್ಲಿ ವಿವರಿಸಿರುವಂತೆ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ವಿಸ್ತೃತವಾದ ಮಾರ್ಗಸೂಚಿಗಳನ್ನು ಸಹ ಹೊರಡಿಸಲಾಗಿದೆ ಎಂದು ತಿಳಿಸಿದ್ದಾರೆ.

22–07–2024ರ ಸರ್ಕಾರಿ ಆದೇಶದಲ್ಲಿ ವೇತನ ಶ್ರೇಣಿಗಳ ಮತ್ತು ವೇತನಕ್ಕೆ ಹೊಂದಿಕೊಂಡಿರುವ ನಿರ್ದಿಷ್ಟ ಭತ್ಯೆಗಳ ಪರಿಷ್ಕರಣೆ ಮತ್ತು ಪಿಂಚಣಿ ಪರಿಷ್ಕರಣೆ ಕುರಿತಂತೆ 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಅದರಂತೆ 23–08–2024ರ ಸರ್ಕಾರಿ ಆದೇಶದಲ್ಲಿ ಪರಿಷ್ಕೃತ ವೇತನ ಶ್ರೇಣಿಗಳನ್ನು ಅನುಷ್ಠಾನಗೊಳಿಸಿ ವಿಸ್ತೃತವಾದ ಆದೇಶಗಳನ್ನು ಹೊರಡಿಸಲಾಗಿದೆ. ಗ್ರೂಪ್–ಸಿ ಮತ್ತು ಗ್ರೂಪ್–ಡಿ ವೃಂದದ ರಾಜ್ಯ ಸರ್ಕಾರಿ ನೌಕರರುಗಳಿಗೆ ಲಭ್ಯವಿರುವ ವೈದ್ಯಕೀಯ ಭತ್ಯೆ ದರಗಳ ಪರಿಷ್ಕರಣೆ ಕುರಿತಂತೆ 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಸರ್ಕಾರ ನಿರ್ಧರಿಸಿದೆ.

ಗ್ರೂಪ್–'ಸಿ' ಮತ್ತು ಗ್ರೂಪ್–'ಡಿ' ವೃಂದದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರುಗಳಿಗೆ ಲಭ್ಯವಿರುವ ವೈದ್ಯಕೀಯ ಭತ್ಯೆಯ ದರಗಳನ್ನು ಮಾಸಿಕ ರೂ.200/– ಗಳಿಂದ ಮಾಸಿಕ ರೂ.500/–ಗಳಿಗೆ 1ನೇ ಆಗಸ್ಟ್ 2024ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

ನಗದುರಹಿತ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯ (ಕೆ.ಎ.ಎಸ್.ಎಸ್) ಸೌಲಭ್ಯವು ಅನುಷ್ಠಾನಗೊಳ್ಳುವವರೆಗೆ ಈ ವೈದ್ಯಕೀಯ ಸೌಲಭ್ಯವು ಲಭ್ಯವಿರುತ್ತದೆ. ನಗದು ರಹಿತ ವೈದ್ಯಕೀಯ ಸೌಲಭ್ಯ ಯೋಜನೆಯು ಅನುಷ್ಠಾನಗೊಂಡ ನಂತರದಲ್ಲಿ ವೈದ್ಯಕೀಯ ಭತ್ಯೆಯ ಮಂಜೂರಾತಿಯ ಈ ಆದೇಶವು ಜಾರಿಯಲ್ಲಿರುವುದು ಕೊನೆಗೊಳ್ಳುತ್ತದೆ ಮತ್ತು ನಗದುರಹಿತ (ಕೆ.ಎ.ಎಸ್.ಎಸ್) ಯೋಜನೆಯು ಅನುಷ್ಠಾನಗೊಂಡ ಬಳಿಕ ಯಾವುದೇ ಸರ್ಕಾರಿ ನೌಕರನು ಈ ಸೌಲಭ್ಯವನ್ನು ಪಡೆಯಲು ಅರ್ಹನಿರುವುದಿಲ್ಲ. ಈ ಭತ್ಯೆಯನ್ನು ಕ್ರಮಬದ್ಧಗೊಳಿಸಲು ವಿಧಿಸಿರುವ ಇತರೆ ಷರತ್ತುಗಳು ಮುಂದುವರೆದು ಅನ್ವಯಿಸುತ್ತವೆ ಎಂದು ತಿಳಿಸಿದ್ದಾರೆ.

ಒಳ ಮೀಸಲಾತಿ ವಿಚಾರದಲ್ಲಿ ತಪ್ಪು ಅಭಿಪ್ರಾಯ ಮೂಡಿಸಿದರೆ ನ್ಯಾಯಾಂಗ ನಿಂದನೆ ಪ್ರಕರಣ ದಾಖಲು

ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಮುಖ್ಯಸ್ಥರೂ ಆದ ಹಿರಿಯ ವಕೀಲ ಅರುಣ್‌ಕುಮಾರ್ ಎಚ್ಚರಿಕೆ

- ಪ್ರೊ.ಸೋಮಶೇಖರ್ ವಿರುದ್ಧ ರಾಜ್ಯಪಾಲರಿಗೆ ದೂರು
- ರಾಜ್ಯ ಕಾಂಗ್ರೆಸ್ ಸರ್ಕಾರ ಒಳ ಮೀಸಲಾತಿ ವಿರುದ್ಧವಿದೆ
- ಸದಾಶಿವ ಆಯೋಗ ವರದಿ ಜಾರಿಗೊಳಿಸಬೇಕು
- ಸದ್ಯಕ್ಕೆ ಬ್ಯಾಕ್‌ಲಾಗ್ ನೇಮಕಾತಿ ಸ್ಥಗಿತಗೊಳಿಸಿ



ಮೈಸೂರಿನ ಪತ್ರಕರ್ತರ ಭವನದಲ್ಲಿ ಮಂಗಳವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಮುಖ್ಯಸ್ಥರೂ ಆದ ಹಿರಿಯ ವಕೀಲ ಎಸ್.ಅರುಣ್ ಕುಮಾರ್ ಮಾತನಾಡಿದರು.

ಮೈಸೂರು,ಆ.27(ಬಿಎಲ್‌ಯು)–ಒಳ ಮೀಸಲಾತಿ ಸಂಬಂಧ ಸುಪ್ರೀಂಕೋರ್ಟ್ ನೀಡಿರುವ ತೀರ್ಪಿನ ಬಗ್ಗೆ ತಪ್ಪು ಅಭಿಪ್ರಾಯ ಮೂಡಿಸುವವರ ವಿರುದ್ಧ ನ್ಯಾಯಾಂಗ ನಿಂದನೆ ಪ್ರಕರಣ ದಾಖಲಿಸುವುದಾಗಿ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಮುಖ್ಯಸ್ಥರೂ ಆದ ಹಿರಿಯ ವಕೀಲ ಎಸ್.ಅರುಣ್ ಕುಮಾರ್ ಎಚ್ಚರಿಸಿದ್ದಾರೆ.

ಮೈಸೂರಿನ ಪತ್ರಕರ್ತರ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ಮಾನಸ ಗಂಗೋತ್ರಿ ಡಾ.ಬಿ.ಆರ್.ಅಂಬೇಡ್ಕರ್ ವಿಸ್ತರಣಾ ಹಾಗೂ ಸಂಶೋಧನಾ ಕೇಂದ್ರದಲ್ಲಿ ಮೀಸಲಾತಿ ಮತ್ತು ವರ್ಗೀಕರಣ ಕುರಿತು ಮೊನ್ನೆ ನಡೆದ ಕಾರ್ಯಾಗಾರದಲ್ಲಿ ಒಳ ಮೀಸಲಾತಿ ಸಂಬಂಧ ಏಕ ಅಭಿಪ್ರಾಯದ ಗೊಂದಲ ಸೃಷ್ಟಿಸಲಾಗಿದೆ ಎಂದು ಆರೋಪಿಸಿದರು.

ಸಂಶೋಧನಾ ಕೇಂದ್ರದ ನಿರ್ದೇಶಕ ಪ್ರೊ.ಜೆ.ಸೋಮಶೇಖರ್ ಕಾರ್ಯಾಗಾರದ ಮೂಲಕ ಸುಪ್ರೀಂಕೋರ್ಟ್ ನೀಡಿರುವ ಒಳ ಮೀಸಲಾತಿ ಕುರಿತ ತೀರ್ಪಿಗೆ ವಿರುದ್ಧವಾದ ಅಭಿಪ್ರಾಯ ಸಂಗ್ರಹಣೆ ಮಾಡುತ್ತಿದ್ದಾರೆ. ಸರ್ಕಾರಿ ಸಂಸ್ಥೆಯಾದ ಸಂಶೋಧನಾ ಕೇಂದ್ರದ ಕಾರ್ಯವ್ಯಾಪ್ತಿ ಮೀರಿ ಕಾರ್ಯಾಗಾರದ ಮೂಲಕ ಅನಗತ್ಯ ಗೊಂದಲ ಮೂಡಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಪ್ರೊ.ಸೋಮಶೇಖರ್ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಲಾಗಿದೆ ಎಂದು ಅರುಣ್ ಕುಮಾರ್ ತಿಳಿಸಿದರು.

ಗೊಂದಲ ಸೃಷ್ಟಿಸುವ ಹುನ್ನಾರ: ಒಳ ಮೀಸಲಾತಿ ಸಂಬಂಧ ಸುಪ್ರೀಂಕೋರ್ಟ್ ನೀಡಿರುವ ತೀರ್ಪಿನ ಬಗ್ಗೆ ಆಕ್ಷೇಪಾರ್ಹ ಕಾರ್ಯಕ್ರಮ ಏರ್ಪಡಿಸಿ ಗೊಂದಲ ಮೂಡಿಸಲಾಗುತ್ತಿದೆ. ಈ ಹಿನ್ನೆಲೆ ಪ್ರೊ.ಸೋಮಶೇಖರ್ ವಿರುದ್ಧ ರಾಜ್ಯಪಾಲರು ಶಿಸ್ತುಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಸುಪ್ರೀಂಕೋರ್ಟ್ ನೀಡಿರುವ ಒಳಮೀಸಲಾತಿ ತೀರ್ಪಿಗೆ ವಿರುದ್ಧವಾಗಿದೆ. ಈ ಹಿನ್ನೆಲೆಯಲ್ಲಿ ಸರ್ಕಾರವೇ ಇಂತಹ ಕಾರ್ಯಕ್ರಮಗಳನ್ನು ಮಾಡಲು ಪ್ರೇರೇಪಿಸುತ್ತಿದೆ ಎಂದು ಆಪಾದಿಸಿದರು.

ಈಗಾಗಲೇ ಸದಾಶಿವ ಆಯೋಗ ವರದಿ ನೀಡಿದ್ದು, ಅದನ್ನು ಸರ್ಕಾರ ಕೂಡ ಒಪ್ಪಿಕೊಂಡಿದೆ. ಇದನ್ನು ಕಾರ್ಯರೂಪಕ್ಕೆ ತರಬೇಕು. ಅದು ಬಿಟ್ಟು ಈಗ ಮತ್ತೆ ಜಾತಿ ಜನಗಣತಿ ಮಾಡುವಂತೆ ಹಿರಿಯ ವಕೀಲ ಪ್ರೊ.ರವಿವರ್ಮ ಕುಮಾರ್ ಹೇಳಿದ್ದಾರೆ. ಇದು ಅನವಶ್ಯಕವಾಗಿದ್ದು, ಇಂತಹ ಹೇಳಿಕೆಗಳ ಮೂಲಕ ಅನಗತ್ಯ ಗೊಂದಲ ಮೂಡಿಸಲಾಗುತ್ತಿದೆ ಎಂದು ಅರುಣ್‌ಕುಮಾರ್ ದೂರಿದರು.

ಕಡಿಮೆ ಜನಸಂಖ್ಯೆ ಇದ್ದರೂ ಹೆಚ್ಚು ಅನುದಾನ ಹಾಗೂ ಸರ್ಕಾರಿ ಸವಲತ್ತು ಪಡೆಯುತ್ತಿರುವವರು ಈ ಕುತಂತ್ರ ರೂಪಿಸುತ್ತಿದ್ದಾರೆ ಎಂದು ನೇರ ಆರೋಪ ಮಾಡಿದ ಅರುಣ್ ಕುಮಾರ್, ಕಾಂಗ್ರೆಸ್ ಸರ್ಕಾರ ಇದಕ್ಕೆ ಉತ್ತೇಜನ ನೀಡುತ್ತಿದೆ. ಈ ಮೂಲಕ ರಾಜ್ಯ ಕಾಂಗ್ರೆಸ್ ಸರ್ಕಾರ ಒಳ ಮೀಸಲಾತಿ ವಿರುದ್ಧವಾಗಿದೆ ಎಂಬುದು ಸ್ಪಷ್ಟ ಎಂದು ತಿಳಿಸಿದರು.

ಸದಾಶಿವ ಆಯೋಗ: ಧರ್ಮಸಿಂಗ್ ನೇತೃತ್ವದ ಕಾಂಗ್ರೆಸ್ ಮತ್ತು ಜೆಡಿಎಸ್ ಸಮ್ಮಿಶ್ರ ಸರ್ಕಾರ 2005ರಲ್ಲಿ ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗ ರಚಿಸಿತ್ತು. 6 ವರ್ಷಗಳಿಗೂ ಹೆಚ್ಚು ಕಾಲ ಸಮೀಕ್ಷಾ ಕಾರ್ಯ ಕೈಗೊಂಡ ಆಯೋಗ, ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ವಿಷಯಗಳ ಆಧಾರದಲ್ಲಿ 20.5 ಲಕ್ಷ ಕುಟುಂಬಗಳಿಂದ ಮಾಹಿತಿ ಪಡೆದು ವರದಿ ತಯಾರಿಸಿತು ಎಂದು ಮಾಹಿತಿ ನೀಡಿದರು.

ಸಂಗ್ರಹಿಸಿದ ದತ್ತಾಂಶಗಳನ್ನು ಮಾನದಂಡವಾಗಿ ಇಟ್ಟುಕೊಂಡು ಪರಿಶಿಷ್ಟ ಜಾತಿಗಳಲ್ಲಿ ಎಡಗೈ ಶೇಕಡ 33.47, ಬಲಗೈ ಶೇಕಡ 32, ಸ್ಪೃಶ್ಯ ಶೇಕಡ 23.4 ಹಾಗೂ ಇತರೆ ಶೇಕಡ 4.65 ರಷ್ಟಿದ್ದಾರೆ ಎಂದು ವರದಿಯಲ್ಲಿ ಹೇಳಿದೆ ಎಂದು ಪತ್ರಿಕಾ ಮಾಧ್ಯಮಗಳಲ್ಲಿ ವರದಿ ಮಾಡಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರಗಳಿಗೆ ಅಧಿಕಾರ: ಈಗ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ನೇತೃತ್ವದ ಏಳು ನ್ಯಾಯಾಧೀಶರ ಪೀಠ ಪರಿಶಿಷ್ಟ ಜಾತಿ ಮತ್ತು ವರ್ಗಗಳ ನಡುವಿನ ವಿವಿಧ ಹಂತಗಳ ತಾರತಮ್ಯ ನಿವಾರಣೆಗೆ ಉಪ ವರ್ಗೀಕರಣ ಮಾಡುವಂತೆ ಹೇಳಿದ್ದು, ಈ ಅಧಿಕಾರವನ್ನು ರಾಜ್ಯ ಸರ್ಕಾರಗಳಿಗೆ ನೀಡಿದೆ. ಜೊತೆಗೆ ತಾರತಮ್ಯ ಅನುಭವಿಸಿದವರಿಗೆ ಶೇಕಡ 15 ಮೀಸಲಾತಿಯಲ್ಲಿ ಹೆಚ್ಚು ತೂಕ ನೀಡಲು ರಾಜ್ಯ ಸರ್ಕಾರಗಳು ಉಪ ವರ್ಗೀಕರಿಸಬಹುದು ಎಂದು ಸುಪ್ರೀಂಕೋರ್ಟ್ ಹೇಳಿದೆ ಎಂದರು.

ಈ ಹಿನ್ನೆಲೆಯಲ್ಲಿ ಸದಾಶಿವ ಆಯೋಗದ ವರದಿಯನ್ನು ಸರ್ಕಾರ ಜಾರಿಗೊಳಿಸಬೇಕು. ಇದರಿಂದ ಮತ್ತೊಮ್ಮೆ ಜಾತಿ ಜನಗಣತಿ ನಡೆಸುವ ಅವಶ್ಯಕತೆ ಇಲ್ಲ. ಸದಾಶಿವ ಆಯೋಗದ ವರದಿ ಜಾರಿ ಮಾಡುವ ತನಕ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಬಾರದು ಎಂದು ಅರುಣ್ ಕುಮಾರ್ ಸರ್ಕಾರವನ್ನು ಒತ್ತಾಯಿಸಿದರು.

ಒಳ ಮೀಸಲಾತಿ ಸಂಬಂಧ ಸುಪ್ರೀಂ ಕೋರ್ಟ್ ಸ್ಪಷ್ಟವಾಗಿ ತೀರ್ಪು ನೀಡಿದ್ದರೂ ಒಳ ಮೀಸಲಾತಿ ವಿರೋಧಿಸುವ ಕೆಲವು ಸಮುದಾಯಗಳು ನಿರಂತರವಾಗಿ ವಿರೋಧ ವ್ಯಕ್ತಪಡಿಸುತ್ತಲೇ ಇವೆ. ಸುಪ್ರೀಂ ಕೋರ್ಟ್ ತೀರ್ಪಿನ ಬಗ್ಗೆ ಇಲ್ಲಸಲ್ಲದ ಹೇಳಿಕೆಗಳನ್ನು ನೀಡಿ ಗೊಂದಲ ಸೃಷ್ಟಿಸುವ ಪ್ರಯತ್ನ ಮಾಡುತ್ತಿದೆ ಎಂದು ಕಿಡಿಕಾರಿದರು. ಸುಪ್ರೀಂಕೋರ್ಟ್ ನೀಡಿರುವ ಒಳ ಮೀಸಲಾತಿ ತೀರ್ಪು ಸಂಬಂಧ ಯಾರಾದರೂ ತಪ್ಪು ಅಭಿಪ್ರಾಯ ಮೂಡಿಸುವ ಪ್ರಯತ್ನ ಮಾಡಿದರೆ ಅವರ ವಿರುದ್ಧ ನ್ಯಾಯಾಂಗ ನಿಂದನೆ ಪ್ರಕರಣ ದಾಖಲಿಸುತ್ತೇವೆ ಎಂದು ಮತ್ತೊಮ್ಮೆ ಎಚ್ಚರಿಸಿದರು.

ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆಯ ಸದಸ್ಯರಾದ ಶಿವಕುಮಾರ್, ರಾಜೇಂದ್ರ ಹಾಗೂ ದಾಸಯ್ಯ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಮುಡಾ ಹಗರಣ ಸಂಬಂಧ ಇಂದು ಪೊಲೀಸ್ ಆಯುಕ್ತರಿಗೆ ದೂರು


ಮುಡಾದಲ್ಲಿ ನಡೆದಿರುವ ಹಗರಣ ಸಂಬಂಧ ಜಿಲ್ಲಾಧಿಕಾರಿ ಸೇರಿದಂತೆ ಮುಡಾ ಅಧಿಕಾರಿಗಳ ವಿರುದ್ಧ ನಾಳೆ (ಆಗಸ್ಟ್ 28) ನಗರ ಪೊಲೀಸ್ ಆಯುಕ್ತರಿಗೆ ದೂರು ಸಲ್ಲಿಸುತ್ತೇನೆ ಎಂದು ವಕೀಲ ಎಸ್.ಅರುಣ್ ಕುಮಾರ್ ತಿಳಿಸಿದರು.

ಮುಡಾದಲ್ಲಿ ನಡೆದಿರುವ ಅಕ್ರಮದಲ್ಲಿ ಅಧಿಕಾರಿಗಳು ನೇರ ಭಾಗಿಯಾಗಿದ್ದಾರೆ. ಇದರಲ್ಲಿ ಜಿಲ್ಲಾಧಿಕಾರಿಗಳ ವೈಫಲ್ಯ ಕೂಡ ಇದೆ ಎಂದು ಆರೋಪಿಸಿದರು.

ಹಗರಣ ಸಂಬಂಧ ಮುಡಾ ವ್ಯಾಪ್ತಿಯ ಲಕ್ಷ್ಮೀಪುರಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲು ಹೋದರೆ ಪೊಲೀಸರು ಎಫ್‌ಐಆರ್ ದಾಖಲಿಸುವುದಿಲ್ಲ. ಮುಡಾ ಅಕ್ರಮದ ಬಗ್ಗೆ ತನಿಖೆ ನಡೆಸುತ್ತಿರುವ ಆಯೋಗಕ್ಕೆ ದೂರು ಸಲ್ಲಿಸಿ ಎಂದು ಸಲಹೆ ನೀಡುತ್ತಾರೆ ಎಂದರು. ಆದರೆ ತನಿಖಾ ತಂಡ ಎಫ್‌ಐಆರ್ ದಾಖಲಿಸಲು ಸಾಧ್ಯವಿಲ್ಲ. ಪ್ರಕರಣವನ್ನೆ ದಾಖಲಿಸದೆ ನೇರ ತನಿಖೆ ನಡೆಸಿದರೆ ಹೇಗೆ ಎಂದು ಪ್ರಶ್ನಿಸಿದ ಅರುಣ್ ಕುಮಾರ್, ಈ ಹಿನ್ನೆಲೆ ನೇರವಾಗಿ ಪೊಲೀಸ್ ಆಯುಕ್ತರಿಗೆ ದೂರ ಸಲ್ಲಿಸುತ್ತೇವೆ. ಈ ಮೂಲಕ ಮುಡಾ ಹಗರಣವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುತ್ತೇವೆ ಎಂದು ತಿಳಿಸಿದರು.

ಕಾನೂನು ವಿರೋಧ ಕ್ರಮ: ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿ ನಟ ದರ್ಶನ್‌ಗೆ ರಾಜಾತೀಥ್ಯ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅರುಣ್ ಕುಮಾರ್, ಜೈಲಿನಲ್ಲಿ ಎಲ್ಲಾ ಕೈದಿಗಳನ್ನು ಸಮಾನರಾಗಿ ನೋಡಬೇಕು. ದರ್ಶನ್‌ಗೆ ನೀಡಿರುವ ರಾಜಾತಿಥ್ಯ ಕಾನೂನು ವಿರೋಧಿ ಕ್ರಮ ಎಂದು ತಿಳಿಸಿದರು.

ಪ್ರಸಾದ ಲೇಖನ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ



ಪ್ರಸಾದ ಲೇಖನ ಸ್ಪರ್ಧೆ ವಿಜೇತರಿಗೆ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಬಹುಮಾನ ವಿತರಿಸಲಾಯಿತು.

ಮೈಸೂರು, ಆ. 27– ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಜಯಂತಿ ಅಂಗವಾಗಿ ಕಾಲೇಜುಗಳ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಿದ್ದ ಪ್ರಸಾದ ಲೇಖನ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಮೈಸೂರು ಶ್ರೀ ಸುತ್ತೂರು ಮಠದಲ್ಲಿ ರಾಜೇಂದ್ರ ಶ್ರೀಗಳವರ 109ನೇ ಜಯಂತಿ ಮಹೋತ್ಸವವದಲ್ಲಿ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಬಹುಮಾನ ವಿತರಿಸಲಾಯಿತು.

ಪದವಿ ಪೂರ್ವ ವಿಭಾಗದಲ್ಲಿ ಮೈಸೂರು ವಿಜಯನಗರದ ಜೆಎಸ್‌ಎಸ್ ಕಾಲೇಜಿನ ಕು. ಐಶ್ವರ್ಯ ಪ್ರಥಮ, ಮಂಡ್ಯ ಸದ್ವಿದ್ಯಾ ಕಾಲೇಜಿನ ಕು. ಆರ್.ಪ್ರಿಯಾಂಕ ದ್ವಿತೀಯ, ಕೊಡಗು ಕೂರ್ಗ್ ಇನ್ಸ್‌ಟಿಟ್ಯೂಟ್ ಆಫ್ ಪ್ರಿ ಯೂನಿವರ್ಸಿಟಿಯ ಕು. ಎ.ಟಿ.ಡೀಪ್ನ ಸೀತಮ್ಮ, ತೃತೀಯ ಬಹುಮಾನ ಪಡೆದರು.

ಪದವಿ ವಿಭಾಗದಲ್ಲಿ ಕೊಳ್ಳೇಗಾಲ ಜೆಎಸ್‌ಎಸ್ ಮಹಿಳಾ ಕಾಲೇಜಿನ ಕು. ಎಸ್.ಪ್ರಮೀಳ ಪ್ರಥಮ, ಪೊನ್ನಂಪೇಟೆ ಅರಣ್ಯ ಮಹಾವಿದ್ಯಾಲಯದ ಕು. ಎಸ್.ಗೀತಾ ದ್ವಿತೀಯ, ನಂಜನಗೂಡು ಜೆಎಸ್‌ಎಸ್ ಕಾಲೇಜಿನ ಕು. ಬಿ.ಸಿ. ಭ್ರಮರಾಂಬಿಕಾ ತೃತೀಯ ಬಹುಮಾನ ಪಡೆದರು. ಸ್ನಾತಕೋತ್ತರ ವಿಭಾಗದಲ್ಲಿ ಮೈಸೂರು ಊಟಿ ರಸ್ತೆ ಜೆಎಸ್‌ಎಸ್ ಕಾಲೇಜಿನ ಮಂಜುನಾಥ ಪ್ರಥಮ, ಕು. ಡಿ.ಎಂ. ಅನನ್ಯ ದ್ವಿತೀಯ, ಸುಸ್ವತಿಪುರಂ ಜೆಎಸ್‌ಎಸ್ ಮಹಿಳಾ ಕಾಲೇಜಿನ ಕು. ಎಂ.ಪಾರ್ವತಮ್ಮ ತೃತೀಯ ಬಹುಮಾನ ಪಡೆದರು.

ಮೈಸೂರಲ್ಲಿ ಸುಸೂತ್ರವಾಗಿ ನಡೆದ ಕೆಪಿಎಸ್‌ಸಿ ಪರೀಕ್ಷೆ



ಮಂಗಳವಾರ ಮೈಸೂರಲ್ಲಿ ಕೆಪಿಎಸ್‌ಸಿ ಪರೀಕ್ಷೆ ಬರೆದ ಅಭ್ಯರ್ಥಿಗಳು.

ಮೈಸೂರು, ಆ. 27(ಆರ್‌ಕೆ)– ವಿವಾದಕ್ಕೊಳಗಾಗಿದ್ದ ಕರ್ನಾಟಕ ಲೋಕ ಸೇವಾ ಆಯೋಗ (ಕೆಪಿಎಸ್‌ಸಿ)ದ ಪರೀಕ್ಷೆಗಳು ಮಂಗಳವಾರ ಮೈಸೂರಲ್ಲಿ ಸುಸೂತ್ರವಾಗಿ ನಡೆದವು.

ಆಯೋಗವು ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಗೆಜೆಟೆಡ್ ಪ್ರೊಬೇಷನರಿ 'ಎ' ಮತ್ತು 'ಬಿ' ಗ್ರೂಪ್ ಹುದ್ದೆಗಳ ನೇಮಕಾತಿಗಾಗಿ ರಾಜ್ಯದಾದ್ಯಂತ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿತು. ಅದರಂತೆ ಮೈಸೂರಿನ ಮಹಾರಾಜ, ಮಹಾರಾಣಿ, ಸರ್ಕಾರಿ ಪಿಯು ಕಾಲೇಜುಗಳು, ಮುಕ್ತ ವಿಶ್ವವಿದ್ಯಾನಿಲಯ, ಟೆರೇಷಿಯನ್ ಸೇರಿದಂತೆ ಒಟ್ಟು 11 ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆದವು. ಬೆಳಗ್ಗೆ 10ರಿಂದ ಮಧ್ಯಾಹ್ನ 12 ಗಂಟೆ ಹಾಗೂ ಮಧ್ಯಾಹ್ನ 2ರಿಂದ ಸಂಜೆ 4 ಗಂಟೆವರೆಗೆ ನಡೆದ ಪರೀಕ್ಷೆಯಲ್ಲಿ 2,000 ಮಂದಿ ಅಭ್ಯರ್ಥಿಗಳು ಹಾಜರಾಗಿದ್ದರು. ಯಾವುದೇ ಗೊಂದಲವಿಲ್ಲದೇ ಅಭ್ಯರ್ಥಿಗಳು ಪರೀಕ್ಷೆ ಬರೆದಿದ್ದಾರೆ.

ಡಿಸಿಪಿ ಎಂ.ಮುತ್ತುರಾಜು ನೇತೃತ್ವದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಆಯಾ ಠಾಣೆಗಳ ಪೊಲೀಸರನ್ನು ನಿಯೋಜಿಸಿ ವ್ಯಾಪಕ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು.

ಗೃಹಲಕ್ಷ್ಮಿ ಹಣ ಕೂಡಿಟ್ಟು ಸೊಸೆಗೆ ಫ್ಯಾನ್ಸಿ ಸ್ಟೋರ್ ಹಾಕಿಸಿಕೊಟ್ಟ ಅತ್ತೆ!





ಶಿಗ್ಗಾವಿಯಲ್ಲಿ ಗೃಹಲಕ್ಷ್ಮಿ ಹಣದಿಂದ ಸೊಸೆಗೆ ಫ್ಯಾನ್ಸಿ ಸ್ಟೋರ್ ಹಾಕಿಸಿಕೊಟ್ಟ ಅತ್ತೆ.

ಹಾವೇರಿ, ಆ.27– ಗೃಹಲಕ್ಷ್ಮಿ ಹಣವನ್ನು ಕೂಡಿಟ್ಟು ಅತ್ತೆಯೊಬ್ಬರು ಸೊಸೆಗಾಗಿ ಫ್ಯಾನ್ಸಿ ಸ್ಟೋರ್ ಹಾಕಿಸಿಕೊಟ್ಟ ಅಪರೂಪದ ಘಟನೆಗೆ ಹಾವೇರಿ ಜಿಲ್ಲೆ ಸಾಕ್ಷಿಯಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ಸರ್ಕಾರವು ರಾಜ್ಯದ ಹೆಣ್ಣುಮಕ್ಕಳಿಗಾಗಿ ತನ್ನ ಮಹತ್ವಾಕಾಂಕ್ಷಿ ಗೃಹಲಕ್ಷ್ಮಿ ಯೋಜನೆಯನ್ನು ಜಾರಿಗೆ ತಂದಾಗ ವಿರೋಧಿಗಳು ಅದರ ಬಗ್ಗೆ ಅಪಸ್ವರ ಎತ್ತಿದ್ದರು. ಮನೆಯಲ್ಲಿ ಅತ್ತೆ–ಸೊಸೆ ಇದ್ದರೆ ಗೃಹಲಕ್ಷ್ಮಿ ಹಣ ಯಾರಿಗೆ ಸಂದಾಯವಾಗುತ್ತದೆ ಎಂದು ಮಿಲಿಯನ್ ಡಾಲರ್ ಪ್ರಶ್ನೆಯನ್ನು ಎತ್ತಿದ್ದರು.

ಆದರೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರ ತವರು ಜಿಲ್ಲೆಯಲ್ಲಿ ಶಿಗ್ಗಾವಿಯ ಅತ್ತೆ–ಸೊಸೆ ಜೋಡಿ ಮಾದರಿಯಾಗಿ ನಡೆದುಕೊಂಡಿದ್ದಾರೆ.

ಗೃಹಲಕ್ಷ್ಮಿ ಹಣದಲ್ಲಿ ಒಂದು ಪೈಸೆಯನ್ನೂ ಪೋಲು ಮಾಡದ ಅತ್ತೆ ಕಳೆದ 10 ತಿಂಗಳಿಂದ 20 ಸಾವಿರಕ್ಕೂ ಹೆಚ್ಚು ಹಣ ಸಂಗ್ರಹಿಸಿ ಸೊಸೆಗೆ ಕೊಟ್ಟಿದ್ದಾರೆ. ನೀರಲಗಿ ಗ್ರಾಮದ ದ್ರಾಕ್ಷಾಯಿಣಿ ತಮ್ಮ 10 ಕಂತಿನ ಗೃಹಲಕ್ಷ್ಮಿ ಹಣ ಕೂಡಿಟ್ಟಿದ್ದರು. 10 ಕಂತಿನ 20 ಸಾವಿರ ಹಣ ಕೂಡಿಟ್ಟು ಸೊಸೆ ಕುಮಾರಿ ಶಿವನಗೌಡ ಪಾಟೀಲ್‌ಗೆ ಮನೆಯಲ್ಲೇ ಫ್ಯಾನ್ಸಿ ಸ್ಟೋರ್ ಇಟ್ಟುಕೊಟ್ಟಿದ್ದಾರೆ. ಅತ್ತೆ ಕಾರ್ಯಕ್ಕೆ ನೀರಲಗಿ ಗ್ರಾಮಸ್ಥರು ಭೇಷ್ ಎಂದಿದ್ದಾರೆ. ಶ್ರಾವಣ ಮಂಗಳವಾರದ ಶುಭದಿನದಂದೇ ಫ್ಯಾನ್ಸಿ ಸ್ಟೋರ್‌ಗೆ ಪೂಜೆ ಮಾಡಿ ಚಾಲನೆ ನೀಡಲಾಗಿದೆ.

ಮಂಚೇಗೌಡನಕೊಪ್ಪಲಲ್ಲಿ ಶಾಸಕ ಹರೀಶ್‌ಗೌಡ ಪಾದಯಾತ್ರೆ: ತಿಂಗಳಲ್ಲಿ ಸಮಸ್ಯೆ ಪರಿಹಾರದ ಭರವಸೆ



ಮೈಸೂರಿನ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಮಂಗಳವಾರ ನಗರಪಾಲಿಕೆಯ ಎರಡನೇ ವಾರ್ಡ್ ಮಂಚೇಗೌಡನಕೊಪ್ಪಲಲ್ಲಿ ಪಾದಯಾತ್ರೆ ಮಾಡಿ, ಜನರ ಅಹವಾಲುಗಳನ್ನು ಸ್ವೀಕರಿಸಿದರು.

ಮೈಸೂರು, ಆ.27(ಬಿಎಲ್‌ಯು)– ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ಮಂಗಳವಾರ ನಗರಪಾಲಿಕೆಯ 2ನೇ ವಾರ್ಡ್‌ನಲ್ಲಿ ಪಾದಯಾತ್ರೆ ಮಾಡಿ, ಜನರ ಅಹವಾಲುಗಳನ್ನು ಸ್ವೀಕರಿಸಿದರು.

ಮಂಚೇಗೌಡನಕೊಪ್ಪಲಲ್ಲಿ ಇಂದು ಬೆಳಗ್ಗೆ 8 ಗಂಟೆಗೆ ಪಾದಯಾತ್ರೆ ಆರಂಭಿಸಿದ ಹರೀಶ್‌ಗೌಡರು, 11 ಗಂಟೆವರೆಗೂ ಜನರ ಸಮಸ್ಯೆ ಆಲಿಸಿದರು. ಕಾವೇರಿ ನೀರು ಸರಬರಾಜು, ರಸ್ತೆ ಡಾಂಬರೀಕರಣ, ಗ್ರಾಮ ಠಾಣಾ ಖಾತಾ ಸಮಸ್ಯೆ, ಒಳಚರಂಡಿ ಸಮಸ್ಯೆ ಸೇರಿದಂತೆ ಹಲವು ಸಮಸ್ಯೆಯನ್ನು ಜನರು ಶಾಸಕರ ಗಮನಕ್ಕೆ ತಂದರು. ಮಂಚೇಗೌಡನಕೊಪ್ಪಲಿನ 300 ಮನೆಗಳಿಗೆ ಕಾವೇರಿ ನೀರು ಸರಬರಾಜು ಸೇರಿದಂತೆ ಇತರೆ ಸಮಸ್ಯೆಗಳನ್ನು ಒಂದು ತಿಂಗಳಲ್ಲಿ ಪರಿಹಾರ ಮಾಡಿ ವರದಿ ನೀಡುವಂತೆ ಹರೀಶ್‌ಗೌಡರು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಈ ಸಂದರ್ಭದಲ್ಲಿ ನಗರಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಷರೀಫ್ ಸೇರಿದಂತೆ ವಲಯ ಆಯುಕ್ತರು, ಎಕ್ಸಿಕ್ಯೂಟಿವ್ ಇಂಜಿನಿಯರ್ ಸೇರಿದಂತೆ ಇತರೆ ಅಧಿಕಾರಿಗಳು ಪಾದಯಾತ್ರೆಯಲ್ಲಿ ಭಾಗಿಯಾಗಿದ್ದರು.

ಪ್ರತಿ ವಾರ ಒಂದೊಂದು ವಾರ್ಡ್‌ನಲ್ಲಿ ಪಾದಯಾತ್ರೆ ಮಾಡುತ್ತಿದ್ದು, ಮುಂದಿನ ವಾರ ಲೋಕನಾಯಕ ನಗರದಲ್ಲಿ ಪಾದಯಾತ್ರೆ ನಡೆಸುತ್ತೇನೆ ಎಂದು ಇದೇ ವೇಳೆ ಹರೀಶ್‌ಗೌಡರು ತಿಳಿಸಿದರು.

ನಾಡಿನ ಹಿತಕ್ಕೆ ಸಮರ್ಪಿಸಿಕೊಂಡ ಜಗದ್ಗುರು ರಾಜೇಂದ್ರ ಶ್ರೀಗಳು

ನಿವೃತ್ತ ಪ್ರಾಧ್ಯಾಪಕ ಡಾ.ಅನಂತರಾಮು ಗುಣಗಾನ



ಮೈಸೂರು,ಆ.27–ರಾಜೇಂದ್ರ ಶ್ರೀಗಳು ನಾಡಿನ ಹಿತಕ್ಕಾಗಿ ಅವರ ಸಂಪೂರ್ಣ ಜೀವನವನ್ನು ಸಮರ್ಪಿಸಿಕೊಂಡವರು ಎಂದು ನಿವೃತ್ತ ಪ್ರಾಧ್ಯಾಪಕ ಡಾ. ಕೆ.ಅನಂತರಾಮುರವರು ಮೈಸೂರು ಶ್ರೀ ಸುತ್ತೂರು ಮಠದಲ್ಲಿ ಶ್ರಾವಣ ಮಾಸದ 21ನೇ ದಿನ ಪ್ರವಚನ ನೀಡುತ್ತಾ ತಿಳಿಸಿದರು.

ರಾಜೇಂದ್ರ ಶ್ರೀಗಳು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲ ನಡೆಯಬೇಕು. ಬದುಕಿಗೆ ಜಯವನ್ನು ತಂದು ಕೊಡುವುದೇ ಜಯಂತಿ. ಪೂಜ್ಯರ ಆಶೀರ್ವಾದಿಂದ ನಮ್ಮ ಬದುಕಿಗೂ ಜಯವಾಗಬೇಕು ಎಂದರು.

ಇಹ–ಪರ, ಲೌಕಿಕ–ಪಾರಲೌಕಿಕ ಮತ್ತು ವ್ಯವಹಾರಿಕ–ಪಾರಮಾರ್ಥಿಕ ಬದುಕಿನ ಎಲ್ಲ ಮುಖಗಳಿಗೂ ಅವರ ಕೃಪೆ ಇರಬೇಕು. ಪೂಜ್ಯರಂತಹವರ ಪುಣ್ಯ ಪ್ರಭಾವದಿಂದ ಬದುಕು ಹಸನಾಗುತ್ತದೆ. ನಾಡಿನ ತುಂಬೆಲ್ಲ ಅವರ ಸೇವೆಯ ಹೆಜ್ಜೆ ಗುರುತುಗಳನ್ನು ಮೂಡಿಸಿದ್ದಾರೆ. ಪೂಜ್ಯರು ದೂರದರ್ಶಿಗಳು ಮತ್ತು ರಾಷ್ಟ್ರ ನಿರ್ಮಾತೃಗಳಾಗಿದ್ದರು. ಅವರು ಆಧ್ಯಾತ್ಮ ಲೋಕದ ಧ್ರುವತಾರೆಗಳು ಹಾಗೂ ಯುಗಪುರುಷರು.

ರಾಜೇಂದ್ರ ಶ್ರೀಗಳದು ಧರ್ಮ, ಜ್ಞಾನ, ಅನ್ನ, ವಿದ್ಯೆ, ಆರೋಗ್ಯ ದಾಸೋಹಗಳ ಪಂಚಮುಖಿ ಸೇವೆ. ಪರೋಪಕಾರಂ ಇದಂ ಶರೀರಂ ಎಂಬಂತೆ ಬದುಕಿದವರು. ತ್ಯಾಗ, ಕರುಣೆ ಮತ್ತು ದಯೆಯಂತಹ ದೊಡ್ಡ ಗುಣಗಳನ್ನು ಹೊಂದಿದ್ದವರು. ಅವರ ಆಶ್ರಯದಲ್ಲಿ ಲಕ್ಷಾಂತರ ವಿದ್ಯಾರ್ಥಿಗಳು ಶಿಕ್ಷಣ ಪಡೆದುಕೊಂಡು ಅವರವರ ಗುರಿಗಳನ್ನು ಸಾಧಿಸಿ, ಬದುಕು ಕಟ್ಟಿಕೊಂಡರು ಎಂದರು.

ವಿದುಷಿ ವಸಂತ ವೆಂಕಟೇಶ್ ವಾಚನ ಮಾಡಿದರು. ಸಾಮೂಹಿಕ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಭಕ್ತಾದಿಗಳು ಹಾಗೂ ಆಧ್ಯಾತ್ಮಿಕ ಜಿಜ್ಞಾಸುಗಳು ಪಾಲ್ಗೊಂಡಿದ್ದರು.

ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್‌ಗೆ ಅಭಿನಂದನೆ...



ಮೈಸೂರು ನಗರ ಪೊಲೀಸ್ ಕಮಿಷನರ್ ಶ್ರೀಮತಿ ಸೀಮಾ ಲಾಟ್ಕರ್ ಅವರನ್ನು ಭಾರತ ಸರ್ಕಾರದ ರಕ್ಷಣಾ ಸಂಶೋಧನಾ ವಿಭಾಗದ ಮಾಜಿ ಪ್ರಧಾನ ಸಾರ್ವಜನಿಕ ಸಂಪರ್ಕಾಧಿಕಾರಿ ಶ್ರೀರಾವ್ ಕನ್ನಡ ಪುಸ್ತಕ (ತಾವು ಅನುವಾದಿಸಿದ ಡಾ.ಕಲಾಂ ಅವರ ಆತ್ಮಚರಿತ್ರೆ 'ಅಗ್ನಿಯ ರೆಕ್ಕೆಗಳು') ನೀಡಿ, ಅಭಿನಂದಿಸಿದರು.

ದೇಶ - ವಿದೇಶ

ಅಮೆರಿಕದಲ್ಲಿ ಸೊಳ್ಳೆಗಳಿಂದ ಹರಡುವ ಮಾರಣಾಂತಿಕ ವೈರಸ್ ಆರ್ಭಟ



ಮ್ಯಾಸಚೂಸೆಟ್ಸ್: ಸೊಳ್ಳೆಗಳಿಂದ ಹರಡುವ ಮಾರಣಾಂತಿಕ ವೈರಸ್ ಒಂದು ಅಮೆರಿಕದಲ್ಲಿ ಆರ್ಭಟಿಸುತ್ತಿದೆ. ಅಮೆರಿಕದ ಮ್ಯಾಸಚೂಸೆಟ್ಸ್ ರಾಜ್ಯದಲ್ಲಿ ಈಸ್ಟರ್ನ್ ಎಕ್ವೈನ್ ಎನ್ಸೆಫಾಲಿಟಿಸ್ (ಇಇಇ) ಎಂಬ ವೈರಸ್ ಕಾಡುತ್ತಿದೆ. ಈ ವೈರಾಣು ಸೋಂಕು ಮ್ಯಾಸಚೂಸೆಟ್ಸ್ ರಾಜ್ಯದ ಹಲವು ನಗರಗಳಿಗೆ ಹರಡಿದ್ದು, ಅಕ್ಕಪಕ್ಕದ ರಾಜ್ಯಗಳಿಗೂ ಹರಡುವ ಭೀತಿ ಎದುರಾಗಿದೆ. ಈ ವೈರಸ್ ಹಾವಳಿಗೆ 10ಕ್ಕೂ ಹೆಚ್ಚು ಸಮುದಾಯಗಳು ಬಾಧಿತವಾಗಿದ್ದು, ಈ ಪ್ರಾಂತ್ಯದಲ್ಲಿ ಸರ್ಕಾರ ಹೈ ಅಲರ್ಟ್ ಘೋಷಣೆ ಮಾಡಿದೆ. ಸೊಳ್ಳೆಗಳಿಂದ ಈ ಸೋಂಕು ಹರಡುವ ಹಿನ್ನೆಲೆಯಲ್ಲಿ ಸ್ಪ್ರೇಗಳನ್ನು ಜನರಿಗೆ ನೀಡುತ್ತಿದ್ದು, ಟ್ರಕ್‌ಗಳ ಮೂಲಕವೂ ಸ್ಪ್ರೇ ಸಿಂಪಡಣೆ ಮಾಡಲಾಗುತ್ತಿದೆ. ಪ್ಲೇಮೌತ್ ಸೇರಿದಂತೆ ಹಲವು ಕೌಂಟಿಗಳಲ್ಲಿ ಈಗಾಗಲೇ ಸ್ಪ್ರೇ ಸಿಂಪಡಿಸಲಾಗಿದೆ. 4 ವರ್ಷಗಳ ಹಿಂದೆ ಈ ಸೋಂಕು ಅಮೆರಿಕದಲ್ಲಿ ಕಾಣಿಸಿಕೊಂಡಿತ್ತು. ಈಗ ಮತ್ತೊಮ್ಮೆ ಸೋಂಕಿನ ಹಾವಳಿ ತೀವ್ರಗೊಂಡಿದೆ ಎಂದು ಅಮೆರಿಕ ದೇಶದ ಮ್ಯಾಸಚೂಸೆಟ್ಸ್ ರಾಜ್ಯದ ಸಾರ್ವಜನಿಕ ಆರೋಗ್ಯ ಇಲಾಖೆ ಮಾಹಿತಿ ನೀಡಿದೆ

ಬಿಆರ್‌ಎಸ್ ನಾಯಕಿ ಕವಿತಾಗೆ ಸುಪ್ರೀಂಕೋರ್ಟ್‌ನಿಂದ ಜಾಮೀನು




ನವದೆಹಲಿ: ತೆಲಂಗಾಣ ಮಾಜಿ ಮುಖ್ಯಮಂತ್ರಿ ಕೆ.ಚಂದ್ರಶೇಖರ್ ರಾವ್ ಅವರ ಪುತ್ರಿ, ಬಿಆರ್‌ಎಸ್ ನಾಯಕಿ ಕೆ.ಕವಿತಾ ಅವರಿಗೆ ಸುಪ್ರೀಂ ಕೋರ್ಟ್‌ನಿಂದ ಮಂಗಳವಾರ ಜಾಮೀನು ಸಿಕ್ಕಿದೆ.

ದೆಹಲಿ ಲಿಕ್ಕರ್ ಹಗರಣದಲ್ಲಿ ಜಾರಿ ನಿರ್ದೇಶನಾಲಯ ಮತ್ತು ಸಿಬಿಐ ಕೇಸಿಗೆ ಸಂಬಂಧಪಟ್ಟಂತೆ ಕವಿತಾಗೆ ಜಾಮೀನು ಸಿಕ್ಕಿದೆ. ದೆಹಲಿ ಅಕ್ರಮ ಲಿಕ್ಕರ್ ಹಗರಣದಲ್ಲಿ ಕಳೆದ ಮಾರ್ಚ್ 15ರಂದು ವಿಧಾನ ಪರಿಷತ್ ಸದಸ್ಯೆ ಕವಿತಾ ಬಂಧಿಸಲ್ಪಟ್ಟಿದ್ದರು.

ಇಡಿ ಮತ್ತು ಸಿಬಿಐ ಎರಡೂ ಪ್ರಕರಣಗಳಲ್ಲಿ ಜಾಮೀನು ನೀಡಲಾಗಿದೆ. ಎರಡೂ ಪ್ರಕರಣಗಳಲ್ಲಿ ತಲಾ 10 ಲಕ್ಷ ರೂ. ಜಾಮೀನು ಬಾಂಡ್ ಇರಿಸುವಂತೆ ಹಾಗೂ ಪಾಸ್‌ಪೋರ್ಟ್‌ನ್ನು ಒಪ್ಪಿಸುವಂತೆ ಷರತ್ತುಗಳನ್ನು ವಿಧಿಸಲಾಗಿದೆ. ಕೋರ್ಟ್ ಪ್ರಕ್ರಿಯೆಗಳ ನಂತರ ಕವಿತಾ ಬಿಡುಗಡೆಯಾಗಲಿದ್ದಾರೆ. ಸುಮಾರು 5 ತಿಂಗಳು ಜೈಲಿನಲ್ಲಿ ಕಳೆದ ಬಳಿಕ ಅವರಿಗೆ ಜಾಮೀನು ಮಂಜೂರಾಗಿದೆ. ನ್ಯಾಯಮೂರ್ತಿಗಳಾದ ಬಿ.ಆರ್. ಗವಾಯಿ ಮತ್ತು ಕೆ.ವಿ.ವಿಶ್ವನಾಥನ್ ಅವರ ಪೀಠವು ಕವಿತಾ ಅವರ ಅರ್ಜಿಯ ವಿಚಾರಣೆ ನಡೆಸಿದೆ.

ಸುಡಾನ್‌ನಲ್ಲಿ ಭಾರಿ ಮಳೆಗೆ ಅಣೆಕಟ್ಟು ಒಡೆದು ಕನಿಷ್ಠ 30 ಸಾವು

ಅರ್ಬತ್: ಪೂರ್ವ ಸುಡಾನ್‌ನಲ್ಲಿ ಸುರಿದ ಭಾರಿ ಮಳೆಗೆ ಅಣೆಕಟ್ಟು ಒಡೆದು ಕನಿಷ್ಠ 30 ಮಂದಿ ಮೃತಪಟ್ಟಿದ್ದು, ಹಲವು ನಾಪತ್ತೆಯಾಗಿದ್ದಾರೆ



ಎಂದು ವಿಶ್ವಸಂಸ್ಥೆ ತಿಳಿಸಿದೆ. ಧಾರಾಕಾರ ಮಳೆಯಿಂದಾಗಿ ಕೆಂಪು ಸಮುದ್ರದ ಸಮೀಪದಲ್ಲಿದ್ದ ಅರ್ಬತ್ ಅಣೆಕಟ್ಟು ಒಡೆದಿದೆ. ಇದರ ಬೆನ್ನಲ್ಲೇ ಪ್ರವಾಹದ ಸ್ಥಿತಿ ನಿರ್ಮಾಣವಾಗಿದೆ. ಸುಮಾರು 20 ಹಳ್ಳಿಗಳಿಗೆ ನೀರು ನುಗ್ಗಿದ್ದು, 50,000 ಮಂದಿಯ ಮನೆಗಳು ಹಾನಿಗೊಳಗಾಗಿವೆ. ವರದಿಯ ಪ್ರಕಾರ ಸುಮಾರು 200 ಮಂದಿ ನಾಪತ್ತೆಯಾಗಿದ್ದಾರೆ. ಪ್ರದೇಶವನ್ನು ಗುರುತಿಸಲು ಸಾಧ್ಯವಾಗುತ್ತಿಲ್ಲ. ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಈ ಅಣೆಕಟ್ಟು ಪೋರ್ಟ್ ಸುಡಾನ್‌ಗೆ ನೀರಿನ ಪ್ರಮುಖ ಮೂಲವಾಗಿತ್ತು. ಈ ವರ್ಷ ಸುಡಾನ್‌ನಲ್ಲಿ ಸುರಿದ ಭಾರಿ ಮಳೆ ಹಾಗೂ ಪ್ರವಾಹದಿಂದಾಗಿ 132 ಮಂದಿ ಮೃತಪಟ್ಟಿದ್ದಾರೆ. 1,18,000 ಮಂದಿ ಸಂಕಷ್ಟಕ್ಕೊಳಗಾಗಿದ್ದಾರೆ ಎಂದು ವಿಶ್ವಸಂಸ್ಥೆಯ ವರದಿ ತಿಳಿಸಿದೆ.

ಸೌದಿ ಅರೇಬಿಯಾದ ಮರುಭೂಮಿಯಲ್ಲಿ ದಿಕ್ಕು ಕಾಣದೇ ಭಾರತದ ವ್ಯಕ್ತಿ ಸಾವು


ರಿಯಾದ್: ಸುಮಾರು 650 ಕಿ.ಮೀ ವಿಸ್ತೀರ್ಣವಿರುವ ಸೌದಿ ಅರೇಬಿಯಾದ ರಬ್ ಅಲ್ ಖಲಿ ಮರುಭೂಮಿಯಲ್ಲಿ ಜಿಪಿಎಸ್ ಸಿಗ್ನಲ್ ಸಿಗದೆ, ಅಲೆದು ಸುಸ್ತಾಗಿ ನಿರ್ಜಲೀಕರಣದಿಂದಾಗಿ ತೆಲಂಗಾಣ ವ್ಯಕ್ತಿ ಹಾಗೂ ಆತನ ಸೂಡಾನ್‌ನ ಸಹಚರ ಮೃತಪಟ್ಟ ಘಟನೆ ನಡೆದಿದೆ.



ಮೃತ ವ್ಯಕ್ತಿ 27 ವರ್ಷದ ಮೊಹಮ್ಮದ್ ಶೆಹಜಾದ ತೆಲಂಗಾಣದ ಕರೀಮ್‌ನಗರದವರು.

ಮೂರು ವರ್ಷಗಳಿಂದ ಸೌದಿ ಅರೇಬಿಯಾದ ಟೆಲಿಕಮ್ಯುನಿಕೇಶನ್ ಕಂಪೆನಿಯಲ್ಲಿ ಕೆಲಸ ಮಾಡುತ್ತಿದ್ದರು. ತನ್ನ ಸೂಡಾನ್ ಸಹೋದ್ಯೋಗಿ ಜತೆ ಶೆಹಜಾದ ಮರುಭೂಮಿಯಲ್ಲಿ ಹಾದು ಬರುವಾಗ ಜಿಪಿಎಸ್ ಸಿಗ್ನಲ್ ಕಡಿತವಾಗಿದೆ. ಜತೆಗೆ ಅವರ ಫೋನ್ ಬ್ಯಾಟರಿ ಖಾಲಿಯಾಗಿದೆ. ಹಾಗಾಗಿ ಯಾರಿಂದಲೂ ಸಹಾಯ ಪಡೆಯಲು ಅವರಿಗೆ ಸಾಧ್ಯವಾಗಿಲ್ಲ ಅವರ ವಾಹನದ ಇಂಧನ ಖಾಲಿಯಾಗಿದೆ. ಮಾತ್ರವಲ್ಲದೇ, ಆಹಾರ ಹಾಗೂ ನೀರು ಕೂಡ ಇಲ್ಲದೇ ಬಳಲಿದ್ದಾರೆ. ಕೊನೆಗೆ ಯಾವ ಕಡೆಗೆ ಹೋಗಬೇಕು ಎಂಬುದೂ ಗೊತ್ತಾಗದೇ ಅಲೆದಾಡಿದ್ದಾರೆ. ಅಂತಿಮವಾಗಿ ಕುಡಿಯಲು ನೀರಿಲ್ಲದೇ ನಿರ್ಜಲೀಕರಣದಿಂದ ಇಬ್ಬರೂ ಮೃತಪಟ್ಟಿದ್ದಾರೆ.

ಉತ್ತರ ಪ್ರದೇಶ: ತೋಳಗಳ ದಾಳಿಗೆ ಆರು ಮಕ್ಕಳು ಸೇರಿದಂತೆ ಏಳು ಮಂದಿ ಬಲಿ



ಲಖನೌ: ಉತ್ತರ ಪ್ರದೇಶದ ಇಂಡೋ–ನೇಪಾಳ ಗಡಿ ಜಿಲ್ಲೆ ಬಹ್ರೈಚ್‌ನ ಮಹಾಸಿ ಬ್ಲಾಕ್‌ನ 30 ಗ್ರಾಮಗಳಲ್ಲಿ ತೋಳಗಳ ಗುಂಪು ದಾಳಿ ನಡೆಸಿದ್ದು, ಘಟನೆಯಲ್ಲಿ ಆರು ಮಕ್ಕಳು ಸೇರಿದಂತೆ ಏಳು ಜನ ಸಾವನ್ನಪ್ಪಿದ್ದಾರೆ ಮತ್ತು 26 ಜನ ಗಾಯಗೊಂಡಿದ್ದಾರೆ. ಅರಣ್ಯ ಇಲಾಖೆಯು ತೋಳಗಳನ್ನು ಸೆರೆ ಹಿಡಿಯಲು ಒಂಬತ್ತು ಜನರ ತಂಡವನ್ನು ನಿಯೋಜಿಸಿದೆ. ತೋಳಗಳು ಆಗಾಗ್ಗೆ ಗ್ರಾಮಗಳಿಗೆ ನುಗ್ಗಿ ದಾಳಿ ನಡೆಸುತ್ತಿದ್ದು, ಕಳೆದೊಂದು ತಿಂಗಳಿಂದ ಈ ಪ್ರದೇಶದ ಗ್ರಾಮಸ್ಥರಲ್ಲಿ ಭೀತಿಯನ್ನು ಸೃಷ್ಟಿಸಿವೆ. ಗ್ರಾಮಸ್ಥರು ತೋಳಗಳಿಂದ ತಮ್ಮನ್ನು ತಾವು ರಕ್ಷಿಸಿಕೊಳ್ಳಲು ರಾತ್ರಿ ಪಾಳಿಗಳಲ್ಲಿ ಕಾಯುತ್ತಿದ್ದಾರೆ. ಅರಣ್ಯಾಧಿಕಾರಿಗಳು ಇಲ್ಲಿಯವರೆಗೆ ಮೂರು ತೋಳಗಳನ್ನು ಹಿಡಿದು ಲಖನೌ ಮೃಗಾಲಯಕ್ಕೆ ಕಳುಹಿಸಿದ್ದಾರೆ. ಅರಣ್ಯ ಇಲಾಖೆಯು ಥರ್ಮಲ್ ಡ್ರೋನ್ ಸೇರಿದಂತೆ ವಿವಿಧ ತಂತ್ರಜ್ಞಾನಗಳೊಂದಿಗೆ ತೋಳಗಳನ್ನು ಟ್ರ್ಯಾಕ್ ಮಾಡುತ್ತಿದೆ. ದಾಳಿಯಲ್ಲಿ ವಯಸ್ಕ ಮಹಿಳೆಯ ಸಾವು ಅನುಮಾನಾಸ್ಪದವಾಗಿದೆ. ಆದರೆ ಆರು ಮಕ್ಕಳ ಸಾವು ತೋಳಗಳ ದಾಳಿಯಿಂದ ಸಂಭವಿಸಿದೆ ಎಂದು ದೃಢಪಟ್ಟಿರುವುದಾಗಿ ತನಿಖಾಧಿಕಾರಿಯೊಬ್ಬರು ತಿಳಿಸಿದ್ದಾರೆ.

ಡಿವೈಎಸ್‌ಪಿ ಎಂ.ಕೆ.ಗಣಪತಿ ಆತ್ಮಹತ್ಯೆ ಪ್ರಕರಣ

ಸಚಿವ ಜಾರ್ಜ್, ಐಪಿಎಸ್ ಅಧಿಕಾರಿಗಳಾದ ಪ್ರಸಾದ್, ಪ್ರಣಬ್ ಮೊಹಾಂತಿಗೆ 'ಸುಪ್ರೀಂ' ಬಿಗ್ ರಿಲೀಫ್


ಎಂ.ಕೆ.ಗಣಪತಿ


ಕೆ.ಜೆ.ಜಾರ್ಜ್


ಎ.ಎಂ.ಪ್ರಸಾದ್


ಪ್ರಣಬ್ ಮೊಹಾಂತಿ

ನವದೆಹಲಿ, ಆ.27– ಡಿವೈಎಸ್‌ಪಿ ಎಂ.ಕೆ.ಗಣಪತಿ ಆತ್ಮಹತ್ಯೆ ಪ್ರಕರಣದಲ್ಲಿ ಸಚಿವ ಕೆ.ಜೆ.ಜಾರ್ಜ್ ಮತ್ತು ಐಪಿಎಸ್ ಅಧಿಕಾರಿಗಳಾದ ಎ.ಎಂ.ಪ್ರಸಾದ್, ಪ್ರಣಬ್ ಮೊಹಾಂತಿಗೆ ಸುಪ್ರೀಂ ಕೋರ್ಟ್ ಬಿಗ್ ರಿಲೀಫ್ ನೀಡಿದೆ.

ಪ್ರಕರಣದಲ್ಲಿ ಹೈಕೋರ್ಟ್ ನೀಡಿದ್ದ ಆದೇಶವನ್ನು ಸುಪ್ರೀಂಕೋರ್ಟ್ ಎತ್ತಿ ಹಿಡಿದಿದೆ. ಪ್ರಕರಣದಲ್ಲಿ ಕೆ.ಜೆ.ಜಾರ್ಜ್ ಪಾತ್ರವಿಲ್ಲ ಎಂದು ಹೈಕೋರ್ಟ್ ತೀರ್ಪು ನೀಡಿತ್ತು. ಸಿಬಿಐ ಹಾಗೂ ಸಿಐಡಿ ತನಿಖಾ ತಂಡಗಳು 42 ದಾಖಲೆಗಳನ್ನು ಸಂಗ್ರಹಿಸಿ, 108 ಸಾಕ್ಷಿಗಳ ವಿಚಾರಣೆ ನಡೆಸಿ ಬಿ ರಿಪೋರ್ಟ್‌ನಲ್ಲಿ ಕೆ.ಜೆ.ಜಾರ್ಜ್ ಅವರ ಪಾತ್ರವಿಲ್ಲ ಎಂದು 2019ರ ಅಕ್ಟೋಬರ್ 30ರಂದು ತನಿಖಾ ವರದಿಯಲ್ಲಿ ತಿಳಿಸಿದ್ದವು. ಈ ಸಂಬಂಧ ಕೆ.ಜೆ.ಜಾರ್ಜ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ಪ್ರತಿವಾದಿಗಳ ದೂರನ್ನು ತಳ್ಳಿಹಾಕಿತ್ತು.

> ಈ ನೆಲದ ಕಾನೂನಿನ ಬಗ್ಗೆ ನನಗೆ ಸಂಪೂರ್ಣ ನಂಬಿಕೆ ಇದೆ. ನ್ಯಾಯ ಯಾವತ್ತೂ ಸತ್ಯದ ಪರವಾಗಿ ರುತ್ತದೆ ಎಂಬುದು ಈಗ ಮತ್ತೊಮ್ಮೆ ಸಾಬೀತಾಗಿದೆ. ನನ್ನ ವಿರುದ್ಧ ಸುಳ್ಳು ಆರೋಪಗಳಿಂದ ಮುಕ್ತಿ ಸಿಕ್ಕಿದೆ.
> -ಕೆ.ಜೆ.ಜಾರ್ಜ್, ಸಚಿವ

ಹೈಕೋರ್ಟ್ ಆದೇಶದ ವಿರುದ್ಧ ಗಣಪತಿಯವರ ಮಗ ನೇಹಲ್ ಹಾಗೂ ಸಹೋದರಿ ಸಬಿತಾ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಈ ಕುರಿತು ಮಂಗಳವಾರ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಬೇಲಾ ಎಂ.ತ್ರಿವೇದಿ ಹಾಗೂ ಸತೀಶ್ಚಂದ್ರ ಶರ್ಮ ನೇತೃತ್ವದ ದ್ವಿಸದಸ್ಯ ಪೀಠ ಅರ್ಜಿಯನ್ನು ವಜಾ ಮಾಡಿ, ಹೈಕೋರ್ಟ್ ಆದೇಶವನ್ನು ಎತ್ತಿ ಹಿಡಿದಿದೆ.

ಏನಿದು ಪ್ರಕರಣ?: ಪಶ್ಚಿಮ ವಲಯದ ಮಂಗಳೂರು ಐಜಿಪಿ ಕಚೇರಿಯಲ್ಲಿ ಡಿವೈಎಸ್‌ಪಿ ಆಗಿದ್ದ ಗಣಪತಿಯವರು ಮೂಲತಃ ಕೊಡಗಿನವರು. ಅವರು 2016 ಜುಲೈ 7 ರಂದು ಮಡಿಕೇರಿಯ ವಿನಾಯಕ ಲಾಡ್ಜ್‌ನ ಕೊಠಡಿಯೊಂದರಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಆತ್ಮಹತ್ಯೆಗೆ ಶರಣಾಗುವ ಮುನ್ನ ಕೊಡಗಿನ ಖಾಸಗಿ ಸುದ್ದಿ ವಾಹಿನಿಗೆ ಸಂದರ್ಶನ ನೀಡಿದ್ದ ಗಣಪತಿ, ಅಂದಿನ ಗೃಹ ಸಚಿವ ಕೆ.ಜೆ.ಜಾರ್ಜ್ ಹಾಗೂ ಐಪಿಎಸ್ ಅಧಿಕಾರಿಗಳಾದ ಪ್ರಣವ್ ಮೊಹಂತಿ ಹಾಗೂ ಎ.ಎಂ.ಪ್ರಸಾದ್ ತಮಗೆ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿದ್ದರು. ನನ್ನ ಸಾವಿಗೆ ಈ ಮೂವರೇ ಕಾರಣ ಎಂದು ಹೇಳಿದ್ದರು.

ಕಾಫಿ ಬೆಳೆ ವಿಮೆ ಜಾರಿಗೊಳಿಸಿ

ಕೊಡಗು ಸಂರಕ್ಷಣಾ ವೇದಿಕೆ ಪದಾಧಿಕಾರಿಗಳಿಂದ ಸಂಸದ ಯದುವೀರ್‌ಗೆ ಮನವಿ ಸಲ್ಲಿಕೆ


ಕಾಫಿ ಬೆಳೆಗೆ ವಿಮೆ ಜಾರಿಗೊಳಿಸುವಂತೆ ಒತ್ತಾಯಿಸಿ ಕೊಡಗು ಸಂರಕ್ಷಣಾ ವೇದಿಕೆ ಪದಾಧಿಕಾರಿಗಳು ಸಂಸದ ಯದುವೀರ್ ಅವರಿಗೆ ಮನವಿ ಸಲ್ಲಿಸಿದರು.

ಮಡಿಕೇರಿ, ಆ.27– ಪೆಟ್ರೋಲಿಯಂ ನಂತರ ಅತಿ ದೊಡ್ಡ ವಿದೇಶಿ ವಿನಿಮಯವಾಗಿರುವ ಕಾಫಿ ಬೆಳೆಗೆ ವಿಮೆ ಸೌಲಭ್ಯ ಇಲ್ಲದಾಗಿದ್ದು, ಕೇಂದ್ರ ಸರ್ಕಾರ ಪ್ರೀಮಿಯಂ ಪಾವತಿಸುವ ರೀತಿ ಕಾಫಿ ಬೆಳೆ ವಿಮೆ ಜಾರಿಗೊಳಿಸುವಂತೆ ಕೊಡಗು ಸಂರಕ್ಷಣಾ ವೇದಿಕೆ ಪದಾಧಿಕಾರಿಗಳು ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರಿಗೆ ಮನವಿ ಸಲ್ಲಿಸಿದರು.

ಮೈಸೂರಿನ ಸಂಸದ ಯದುವೀರ್ ಹಾಗೂ ರಾಜಮಾತೆ ಪ್ರಮೋದಾ ದೇವಿ ಒಡೆಯರ್ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿದ ಕೊಡಗು ಸಂರಕ್ಷಣಾ ವೇದಿಕೆ ಪದಾಧಿಕಾರಿಗಳು, ಅಂತಾರಾಷ್ಟ್ರೀಯ ಮಾರುಕಟ್ಟೆ ಅನುಗುಣವಾಗಿ ಸ್ಥಳೀಯವಾಗಿ ರೋಬಸ್ಟಾ ಕಾಫಿಗೆ ಮಾರುಕಟ್ಟೆ ದರ ವಂಚಿತವಾಗಿರುವ ಬೆಳೆಗಾರರ ಸಮಸ್ಯೆ ಬಗ್ಗೆ ಸಂಸದರ ಗಮನ ಸೆಳೆದರು.

ಇದಕ್ಕೆ ಪ್ರತಿಕ್ರಿಯಿಸಿದ ಸಂಸದ ಯದುವೀರ್, ಈ ಬಗ್ಗೆ ಕೇಂದ್ರ ವಾಣಿಜ್ಯ ಸಚಿವರ ಗಮನಕ್ಕೆ ತಂದು ಕೇಂದ್ರ ಸಚಿವರು ಹಾಗೂ ಕೊಡಗು ಸಂರಕ್ಷಣಾ ವೇದಿಕೆ ನಿಯೋಗದೊಂದಿಗೆ ಸಭೆ ನಡೆಸಿ, ಈ ಸಮಸ್ಯೆಗೆ ಪರಿಹಾರ ಕಂಡುಕಂಡುಕೊಳ್ಳುವ ಭರವಸೆ ನೀಡಿದರು.

ಬೆಳೆಗಾರರು ಎದುರಿಸುತ್ತಿರುವ ಇತರ ಸಮಸ್ಯೆಗಳ ಪರಿಹಾರಕ್ಕಾಗಿ ಕಾಫಿ ಮಂಡಳಿಯೊಂದಿಗೆ ನೇರ ಮಾತುಕತೆಗೆ ವೇದಿಕೆ ಕಲ್ಪಿಸುವುದು. ಮುಂದಿನ ತಿಂಗಳು ಬೆಂಗಳೂರಿನಲ್ಲಿ ನಡೆಯುವ ಕಾಫಿ ಸಮ್ಮೇಳನದಲ್ಲಿ ಪ್ರತ್ಯೇಕ ವೇದಿಕೆ ವ್ಯವಸ್ಥೆಯೊಂದಿಗೆ ಈ ವಿಚಾರದ ಬಗ್ಗೆ ಸಮಾಲೋಚನೆ ನಡೆಸಿ ಪರಿಹಾರ ಕಂಡುಕೊಳ್ಳುವ ಭರವಸೆ ನೀಡಿದರು. ಮಳೆ ಹಾನಿಯಿಂದ ಕಾಫಿ ಬೆಳೆ ನಷ್ಟವಾಗಿರುವ ಬಗ್ಗೆ ಮಾಹಿತಿ ಇದೆ. ಈಗಾಗಲೇ ಕಾಫಿ ಬೆಳೆ ನಷ್ಟ ಸಮೀಕ್ಷೆ ಕೈಗೊಳ್ಳಲಾಗಿದೆ ಎಂದು ಸಂಸದರು ನಿಯೋಗಕ್ಕೆ ವಿವರಿಸಿದರು.

ಕಾಡಾನೆ, ಮಾನವ ಸಂಘರ್ಷ ನಿಯಂತ್ರಿಸಿ

ಕಾಫಿ ಉದ್ಯಮದ ಮತ್ತೊಂದು ಸಂಕಷ್ಟವಾಗಿರುವ ಕಾಡಾನೆ ಮತ್ತು ಮಾನವ ಸಂಘರ್ಷವನ್ನು ನಿಯಂತ್ರಿಸಬೇಕು ಎಂದು ಕೊಡಗು ಸಂರಕ್ಷಣಾ ವೇದಿಕೆ ಪದಾಧಿಕಾರಿಗಳು ಸಂಸದರ ಗಮನ ಸೆಳೆದರು. ಇದಕ್ಕೆ ಉತ್ತರಿಸಿದ ಯದುವೀರ್, ಈಗಾಗಲೇ ಈ ಬಗ್ಗೆ ಸರ್ಕಾರದೊಂದಿಗೆ ಸಮಾಲೋಚನೆ ನಡೆಸಲಾಗಿದೆ. ಸುಮಾರು 280 ಕಿ.ಮೀ. ಅರಣ್ಯ ಅಂಚಿನಲ್ಲಿ ರೈಲ್ವೆ ಬ್ಯಾರಿಕೇಡ್ ಅಳವಡಿಕೆ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ಅದನ್ನು ತ್ವರಿತವಾಗಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭ ಕೊಡಗು ಸಂರಕ್ಷಣಾ ವೇದಿಕೆಯ ಸಂಚಾಲಕ ಚೊಟ್ಟೆಕ್‌ಮಾಡ ರಾಜೀವ್ ಬೋಪಯ್ಯ, ಪ್ರಮುಖರಾದ ಜಮ್ಮಡ ಗಣೇಶ್ ಅಯ್ಯಣ್ಣ, ಮಚ್ಚಾಮಾಡ ಅನೀಶ್ ಮಾದಪ್ಪ ಪಂದ್ಯಂಡ ಗಿರೀಶ್, ಮಲ್ಲಮಾಡ ಪ್ರಭು ಪೂಣಚ್ಚ, ಅಣ್ಣೀರ ಹರೀಶ್ ಮಾದಪ್ಪ ಉಳುವಂಗಡ ಲೋಹಿತ್ ಭೀಮಯ್ಯ, ಕೇಚಮಾಡ ವಿಶ್ವಾಸ್ ಉಪಸ್ಥಿತರಿದ್ದರು.

ವಿದ್ಯಾರ್ಥಿಗಳು ಶಿಸ್ತಿನೊಂದಿಗೆ ಜೀವನ ರೂಪಿಸಿಕೊಳ್ಳಿ


ಪಂಜರುಪೇಟೆಯಲ್ಲಿ ಪ್ರತಿಭಾವಂತ ವಿದ್ಯಾರ್ಥಿನಿಯರಿಗೆ ಶಾಸಕ ಎ.ಎಸ್.ಪೊನ್ನಣ್ಣ ಪ್ರೋತ್ಸಾಹಧನ ವಿತರಿಸಿದರು.

ವಿರಾಜಪೇಟೆ, ಆ.27–ವಿದ್ಯಾರ್ಥಿಗಳು ಶಿಸ್ತು ಮತ್ತು ಗುರಿಯೊಂದಿಗೆ ಜೀವನ ರೂಪಿಸಿಕೊಳ್ಳಬೇಕು ಎಂದು ಶಾಸಕ ಎ.ಎಸ್.ಪೊನ್ನಣ್ಣ ಹೇಳಿದರು.

ಪಟ್ಟಣದ ಪಂಜರುಪೇಟೆಯ ಶಾಸಕರ ಕಚೇರಿ ಆವರಣದಲ್ಲಿ ಎ.ಕೆ.ಸುಬ್ಬಯ್ಯ ಹಾಗೂ ಪೊನ್ನಮ್ಮನವರ ದತ್ತಿನಿಧಿ (ಚಾರಿಟಬಲ್ ಟ್ರಸ್ಟ್) ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿನಿಯರಿಗೆ ಪ್ರೋತ್ಸಾಹಧನ ವಿತರಿಸಿ ಮಾತನಾಡಿದ ಅವರು, ಅನೇಕ ಪ್ರತಿಭಾನ್ವಿತ ವಿದ್ಯಾರ್ಥಿಗಳು ಪ್ರೋತ್ಸಾಹಧನಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಅವರಲ್ಲಿ ಶೇ.98–99 ಅಂಕ ಪಡೆದವರಿದ್ದು, ಅರ್ಹ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಲಾಗುತ್ತಿದೆ ಎಂದರು.

ನಮ್ಮ ತಂದೆ–ತಾಯಿ ಹೆಣ್ಣು ಮಕ್ಕಳ ಮೇಲೆ ಅತ್ಯಂತ ಪ್ರೀತಿ ಹೊಂದಿದ್ದರು. ಹಾಗಾಗಿ ಅವರ ಹೆಸರಿನಲ್ಲಿ ಪ್ರತಿವರ್ಷ ದತ್ತಿನಿಧಿ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಕಲಿಕೆ ವೇಳೆ ಶಿಸ್ತು, ಜವಾಬ್ದಾರಿ, ಬುದ್ಧಿವಂತಿಕೆ ಮತ್ತು ಪ್ರಾಮಾಣಿಕತೆ ಮೈಗೂಡಿಸಿಕೊಳ್ಳಬೇಕು. ನಂತರ ಪೋಷಕರ ಹೊಣೆಗಾರಿಕೆಯನ್ನು ನಿಭಾಯಿಸಬೇಕು. ಆಗ ಮಾತ್ರ ಜೀವನ ಸಂತಸದ ಕ್ಷಣವಾಗಿರುತ್ತದೆ. ಇಂದು ಅನೇಕ ಪ್ರತಿಭಾನ್ವಿತರು ಅವಕಾಶದಿಂದ ವಂಚಿತರಾಗುತ್ತಿದ್ದು, ಅವರಿಗೆ ಅವಕಾಶ ಒದಗಿಸುವ ಕಾರ್ಯವಾಗಬೇಕು ಎಂದು ತಿಳಿಸಿದರು. ಪತ್ರಕರ್ತ ಚಿದ್ವಿಲಾಸ್ ಮಾತನಾಡಿ, ಶಾಸಕ ಪೊನ್ನಣ್ಣ ಅವರ ಕುಟುಂಬದವರು 130 ವಿದ್ಯಾರ್ಥಿಗಳಿಗೆ 31 ಲಕ್ಷ ದತ್ತಿನಿಧಿ ನೀಡುತ್ತಿರುವುದು ಪ್ರಶಂಸನೀಯ. ಇದು ಕೊಡಗಿನ ಇತರರಿಗೂ ಮಾದರಿಯಾಗಬೇಕು ಎಂದರು.

ಇದೇ ವೇಳೆ 130 ವಿದ್ಯಾರ್ಥಿನಿಯರಿಗೆ ಪ್ರೋತ್ಸಾಹಧನ ವಿತರಿಸಲಾಯಿತು. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಧರ್ಮಜ ಉತ್ತಪ್ಪ, ಎ.ಎಸ್.ನರೇನ್ ಕಾರ್ಯಪ್ಪ, ಗಂಗಮ್ಮ ಸುಬ್ರಮಣಿ, ಚಂದಲಿ ನರೇನ್ ಕಾರ್ಯಪ್ಪ, ಪ್ರಜ್ವಲ್ ರಾಜೇಂದ್ರ, ನಿವೃತ ಶಿಕ್ಷಕ ಎ.ವಿ.ಮಂಜುನಾಥ್, ಬಿ.ಎಸ್.ಲಾಲ್ ಕುಮಾರ್ ಇತರರು ಉಪಸ್ಥಿತರಿದ್ದರು.

ಕುವೇಂಡಗೆ ಬ್ಯಾರಿ ಸಾಹಿತ್ಯ ಪ್ರಶಸ್ತಿ



ಪೊನ್ನಂಪೇಟೆ, ಆ.27–ಹಿರಿಯ ಪತ್ರಕರ್ತ ಮತ್ತು ಕಿತ್ತಳೆ ನಾಡು ಕನ್ನಡ ವಾರಪತ್ರಿಕೆ ಪ್ರಧಾನ ಸಂಪಾದಕರಾದ ಕೊಡವ ಮುಸ್ಲಿಂ ಅಸೋಸಿಯೇಷನ್(ಕೆಎಂಎ) ಸ್ಥಾಪಕ ಅಧ್ಯಕ್ಷ ಕುವೇಂಡ ವೈ.ಹಂಝುತುಲ್ಲಾ ಅವರು 2022ನೇ ಸಾಲಿನ ಕರ್ನಾಟಕ ಬ್ಯಾರಿ ಸಾಹಿತ್ಯ ಅಕಾಡೆಮಿಯ ಗೌರವ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಕುವೇಂಡ ವೈ.ಹಂಝುತುಲ್ಲಾ ಅವರು ಕನ್ನಡ ಪತ್ರಿಕೋದ್ಯಮ ಮತ್ತು ಬ್ಯಾರಿ ಸಾಹಿತ್ಯಕ್ಕೆ 4 ದಶಕಗಳಿಂದ ನೀಡಿದ ಕೊಡುಗೆ ಪರಿಗಣಿಸಿ ಅಕಾಡೆಮಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಕರ್ನಾಟಕ ಬ್ಯಾರಿ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಯು.ಎಚ್.ಉಮರ್ ತಿಳಿಸಿದ್ದಾರೆ. ಚಿಂತನಾಶೀಲಾ ವ್ಯಕ್ತಿತ್ವ, ಸಾಮಾಜಿಕ ಮತ್ತು ಶೈಕ್ಷಣಿಕ ಕ್ಷೇತ್ರಗಳಲ್ಲಿ ಅವರ ರಚನಾತ್ಮಕ ಸಮಾಜಮುಖಿ ಕಾರ್ಯ ಚಟುವಟಿಕೆ, ಕನ್ನಡಪರ ಕಾಳಜಿ ಮತ್ತು ಅವರ ಸಂವೇದನಾಶೀಲತೆ ಮೊದಲಾದವುಗಳನ್ನು ಪರಿಗಣಿಸಿ ಪ್ರಶಸ್ತಿ ಆಯ್ಕೆ ಸಮಿತಿ ಆಯ್ಕೆಗೊಳಿಸಿದೆ. ಪ್ರಶಸ್ತಿ 50 ಸಾವಿರ ರೂ. ನಗದು ಒಳಗೊಂಡಿದ್ದು, ಸೆ.6ರಂದು ಸಂಜೆ ಮಂಗಳೂರಿನ ಪುರಭವನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಸ್ಪೀಕರ್ ಯು.ಟಿ.ಖಾದರ್ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು ಅಕಾಡೆಮಿ ಅಧ್ಯಕ್ಷ ಯು.ಎಚ್.ಉಮರ್ ತಿಳಿಸಿದ್ದಾರೆ.

ಮಹಿಳೆಯರ ಮೇಲಿನ ಅತ್ಯಾಚಾರ ಖಂಡಿಸಿ ಪ್ರತಿಭಟನೆ


ಮಹಿಳೆಯರ ಮೇಲಿನ ಅತ್ಯಾಚಾರ ಖಂಡಿಸಿ ಮಹಿಳೋದಯ ಮಹಿಳಾ ಒಕ್ಕೂಟದ ಸದಸ್ಯರು ಮಡಿಕೇರಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಮಡಿಕೇರಿ, ಆ.27–ಮಹಿಳೆಯರ ಮೇಲಿನ ಅತ್ಯಾಚಾರ, ಕೊಲೆ ಹಾಗೂ ಲೈಂಗಿಕ ಕಿರುಕುಳ ಪ್ರಕರಣಗಳನ್ನು ಖಂಡಿಸಿ ಮಹಿಳೋದಯ ಮಹಿಳಾ ಒಕ್ಕೂಟದಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾಧಿಕಾರಿ ಕಚೇರಿ ಎದುರು ಸಮಾವೇಶಗೊಂಡ ಒಕ್ಕೂಟದ ಸದಸ್ಯರು, ಮಹಿಳೆಯರ ಮೇಲಿನ ಅತ್ಯಾಚಾರ ಘಟನೆಗಳನ್ನು ಖಂಡಿಸಿ, ಅತ್ಯಾಚಾರಿಗಳಿಗೆ ಕಠಿಣ ಶಿಕ್ಷೆಗೆ ಗುರಿಪಡಿಸುವಂತೆ ಆಗ್ರಹಿಸಿದರು.

ಕೋಲ್ಕತ್ತಾದ ಆರ್.ಜಿ.ಕರ್ ವೈದ್ಯಕೀಯ ವಿದ್ಯಾರ್ಥಿನಿಯ ಮೇಲಿನ ಅತ್ಯಾಚಾರ ಮತ್ತು ಹತ್ಯೆ ಸೇರಿದಂತೆ ದೇಶದೆಲ್ಲೆಡೆ ಇಂತಹ ಪ್ರಕರಣಗಳು ಸಂಭವಿಸುತ್ತಿವೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಮಹಿಳೆಯರ ಸುರಕ್ಷತೆಗೆ ಗ್ರಾಮ ಮಟ್ಟದಿಂದ ರಾಷ್ಟ್ರ ಮಟ್ಟದವರೆಗೆ ಸೂಕ್ತ ಕ್ರಮ ಜರುಗಿಸುವ ಮೂಲಕ ಅತ್ಯಾಚಾರಿಗಳಿಗೆ ಗಲ್ಲುಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿದರು. ಬಳಿಕ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಕಾಂಗ್ರೆಸ್ ಬಲವರ್ಧನೆಗೆ ಹೆಚ್ಚಿನ ಒತ್ತು ನೀಡಿ

ಸತ್ಯಶೋಧನಾ ಸಭೆಯಲ್ಲಿ ಪಕ್ಷದ ಕಾರ್ಯಕರ್ತರಿಗೆ ಸುದರ್ಶನ್ ಸಲಹೆ



ಚಾಮರಾಜನಗರದಲ್ಲಿ ನಡೆದ ಸಭೆಯಲ್ಲಿ ಮಾಜಿ ಉಪ ಸಭಾಪತಿ ವಿ.ಆರ್.ಸುದರ್ಶನ್ ಮಾತನಾಡಿದರು.

ಚಾಮರಾಜನಗರ, ಆ.27–ಜಿಲ್ಲೆ ಕಾಂಗ್ರೆಸ್ ಭದ್ರಕೋಟೆಯಾಗಿದ್ದರೂ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಸ್ಥಳೀಯ ಸಂಸ್ಥೆಗಳ ಅಧಿಕಾರ ಹಿಡಿಯುವ ಮೂಲಕ ಪಕ್ಷದ ಬಲವರ್ಧನೆಗೆ ಮತ್ತಷ್ಟು ಒತ್ತು ನೀಡಬೇಕು ಎಂದು ಕಾಂಗ್ರೆಸ್ ಮೈಸೂರು ವಿಭಾಗದ ಸತ್ಯಶೋಧನಾ ಸಮಿತಿ ಅಧ್ಯಕ್ಷ ಹಾಗೂ ಮಾಜಿ ಉಪ ಸಭಾಪತಿ ವಿ.ಆರ್.ಸುದರ್ಶನ್ ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಸತ್ಯ ಶೋಧನಾ ಸಮಿತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಮಾಜಿ ಸಚಿವ ದಿ.ಎಚ್.ಎಸ್.ಮಹದೇವಪ್ರಸಾದ್, ಮಾಜಿ ಸಂಸದ ದಿ.ಆರ್.ಧ್ರುವನಾರಾಯಣ್ ಲೋಕಸಭಾ ಕ್ಷೇತ್ರ ವ್ಯಾಪ್ತಿ ಪಕ್ಷವನ್ನು ಸಧೃಡಗೊಳಿಸುವ ಜೊತೆಗೆ ಕಾರ್ಯಕರ್ತರನ್ನು ಗುರುತಿಸಿ ಬೆಳೆಸಿದ್ದಾರೆ. ಅವರು ಹಾಕಿದ ಭದ್ರ ಬುನಾದಿಯಲ್ಲಿ ಜಿಲ್ಲೆಯ ಶಾಸಕರು, ಸಂಸದರು ಹೆಚ್ಚಿನ ರೀತಿ ಪಕ್ಷವನ್ನು ಬಲವರ್ಧನೆ ಮಾಡಬೇಕು. ಎರಡನೇ ಹಂತದ ಮುಖಂಡರು ಹಾಗೂ ಕಾರ್ಯಕರ್ತರನ್ನು ಬೆಳೆಸುವ ನಿಟ್ಟಿನಲ್ಲಿ ಚಿಂತನೆ ನಡೆಸಬೇಕು ಎಂದರು.

ಚಾಮರಾಜನಗರ ಲೋಸಕಭಾ ಕ್ಷೇತ್ರದ ಕಾಂಗ್ರೆಸ್ ಗೆಲುವು ಇತರೆ ಜಿಲ್ಲೆ ಹಾಗೂ ಕ್ಷೇತ್ರಗಳಿಗೆ ಮಾದರಿಯಾಗಿದೆ. ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ಪಕ್ಷದ ಅಭ್ಯರ್ಥಿಗೆ ಲೀಡ್ ಕೊಡಿಸುವ ಮೂಲಕ ಅಭೂತಪೂರ್ವ ಗೆಲುವು ತಂದು ಕೊಟ್ಟಿದ್ದೀರಿ. ಈ ಗೆಲುವನ್ನು ಪಕ್ಷದ ಮುಖಂಡರು ಹಾಗೂ ಪದಾಧಿಕಾರಿಗಳು ಅನುಸರಿಸಿ, ಕ್ರಮ ಮತ್ತು ಕಾರ್ಯ ವಿಧಾನ ತಿಳಿಯಬೇಕು. 10 ವರ್ಷ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವವರನ್ನು ಗುರುತಿಸಿ, ಅವರಿಗೆ ಹೆಚ್ಚುವರಿ ಅಧಿಕಾರ ನೀಡುವ ಮೂಲಕ ಹೊಸಬರಿಗೆ ಬ್ಲಾಕ್ ಅಧ್ಯಕ್ಷ ಸ್ಥಾನ ನೀಡಲು ಕೆಪಿಸಿಸಿ ಚಿಂತಿಸಿದೆ ಎಂದು ತಿಳಿಸಿದರು.

ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎ.ಆರ್.ಕೃಷ್ಣಮೂರ್ತಿ, ಹೆಚ್.ಎಂ.ಗಣೇಶ್ ಪ್ರಸಾದ್ ಮಾತನಾಡಿ, ಜಿಲ್ಲೆಯಲ್ಲಿ ಪಕ್ಷವನ್ನು ಸದೃಢವಾಗಿ ಸಂಘಟಿಸುವ ಮೂಲಕ ವಿರೋಧ ಪಕ್ಷಗಳ ಟೀಕೆ ಟಿಪ್ಪಣಿಗಳಿಗೆ ಉತ್ತರ ನೀಡಬೇಕು. ನಮ್ಮದು ಜಾತ್ಯತೀತ ಹಾಗೂ ಎಲ್ಲಾ ವರ್ಗದವರನ್ನು ಒಳಗೊಂಡ ಪಕ್ಷವಾಗಿದೆ. ದಲಿತರು, ಹಿಂದುಳಿದವರು ಹಾಗೂ ಅಲ್ಪಸಂಖ್ಯಾತರ ಬಗ್ಗೆ ಹೆಚ್ಚಿನ ಕಾಳಜಿ ಹೊಂದಿ, ಅವರ ಶ್ರೇಯೋಭಿವೃದ್ಧಿಗೆ ದುಡಿಯುತ್ತಿದೆ. ಸಹಕಾರ ಸಂಘಗಳ ಚುನಾವಣೆಯಲ್ಲಿ ಮುಖಂಡರು, ಕಾರ್ಯಕರ್ತರು ಸಕ್ರೀಯವಾಗಬೇಕು ಎಂದರು.

ಸಭೆಯಲ್ಲಿ ಸತ್ಯಶೋಧನಾ ಸಮಿತಿ ಸದಸ್ಯರಾದ ಶಾಸಕ ಸಿ.ರಘುಮೂರ್ತಿ, ಮಾಜಿ ಶಾಸಕ ವೆಂಕಟರಮಣಯ್ಯ, ಕೆಪಿಸಿಸಿ ಉಪಾಧ್ಯಕ್ಷ ಸೂರಜ್ ಹೆಗಡೆ, ಸಿ.ಎಸ್.ದ್ವಾರಕನಾಥ್, ಮಾಜಿ ಶಾಸಕರಾದ ಎಸ್.ಜಯಣ್ಣ, ಆರ್.ನರೇಂದ್ರ, ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ಕೆಪಿಸಿಸಿ ವೀಕ್ಷಕ ಬಸವರಾಜು, ಸದಸ್ಯರಾದ ಶಿವನಾಗಪ್ಪ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹದೇವ್, ಆರ್.ಮಹದೇವ್, ಗ್ಯಾರಂಟಿ ಯೋಜನೆ ಸಮಿತಿ ಜಿಲ್ಲಾಧ್ಯಕ್ಷ ಹೊಂಗನೂರು ಚಂದ್ರು, ಚುಡಾ ಅಧ್ಯಕ್ಷ ಮಹಮದ್ ಅಸ್ಗರ್, ಬ್ಲಾಕ್ ಅಧ್ಯಕ್ಷ ಗುರುಸ್ವಾಮಿ, ಜಿಪಂ ಮಾಜಿ ಸದಸ್ಯರಾದ ಸದಾಶಿವಮೂರ್ತಿ, ಮಹೇಶ್, ಪು.ಶ್ರೀನಿವಾಸ ನಾಯಕ, ಸಿ.ಎ.ಮಹದೇವಶೆಟ್ಟಿ, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಲತಾ ರಾಜಶೇಖರ್ ಜತ್ತಿ, ನಗರಸಭಾ ಸದಸ್ಯರಾದ ಚಿನ್ನಮ್ಮ, ಕಲಾವತಿ, ನೀಲಮ್ಮ, ಭಾಗ್ಯಮ್ಮ, ಹೊಂಗನೂರು ಜಯರಾಜ್, ಗೌಡಹಳ್ಳಿ ರಾಜೇಶ್, ಕಾರ್ಮಿಕರ ವಿಭಾಗದ ಅಧ್ಯಕ್ಷ ಮಹೇಶ್ ಇದ್ದರು.

ಸವಿತಾ ಸಮಾಜ ಅಭಿವೃದ್ಧಿಗೆ ಸಾಲ ಯೋಜನೆ

ಹಡಪದ ಅಪ್ಪಣ್ಣ ಜಯಂತಿಯಲ್ಲಿ ಶಾಸಕ ಸಿ.ಪುಟ್ಟರಂಗಶೆಟ್ಟಿ


ಚಾಮರಾಜನಗರ ಜಿಲ್ಲಾ ರಂಗಮಂದಿರದಲ್ಲಿ ಆಯೋಜಿಸಿದ್ದ ಜಯಂತಿಯಲ್ಲಿ ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು.

ಚಾಮರಾಜನಗರ, ಆ.27– ಉತ್ತಮ ಶಿಕ್ಷಣ ಪಡೆಯುವ ಮೂಲಕ ಸವಿತಾ ಸಮಾಜ ಮುಖ್ಯವಾಹಿನಿಗೆ ಬರಬೇಕು ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ತಿಳಿಸಿದರು.

ನಗರದ ವರನಟ ಡಾ.ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಶಿವಶರಣ ಶ್ರೀ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತ ಸವಿತಾ ಸಮಾಜದ ಅಭಿವೃದ್ಧಿಗಾಗಿ ಸರ್ಕಾರ ನಿಗಮಗಳ ಮೂಲಕ ಸ್ವಯಂ ಉದ್ಯೋಗ ನೇರ ಸಾಲ, ಅರಿವು ಶೈಕ್ಷಣಿಕ ಸಾಲ ಸೇರಿದಂತೆ ವಿವಿಧ ಯೋಜನೆಗಳನ್ನು ಜಾರಿಗೊಳಿಸಿದೆ. ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಸಮುದಾಯ ಸಾಮಾಜಿಕ ಮುನ್ನೆಲೆಗೆ ಬರಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಬೇಕು. ನಿಗಮಗಳಿಗೆ ನೀಡುತ್ತಿರುವ 5 ಕೋಟಿ ರೂ. ಅನುದಾನವನ್ನು 50 ಕೋಟಿ ರೂ.ಗೆ ಹೆಚ್ಚಿಸುವಂತೆ ಸದನದಲ್ಲಿ ಚರ್ಚಿಸಲಾಗುವುದು ಎಂದು ತಿಳಿಸಿದರು.

ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿದ್ದ ಹಡಪದ ಅಪ್ಪಣ್ಣನವರು ಅನುಭವ ಮಂಟಪದ ಉಸ್ತುವಾರಿ ವಹಿಸಿಕೊಂಡಿದ್ದರು. ತೀರಾ ನಿರ್ಲಕ್ಷ್ಯಕ್ಕೆ ಒಳಗಾಗಿದ್ದ ಸಮುದಾಯದ ಅಪ್ಪಣ್ಣನವರನ್ನು ಅನುಭವ ಮಂಟಪದ ದ್ವಾರದಲ್ಲಿ ನಿಲ್ಲಿಸಲಾಗಿತ್ತು. ಶಿವಶರಣರು ಸೇರಿದಂತೆ ಯಾವುದೇ ವ್ಯಕ್ತಿ ಮಂಟಪ ಪ್ರವೇಶಿಸುವ ಮೊದಲು ಹಡಪದ ಅಪ್ಪಣ್ಣ ದರ್ಶನ ಮಾಡಿಯೇ ಒಳಬರಬೇಕಾಗಿತ್ತು. ಅಷ್ಟು ಮೌಲ್ಯಯುತ ಸ್ಥಾನ ಪಡೆದಿದ್ದ ಅಪ್ಪಣ್ಣನವರು ವಚನಗಳ ಮೂಲಕ ಸಮಾಜ ತಿದ್ದುವ ಕಾಯಕದಲ್ಲಿ ತೊಡಗಿಸಿಕೊಂಡಿದ್ದರು ಎಂದು ಸ್ಮರಿಸಿದರು.

ಯಳಂದೂರಿನ ಎಸ್‌ಡಿವಿಎಸ್ ವಿದ್ಯಾಸಂಸ್ಥೆ ಶಿಕ್ಷಕ ಗುಂಬಳ್ಳಿ ಬಸವರಾಜ್ ಮಾತನಾಡಿದರು. ಬಿಜಾಪುರ ಜಿಲ್ಲೆ ಮುದ್ದೇಬಿಹಾಳ ತಾಲೂಕಿನ ತಂಗಡಗಿ ಹಡಪದ ಅಪ್ಪಣ್ಣ ದೇವರ ಮಹಾಸಂಸ್ಥಾನ ಮಠದ ಶ್ರೀ ಅನ್ನದಾನಿ ಭಾರತಿ ಅಪ್ಪಣ್ಣ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಶಾಸಕ ಎ.ಆರ್.ಕೃಷ್ಣಮೂರ್ತಿ, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪಿ.ಮರಿಸ್ವಾಮಿ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಹೆಚ್.ವಿ.ಚಂದ್ರು, ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಉದಯ್ ಕುಮಾರ್, ಸವಿತಾ ಸಮಾಜದ ಜಿಲ್ಲಾಧ್ಯಕ್ಷ ವೆಂಕಟರಾಜು, ಸಮಾಜದ ಪದಾಧಿಕಾರಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೂ ಮುನ್ನ ನಗರದ ಪ್ರವಾಸಿ ಮಂದಿರದಿಂದ ವಿವಿಧ ಜಾನಪದ ಕಲಾತಂಡಗಳೊಂದಿಗೆ ಹಡಪದ ಅಪ್ಪಣ್ಣ ಭಾವಚಿತ್ರ ಮೆರವಣಿಗೆಗೆ ಚಾಲನೆ ನೀಡಲಾಯಿತು.

ಪುಟಾಣಿಗಳ ಸಂಭ್ರಮ....


ಯಳಂದೂರಿನ ದುಗ್ಗಹಟ್ಟಿ ವೀರಭದ್ರಪ್ಪ ಸ್ಮಾರಕ (ಎಸ್‌ಡಿವಿಎಸ್) ವಿದ್ಯಾಸಂಸ್ಥೆಯಲ್ಲಿ ಆಯೋಜಿಸಿದ್ದ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಪುಟಾಣಿಗಳು ಶ್ರೀಕೃಷ್ಣ ಹಾಗೂ ರಾಧೆ ವೇಷ ಧರಿಸಿ ಸಂಭ್ರಮಿಸಿದರು. ವಿದ್ಯಾಸಂಸ್ಥೆ ಸಂಸ್ಥಾಪಕ ದುಗ್ಗಹಟ್ಟಿ ವೀರಭದ್ರಪ್ಪ, ಶಿಕ್ಷಕರು ಇದ್ದರು.

13 ಪ್ರಕರಣಗಳಲ್ಲಿ ಭಾಗಿಯಾಗಿದ್ದ ಸರಗಳ್ಳನ ಬಂಧನ

ಚಾಮರಾಜನಗರ, ಆ.27–ಸುಮಾರು 13 ಪ್ರಕರಣಗಳಲ್ಲಿ ಭಾಗಿಯಾಗಿದ್ದ ಸರಗಳ್ಳನನ್ನು ಚಾಮರಾಜನಗರ ಠಾಣೆ ಪೊಲೀಸರು ಬಂಧಿಸಿ, ನ್ಯಾಯಾಂಗ ವಶಕ್ಕೆ ಒಪ್ಪಿಸಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ತಿಳಿಸಿದರು.

ನಗರದ ಎಸ್‌ಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರಗಳ್ಳ ಸುರೇಶ್ ಅಲಿಯಾಸ್ ಸೂರಪ್ಪನನ್ನು ಬಂಧಿಸಲಾಗಿದೆ. ಈತ ದುಶ್ಚಟಗಳಿಗೆ ಬಲಿಯಾಗಿ ಕಳ್ಳತನ ಮಾಡುತ್ತಿದ್ದು, ಅದರಲ್ಲೂ ಒಂಟಿ ಮಹಿಳೆಯರನ್ನೇ ಟಾರ್ಗೆಟ್ ಮಾಡಿ ಚಿನ್ನದ ಸರಗಳನ್ನು ದೋಚುತ್ತಿದ್ದ ಎಂದು ಮಾಹಿತಿ ನೀಡಿದರು. ತಾಲೂಕಿನ ಸಂತೇಮರಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಕಣ್ಣೇಗಾಲ ಗ್ರಾಮದ ಮಂಜುಳಾ ಆ.23ರಂದು ಬಹಿರ್ದೆಸೆಗೆ ಬರುತ್ತಿದ್ದಾಗ ಆರೋಪಿ ಸುರೇಶ ಆಕೆ ಕತ್ತಿನಲ್ಲಿದ್ದ 27 ಗುಂಡುಗಳಿದ್ದ ಸರವನ್ನು ಕಿತ್ತುಕೊಂಡು ಪರಾರಿಯಾಗಿದ್ದ. ಈ ಸಂಬಂಧ ಸಂತೇಮರಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು ಎಂದರು. ತಾಲೂಕಿನ ಮೇಗಲಹುಂಡಿ ಗ್ರಾಮದಲ್ಲಿ ಆರೋಪಿ ಸುರೇಶನನ್ನು ಪತ್ತೆ ಹಚ್ಚಿ ಬಂಧಿಸಿ, ಆತನ ಬಳಿ ಇದ್ದ ಕಬ್ಬಿಣದ ರಾಡು, ಚಾಕು, 27 ಚಿನ್ನದ ಗುಂಡು ಹಾಗೂ ಬೈಕ್ ವಶಪಡಿಸಿಕೊಳ್ಳಲಾಗಿದೆ. ವಿಚಾರಣೆ ವೇಳೆ ಸಂತೇಮರಹಳ್ಳಿ, ಯಳಂದೂರು, ಚಾಮರಾಜನಗರ ಗ್ರಾಮಾಂತರ ಹಾಗೂ ಕವಲಂದೆ ಮೈಸೂರು ದಕ್ಷಿಣ, ವರುಣ ಪೊಲೀಸ್ ಠಾಣೆ ವ್ಯಾಪ್ತಿ ದೇವಸ್ಥಾನ, ಸರ, ಬೈಕ್ ಕಳ್ಳತನ ಮಾಡಿರುವುದು ಪತ್ತೆಯಾಗಿದೆ ಎಂದು ತಿಳಿಸಿದರು.

ರಸ್ತೆ, ಚರಂಡಿ ಕಾಮಗಾರಿಗೆ ಚಾಲನೆ...


ಬೇಗೂರು ಸಮೀಪದ ಕಮರಹಳ್ಳಿ ಗ್ರಾಮದಲ್ಲಿ 1.30 ಕೋಟಿ ರೂ. ವೆಚ್ಚದ ಸಿಸಿ ರಸ್ತೆ, ಚರಂಡಿ ಕಾಮಗಾರಿಗೆ ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಭೂಮಿಪೂಜೆ ನೆರವೇರಿಸಿದರು. ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಹೆಚ್.ಎಸ್.ನಂಜುಂಡಪ್ರಸಾದ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ಎಂ.ಮುನಿರಾಜು, ಗ್ರಾಮದ ಗೌಡಿಕೆ ಮಹದೇವಪ್ಪ, ಮುಖಂಡರಾದ ಕೆ.ಎಸ್.ಶಿವಪ್ರಕಾಶ್, ಶ್ರೀಕಂಠಪ್ಪ, ಕಮರಹಳ್ಳಿ ಕುಮಾರ್, ಶಿವರಾಮಪ್ಪ, ಸಂಗಪ್ಪ, ರಾಜೇಶ್, ಗ್ರಾಪಂ ಸದಸ್ಯರು ಇದ್ದರು.

ಸತ್ತೇಗಾಲದಲ್ಲಿ ಅಕ್ರಮ ಮದ್ಯ ವಶ

ಕೊಳ್ಳೇಗಾಲ, ಆ.27–ತಾಲೂಕಿನ ಸತ್ತೇಗಾಲ ಗ್ರಾಮದ ಕೋಟೆ ಬೀದಿಯಲ್ಲಿ ಸೋಮವಾರ ಮಹಿಳೆ ಅಕ್ರಮವಾಗಿ ಸಾಗಿಸುತ್ತಿದ್ದ ಮದ್ಯದ 20 ಪೌಚ್‌ಗಳನ್ನು ಕೊಳ್ಳೇಗಾಲ ಗ್ರಾಮಾಂತರ ಠಾಣೆ ಪೊಲೀಸರು ವಶಪಡಿಸಿಕೊಂಡಿದ್ದಾರೆ.


ಠಾಣೆ ಆರಕ್ಷಕ ಉಪನಿರೀಕ್ಷಕ ಎ.ಎಸ್.ಸುಪ್ರೀತ್ ಮಾಹಿತಿ ಮೇರೆಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡಲು ಕೊಂಡೊಯ್ಯುತ್ತಿದ್ದ ಮಹಿಳೆಯಿಂದ 799 ರೂ. ಮೌಲ್ಯದ ಮದ್ಯದ ಪೌಚ್‌ಗಳನ್ನು ವಶಕ್ಕೆ ಪಡೆದು, ಪ್ರಕರಣ ದಾಖಲಿಸಿದ್ದಾರೆ.

ಲಾಟರಿ ಮಾರುತ್ತಿದ್ದವನ ಬಂಧನ

ಕೊಳ್ಳೇಗಾಲ, ಆ.27–ಪಟ್ಟಣದ ಗಣಪತಿ ದೇವಸ್ಥಾನ ಹತ್ತಿರದ ಮಂಜುನಾಥ ಚಿಲ್ಲರೆ ಅಂಗಡಿ ಮುಂಭಾಗ ವಾಟ್ಸ್‌ಆ್ಯಪ್‌ನಲ್ಲಿ ಕೇರಳದ ಲಾಟರಿ ಮಾರುತ್ತಿದ್ದ ವ್ಯಕ್ತಿಯನ್ನು ಪೊಲೀಸರು ಸೋಮವಾರ ಬಂಧಿಸಿದ್ದಾರೆ.

ಪಟ್ಟಣ ಪೊಲೀಸ್ ಠಾಣೆ ಆರಕ್ಷಕರ ಉಪನಿರೀಕ್ಷಕರಾದ ಬಿ.ವಿ.ವರ್ಷ ಮಧ್ಯಾಹ್ನ 2 ಗಂಟೆಯಲ್ಲಿ ದಾಳಿ ನಡೆಸಿ, ವಾಟ್ಸ್‌ಆ್ಯಪ್ ಮೂಲಕ ಮಾರುತ್ತಿದ್ದ ಕೇರಳದ ಲಾಟರಿ, ಆರೋಪಿ ಹಾಗೂ ಮೊಬೈಲ್ ವಶಪಡಿಸಿಕೊಂಡು, ಪ್ರಕರಣ ದಾಖಲಿಸಿದ್ದಾರೆ.

ಈಶ್ವರ್ ಆಚಾರ್ ನಿಧನ



ಹನೂರು, ಆ.27–ಮಲೆಮಹದೇಶ್ವರ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರ ಕಾರ್ಯದರ್ಶಿ ಎ.ಈ. ರಘು ಅವರ ತಂದೆ ಈಶ್ವರ್ ಆಚಾರ್ (70) ಅನಾರೋಗ್ಯದಿಂದ ಮಂಗಳವಾರ ನಿಧನರಾದರು. ಮೃತರು ಪತ್ನಿ, ಪುತ್ರ ಎ.ಈ.ರಘು, ಇಬ್ಬರು ಪುತ್ರಿಯರು, ಮೊಮ್ಮಕ್ಕಳು, ಅಪಾರ ಬಂಧು–ಬಳಗ ಅಗಲಿದ್ದಾರೆ.

ಬುಧವಾರ ಮಧ್ಯಾಹ್ನ 1 ಗಂಟೆಗೆ ಹೆಚ್.ಡಿ.ಕೋಟೆ ತಾಲೂಕಿನ ಆಲನಹಳ್ಳಿ ಗ್ರಾಮದ ಮೃತರ ಜಮೀನಿನಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಂತಾಪ: ಶಾಸಕ ಎಂ.ಆರ್.ಮಂಜುನಾಥ್, ಮಾಜಿ ಶಾಸಕ ಆರ್.ನರೇಂದ್ರ, ಮಲೆಮಹದೇಶ್ವರ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಉಪ ಕಾರ್ಯದರ್ಶಿ ಚಂದ್ರಶೇಖರ್, ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಗೌರವಾಧ್ಯಕ್ಷ ದೇವರಾಜ್ ನಾಯ್ಡು, ಅಧ್ಯಕ್ಷ ಮಹಾದೇಶ್, ಕಾರ್ಯದರ್ಶಿ ಬಸವರಾಜು, ಪದಾಧಿಕಾರಿಗಳು ಹಾಗೂ ಪ್ರಾಧಿಕಾರದ ಸಿಬ್ಬಂದಿ ಸಂತಾಪ ಸೂಚಿಸಿದ್ದಾರೆ.

ಒಂದನೇ ಪುಟದಿಂದ

ಜೈಲಿಗೆ ನಟ ದರ್ಶನ್ ಸ್ಥಳಾಂತರ

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬೆಳಗ್ಗೆಯಷ್ಟೇ ಸೂಚಿಸಿದ್ದರು. ಹಿರಿಯ ಪೊಲೀಸ್ ಹಾಗೂ ಜೈಲು ಅಧಿಕಾರಿಗಳ ಜೊತೆ ಸಭೆ ನಡೆಸಿದ ಮುಖ್ಯಮಂತ್ರಿ ಅವರು, ಬೆಳಗಾವಿಯ ಹಿಂಡಲಗಾ ಕಾರಾಗೃಹ ಬದಲು ಬಳ್ಳಾರಿಗೆ ಕಳುಹಿಸಿ ಎಂದು ಆದೇಶಿಸಿದ್ದರು. ದರ್ಶನ್ ಅಲ್ಲದೆ, ಇತರ ಎಲ್ಲಾ 18 ಆರೋಪಿಗಳನ್ನೂ ರಾಜ್ಯದ ವಿವಿಧ ಕಾರಾಗೃಹಗಳಿಗೆ ಸ್ಥಳಾಂತರ ಮಾಡಿ ಯಾರನ್ನೂ ಬೆಂಗಳೂರಿನಲ್ಲಿ ಇಡಬೇಡಿ. ಪರಪ್ಪನ ಅಗ್ರಹಾರ ಜೈಲಿನಲ್ಲಿ ವಿಚಾರಣಾಧೀನ ಕೈದಿಯಾಗಿರುವ ದರ್ಶನ್ ರೌಡಿಶೀಟರ್‌ಗಳ ಜೊತೆ ವಿಶೇಷ ಸೌಲಭ್ಯ ಅನುಭವಿಸುತ್ತಿರುವ ದೃಶ್ಯಗಳು ಬಹಿರಂಗಗೊಂಡ ನಂತರ ಸರ್ಕಾರ ಇದನ್ನು ಗಂಭೀರವಾಗಿ ತೆಗೆದುಕೊಂಡಿದೆ.

ಎರಡನೇ ದಿನವಾದ ಇಂದು ಅಧಿಕಾರಿಗಳು ಮುಖ್ಯಮಂತ್ರಿ ಅವರನ್ನು ಭೇಟಿ ಮಾಡಿ ದರ್ಶನ್ ಅವರನ್ನು ಬಳ್ಳಾರಿ ಜೈಲಿಗೆ ಕಳುಹಿಸಲು ಎಲ್ಲಾ ಸಿದ್ಧತೆ ಮಾಡಿಕೊಂಡಿದ್ದೇವೆ. ಕಾನೂನು ರೀತ್ಯಾ ನ್ಯಾಯಾಲಯದ ಅನುಮತಿ ಪಡೆದು ಸ್ಥಳಾಂತರಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಮಧ್ಯೆ ಪ್ರವೇಶಿಸಿದ ಮುಖ್ಯಮಂತ್ರಿ, ಅವರೊಬ್ಬರನ್ನೇ ಅಲ್ಲ, ಎಲ್ಲಾ ಆರೋಪಿಗಳನ್ನು ವಿವಿಧ ಕಾರಾಗೃಹಗಳಿಗೆ ಸ್ಥಳಾಂತರಿಸಿ. ಇಂತಹ ಕೃತ್ಯಗಳನ್ನು ಸರ್ಕಾರ ಸಹಿಸಿಕೊಳ್ಳದು. ನೀವುಗಳು ಎಚ್ಚರಿಕೆಯಿಂದ ಕೆಲಸ ನಿರ್ವಹಿಸಬೇಕು.

ದರ್ಶನ್ ಪ್ರಕರಣ ಸಾರ್ವಜನಿಕವಾಗಿ ವ್ಯಾಪಕ ಟೀಕೆಗೆ ಗುರಿಯಾಗಿದೆ, ನೀವುಗಳು ಸರಿಯಾಗಿ ಕರ್ತವ್ಯ ನಿರ್ವಹಿಸಿದ್ದರೆ, ಇಂತಹ ಘಟನೆಗಳು ನಡೆಯುತ್ತಿರಲಿಲ್ಲ. ಪ್ರಕರಣ ನಿಮಗೆ ಮತ್ತು ಸರ್ಕಾರಕ್ಕೆ ಎಚ್ಚರಿಕೆ ಗಂಟೆಯಾಗಿದೆ. ಮುಂದೆ ಈ ರೀತಿ ನಡೆಯದಂತೆ ಕ್ರಮಕೈಗೊಳ್ಳಿ ಎಂದರು. ಪ್ರಕರಣಕ್ಕೆ ಸಂಬಂಧಿಸಿದಂತೆ ಅಮಾನತುಗೊಂಡಿರುವ ಅಧಿಕಾರಿಗಳ ಬಗ್ಗೆ ತ್ವರಿತವಾಗಿ ತನಿಖೆ ನಡೆಸಿ ವರದಿ ಕೊಡಿ ಎಂದು ಸೂಚಿಸಿದ್ದರು.

ಜೈಲು ಅಕ್ರಮಗಳ ತನಿಖೆ: ಈ ಸಂಬಂಧ ಪ್ರತ್ಯೇಕವಾಗಿ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಕೊಲೆ ಪ್ರಕರಣದಲ್ಲಿ ಬಂಧಿತನಾಗಿ ಪರಪ್ಪನ ಅಗ್ರಹಾರ ಕಾರಾಗೃಹದಲ್ಲಿ ನ್ಯಾಯಾಂಗ ಬಂಧನದಲ್ಲಿರುವ ನಟ ದರ್ಶನ್ ಮತ್ತು ಇತರ ಆರೋಪಿಗಳನ್ನು ಬೇರೆ ಜೈಲಿಗೆ ಸ್ಥಳಾಂತರಿಸುವ ವಿಚಾರವನ್ನು ಸರ್ಕಾರ ತೀರ್ಮಾನ ಮಾಡುವುದಿಲ್ಲ, ಕೋರ್ಟ್ ನಿರ್ದೇಶನದ ಮೇರೆಗೆ ಬಂಧೀಖಾನೆ ಪ್ರಾಧಿಕಾರ ಆರೋಪಿಗಳನ್ನು ಸ್ಥಳಾಂತರ ಮಾಡುತ್ತದೆ ಎಂದರು.

ದರ್ಶನ್ ವಿಚಾರಣಾಧೀನ ಕೈದಿಯಾಗಿರುವುದರಿಂದ ಕೆಲವು ನಿಯಮಗಳ ಪ್ರಕಾರವೇ ಸ್ಥಳಾಂತರ ಮಾಡಬೇಕಾಗುತ್ತದೆ. ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಭದ್ರತೆ ದೃಷ್ಟಿಯಿಂದ ಆಂತರಿಕ ಆಡಳಿತದ ಬದಲಾವಣೆ ಮಾಡಬಹುದು, ಆದರೆ, ಮೂರು ಭಾಗ ಮಾಡಲು ಆಗುವುದಿಲ್ಲ, ಬ್ಲಾಕ್ 1, ಬ್ಲಾಕ್ 2, ಬ್ಲಾಕ್ 3 ಇವೆ, ಅದರ ಜೊತೆಗೆ ಬೇರೆ ಬ್ಯಾರಕ್‌ಗಳಿವೆ. ಇದರಲ್ಲಿ ಕೈದಿಗಳನ್ನು ಇರಿಸಲು ಮಾರ್ಪಾಡು ತರಬಹುದು, ಭಾಗ ಮಾಡಲಾಗದು.

ಕಾರಾಗೃಹದಲ್ಲಿ ರೌಡಿಶೀಟರ್ ವಿಲ್ಸನ್ ಗಾರ್ಡನ್ ನಾಗ ಎಂಬುವನಿಗೆ ಒಂದು ಬ್ಯಾರಕ್‌ನಿಂದ ಮತ್ತೊಂದು ಬ್ಯಾರಕ್‌ಗೆ ಹೋಗಲು ಅವಕಾಶ ಕೊಟ್ಟಿದ್ದಾರೆ ಎಂಬುದು ನಿನ್ನೆ ಜೈಲಿಗೆ ಭೇಟಿ ನೀಡಿದ್ದ ವೇಳೆ ತಿಳಿಯಿತು. ಈ ದೃಶ್ಯಾವಳಿ ಸಿಸಿ ಕ್ಯಾಮರಾದಲ್ಲೂ ಸೆರೆಯಾಗಿದೆ. ಈ ಹಿನ್ನೆಲೆಯಲ್ಲಿ ನಾವು ಕ್ರಮ ಕೈಗೊಳ್ಳಲು ಸಾಧ್ಯವಾಗಿದೆ, ಈಗಾಗಲೇ 9 ಅಧಿಕಾರಿಗಳನ್ನು ಅಮಾನತು ಮಾಡಿದ್ದೇವೆ, ಜೈಲಿನ ಮುಖ್ಯ ಅಧೀಕ್ಷಕ, ಅಧೀಕ್ಷಕರನ್ನು ಸಹ ಅಮಾನತು ಮಾಡಿದ್ದೇವೆ. ಈ ಸ್ಥಳಗಳಿಗೆ ಬೇರೆ ಅಧಿಕಾರಿಗಳನ್ನು ನಿಯೋಜಿಸಲಾಗುವುದು. ಕಾರಾಗೃಹದಲ್ಲಿ ನಟ ದರ್ಶನ್‌ಗೆ ಸಹಕಾರ ನೀಡಿದವರನ್ನೆಲ್ಲಾ ಅಮಾನತು ಮಾಡಲಾಗಿದೆ. ತನಿಖೆ ಇನ್ನೂ ಮುಂದುವರೆದಿದೆ. ಹೆಚ್ಚಿನ ತನಿಖೆಗಾಗಿ ಒಬ್ಬರು ಹಿರಿಯ ಐಪಿಎಸ್ ಅಧಿಕಾರಿಯ ನೇಮಕ ಮಾಡುತ್ತೇವೆ. ಅವರು ಕೊಡುವ ವರದಿ ಆಧರಿಸಿ ಶಾಶ್ವತ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದರು.

ಕಾನೂನು ಸಚಿವ ಹೆಚ್.ಕೆ.ಪಾಟೀಲ್, ಈ ಹಿಂದೆ ಸಾರ್ವಜನಿಕ ಲೆಕ್ಕಪತ್ರ ಸಮಿತಿ ಅಧ್ಯಕ್ಷರಾಗಿದ್ದ ವೇಳೆ 2020ರಲ್ಲಿ ಜೈಲು ಸುಧಾರಣೆಗೆ ವರದಿ ನೀಡಿರುವುದು ನಿನ್ನೆ ತಮ್ಮ ಗಮನಕ್ಕೆ ಬಂದಿದ್ದು, ವರದಿ ತರಿಸಿಕೊಂಡು ಪರಿಶೀಲಿಸಲಾಗುವುದು. ಡಾ.ಮನಮೋಹನ ಸಿಂಗ್ ಪ್ರಧಾನಿಯಾಗಿದ್ದ ವೇಳೆ ರಾಷ್ಟ್ರಮಟ್ಟದಲ್ಲಿ ಪೊಲೀಸ್ ಸುಧಾರಣೆ, ಕಾರಾಗೃಹ ಸುಧಾರಣೆಗೆ ವರದಿ ನೀಡಲಾಗಿತ್ತು, ಆ ವರದಿಯನ್ನೂ ತರಿಸಿಕೊಳ್ಳಲಾಗುವುದು, ಈಗಿನ ವ್ಯವಸ್ಥೆ ಸುಧಾರಣೆ ಮಾಡಲಾಗುವುದು. ಪರಪ್ಪನ ಅಗ್ರಹಾರದಲ್ಲಿ ನಡೆದ ಘಟನೆ ಬಗ್ಗೆ ಮಾತ್ರ ತನಿಖೆ ನಡೆಸುತ್ತಿಲ್ಲ, ಬದಲಿಗೆ ರಾಜ್ಯದ ಎಲ್ಲ ಕಾರಾಗೃಹಗಳಲ್ಲಿ ಏನು ನಡೆಯುತ್ತಿದೆ, ಅಲ್ಲಿನ ವ್ಯವಸ್ಥೆಯನ್ನೂ ಪರಿಶೀಲಿಸಲಾಗುವುದು, ಐಪಿಎಸ್ ಅಧಿಕಾರಿ ನೇತೃತ್ವದಲ್ಲಿ ಸಮಿತಿ ರಚಿಸಿ ವರದಿ ತರಿಸಿಕೊಳ್ಳಲಾಗುವುದು, ಹಿಂಡಲಗಾ ಜೈಲಿಗೆ ಭೇಟಿ ನೀಡಿದಾಗ ಕೆಲವು ಲೋಪದೋಷಗಳು ಕಂಡುಬಂದಿತ್ತು, ಆಗ ಕ್ರಮ ಕೈಗೊಳ್ಳಲಾಗಿತ್ತು, ಶಿವಮೊಗ್ಗ, ಮಂಗಳೂರು ಕಾರಾಗೃಹಗಳನ್ನೂ ಪರಿಶೀಲಿಸಲಾಗುವುದು. ಸಾಕ್ಷಿಗಳನ್ನು ಹೆದರಿಸುವ ಫೋಟೋ ಗಳು ವೈರಲ್ ಆಗುತ್ತಿದೆ ಎಂಬ ಬಿಜೆಪಿ ಆರೋಪ ಸರಿಯಲ್ಲ, ಅದರ ಅಗತ್ಯ ನಮಗಿಲ್ಲ, ನ್ಯಾಯಯುತವಾಗಿ ಯಾರಿಗೆ ಏನು ಶಿಕ್ಷೆ ಆಗಬೇಕು, ಯಾರಿಗೆ ನ್ಯಾಯ ಸಿಗಬೇಕು, ನ್ಯಾಯಯುತವಾಗಿ ಕಾನೂನು ಚೌಕಟ್ಟಿನಲ್ಲಿ ಕ್ರಮಕೈಗೊಳ್ಳುತ್ತೇವೆ, ಇದರಲ್ಲಿ ರಾಜಕೀಯ ಲಾಭ ಪಡೆಯುವ ಅಗತ್ಯವಿಲ್ಲ ಎಂದರು.

ದರ್ಶನ್ ಮತ್ತಿನ್ಯಾರ ಜೊತೆ ಮಾತಾಡ್ಬೇಕು!

ಸಿಗುವ ವ್ಯವಸ್ಥೆ ಕೇವಲ ಬೆಂಗಳೂರಿನ ಕೇಂದ್ರ ಕಾರಾಗೃಹದಲ್ಲಿ ಮಾತ್ರವಲ್ಲ ಕರ್ನಾಟಕ, ಇಡೀ ಇಂಡಿಯಾದಲ್ಲಿ ಮತ್ತು ಅಮೆರಿಕದಂತಹ ದೇಶಗಳಲ್ಲಿ ಕೂಡ ನಡೆಯುತ್ತದೆ. ಇದು ವ್ಯವಸ್ಥೆಯಲ್ಲಿ ಭ್ರಷ್ಟಾಚಾರ ಖಂಡಿತಾ ಸರಿಯಲ್ಲ, ಕಾನೂನಿಗೆ ವಿರುದ್ಧವಾಗಿದೆ. ಆದರೆ ವ್ಯವಸ್ಥೆಯಲ್ಲಿರುವ ಭ್ರಷ್ಟಾಚಾರ, ಹೀಗಿರುವಾಗ ನೀವು ದರ್ಶನ್ ಒಬ್ಬ ವ್ಯಕ್ತಿಯನ್ನೇ ಗುರಿಯಾಗಿಟ್ಟುಕೊಂಡು ಏಕೆ ಮಾತನಾಡುತ್ತೀರಿ ಎಂದು ಪ್ರಶ್ನಿಸಿದರು.

ಜೈಲಲ್ಲಿ ಈ ರೀತಿ ನಡೆಯುತ್ತಿರುವುದು ಇದೇ ಮೊದಲಾ ಎಂದು ನೀವೇ ಎದೆ ಮುಟ್ಟಿಕೊಂಡು ಒಂದು ಸಾರಿ ಹೇಳಿ. ಎಷ್ಟೋ ವರ್ಷಗಳಿಂದ ಈ ರೀತಿ ನಡೆಯುತ್ತಿದೆ. ದರ್ಶನ್ ಇರೋದರಿಂದ ಅವರದ್ದು ತಪ್ಪು ಎಂದು ಫೋಕಸ್ ಆಗುತ್ತಿದೆ. ಈ ಹಿಂದೆ ಐಪಿಎಸ್ ಅಧಿಕಾರಿ ಡಿ ರೂಪಾ ಅವರು ಈ ಬಗ್ಗೆ ಆಕ್ಷೇಪ ಎತ್ತಿ ಇಂತಹ ವ್ಯವಸ್ಥೆಗೆ ಕಡಿವಾಣ ಹಾಕಬೇಕೆಂದು ಒತ್ತಾಯಿಸಿದ್ದರು.

ಆ ಸಮಯದಲ್ಲಿ ಮಾಧ್ಯಮಗಳು ಸರ್ಕಾರವನ್ನು ಏಕೆ ಪ್ರಶ್ನೆ ಮಾಡಲಿಲ್ಲ. ಈ ಸಮಸ್ಯೆಗೆ ಪರಿಹಾರ ಸಿಗಬೇಕೆಂದು ಅನಿಸಲಿಲ್ಲ. ಆ ಸಮಯದಲ್ಲಿ ಇದನ್ನು ಸುದ್ದಿ ಮಾಡದೆ ಅವರನ್ನೇ ವರ್ಗ ಮಾಡಲಾಗಿತ್ತು ಎಂದು ಹೇಳಿದರು.

ಜೈಲಿನ ಅಧಿಕಾರಿಗಳು ಗಮನಹರಿಸಬೇಕು: ಜೈಲಿನಲ್ಲಿರುವವವರು ಕ್ರಿಮಿನಲ್ ಹಿನ್ನೆಲೆಯಿಂದ ಬಂದಿರುವವರೇ ಆಗಿರುತ್ತಾರೆ. ದರ್ಶನ್ ಅವರ ಜೊತೆ ಓಡಾಡದೆ ಮತ್ತಿನ್ಯಾರ ಜೊತೆ ಓಡಾಡಬೇಕು. ಈ ಬಗ್ಗೆ ಜೈಲಿನ ಅಧಿಕಾರಿಗಳು ಗಮನಹರಿಸಬೇಕು. ಜೈಲಲ್ಲಿ ಜೊತೆಯಲ್ಲಿ ಕೂರಲು, ಮಾತನಾಡಲು ಮತ್ತಿನ್ಯಾರು ಸಿಗ್ತಾರೆ, ಕ್ರಿಮಿನಲ್ಸ್ ಹಿನ್ನೆಲೆಯುಳ್ಳವರ ಜೊತೆಯೇ ಮಾತನಾಡಬೇಕು ತಾನೇ. ಜೈಲಲ್ಲಿ ಮತ್ತಿನ್ಯಾರನ್ನೂ ಮಾತನಾಡಿಸಬಾರದು ಎಂಬ ರೀತಿಯಲ್ಲಿ ನೀವು ಹೇಳುತ್ತಿದ್ದೀರಿ ಎಂದು ಮಾಧ್ಯಮ ಪ್ರತಿನಿಧಿಗಳನ್ನೇ ಸುಮಲತಾ ಪ್ರಶ್ನಿಸಿದರು. ಜೈಲಲ್ಲಿ ಪಾರ್ಟಿ ಮಾಡುವುದು ಖಂಡಿತಾ ತಪ್ಪು, ಅದಕ್ಕಾಗಿಯೇ ಕೆಲವೊಂದು ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡಿದ್ದಾರೆ. ಮುಂದೆ ಸೂಕ್ತ ಕ್ರಮ ಕೈಗೊಳ್ಳುತ್ತಾರೆ ಎಂದರು.

ಕಾಂಗ್ರೆಸ್ ಶಾಸಕರ ಪರೇಡ್

ಕುಮಾರಸ್ವಾಮಿ ಸೇರಿದಂತೆ ನಾಲ್ವರ ಬಗ್ಗೆ ವಿವಿಧ ಸಂಸ್ಥೆಗಳು ತನಿಖೆ ನಡೆಸಿ ಎಫ್‌ಐಆರ್ ದಾಖಲಿಸಿ ಅವರ ವಿರುದ್ಧ ಕ್ರಮ ಕೈಗೊಳ್ಳಲು ನಿಮಗೆ ಅನುಮತಿ ಕೋರಿ ಪತ್ರಬರೆದಿವೆ ರಾಜ್ಯ ಸಚಿವ ಸಂಪುಟ ಕೂಡ ಇದೇ ವಿಷಯದಲ್ಲಿ ನಿರ್ಣಯ ಕೈಗೊಂಡು ರಾಜಭವನಕ್ಕೆ ಸರ್ಕಾರದ ವತಿಯಿಂದಲೇ ಪತ್ರ ಬರೆದಿದ್ದರೂ ಇದುವರೆಗೂ ಯಾವುದೇ ಉತ್ತರವಿಲ್ಲ. ಸಂವಿಧಾನದ ಚೌಕಟ್ಟಿನಲ್ಲಿ ಕಾನೂನು ರೀತ್ಯಾ ಕ್ರಮ ಕೈಗೊಳ್ಳಿ ಎಂದು ನಾವು ಮನವಿ ಮತ್ತು ಒತ್ತಾಯ ಮಾಡುತ್ತೇವೆ ಎಂದರು.

ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ: ಸುದ್ದಿಗೋಷ್ಠಿಯಲ್ಲಿ ಕುಮಾರಸ್ವಾಮಿ ವಿರುದ್ಧ ಏಕವಚನದಲ್ಲೇ ಮಾತನಾಡಿದ ಶಿವಕುಮಾರ್, ಕೇಂದ್ರದಲ್ಲಿ ಮಂತ್ರಿಯಾಗಿರುವ ಇವರಿಗೆ ಕಾನೂನಿನ ಅರಿವಿಲ್ಲವೇ ಎಂದು ಪ್ರಶ್ನಿಸಿದರು. ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಗಣಿಗಾರಿಕೆಗೆ ಅವಕಾಶ ನೀಡಿದ್ದಾರೆ. ಸಾಯಿ ಮಿನರಲ್ಸ್‌ಗೆ ತಾವು ಅನುಮತಿ ನೀಡಿಲ್ಲ, ನನ್ನ ಸಹಿ ಫೋರ್ಜರಿ ಎಂಬುದಾಗಿ ಹೇಳುತ್ತಾರೆ. ಅವರ ಸಹಿ ಫೋರ್ಜರಿ ಆಗಿದ್ದರೆ, ಮುಖ್ಯಮಂತ್ರಿಗೋ ಇಲ್ಲವೇ ಒಬ್ಬ ಪೊಲೀಸ್ ಪೇದೆಗೋ ದೂರು ನೀಡಲಿ. ಈ ಬಗ್ಗೆ ಸರ್ಕಾರ ತನಿಖೆ ನಡೆಸಿ ಯಾರ್ಯಾರು ಶಾಮೀಲಾಗಿದ್ದಾರೋ ಅವರ ಮೇಲೆ ಕ್ರಮ ಕೈಗೊಳ್ಳುತ್ತೆ.


ಯಾಕಪ್ಪಾ ಕುಮಾರಸ್ವಾಮಿ, ನಿನ್ನ ಸಹಿ ಫೋರ್ಜರಿ ಆಗಿದ್ದರೆ ಇದುವರೆಗೂ ಏಕೆ ದೂರು ನೀಡಿಲ್ಲ, ಎಲ್ಲಾ ಕಾನೂನು ನಿನ್ನ ಜೇಬಿನಲ್ಲೇ ಇದೆ ಎನ್ನುವ ನಿನಗೆ ಅಷ್ಟೂ ಪರಿಜ್ಞಾನವಿಲ್ಲವೇ ಎಂದು ವ್ಯಂಗ್ಯವಾಡಿದರು.

ಸಾಯಿ ಮಿನರಲ್ಸ್‌ಗೆ ಗಣಿಗಾರಿಕೆಗೆ ಅನುಮತಿ ನೀಡುವಂತೆ ಕೇಂದ್ರಕ್ಕೆ ಶಿಫಾರಸು ಮಾಡಿರುವುದಾಗಿ ನ್ಯಾಯಾಲಯಕ್ಕೆ ನೀನೆ ಪ್ರಮಾಣಪತ್ರ ಸಲ್ಲಿಸಿರುವುದಾಗಿ ಒಂದೆಡೆ ಹೇಳುತ್ತಿಯಾ. ಮತ್ತೊಂದೆಡೆ, ನಾನು ಶಿಫಾರಸ್ಸೇ ಮಾಡಿಲ್ಲ, ಸಹಿಯನ್ನೇ ಮಾಡಿಲ್ಲ ಎನ್ನುತ್ತೀಯಾ ಎಂದು ಶಿವಕುಮಾರ್ ದಾಖಲೆಗಳನ್ನು ಪ್ರದರ್ಶಿಸಿದರು.

ನಾನು, ಈ ಹಿಂದೆ ನಿಮ್ಮ ಆಸ್ತಿ–ಪಾಸ್ತಿಗಳ ಬಗ್ಗೆ ಕೇಳಿದ ಪ್ರಶ್ನೆಗಳಿಗೆ ಇದುವರೆಗೂ ಉತ್ತರಿಸಿಲ್ಲ, ಆದರೆ, ನಮ್ಮ ಬಗ್ಗೆ ಮಾತ್ರ ಎಲ್ಲಾ ಕೆದಕುತ್ತಾ ಕೂರುತ್ತೀಯಾ ಎಂದು ಕಿಡಿಕಾರಿದರು. ಪ್ರಕರಣಗಳಿಗೆ ಸಂಬಂಧಿಸಿದಂತೆ ಎಸ್‌ಐಟಿ ಸೇರಿದಂತೆ ವಿವಿಧ ಸಂಸ್ಥೆಗಳು ತನಿಖೆ ನಡೆಸಿ ವರದಿ ಸಲ್ಲಿಸಿವೆ. ರಾಜ್ಯಪಾಲರು ತಕ್ಷಣವೇ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಬೇಕು. ಇದನ್ನು ಒತ್ತಾಯಿಸಲು ನಾವು ಕಾಲ್ನಡಿಗೆ ಹಮ್ಮಿಕೊಂಡಿದ್ದೇವೆ ಎಂದರು.

ಮೈಸೂರು ಕೇಂದ್ರ ಬಸ್ ನಿಲ್ದಾಣ ಸ್ಥಳಾಂತರಕ್ಕೆ ಆಗ್ರಹ

ಈ ಸಂಬಂಧ ಜಿಲ್ಲಾಧಿಕಾರಿಗೆ ಮಾಜಿ ಮೇಯರ್ ಸಂದೇಶ್ ಸ್ವಾಮಿ ಪತ್ರ ಬರೆದು ಮನವಿ


ಸಂದೇಶ್ ಸ್ವಾಮಿ



ಮೈಸೂರು, ಆ.27(ಎಸ್‌ಬಿಡಿ)– ಮೈಸೂರಿನ ಕೇಂದ್ರಬಸ್ ನಿಲ್ದಾಣ (ಸಬರ್ಬನ್ ಬಸ್ ಸ್ಟ್ಯಾಂಡ್) ವನ್ನು ವಿಶಾಲವಾದ ಸೂಕ್ತ ಜಾಗಕ್ಕೆ ಸ್ಥಳಾಂತರಿಸುವಂತೆ ಮಾಜಿ ಮೇಯರ್ ಸಂದೇಶ್ ಸ್ವಾಮಿ, ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

ಪ್ರಯಾಣಿಕರ ಸಂಖ್ಯೆ ಹಾಗೂ ಬಸ್ಸುಗಳ ಸಂಖ್ಯೆ ಹೆಚ್ಚುತ್ತಿರುವುದರಿಂದ ಸಬರ್ಬನ್ ಬಸ್ ನಿಲ್ದಾಣದಲ್ಲಿ ಒತ್ತಡದ ಪರಿಸ್ಥಿತಿ ನಿರ್ಮಾಣವಾಗಿದೆ. 1970ರ ದಶಕದಲ್ಲಿ ನಿರ್ಮಿಸಿದ ಈ ನಿಲ್ದಾಣವನ್ನು 2007ರಲ್ಲಿ ನವೀಕರಿಸಲಾಗಿದೆ. ಪ್ರಸ್ತುತ ಪ್ರತಿನಿತ್ಯ ಮೂರು ಸಾವಿರಕ್ಕೂ ಹೆಚ್ಚು ಬಸ್ಸುಗಳು ಈ ನಿಲ್ದಾಣಕ್ಕೆ ಬಂದು ಹೋಗುತ್ತವೆ. ಆದರೆ ಇದು ತುಂಬಾ ಕಿರಿದಾದ ಸ್ಥಳವಾಗಿರುವ ಕಾರಣ ಪ್ರಯಾಣಿಕರು ಪ್ರಾಣ ಭೀತಿಯಿಂದ ಓಡಾಡುವಂತಾಗಿದೆ.

ನಿಲ್ದಾಣದ ಮುಂಭಾಗದ ಬಿ.ಎನ್. ರಸ್ತೆಯೂ ಅಧ್ವಾನವಾಗಿದೆ. ಈ ರಸ್ತೆಯಿಂದ ಬಸ್ಸುಗಳು ನಿಲ್ದಾಣದ ಒಳ ಹೋಗುವಾಗ ಹಾಗೂ ಹೊರಗೆ ಬರುವಾಗ ವಿಪರೀತ ವಾಹನ ದಟ್ಟಣೆ ನಿರ್ಮಾಣವಾಗುತ್ತದೆ. ವಾಹನ ಸವಾರರು ಮಾತ್ರವಲ್ಲದೆ ಪಾದಚಾರಿಗಳಿಗೂ ತೀವ್ರ ತೊಂದರೆಯಾಗುತ್ತಿದೆ. ಇದು ರಾಷ್ಟ್ರೀಯ ಹೆದ್ದಾರಿಯಾಗಿದ್ದು, ಎಫ್‌ಟಿಎಸ್ ವೃತ್ತದಿಂದ ಹಾರ್ಡಿಂಜ್ ವೃತ್ತದವರೆಗೆ ರಸ್ತೆ ಅಗಲೀಕರಣದೊಂದಿಗೆ ಅಭಿವೃದ್ಧಿಪಡಿಸುವ ಯೋಜನೆ ನನೆಗುದಿಗೆ ಬಿದ್ದಿದೆ. ಜಿಲ್ಲಾಧಿಕಾರಿಗಳು, ಮಹಾನಗರ ಪಾಲಿಕೆ ಆಯುಕ್ತರು, ನಗರ ಪೊಲೀಸ್ ಆಯುಕ್ತರು, ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿಗಳೊಂದಿಗೆ ಹಗಲು ಮತ್ತು ರಾತ್ರಿ ವೇಳೆ ಭೇಟಿ ನೀಡಿ, ಇಲ್ಲಿನ ಪರಿಸ್ಥಿತಿಯನ್ನು ಅವಲೋಕಿಸಬೇಕು.

ಸಬರ್ಬನ್ ಬಸ್ ನಿಲ್ದಾಣವನ್ನು ಬನ್ನಿಮಂಟಪ ಬಸ್ ಡಿಪೋ ವ್ಯಾಪ್ತಿಯ ಪ್ರದೇಶ ಅಥವಾ ಯಾವುದಾದರೂ ವಿಶಾಲವಾದ ಜಾಗಕ್ಕೆ ಸ್ಥಳಾಂತರಿಸಿ, ಇಲ್ಲಿಗೆ ಮೈಸೂರು ನಗರ ಬಸ್ ನಿಲ್ದಾಣವನ್ನು ಸ್ಥಳಾಂತರಿಸಿದರೆ ಪ್ರಯಾಣಿಕರು ಹಾಗೂ ಸಾರ್ವಜನಿಕರಿಗೆ ತುಂಬಾ ಅನುಕೂಲವಾಗಲಿದೆ. ಈವರೆಗೆ ಯಾವುದೇ ಅಧಿಕಾರಿಗಳಾಗಲೀ ಅಥವಾ ಜನಪ್ರತಿನಿಧಿಗಳಾಗಲೀ ಹಳೇ ವ್ಯವಸ್ಥೆಯನ್ನು ಬದಲಿಸಿ, ಹೊಸ ಸೌಲಭ್ಯ ಕಲ್ಪಿಸಲು ಮುಂದಾಗದಿರುವುದು ವಿಷಾದನೀಯ. ಈಗಲಾದರೂ ಬಸ್ ನಿಲ್ದಾಣ ಸ್ಥಳಾಂತರಕ್ಕೆ ಅಗತ್ಯ ಕ್ರಮ ವಹಿಸುವಂತೆ ಮನವಿ ಮಾಡಿದ್ದಾರೆ.

ವಿದ್ಯಾರ್ಥಿಗಳಿಗೆ ಪ್ರತ್ಯೇಕ ಬಸ್ ಕಲ್ಪಿಸಿ: ಗ್ಯಾರಂಟಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಬಸ್ ಸೇವೆ ಕಲ್ಪಿಸಿರುವ ಕಾರಣ, ದಿನನಿತ್ಯ ಶಾಲಾ– ಕಾಲೇಜಿನ ವಿದ್ಯಾರ್ಥಿಗಳು ಪ್ರಯಾಣಕ್ಕೆ ಪರಿ ತಪಿಸುವಂತಾಗಿದೆ. ಪ್ರತಿ ನಿಲ್ದಾಣದಲ್ಲಿ ವಿದ್ಯಾರ್ಥಿಗಳು ಗಂಟೆಗಟ್ಟಲೆ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ಶಾಲಾ–ಕಾಲೇಜು ಆರಂಭ ಹಾಗೂ ಮುಕ್ತಾಯದ ವೇಳೆಗಾದರೂ ಕೆಲವು ಬಸ್ಸುಗಳನ್ನು ವಿದ್ಯಾರ್ಥಿಗಳಿಗೆಂದೇ ಪ್ರತ್ಯೇಕವಾಗಿ ಕಲ್ಪಿಸಲು ಸಾರಿಗೆ ಅಧಿಕಾರಿಗಳಿಗೆ ಸೂಚಿಸುವಂತೆ ಜಿಲ್ಲಾಧಿಕಾರಿಗಳನ್ನು ಒತ್ತಾಯಿಸಿದ್ದಾರೆ.

ಕನ್ನಡ ಶಾಸ್ತ್ರೀಯ ಭಾಷಾ ಸ್ಥಾನಮಾನಕ್ಕೆ ವಚನ ಸಾಹಿತ್ಯದ ಕೊಡುಗೆಯೂ ಇದೆ


ಮನೆಮನೆಗೆ ವಚನ ಶ್ರಾವಣ ಸಂದೇಶ ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಬನ್ನೂರು ಕೆ.ರಾಜು ಮಾತನಾಡುತ್ತಿರುವುದು

ಮೈಸೂರು, ಆ.27(ಎಸ್‌ಪಿಎನ್)– ಕನ್ನಡ ಶಾಸ್ತ್ರೀಯ ಭಾಷಾ ಸ್ಥಾನಮಾನಕ್ಕೆ ವಚನ ಸಾಹಿತ್ಯದ ಕೊಡುಗೆಯೂ ದೊಡ್ಡದು ಎಂದು ಹಿರಿಯ ಸಾಹಿತಿ ಬನ್ನೂರು ಕೆ.ರಾಜು ಅಭಿಪ್ರಾಯಪಟ್ಟರು.

ಮೈಸೂರು ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ವಸತಿ ನಿಲಯದಲ್ಲಿ ಶರಣ ಸಾಹಿತ್ಯ ಪರಿಷತ್ ಮೈಸೂರು ಘಟಕ, ಕದಳಿ ಮಹಿಳಾ ವೇದಿಕೆ ಸಹಯೋಗದೊಂದಿಗೆ ನಡೆದ ವಚನ ಶ್ರಾವಣ: ಮನೆಮನೆಗೆ ವಚನ ಶ್ರಾವಣ ಸಂದೇಶ ಕಾರ್ಯಕ್ರಮದಲ್ಲಿ 'ಒಬ್ಬರ ಮನವ ನೋಯಿಸಿ, ಒಬ್ಬರ ಮನೆಯ ಘಾತವ ಮಾಡಿ ಗಂಗೆಯ ಮುಳುಗಿದಡೇನಾಗುವುದಯ್ಯಾ' ಸಿದ್ದರಾಮೇಶ್ವರರ ವಚನ ಕುರಿತು ಮಾತನಾಡಿದರು.

12ನೇ ಶತಮಾನದಲ್ಲಿ ಮಾನವತ್ವದ ಆದರ್ಶವನ್ನು ಬಿತ್ತಿ–ಬೆಳೆಸಿದವರು ಶರಣರು. ಇಂದಿನ ಕನ್ನಡ ಭಾಷೆಯಲ್ಲಿನ ಆಧ್ಯಾತ್ಮ ಬೆಳವಣಿಗೆಗೆ ಅಂದಿನ ವಚನಕಾರರ ಕೊಡುಗೆ ಅಪಾರ ಎಂದರು.

ಬೌದ್ಧಿಕವಾಗಿ ಶುದ್ಧತೆ ಕಾಪಾಡಿಕೊಂಡರೆ ಸಾಲದು. ಅಂತರಂಗದ ಶುದ್ಧತೆಗೂ ಆದ್ಯತೆ ನೀಡಬೇಕು. ಅಂತೆಯೇ ಸಮಾಜದಲ್ಲಿ ಕೆಟ್ಟದ್ದನ್ನು ಮಾಡಿದರೆ, ಶಿವ ಸಾನ್ನಿಧ್ಯ ಸಲ್ಲದು ಎಂದು ವಚನಕಾರ ಸಿದ್ದರಾಮೇಶ್ವರ ವಚನವನ್ನು ಉಲ್ಲೇಖಿಸಿ ಅಭಿಪ್ರಾಯಪಟ್ಟರು.

ರಂಗಾಯಣ ನಿವೃತ್ತ ಉಪನಿರ್ದೇಶಕ ಮ.ಗು.ಸದಾನಂದಯ್ಯ ಮಾತನಾಡಿ, ವಿದ್ಯಾರ್ಥಿಗಳ ಜೀವನ ಸಾರ್ಥಕಗೊಳ್ಳಬೇಕಾದರೆ, ವಿವಿಧ ವಚನಕಾರರ ಅಧ್ಯಯನ ಮುಖ್ಯ ಎಂದರು.

ಈ ವೇಳೆ ಶರಣ ಸಾಹಿತ್ಯ ಪರಿಷತ್‌ನ ಜಗದೀಶ್ ಚಿಕ್ಕಮಠ, ಗಿರಿಜಾ, ಜೆಎಸ್‌ಎಸ್ ಮಹಿಳಾ ವಸತಿ ನಿಲಯ ಪಾಲಕರಾದ ಮಮತಾ, ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷ ಶಾರದಾ ಶಿವಲಿಂಗಸ್ವಾಮಿ, ಲೋಕೇಶಪ್ಪ, ಉಮಾಪತಿ, ಚಿನ್ನಸ್ವಾಮಿ, ಶಿವನಂಜಯ್ಯ, ನಾಗರತ್ನ, ವಾಗ್ದೇವಿ ಉಪಸ್ಥಿತರಿದ್ದರು.

ಕಲುಷಿತ ನೀರು ಸೇವಿಸಿ ಇಬ್ಬರು ವೃದ್ಧೆಯರ ಸಾವು; ಐವರ ಸ್ಥಿತಿ ಗಂಭೀರ

ಮಂಡ್ಯ– ಹಾಸನ ಗಡಿ ಗ್ರಾಮ ಮಾರೇನಹಳ್ಳಿಯಲ್ಲಿ ಘಟನೆ

ಮಂಡ್ಯ, ಆ.27– ಕಲುಷಿತ ನೀರು ಸೇವಿಸಿ ಇಬ್ಬರು ವೃದ್ಧೆಯರು ಸಾವನ್ನಪ್ಪಿ, ಐವರ ಸ್ಥಿತಿ ಗಂಭೀರವಾಗಿರುವ ಘಟನೆ ಕೆ.ಆರ್.ಪೇಟೆ ತಾಲೂಕಿನ ಹಾಸನ ಜಿಲ್ಲೆಯ ಗಡಿ ಗ್ರಾಮ ಮಾರೇನಹಳ್ಳಿ ಗ್ರಾಮದಲ್ಲಿ ಜರುಗಿದ್ದು, ತಡವಾಗಿ ಬೆಳಕಿಗೆ ಬಂದಿದೆ.

ಕಳೆದ ನಾಲ್ಕು ದಿನಗಳ ಹಿಂದೆಯೇ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ ಅಸ್ವಸ್ಥಗೊಂಡಿದ್ದ ಜವರಮ್ಮ(100), ಚಿಕ್ಕಮ್ಮ(75) ಮೃತಪಟ್ಟಿದ್ದು, ಸುಮಾರು 12 ಮಂದಿ ಅಸ್ವಸ್ಥಗೊಂಡು ಹಾಸನದ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅವರಲ್ಲಿ ನಾಗಮ್ಮ ಸೇರಿದಂತೆ ಐವರ ಸ್ಥಿತಿ ಗಂಭೀರವಾಗಿದೆ. ಕೆಲವರು ವಾಂತಿ ಭೇದಿಯಿಂದ ನರಳುತ್ತಿದ್ದಾರೆ.

ಕೇವಲ 15 ಕುಟುಂಬಗಳಿರುವ ಚಿಕ್ಕ ಕುಗ್ರಾಮವಾಗಿರುವ ಮಾರೇನಹಳ್ಳಿಯಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯಿಲ್ಲ. ಪ್ರತಿನಿತ್ಯ ಗ್ರಾಮಸ್ಥರು ಕೊಳವೆ ಬಾವಿಯ ಕಲುಷಿತ ನೀರು ಸೇವಿಸಬೇಕಾದ ಪರಿಸ್ಥಿತಿ ಇದೆ. 15 ಕುಟುಂಬಗಳ ಪೈಕಿ 5 ಕುಟುಂಬಸ್ಥರು ಕಲುಷಿತ ನೀರು ಸೇವನೆಯಿಂದ ಅಸ್ವಸ್ಥಗೊಂಡಿದ್ದಾರೆ.


ಕಲುಷಿತ ನೀರಿನ ಸೇವನೆಯಿಂದ ಇಬ್ಬರು ಮೃತಪಟ್ಟಿದ್ದರೂ ಮಂಡ್ಯ ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಇಲಾಖೆ ಹಾಗೂ ತಾಲೂಕು ಆರೋಗ್ಯ ಇಲಾಖೆ ನಂಬುವ ಸ್ಥಿತಿಯಲ್ಲಿಲ್ಲ. ಜಿಲ್ಲಾಧಿಕಾರಿ, ಜಿಲ್ಲಾ ಆರೋಗ್ಯಾಧಿಕಾರಿ, ತಾಲೂಕು ಆರೋಗ್ಯಾಧಿಕಾರಿಗೂ ಮನವಿ ಮಾಡಿದ್ದೂ ನಿರ್ಲಕ್ಷ್ಯ ವಹಿಸಿದ್ದಾರೆ. ಅಲ್ಲದೆ, ಅಸ್ವಸ್ಥರನ್ನು ಕರೆದುಕೊಂಡು ಹೋಗಲು ಆಂಬುಲೆನ್ಸ್ ಕಳುಹಿಸಿ ಎಂದು ಮನವಿ ಮಾಡಿದರೂ ಸ್ಪಂದಿಸಿಲ್ಲ ಎಂದು ಗ್ರಾಮಸ್ಥರೊಬ್ಬರು ತಿಳಿಸಿದರು.

ಶುದ್ಧ ಕುಡಿಯುವ ನೀರು ಒದಗಿಸುವಂತೆ ಸಾಕಷ್ಟು ಬಾರಿ ಭಾರತೀಪುರ ಗ್ರಾಮ ಪಂಚಾಯಿತಿಗೆ ಮನವಿ ಮಾಡಿದರೂ ನಿರ್ಲಕ್ಷ್ಯ ವಹಿಸಿದ್ದಾರೆ. ಶುದ್ಧ ಕುಡಿಯುವ ನೀರಿಗಾಗಿ ಗ್ರಾಮಸ್ಥರು ಬೇರೆ ಗ್ರಾಮಗಳಿಗೆ ತೆರಳಬೇಕಾದ ಪರಿಸ್ಥಿತಿ ಇದೆ.

ಗ್ರಾಪಂ ಪಿಡಿಒ ಕೂಡ ಇದರ ಬಗ್ಗೆ ಸಂಪೂರ್ಣ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

> **ಕಳೆದ ನಾಲ್ಕು ದಿನಗಳ ಹಿಂದೆಯೇ ಮಾಹಿತಿ ಬಂದಿದೆ. ಇಬ್ಬರು ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ. ಅದರಲ್ಲಿ ಒಬ್ಬರು ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ ಎಂದು ಹೇಳಲಾಗುತ್ತಿದೆ. ಅಲ್ಲದೆ, ಗ್ರಾಮದ ನೀರನ್ನು ಪರೀಕ್ಷೆಗೆ ಕಳುಹಿಸಿದ್ದು, ವರದಿಯಲ್ಲಿ ಕುಡಿಯಲು ನೀರು ಯೋಗ್ಯವಾಗಿದೆ ಎಂದು ಬಂದಿದೆ ತಾಲೂಕು ಆರೋಗ್ಯಾಧಿಕಾರಿಗೆ ಮಾಹಿತಿ ನೀಡಿದ್ದರೂ ನಿರ್ಲಕ್ಷ್ಯ ವಹಿಸಿದ್ದಾರೆ. ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ನಾನು ಈ ಕೂಡಲೇ ಗ್ರಾಮಕ್ಕೆ ಭೇಟಿ ನೀಡಿ ಸಮಸ್ಯೆ ಬಗೆಹರಿಸುವ ಪ್ರಯತ್ನ ಮಾಡುವೆ.**
> -**ಡಾ.ಕೆ.ಮೋಹನ್,** ಜಿಲ್ಲಾ ಆರೋಗ್ಯಾಧಿಕಾರಿ, ಮಂಡ್ಯ

ಮೈಸೂರು ಜೈಲ್ ಕೈದಿಗಳಿಗೆ ಇನ್ನು ಹಾಟ್‌ಬಾಕ್ಸ್‌ನಲ್ಲಿ ಆಹಾರ ಪೂರೈಕೆ!



ಮೈಸೂರು, ಆ.27– ಮೈಸೂರು ಕೇಂದ್ರ ಕಾರಾಗೃಹವಾಸಿಗಳಿಗೆ ಹಾಟ್‌ಬಾಕ್ಸ್ ಮೂಲಕ ಬಿಸಿ ಆಹಾರ ಒದಗಿಸಲು ಯೋಜನೆ ರೂಪಿಸಲಾಗಿದೆ.

ಕಾರಾಗೃಹದಲ್ಲಿರುವ 800ಕ್ಕೂ ಹೆಚ್ಚು ಕೈದಿಗಳಿಗೆ ನಿಯಮದ ಪ್ರಕಾರ ನಿತ್ಯ ಸಂಜೆ 6.30ರೊಳಗೆ ರಾತ್ರಿ ಊಟ ವಿತರಿಸಲಾಗುತ್ತದೆ. ಆದರೆ ಅಷ್ಟು ಬೇಗ ಊಟ ಮಾಡಲಾಗದೆ ತಟ್ಟೆಗಳಲ್ಲಿ ಹಾಗೆಯೇ ಇಟ್ಟು ರಾತ್ರಿ ವೇಳೆ ಊಟ ಮಾಡುತ್ತಾರೆ. ಅಷ್ಟರಲ್ಲಿ ಊಟ ತಣ್ಣಗಾಗಿರುತ್ತದೆ. ಹೀಗೆ ತಣ್ಣಗಾದ ಆಹಾರ ಸೇವನೆಯಿಂದ ಕೈದಿಗಳ ಆರೋಗ್ಯದ ಮೇಲೆ ಪರಿಣಾಮವಾಗಬಹುದು. ಆದ್ದರಿಂದ ಮೊದಲ ಬಾರಿಗೆ ಹಾಟ್‌ಬಾಕ್ಸ್‌ನಲ್ಲಿ ಊಟ ನೀಡಲು ನಿರ್ಧರಿಸಲಾಗಿದೆ. ಈ ಯೋಜನೆ ಅನುಷ್ಠಾನಕ್ಕಾಗಿ ಕಾರಾಗೃಹ ಇಲಾಖೆಯ ಹಣಕಾಸು ವಿಭಾಗಕ್ಕೆ ಮಂಜೂರಾತಿಗಾಗಿ ಪತ್ರವನ್ನು ಬರೆದಿದ್ದು, ಅದಕ್ಕೆ ಅನುಮೋದನೆ ಸಿಕ್ಕಿದೆ ಎಂದು ತಿಳಿದುಬಂದಿದೆ.

ಕಾರಾಗೃಹದ ಬ್ಯಾರಕ್‌ನಲ್ಲಿ 15ರಿಂದ 30 ಕೈದಿಗಳಿದ್ದಾರೆ. ಸಂಖ್ಯೆಗೆ ಅನುಗುಣವಾಗಿ ವಿವಿಧ ಸಾಮರ್ಥ್ಯದ ಹಾಟ್‌ಬಾಕ್ಸ್‌ಗಳಲ್ಲಿ ಆಹಾರ ವಿತರಿಸಲು ಸಿದ್ಧತೆ ನಡೆಸಲಾಗಿದೆ. ಈ ನಿಟ್ಟಿನಲ್ಲಿ ನೋಂದಾಯಿತ ವರ್ತಕರು ಹಾಗೂ ಸಂಸ್ಥೆಗಳಿಂದ 10, 20, 30 ಲೀಟರ್‌ಗಳ 24 ಹಾಟ್‌ಬಾಕ್ಸ್‌ಗಳ ಖರೀದಿಗಾಗಿ ಜಿಎಸ್‌ಟಿ ಸಹಿತ ದರಪಟ್ಟಿಯನ್ನು ಕಾರಾಗೃಹವು ಆಹ್ವಾನಿಸಿದೆ. ಪಟ್ಟಿಯನ್ನು ಸೆ.5ರ ಸಂಜೆ 4 ಗಂಟೆಯೊಳಗೆ ಕೇಂದ್ರ ಕಾರಾಗೃಹದ ಸೂಪರಿಂಟೆಂಡೆಂಟ್ ಅವರಿಗೆ ನೀಡುವಂತೆ ಕೋರಲಾಗಿದೆ.

ಪರಪ್ಪನ ಅಗ್ರಹಾರ ಜೈಲಿಗೆ ಮೈಸೂರು ಜೈಲ್ ಅಧಿಕಾರಿಗಳ ನಿಯೋಜನೆ

ಬೆಂಗಳೂರು, ಆ.27: ಪರಪ್ಪನ ಅಗ್ರಹಾರ ಜೈಲಿನಲ್ಲಿ ನಟ ದರ್ಶನ್‌ಗೆ ರಾಜಾತಿಥ್ಯ ವಿಚಾರಕ್ಕೆ ಸಂಬಂಧಪಟ್ಟಂತೆ ಜೈಲು ಅಧಿಕಾರಿಗಳ ವಿಚಾರದಲ್ಲಿ ಮಹತ್ವದ ಬೆಳವಣಿಗೆ ನಡೆಯುತ್ತಿದೆ. ನಟ ದರ್ಶನ್ ಜೈಲು ಫೋಟೋ ವೈರಲ್ ಡ್ಯಾಮೇಜ್ ಕಂಟ್ರೋಲ್‌ಗೆ ಮುಂದಾಗಿರುವ ಸರ್ಕಾರ, ಈಗಾಗಲೇ 9 ಅಧಿಕಾರಿಗಳನ್ನು ಗೃಹ ಇಲಾಖೆ ಅಮಾನತು ಮಾಡಿದ್ದು, ಕರ್ತವ್ಯ ಲೋಪ ಎಸಗಿದವರ ಸ್ಥಳಕ್ಕೆ ಬೇರೆ ಅಧಿಕಾರಿಗಳ ನೇಮಕಕ್ಕೆ ಆದೇಶಿಸಿದೆ.


ಖಡಕ್ ಅಧಿಕಾರಿಗಳ ನೇಮಕ: ಅದರಂತೆ ಅಧಿಕಾರಿಗಳ ಅಮಾನತು ಬೆನ್ನಲ್ಲೇ ಕಾರಾಗೃಹ ಡಿಐಜಿ ಸೋಮಶೇಖರ್ ಜಾಗಕ್ಕೆ ನೂತನ ಕಾರಾಗೃಹ ಡಿಐಜಿಪಿಯಾಗಿ ಮೈಸೂರು ಕಾರಾಗೃಹ ಡಿಐಜಿಯಾಗಿದ್ದ ದಿವ್ಯಶ್ರೀ ಅವರನ್ನು ಹಾಗೂ ಕೇಂದ್ರ ಕಾರಾಗೃಹ ಮುಖ್ಯ ಅಧೀಕ್ಷಕ ವಿ.ಶೇಷಮೂರ್ತಿ ಅಮಾನತು ಬೆನ್ನಲ್ಲೇ ಜೈಲಿನ ಮುಖ್ಯ ಅಧೀಕ್ಷಕರಾಗಿ ಕೆ.ಸುರೇಶ್ ಎಂಬುವವರನ್ನು ಸರ್ಕಾರ ನೇಮಕ ಮಾಡಿದೆ.

ಪರಪ್ಪನ ಅಗ್ರಹಾರಕ್ಕೆ KISF ಪೊಲೀಸರಿಂದ ಭದ್ರತೆ: ಅಷ್ಟೇ ಅಲ್ಲ, ಪರಪ್ಪನ ಅಗ್ರಹಾರಕ್ಕೆ KISF(ಕರ್ನಾಟಕ ಕೈಗಾರಿಕ ಭದ್ರತಾ ದಳ ಇಲಾಖೆ ಸಿಬ್ಬಂದಿ & ಅಧಿಕಾರಿಗಳು) ಪೊಲೀಸರನ್ನು ಭದ್ರತೆಗೆ ನಿಯೋಜಿಸಲಾಗಿದ್ದು, ಅವರ ಅನುಮತಿ ಪಡೆದು ಜೈಲಿನ ಆವರಣಕ್ಕೆ ಪ್ರವೇಶಿಸಬೇಕಾಗಿದೆ. ಇನ್ನು ಕೇಂದ್ರ ಕಾರಾಗೃಹ ಭದ್ರತೆಗಾಗಿ ಓರ್ವ ಅಸಿಸ್ಟೆಂಟ್ ಕಮಾಂಡೆಂಟ್, ಇಬ್ಬರು ಇನ್ಸ್‌ಪೆಕ್ಟರ್‌ಗಳು ಸೇರಿದಂತೆ ನೂರಕ್ಕೂ ಹೆಚ್ಚು ಸಿಬ್ಬಂದಿ ನೇಮಕ ಮಾಡಲಾಗಿದೆ.

KISF ಇನ್ಸ್‌ಪೆಕ್ಟರ್‌ಗಳಾದ ಬಾಲಗಂಗಾಧರ್ ಮತ್ತು ಶಂಕರಪ್ಪ ಕಳೆದ ಆರು ವರ್ಷದಿಂದ ಪರಪ್ಪನ ಅಗ್ರಹಾರ ಜೈಲಿನ ಭದ್ರತಾ ಮೇಲ್ವಿಚಾರಣೆ ನೋಡಿಕೊಳ್ಳುತ್ತಿದ್ದರು. ಜೈಲಿನ ಚೆಕ್ ಪಾಯಿಂಟ್, ಜೈಲಿನ ಮೇನ್ ಗೇಟ್, ವಾಚ್ ಟವರ್‌ನಲ್ಲಿ KISF ಸಿಬ್ಬಂದಿ ಕೆಲಸ ಮಾಡುತ್ತಾರೆ. ಜೈಲಿಗೆ ಎಂಟ್ರಿಯಾಗುವ ದಿನಸಿ ಸಾಮಗ್ರಿಯಿಂದ ಸೇರಿ ಎಲ್ಲಾ ವಸ್ತುಗಳನ್ನ ಇವರು ಚೆಕ್ ಮಾಡಿ ಬಿಡುತ್ತಾರೆ. ಎಲ್ಲಾ ಅಧಿಕಾರಿ, ಸಿಬ್ಬಂದಿಯನ್ನು ಈ ಅಧಿಕಾರಿಗಳು ಎಂಟ್ರಿ, ಎಗ್ಸಿಟ್‌ನಲ್ಲಿ ತಪಾಸಣೆ ಮಾಡುತ್ತಾರೆ. ಸದ್ಯ ಜೈಲು ಅಧಿಕಾರಿಗಳ ವಿಚಾರಣೆ ಮಾಡುವುದಕ್ಕೆ ಮುನ್ನ ಅಧಿಕಾರಿಗಳನ್ನು ವಿಚಾರಣೆ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ.

ರಾಜ್ಯ ಹೋಟೆಲ್ ಸಂಘದ ಮಾಜಿ ಅಧ್ಯಕ್ಷ ಕೆ.ವಿ.ಆನಂದರಾವ್ ನಿಧನ

ಮೈಸೂರು ಹೋಟೆಲ್ ಮಾಲೀಕರ ಸಂಘ ಸಂತಾಪ



ಆನಂದರಾವ್

ಮೈಸೂರು, ಆ.27(ಪಿಎಂ)– ಕರ್ನಾಟಕ ರಾಜ್ಯ ಹೋಟೆಲ್ ಸಂಘದ ಮಾಜಿ ಅಧ್ಯಕ್ಷ ಕೆ.ವಿ.ಆನಂದರಾವ್ ಅವರ ನಿಧನಕ್ಕೆ ಮೈಸೂರು ಹೋಟೆಲ್ ಮಾಲೀಕರ ಸಂಘ ಸಂತಾಪ ಸೂಚಿಸಿದೆ. ದಾವಣಗೆರೆಯ ಕೆ.ವಿ.ಆನಂದರಾವ್ ಇಂದು ನಿಧನರಾಗಿದ್ದು, ಇವರಿಗೆ 95 ವರ್ಷ ವಯಸ್ಸಾಗಿತ್ತು. ಇವರು ಸಾಧನೆ ಮುಂದಿನ ಪೀಳಿಗೆಗೆ ಮುಂತೆ ಒಬ್ಬರಿಗೆ ದಾರಿದೀಪವಾಗಲಿದೆ.

ಇವರು ಕೋಟೇಶ್ವರ ಮಾಗಣೆಯಲ್ಲಿ ಸಹಕಾರ ತತ್ವದಡಿ ಹೋಟೆಲುಗಳನ್ನು ಸ್ಥಾಪಿಸಿ ಅನೇಕರ ಆರ್ಥಿಕ ಸ್ಥಿತಿ ಉತ್ತಮಗೊಳ್ಳಲು ಕಾರಣಕರ್ತರಾಗಿದ್ದರು. ಇವರು ಉಡುಪಿ ಅಷ್ಟಮಠಗಳ ಮಠಾಧೀಶರಿಗೆ ಆಪ್ತಭಕ್ತರಾಗಿದ್ದರು. ಕೆ.ವಿ.ಆನಂದರಾವ್ ಅವರ ನಿಧನ ನಮ್ಮ ಇಡೀ ಸಮಾಜಕ್ಕೆ ಅಪಾರ ನಷ್ಟ, ಅವರ ಆತ್ಮಕ್ಕೆ ಶಾಂತಿ ದೊರಕಲಿ, ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ಲಭಿಸಲೆಂದು ದೇವರಲ್ಲಿ ಪ್ರಾರ್ಥಿಸುವುದಾಗಿ ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆರ್‌ಎಸ್‌ಎಸ್ ಇದ್ದಕಡೆ ಗಲಭೆ ಹೆಚ್ಚು: ಹೇಳಿಕೆ ನಿರಾಕರಿಸಿದ ನಟ ಪ್ರಕಾಶ್ ರಾಜ್

ಕಾನೂನು ಸಮರಕ್ಕೆ ನಿರ್ಧಾರ


ಪ್ರಕಾಶ್‌ರಾಜ್

ಬೆಂಗಳೂರು, ಆ.27– ಆರ್‌ಎಸ್‌ಎಸ್ ಇಲ್ಲದ ಕಾರಣ ಇಂಡೋನೇಷ್ಯಾದಲ್ಲಿ ಗಲಭೆಗಳಿಲ್ಲ ಎಂದು ಪ್ರಕಾಶ್ ರಾಜ್ ಅವರು ಹೇಳಿದ್ದಾರೆಂಬ ಪೋಸ್ಟ್‌ವೊಂದು ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ಸದ್ದು ಮಾಡುತ್ತಿದ್ದು, ಈ ಹೇಳಿಕೆಯನ್ನು ಪ್ರಕಾಶ್ ರಾಜ್ ನಿರಾಕರಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ @MeghUpdates ಎಂಬ ಖಾತೆಯಿಂದ ಪೋಸ್ಟ್ ವೊಂದನ್ನು ಹಾಕಲಾಗಿದ್ದು, ಆರ್‌ಎಸ್‌ಎಸ್ RSS ಇದ್ದಕಡೆ ಗಲಭೆಗಳು ಆಗುತ್ತವೆ ಎಂದ ಪ್ರಕಾಶ್ ರಾಜ್ ಅವರು ಹೇಳಿದ್ದಾರೆ. ಈ ಬಗ್ಗೆ ಇಂಡೋನೇಷ್ಯಾವನ್ನು ಉದಾಹರಣೆಯಾಗಿ ನೀಡಿರುವ ಪ್ರಕಾಶ್ ರಾಜ್, ಶೇ.90 ಮುಸ್ಲಿಮರು, ಶೇ.2ರಷ್ಟು ಹಿಂದೂಗಳು ಹಾಗೂ 11 ಸಾವಿರ ಮಂದಿರಗಳು ಇಂಡೋನೇಷ್ಯಾದಲ್ಲಿ ಇವೆ. ಆದರೆ. ಅಲ್ಲಿ ಆರ್‌ಎಸ್‌ಎಸ್ ಇಲ್ಲ. ಆರ್‌ಎಸ್‌ಎಸ್ ಇರದ ಕಡೆ ಗಲಭೆಗಳು ನಡೆಯಲ್ಲ ಎಂಬುವುದು ತಮ್ಮ ಗ್ರಹಿಕೆ ಎಂದು ಅಭಿಪ್ರಾಯಪಟ್ಟಿದ್ದಾರೆಂದು ಪೋಸ್ಟ್ ಮಾಡಲಾಗಿದೆ.


ಈ ಪೋಸ್ಟ್ ಸಾಕಷ್ಟು ವೈರಲ್ ಆಗಿದ್ದು, ಕೆಲವರು ಪ್ರಕಾಶ್ ರಾಜ್ ಅವರಿಗೆ ಬೆಂಬಲ ವ್ಯಕ್ತಪಡಿಸುತ್ತಿದ್ದಾರೆ. ಹಲವರು ವಿರೋಧ ವ್ಯಕ್ತಪಡಿಸಿ, ಟೀಕೆ ಮಾಡುತ್ತಿದ್ದಾರೆ.

ಈ ನಡುವೆ ಹೇಳಿಕೆ ಸಂಬಂಧ ಪ್ರತಿಕ್ರಿಯೆ ನೀಡಿರುವ ಪ್ರಕಾಶ್ ರಾಜ್ ಅವರು, ನಾನು ಈ ರೀತಿಯ ಹೇಳಿಕೆಯನ್ನು ನೀಡಿಯೇ ಇಲ್ಲ. ಇಂತಹ ಪೋಸ್ಟ್‌ಗಳನ್ನು ಸೃಷ್ಟಿಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುತ್ತೇನೆ. ನನ್ನ ವಕೀಲರೊಂದಿಗೆ ಮಾತುಕತೆ ನಡೆಸಲಾಗಿದೆ, ಈ ಬಗ್ಗೆ ಮಂಗಳವಾರ ಕಾನೂನು ಸಮರ ಶುರುವಾಗಲಿದೆ. ಈಗಾಗಲೇ ಟ್ವಿಟರ್‌ಗೂ ದೂರು ನೀಡಲಾಗಿದೆ ಎಂದು ಹೇಳಿದ್ದಾರೆ.

ಬಲಪಂಥೀಯ ಗುಂಪುಗಳು ಸುಳ್ಳು ಹೇಳಿಕೆಗಳನ್ನು ಸೃಷ್ಟಿಸಿ ಸಾಮಾಜಿಕ ಜಾಲತಾಣಗಳಲ್ಲಿ ನನ್ನ ಪ್ರತಿಷ್ಠೆಗೆ ಧಕ್ಕೆ ತರುವ ಕೆಲಸ ಮಾಡುತ್ತಿವೆ. ಇದು ಸಾಮಾನ್ಯ ತಂತ್ರವಾಗಿವೆ. ಬಲಪಂಥೀಯರು ಇಂತಹ ಹೇಳಿಕೆಗಳನ್ನು ಸೃಷ್ಟಿಸಿ. ಸುಳ್ಳುಗಳನ್ನು ಪ್ರಚಾರ ಮಾಡಲು ಸಾಮಾಜಿಕ ಜಾಲತಾಣಗಳನ್ನು ಬಳಸಿಕೊಳ್ಳುತ್ತಿದ್ದಾರೆ. ಈ ಮೂಲಕ ನನ್ನನ್ನು ಹಿಂದೂಗಳ ವಿರೋಧಿ ಎಂದು ಬಿಂಬಿಸುವುದೇ ಅವರ ಉದ್ದೇಶವಾಗಿದೆ. ನಾನು ಬಿಜೆಪಿ, ಮೋದಿ ಮತ್ತು ಅಮಿತ್ ಶಾ ಅವರ ವಿರುದ್ಧವಿದ್ದು, ಹೀಗಾಗಿಯೇ ನನ್ನನ್ನು ಹಿಂದೂಗಳ ವಿರೋಧಿ ಎಂದು ಬಿಂಬಿಸುತ್ತಿದ್ದಾರೆ.

ಹೇಳಿಕೆ ನೀಡಬೇಕಿದ್ದರೆ @MeghUpdates ನೀವೇ ನೀಡಿ, ನನ್ನ ಹೆಸರು ಬಳಸಿ ಹೇಳಿಕೆ ನೀಡಬೇಡಿ. ನಾನು ಮೂರು ದಿನಗಳಿಂದ ರಂಗಭೂಮಿಯ ಕಾರ್ಯಕ್ರಮದಲ್ಲಿ ನಿರತನಾಗಿದ್ದೆ. ಇದ್ದಕ್ಕಿದ್ದಂತೆ ಪೋಸ್ಟ್ ನೋಡಿದೆ. ಸಾಕಷ್ಟು ಜನರು ಟೀಕೆ ಮಾಡುತ್ತಿದ್ದು, ಕೋಪಗೊಂಡಿದ್ದಾರೆಂದು ತಿಳಿಸಿದ್ದಾರೆ.

ಜಾತ್ರೆಯಲ್ಲಿ ಊಟ ಸೇವಿಸಿ 3 ಸಾವು; ಹಲವರು ಅಸ್ವಸ್ಥ



ತುಮಕೂರು, ಆ.27– ಮಧುಗಿರಿ ತಾಲೂಕಿನ ಬುಳ್ಳಸಂದ್ರ ಗ್ರಾಮದಲ್ಲಿ ನಡೆದ ಜಾತ್ರೆಯಲ್ಲಿ ಊಟ ಸೇವಿಸಿ ಮೂವರು ಮಹಿಳೆಯರು ಮೃತಪಟ್ಟು, ಹಲವರು ಅಸ್ವಸ್ಥಗೊಂಡಿರುವ ಘಟನೆ ಭಾನುವಾರ ನಡೆದಿದೆ. ಮೃತರನ್ನು ಬುಳ್ಳಸಂದ್ರದ ನಿವಾಸಿಗಳಾದ ತಿಮ್ಮಕ್ಕ (80) ಮತ್ತು ಗಿರಿಯಮ್ಮ (86) ಮತ್ತು ಆಂಧ್ರಪ್ರದೇಶದ ಮಡಕಶಿರಾ ತಾಲೂಕಿನ ಸಿದ್ಧಗಿರಿ ಗ್ರಾಮದ ಕಾಟಮ್ಮ (45) ಎಂದು ಗುರುತಿಸಲಾಗಿದೆ.

ಕರಿಯಮ್ಮ ಮತ್ತು ಮುತ್ತುರಾಯ ಭೂತಪ್ಪ ದೇವರ ವಾರ್ಷಿಕ ಜಾತ್ರೆ ಶನಿವಾರ ಆರಂಭವಾಯಿತು. ಭಾನುವಾರ ಮಾಂಸಾಹಾರಿ ಆಹಾರವನ್ನು ಸೇವಿಸಿದ ನಂತರ, ಹಲವರಲ್ಲಿ ವಾಂತಿ ಮತ್ತು ಭೇದಿ ಕಾಣಿಸಿಕೊಂಡು ಅಸ್ವಸ್ಥರಾಗಿದ್ದಾರೆ. ಜನರು ತಮ್ಮ ತಮ್ಮ ಮನೆಗಳಲ್ಲಿಯೇ ಆಹಾರ ಸಿದ್ಧಪಡಿಸಿ, ಜಾತ್ರೆಗೆ ತಂದಿದ್ದರು. ಮೂರು ಕುಟುಂಬಗಳು ತಯಾರಿಸಿದ ಆಹಾರ ಸೇವಿಸಿದವರಲ್ಲಿ ಆರೋಗ್ಯ ಸಮಸ್ಯೆ ಕಾಣಿಸಿಕೊಂಡಿದೆ ಎಂದು ಸಹಾಯಕ ಆಯುಕ್ತ ಗೋಟೂರು ಶಿವಣ್ಣ ಹೇಳಿದ್ದಾರೆ.

ಮಾನವತೆಯ ರಾಯಭಾರಿ ಬ್ರಹ್ಮಶ್ರೀ ನಾರಾಯಣಗುರು

ಮೈಸೂರು ಜಿಲ್ಲಾ ಆರ್ಯ ಈಡಿಗರ ಯುವ ವೇದಿಕೆ ಅಧ್ಯಕ್ಷ ಡಾ.ರಾಜು ಸ್ಮರಣೆ



ಕಾರ್ಯಕ್ರಮದಲ್ಲಿ ನಾರಾಯಣ ಗುರುಗಳ ಭಾವಚಿತ್ರಕ್ಕೆ ಗಣ್ಯರು ಪುಷ್ಪಾರ್ಚನೆ ಮಾಡಿದರು.

ತಿ.ನರಸೀಪುರ, ಆ.27– ಮನುಕುಲವನ್ನು ಸುಧಾರಣೆಯ ಸರಿದಾರಿಯಲ್ಲಿ ಮುನ್ನಡೆಸಿದವರು ಬ್ರಹ್ಮಶ್ರೀ ನಾರಾಯಣ ಗುರುಗಳು ಎಂದು ಮೈಸೂರು ಜಿಲ್ಲಾ ಆರ್ಯ ಈಡಿಗರ ಯುವ ವೇದಿಕೆ ಅಧ್ಯಕ್ಷ ಡಾ.ರಾಜು ತಿಳಿಸಿದರು.

ತಾಲೂಕು ಆಡಳಿತ, ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ಆರ್ಯ ಈಡಿಗರ ಸಂಘದ ಸಂಯುಕ್ತಾಶ್ರಯದಲ್ಲಿ ಪಟ್ಟಣದ ತಾಪಂನಲ್ಲಿ ನಡೆದ ಬ್ರಹ್ಮಶ್ರೀ ನಾರಾಯಣ ಗುರುಗಳ 170ನೇ ಜಯಂತಿಯಲ್ಲಿ ಮಾತನಾಡಿದ ಅವರು, ಹುಟ್ಟು ಸಾಮಾನ್ಯವಾಗಿದ್ದರೂ ಮಾಡಿದ ಸತ್ಕಾರ್ಯಗಳಿಂದ ಅಸಾಮಾನ್ಯರೆನಿಸಿದ ನಾರಾಯಣ ಗುರುಗಳು ಕೇರಳದ ಪುಟ್ಟ ಹಳ್ಳಿ ಚೆಂಬಳಂತಿಯಲ್ಲಿ ಮಾದನ್ ಆಶಾನ್ ಹಾಗೂ ಕುಟ್ಟಿಯಮ್ಮ ದಂಪತಿ ಪುತ್ರನಾಗಿ ಜನಿಸಿ ಬಾಲ್ಯದಲ್ಲೇ ಸತ್ಯ ಸಂಶೋಧಕನ ಲಕ್ಷಣದೊಂದಿಗೆ ಗುರುತಿಸಿಕೊಂಡಿದ್ದರು ಎಂದರು.

ನಾರಾಯಣ ಗುರುಗಳು ಅಂದು ಕೇರಳದಲ್ಲಿದ್ದ ಅಸ್ಪೃಶ್ಯತೆ, ಅಂಧಶ್ರದ್ಧೆಯ ಬಹುವಿಧಗಳಿಗೆ ಸಂಘರ್ಷ ರಹಿತವಾಗಿ ಮೌನ ಕ್ರಾಂತಿ ಸಂಘಟಿಸಿ ಶೋಷಿತರ ಜೀವನಕ್ಕಾಗಿ ಸುಧಾರಣೆಯ ಹೊಸ ಸೂತ್ರ ಹೆಣೆದರು. ತಮ್ಮ ಜೀವಿತಾವಧಿಯಲ್ಲಿ ಸಮಾಜದ ಉದ್ಧಾರಕ್ಕಾಗಿ ಶ್ರಮಿಸಿದ ಪರಿಣಾಮ ತಮ್ಮ ವಿಚಾರಗಳಿಂದಲೇ ನವ ಮನ್ವಂತರಕ್ಕೂ ಮಾದರಿಯಾಗಿ ಗೋಚರಿಸಿದರು. ವೈಚಾರಿಕವಾಗಿ ಬಹು ಎತ್ತರದ ಸ್ಥಾನದಲ್ಲಿರುವ ನಾರಾಯಣ ಗುರುಗಳ ದೃಷ್ಟಿಯಲ್ಲಿ ಜಾತೀಯತೆ ಇಲ್ಲ. ಮನುಷ್ಯರೆಲ್ಲಾ ಒಂದೇ ಜಾತಿ ಎಂದು ಹೇಳಿದರೂ ವಾಸ್ತವದಲ್ಲಿ ಇದಕ್ಕಿಂತ ತೀರಾ ಭಿನ್ನವಾಗಿ ಆಚರಣೆಯಲ್ಲಿದ್ದ ಅಂಧಕಾರವನ್ನು ನೀಗಿಸುವ ಸಲುವಾಗಿ ಒಂದೇ ಜಾತಿ, ಒಂದೇ ಧರ್ಮ, ಒಂದೇ ದೇವರು ಎನ್ನುವ ವಿಶ್ವ ಪ್ರಜ್ಞೆ ಜಾಗೃತಗೊಳಿಸಿ ಮಾನವತೆಯ ರಾಯಭಾರಿಯಾದರು ಎಂದರು.

ಸ್ತ್ರೀ ಶೋಷಣೆ ಪರಿಹಾರವಾಗಿ ಮಹಿಳಾ ಸಮಾನತೆ ಪರವಾಗಿದ್ದ ಗುರುಗಳು ಬಾಲ್ಯ ವಿವಾಹ, ದೇವದಾಸಿ ಪದ್ಧತಿ ನಿಷೇಧಿಸಿದರು. ಅಲ್ಲದೇ ಹೆಣ್ಣು ಮಕ್ಕಳ ಜೀವನಾವರ್ತಿ ಪ್ರಕ್ರಿಯೆಗಳ ಕುರಿತಾದ ಅಸಂಬದ್ಧ ಆಚರಣೆಗಳನ್ನು ಖಂಡಿಸಿ, ಸರಳ ವಿವಾಹ ಕ್ರಮವನ್ನು ಪ್ರೋತ್ಸಾಹಿಸಿದರು. ಮಹಿಳೆಯರಿಗೂ ಸಮಾನ ಶಿಕ್ಷಣದ ಅಗತ್ಯವಿದೆ ಎಂಬುದಾಗಿ ಪ್ರತಿಪಾದಿಸಿದರು.

ನಾರಾಯಣ ಗುರುಗಳು ಜಾತಿ ಕಾರಣಕ್ಕೆ ಅಸಮಾನತೆ ಎದುರಿಸಿ ದೇವಾಲಯಗಳ ಪ್ರವೇಶ ನಿರಾಕರಿಸಿದಾಗ ದೇಗುಲಗಳನ್ನು ನಿರ್ಮಿಸಿರುವುದನ್ನು ಗಮನಿಸಿದಾಗ ಅವರ ದೂರದರ್ಶಿತ್ವ ಮತ್ತು ಸಂಯಮದ ಕಾರ್ಯತಂತ್ರ ಅರಿವಾಗುತ್ತದೆ ಎಂದರು.

ಆರ್ಯ ಈಡಿಗರ ಸಂಘದ ಅಧ್ಯಕ್ಷ ಕಿರಗಸೂರು ಶಂಕರ್ ಮಾತನಾಡಿ, ನಾರಾಯಣ ಗುರುಗಳು ಸಮಾಜದಲ್ಲಿನ ಅಸಮಾನತೆ ತೊಡೆದು ಹಾಕಲು ಹೋರಾಡಿದರಲ್ಲದೆ, ಮಾನವನ ವ್ಯಕ್ತಿತ್ವ ಹೇಗೆ ಉನ್ನತ ಮಟ್ಟಕ್ಕೆ ಬೆಳೆಯಬೇಕು ಎಂಬ ಬಗ್ಗೆಯೂ ತಿಳಿಸಿಕೊಟ್ಟಿದ್ದಾರೆ. ಅವರ ಜೀವನ ಶೈಲಿ ಯೋಗಾಸನ ಹಾಗೂ ವ್ಯಾಯಾಮದಿಂದ ಕೂಡಿತ್ತು. ಅವರ ಜೀವನ ಕ್ರಮಗಳನ್ನು ನಾವು ಅನುಸರಿಸಿದರೆ ಇಂದಿನ ಒತ್ತಡಮಯ ಬದುಕಿನಿಂದ ಎದುರಾಗುತ್ತಿರುವ ಅನಾರೋಗ್ಯ ಸಮಸ್ಯೆ ದೂರವಾಗಲಿದೆ ಎಂದರು.

> ಸರ್ವ ಜನಾಂಗದ ಒಳಿತಿಗಾಗಿ ಹೋರಾಡಿದ ಬ್ರಹ್ಮಶ್ರೀ ನಾರಾಯಣ ಗುರುಗಳು ಯಾವುದೇ ಒಂದು ಸಮುದಾಯಕ್ಕೆ ಸೇರದೆ ಮಾನವ ಜನಾಂಗದ ಗುರುವಾಗಿದ್ದರು. ಸಮಾಜದಲ್ಲಿರುವ ಜಾತಿ ತಾರತಮ್ಯ, ಮೌಢ್ಯತೆ, ಸಾಮಾಜಿಕ ಪಿಡುಗುಗಳ ವಿರುದ್ಧ ಹೋರಾಡಿ ಸಾಮಾಜಿಕ ಸಮಾನತೆಗೆ ಅನೇಕ ಸುಧಾರಣೆ ತಂದರು. ಎಲ್ಲಾ ಜಾತಿಗಳು ಸಮಾನ ಎಂದು ಪ್ರತಿಪಾದಿಸಿದ ಅವರ ಸಮಾಜಮುಖಿ ಸುಧಾರಣೆಗಳು ಪ್ರಸ್ತುತ ಅಗತ್ಯವಾಗಿವೆ.
> – ಟಿ.ಜಿ.ಸುರೇಶ್ ಆಚಾರ್, ತಹಸೀಲ್ದಾರ್.

ಕಾರ್ಯಕ್ರಮಕ್ಕೆ ಮೊದಲು ಬ್ರಹ್ಮಶ್ರೀ ನಾರಾಯಣ ಗುರುಗಳ ಭಾವಚಿತ್ರವನ್ನು ಅಲಂಕೃತ ವಾಹನದಲ್ಲಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಈ ವೇಳೆ ಸಿಪಿಐ ಧನಂಜಯ, ತಾಲೂಕು ಆರ್ಯ ಈಡಿಗರ ಸಂಘದ ಮಾಜಿ ಅಧ್ಯಕ್ಷ ವಾಸುದೇವ, ಶಿವ ವೈನ್ಸ್ ಅನಂತು, ಗೋಪಾಲಸ್ವಾಮಿ, ಪುರಸಭೆ ಮುಖ್ಯಾಧಿಕಾರಿ ಬಿ.ಕೆ.ವಸಂತಕುಮಾರಿ, ಬನ್ನೂರು ಪುರಸಭೆ ಮುಖ್ಯಾಧಿಕಾರಿ ಆರ್.ಹೇಮಂತ್ ರಾಜು, ಈಡಿಗರ ಸಂಘದ ಗೌರವಾಧ್ಯಕ್ಷ ಸಿದ್ದರಾಜು, ಉಪಾಧ್ಯಕ್ಷ ಗುರು, ಗೋವಿಂದರಾಜು, ಪ್ರಧಾನ ಕಾರ್ಯದರ್ಶಿ ರೇಣುಕಾ ಪ್ರಸಾದ್, ರೈತ ಮುಖಂಡ ಪ್ರಸಾದ್ ನಾಯಕ್, ಸಿದ್ದರಾಜು, ಮನ್ಸೂರ್ ಅಲಿ, ಪ್ರಜ್ವಲ್, ಕುಮಾರಸ್ವಾಮಿ, ಪರಶಿವಮೂರ್ತಿ, ಪ್ರಶಾಂತ್ ಕುಮಾರ್ ಈಡಿಗರ್, ನಾಗರಾಜು, ಸಮಾಜ ಕಲ್ಯಾಣ ಅಧಿಕಾರಿ ರಾಮೇಗೌಡ, ಕೃಷಿ ಸಹಾಯಕ ನಿರ್ದೇಶಕಿ ಸುಹಾಸಿನಿ ಸೇರಿದಂತೆ ಇತರರಿದ್ದರು.

ಹೆಮ್ಮರಗಾಲ ಪಿಎಸಿಎಸ್‌ಗೆ 1.58 ಲಕ್ಷ ಲಾಭ

ಸಂಘದ ಅಧ್ಯಕ್ಷ ಸಿ.ಸೋಮಣ್ಣ ಮಾಹಿತಿ



ವಾರ್ಷಿಕ ಮಹಾಸಭೆಯನ್ನು ಗಣ್ಯರು ಉದ್ಘಾಟಿಸಿದರು.

ನಂಜನಗೂಡು, ಆ.27– ಕಳೆದ ಹಲವು ವರ್ಷಗಳಿಂದ ನಷ್ಟದಲ್ಲಿದ್ದ ಹೆಮ್ಮರಗಾಲ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ರೈತರ ಸಹಕಾರದಿಂದ 1.58 ಲಕ್ಷ ರೂ. ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ಸೋಮಣ್ಣ ತಿಳಿಸಿದರು.

ತಾಲೂಕಿನ ಹೆಮ್ಮರಗಾಲ ಗ್ರಾಮದ ಸಂಘದ ಆವರಣದಲ್ಲಿ ನಡೆದ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರ ಸಂಘದಿಂದ 458 ಮಂದಿಗೆ 6.12 ಕೋಟಿ ಸಾಲ ವಿತರಿಸಲಾಗಿದೆ. ಸರ್ಕಾರದ ನೂತನ ಆದೇಶದಂತೆ 5 ಲಕ್ಷದವರೆಗೆ ಬಡ್ಡಿ ರಹಿತವಾಗಿ ರೈತರಿಗೆ ಸಾಲ ನೀಡಲಾಗುವುದು. 50 ಸಾವಿರದವರೆಗೆ ಪಶು ಸಾಲ ಸಹ ದೊರೆಯಲಿದೆ. ರೈತರು ಇದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದ ಅವರು, ರೈತರು ಸರ್ಕಾರದಿಂದ ಸಾಲಮನ್ನಾ ಆಗಲಿದೆ ಎಂಬ ಧೋರಣೆ ಕೈಬಿಟ್ಟು ಸಕಾಲದಲ್ಲಿ ಸಾಲ ಮರು ಪಾವತಿಸಬೇಕು. ಆಗ ಸಂಘದ ಅಭಿವೃದ್ಧಿ ಜೊತೆಗೆ ರೈತರೂ ಆರ್ಥಿಕವಾಗಿ ಅಭಿವೃದ್ಧಿ ಹೊಂದಬಹುದು ಎಂದರು.

ಸಮಾರಂಭದಲ್ಲಿ ಉಪಾಧ್ಯಕ್ಷ ಕೆ.ಎಸ್.ಕೃಷ್ಣ, ನಿರ್ದೇಶಕರಾದ ಪುಟ್ಟರಾಜನಾಯಕ, ವೃಷಬೇಂದ್ರಪ್ಪ, ಪುಟ್ಟಮಾದಯ್ಯ, ಕೆ.ನಾಗರಾಜು, ಶಿವನಾಗೇಗೌಡ, ಹೆಚ್.ಎಲ್.ಮಹೇಶ್ ಕುಮಾರ್, ಮೀನಾಕ್ಷಿ, ಎಂ.ಮಹದೇವು, ಸಿಇಓ ಮುದ್ದುಮಾದಸ್ವಾಮಿ, ಪ್ರಭುಸ್ವಾಮಿ, ಮಹದೇವನಾಯಕ ಇದ್ದರು.

ಸೆ.3ಕ್ಕೆ, ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ



ನಂಜನಗೂಡು, ಆ.27– ಇಲ್ಲಿನ ನಗರಸಭೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ ಸೆ.3ರಂದು ಮಧ್ಯಾಹ್ನ 1 ಗಂಟೆಗೆ ಉಪವಿಭಾಗಾಧಿಕಾರಿಗಳ ನೇತೃತ್ವದಲ್ಲಿ ಚುನಾವಣೆ ನಡೆಯಲಿದೆ.

ಒಟ್ಟು 31 ಸದಸ್ಯ ಬಲದ ನಂಜನಗೂಡು ನಗರಸಭೆಯಲ್ಲಿ ಬಿಜೆಪಿ 15, ಕಾಂಗ್ರೆಸ್ 10, ಜೆಡಿಎಸ್ ಹಾಗೂ ಪಕ್ಷೇತರರು ತಲಾ ಮೂವರು ಸದಸ್ಯರಿದ್ದಾರೆ. ಪ್ರಸ್ತುತ ಜೆಡಿಎಸ್, ಬಿಜೆಪಿ ಮೈತ್ರಿಯಾಗಿದ್ದು, ನಗರಸಭೆ ಅಧಿಕಾರದ ಚುಕ್ಕಾಣಿ ಹಿಡಿಯುವ ವಿಶ್ವಾಸದಲ್ಲಿವೆ.

ಕಾಂಗ್ರೆಸ್ ತನ್ನ 10 ಸದಸ್ಯರೊಂದಿಗೆ ಶಾಸಕ, ಸಂಸದರ ಮತಗಳನ್ನು ಹೊಂದಿದ್ದು, ಮೂವರು ಪಕ್ಷೇತರರ ಬೆಂಬಲದೊಂದಿಗೆ ನಗರಸಭೆ ಅಧಿಕಾರ ಹಿಡಿ ಯಲು ವ್ಯೂಹ ರಚಿಸಿದೆ ಎನ್ನಲಾಗಿದ್ದು, ಕಾಂಗ್ರೆಸ್ ಮುಖಂಡರು ಶತಾಯಗತಾಯ ನಂಗೂಡು ನಗರಸಭೆ ಅಧಿಕಾರ ಹಿಡಿಯುವು ದಾಗಿ ತಿಳಿಸಿರುವುದರಿಂದ ಚುನಾವಣೆ ಕಾವು ಮತ್ತಷ್ಟು ಬಿರುಸುಗೊಂಡಿದ್ದು, ಚುನಾವಣೆಯಲ್ಲಿ ಜೆಡಿಎಸ್ ಮತ್ತು ಪಕ್ಷೇತರ ಸದಸ್ಯರು ನಿರ್ಣಾಯಕ ಪಾತ್ರ ವಹಿಸಲಿದ್ದಾರೆ. ಈಗಾಗಲೇ ಮೂವರು ಪಕ್ಷೇತರ ಸದಸ್ಯರು ಕಾಂಗ್ರೆಸ್‌ನೊಂದಿಗೆ ಗುರುತಿಸಿಕೊಂಡಿದ್ದಾರೆ. ಪ್ರಸ್ತುತ ಜೆಡಿಎಸ್, ಬಿಜೆಪಿ ಮೈತ್ರಿ ಮಾಡಿಕೊಂಡಿರುವುದು ಸ್ಥಳೀಯ ಚುನಾವಣೆಯಲ್ಲೂ ಮುಂದುವರೆಯುವುದೇ ಎಂಬುದರ ಮೇಲೆ ಯಾವ ಪಕ್ಷ ಅಧಿಕಾರದ ಗದ್ದುಗೆ ಏರಲಿದೆ ಎಂಬುದು ನಿರ್ಣಯವಾಗಲಿದೆ.

ನಗರಸಭೆ ಅಧ್ಯಕ್ಷ ಸ್ಥಾನ ಎಸ್ಸಿ ವರ್ಗಕ್ಕೆ, ಉಪಾಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಲಾಗಿದೆ. ಕಾಂಗ್ರೆಸ್‌ನಿಂದ ಶ್ರೀಕಂಠಸ್ವಾಮಿ, ಎಸ್.ಪಿ. ಮಹೇಶ್ ಅಧ್ಯಕ್ಷ ಸ್ಥಾನದ ಆಕಾಂಕ್ಷಿ ಗಳಾಗಿದ್ದರೆ, ಬಿಜೆಪಿಯಿಂದ ಮಹೇಶ್ ಅತ್ತಿಖಾನೆ, ದೇವು, ವಿಜಯಲಕ್ಷ್ಮಿ, ಮೀನಾಕ್ಷಿ, ಗಾಯತ್ರಿ ಅವರಿಗೆ ಅವಕಾಶವಿದೆ. ಕಾಂಗ್ರೆಸ್ ಪಕ್ಷದಲ್ಲಿ ಬಹುತೇಕ ಅಭ್ಯರ್ಥಿ ಒಮ್ಮತದಿಂದ ಶ್ರೀಕಂಠಸ್ವಾಮಿ ಒಬ್ಬರನ್ನು ಬೆಂಬಲಿಸಲು ನಿರ್ಣಯಿಸಲಾಗಿದೆ. ಆದರೆ ಬಿಜೆಪಿಯಲ್ಲಿ ಒಳ ಬೇಗುದಿ ಇನ್ನು ಶಮನವಾಗಿಲ್ಲ. ಇವೆಲ್ಲರ ಮಧ್ಯೆ ನಂಜನಗೂಡು ನಗರಸಭೆ ಅಧಿಕಾರದ ಗದ್ದುಗೆಯನ್ನು ಯಾವ ಪಕ್ಷ ಹಿಡಿಯಲಿದೆ. ಯಾರಿಗೆ ವಿಜಯಲಕ್ಷ್ಮಿ ಒಲಿಯುತ್ತಾಳೆ ಕಾದು ನೋಡಬೇಕಿದೆ.

ಜಿಂಕೆ ಮಾಂಸ ಸಾಗಿಸುತ್ತಿದ್ದ ಆರೋಪಿ ಬಂಧನ



ಜಿಂಕೆ ಮಾಂಸ ಸಾಗಿಸುತ್ತಿದ್ದ ಆರೋಪಿಯೊಂದಿಗೆ ಅರಣ್ಯ ಇಲಾಖೆ ಅಧಿಕಾರಿಗಳು.

ಹುಣಸೂರು, ಆ.27– ತಾಲೂಕಿನ ನಾಗರಹೊಳೆ ಉದ್ಯಾನವನದಂಚಿನ ವೀರನಹೊಸಹಳ್ಳಿ ಪ್ರಾದೇಶಿಕ ಅರಣ್ಯದಲ್ಲಿ ಜಿಂಕೆ ಬೇಟೆಯಾಡಿ ಮಾಂಸ ಸಾಗಿಸುತ್ತಿದ್ದ ಆರೋಪಿಯನ್ನು ಕಿರಂಗೂರು ಗೇಟ್ ಬಳಿ ಅರಣ್ಯ ಇಲಾಖೆ ಅಧಿಕಾರಿಗಳು ಬಂಧಿಸಿದ್ದಾರೆ.

ತಾಲೂಕಿನ ಹನಗೋಡು ಹೋಬಳಿ ಭರತವಾಡಿ ಹಾಡಿಯ ರುದ್ರ ಬಂಧಿತ ಆರೋಪಿ. ಈತನಿಂದ ಎರಡು ಕೆಜಿ ಜಿಂಕೆ ಮಾಂಸ, ಚರ್ಮ, ಕೃತ್ಯಕ್ಕೆ ಬಳಸಿದ್ದ ಬೈಕ್, ಒಂದು ಮೊಬೈಲ್ ವಶಕ್ಕೆ ಪಡೆದಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಇನ್ನಿಬ್ಬರು ಆರೋಪಿಗಳಾದ ಕಪ್ಪನಕಟ್ಟೆ ಹಾಡಿಯ ರಾಮು ಹಾಗೂ ಅಪ್ಪು ತಲೆಮರೆಸಿಕೊಂಡಿದ್ದಾರೆ.

ಆರೋಪಿಗಳು ಜಿಂಕೆ ಬೇಟೆಯಾಡಿ ಮಾಂಸ ಮಾರಾಟ ಮಾಡುತ್ತಿರುವ ಖಚಿತ ಮಾಹಿತಿ ಮೇರೆಗೆ ಹುಣಸೂರು ವನ್ಯಜೀವಿ ವಿಭಾಗದ ಆರ್‌ಎಫ್‌ಓ ಸುಬ್ರಹ್ಮಣ್ಯ ಕೆ.ಇ, ಆನೆಚೌಕೂರು ವಲಯದ ಡಿಆರ್‌ಎಫ್‌ಓ ಶಿವಕುಮಾರ್ ಹಾಗೂ ಗಸ್ತು ಅರಣ್ಯ ಪಾಲಕರು ಹಾಗೂ ಸಿಬ್ಬಂದಿ ಹನಗೋಡಿಗೆ ಸಮೀಪದ ಕಿರಂಗೂರು ಗೇಟ್ ಬಳಿ ದಾಳಿ ನಡೆಸಿ ಆರೋಪಿ ಬಂಧಿಸಿ, ಜಿಂಕೆ ಮಾಂಸ ವಶಪಡಿಸಿಕೊಂಡಿದ್ದಾರೆ.

ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೊಪ್ಪಿಸಲಾಗಿದ್ದು, ಉಳಿದಿಬ್ಬರ ಆರೋಪಿಗಳ ಪತ್ತೆಗೆ ಕ್ರಮ ವಹಿಸಲಾಗಿದೆ ಎಂದು ನಾಗರಹೊಳೆ ಹುಲಿ ಯೋಜನೆ ನಿರ್ದೇಶಕಿ ಪಿ.ಎ.ಸೀಮಾ ತಿಳಿಸಿದ್ದಾರೆ.

ಹೆಚ್.ಡಿ.ಕೋಟೆ: ಕಾಡಾನೆ ದಾಳಿಗೆ ವ್ಯಕ್ತಿ ಸಾವು



ಗೋಳೂರು ಹಾಡಿಯಲ್ಲಿ ಕಾಡಾನೆ ದಾಳಿಗೆ ಮನೆ ಜಖಂ ಆಗಿರುವುದು.

ಹೆಚ್.ಡಿ.ಕೋಟೆ, ಆ.27– ಕಾಡಾನೆ ದಾಳಿಗೆ ವ್ಯಕ್ತಿ ಸಾವನ್ನಪ್ಪಿರುವ ಘಟನೆ ನಾಗರಹೊಳೆ ರಾಷ್ಟ್ರೀಯ ಉದ್ಯಾನವನದ ಗೋಳೂರು ಹಾಡಿಯಲ್ಲಿ ಮಂಗಳವಾರ ಮುಂಜಾನೆ ನಡೆದಿದೆ.

ತಾಲೂಕಿನ ಗೋಳೂರು ಹಾಡಿಯ ಜೇನು ಕುರುಬ ಆದಿವಾಸಿ ಕಾಳ(75) ಸಾವನ್ನಪ್ಪಿದವರು. ಈತ ಮಂಗಳವಾರ ಬೆಳಗಿನ ಜಾವ 4 ಗಂಟೆ ಸಮಯದಲ್ಲಿ ಮನೆಯಲ್ಲಿ ಮಲಗಿದ್ದ ವೇಳೆ ಕಾಡಾನೆ ಮನೆ ಮೇಲೆ ದಾಳಿ ನಡೆಸಿ ಕಾಳನನ್ನು ಗಂಭೀರವಾಗಿ ಗಾಯಗೊಳಿಸಿದೆ. ಈ ವೇಳೆ ಮನೆಯಲ್ಲಿದ್ದವರು ಕಿರುಚಾಡಿದ್ದರಿಂದ ಬೆದರಿದ ಆನೆ ಓಡಿ ಹೋಗಿದ್ದು, ಬಳಿಕ ಅರಣ್ಯ ಇಲಾಖೆ ಅಧಿಕಾರಿಗಳಿಗೆ ವಿಷಯ ಮುಟ್ಟಿಸಲಾಯಿತು. ಈ ವೇಳೆ ಸ್ಥಳಕ್ಕಾಗಮಿಸಿದ ಡಿ.ಬಿ.ಕುಪ್ಪೆ ಅರಣ್ಯ ವಲಯ ಆರ್‌ಎಫ್‌ಓ ಮಧು ಹಾಗೂ ಸಿಬ್ಬಂದಿ ಗಾಯಗೊಂಡಿದ್ದ ಕಾಳನನ್ನು ಹೆಚ್.ಡಿ.ಕೋಟೆ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಕೆಆರ್.ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾನೆ.

5 ಲಕ್ಷದ ಚೆಕ್ ವಿತರಣೆ: ಕಾಡಾನೆ ದಾಳಿಯಿಂದ ಕಾಳ ಸಾವನ್ನಪ್ಪಿದ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಮೃತನ ಕುಟುಂಬಕ್ಕೆ ಸಾಂತ್ವನ ಹೇಳಿ, ಸರ್ಕಾರದ ಆದೇಶದಂತೆ 15 ಲಕ್ಷ ರೂ.ಗಳ ಪರಿಹಾರದ ಪೈಕಿ 5 ಲಕ್ಷ ರೂ.ಗಳ ಚೆಕ್ ವಿತರಿಸಿದರು. ಉಳಿದ 10 ಲಕ್ಷ ರೂ.ಗಳನ್ನು ಮರಣೋತ್ತರ ಪರೀಕ್ಷೆ ವರದಿ ಬಂದ ನಂತರ ನೀಡಲಾಗುವುದು. ಅಲ್ಲದೇ ಕುಟುಂಬದ ಒಬ್ಬರಿಗೆ ಪ್ರತಿ ತಿಂಗಳು 4 ಸಾವಿರ ಮಾಸಾಶನವನ್ನು ಐದು ವರ್ಷಗಳವರೆಗೆ ನೀಡಲಾಗುವುದು ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದರು.

ಇದೇ ವೇಳೆ ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಶವವನ್ನು ಹಸ್ತಾಂತರಿಸಲಾಯಿತು. ಈ ಸಂಬಂಧ ಅಂತರಸಂತೆ ಠಾಣೆಯಲ್ಲಿ ದೂರು ದಾಖಲಾಗಿದೆ. ಇದೇ ಸಂದರ್ಭ ಡಿಸಿಎಫ್ ಸೀಮಾ, ಎಸಿಎಫ್ ರಂಗಸ್ವಾಮಿ, ಸರಗೂರು ಸಿಪಿಐ ಲಕ್ಷ್ಮಿಕಾಂತ್, ಕೋಟೆ ಎಸ್‌ಐ ಶಬ್ಬೀರ್ ಹುಸೇನ್, ಅಂತರಸಂತೆ ಎಸ್‌ಐ ಚಂದ್ರಹಾಸ, ಅರಣ್ಯ ಇಲಾಖೆ ಸಿಬ್ಬಂದಿ ವರ್ಗ ಇನ್ನಿತರರಿದ್ದರು.

ಬೆಟ್ಟದಪುರ ಗ್ರಾಪಂನಲ್ಲಿ ಜಮಾಬಂಧಿ ಕಾರ್ಯಕ್ರಮ



ಬೆಟ್ಟದಪುರದಲ್ಲಿ ಜಮಾಬಂಧಿ ಕಾರ್ಯಕ್ರಮ ನಡೆಯಿತು.

ಬೆಟ್ಟದಪುರ, ಆ.27– ಇಲ್ಲಿನ ಗ್ರಾಪಂ ಆವರಣದಲ್ಲಿ ಅಧ್ಯಕ್ಷ ರಾಜಶೇಖರ್ ಅಧ್ಯಕ್ಷತೆಯಲ್ಲಿ ಮಂಗಳವಾರ ಜಮಾಬಂಧಿ ಕಾರ್ಯಕ್ರಮ ನಡೆಯಿತು.

ಜಿಲ್ಲಾ ಯೋಜನಾ ನಿರ್ದೇಶಕ ಪ್ರಭುಸ್ವಾಮಿ ಮಾತನಾಡಿ, ಗ್ರಾಪಂನಲ್ಲಿ ಲಭ್ಯವಿರುವ ಯೋಜನೆಗಳನ್ನು ಗ್ರಾಮಸ್ಥರು ಸದ್ಬಳಕೆ ಮಾಡಿಕೊಳ್ಳಬೇಕು. ಅಲ್ಲದೇ ಗ್ರಾಮದ ಸ್ವಚ್ಛತೆಗೆ ಸಹಕರಿಸುವ ಮೂಲಕ ಆರೋಗ್ಯಕರ ಜೀವನ ನಡೆಸಲು ಮುಂದಾಗಬೇಕು ಎಂದರು.

ಪಿಡಿಓ ಮಂಜುನಾಥ್ ಮಾತನಾಡಿ, ಬೆಟ್ಟದಪುರ ಗ್ರಾಪಂ ಅಭಿವೃದ್ಧಿಗೆ ಹಲವು ಯೋಜನೆಗಳಿಂದ 1.40 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿ ಪ್ರಾರಂಭಿಸಲಾಗಿದೆ. 15ನೇ ಹಣಕಾಸು ಯೋಜನೆಯಡಿ 23 ಲಕ್ಷ ರೂ. ವೆಚ್ಚದಲ್ಲಿ 17 ಕಾಮಗಾರಿ ಹಾಗೂ ವರ್ಗ 2ರಲ್ಲಿ 7 ಕಾಮಗಾರಿ, ವರ್ಗ 1ರಲ್ಲಿ 2 ಕಾಮಗಾರಿ, ವಸತಿ ಯೋಜನೆಯಲ್ಲಿ 34 ಮನೆಗಳ ಕಾಮಗಾರಿಗಳು ನಡೆಯುತ್ತಿದ್ದು, ಇನ್ನು ಹೆಚ್ಚಿನ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಸದಸ್ಯರಾದ ಗಿರಿಗೌಡ, ಮಾಜಿ ಅಧ್ಯಕ್ಷೆ ಮಂಜುಳಾ, ಶ್ವೇತಾ, ಕಾರ್ಯದರ್ಶಿ ಪಾಂಡು, ಸಹಾಯಕ ಕಾರ್ಯದರ್ಶಿ ಶ್ರೀನಿಧಿ, ಕಂಪ್ಯೂಟರ್ ಆಪರೇಟರ್ ದೀಪು. ಕರ ವಸೂಲಿಗಾರ ಅಣ್ಣೇಗೌಡ ಹಾಗೂ ಸಾರ್ವಜನಿಕರು ಹಾಜರಿದ್ದರು.

ಸೆ.1, ಮೈಸೂರು ಮ್ಯಾರಥಾನ್

ಮೈಸೂರು, ಆ.27(ಎಸ್‌ಪಿಎನ್)– ಮೈಸೂರು ಅರಮನೆ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ಸೆ.1ರಂದು ಮುಂಜಾನೆ 5.30ಕ್ಕೆ ಲೈಫ್ ಈಸ್ ಕಾಲಿಂಗ್ ಸಂಸ್ಥೆ ವತಿಯಿಂದ ವಿವಿಧ ವರ್ಗದ ಸೆಲಬ್ರೇಶನ್ ಮೈಸೂರು ಮ್ಯಾರಥಾನ್‌ಗೆ ಚಾಲನೆ ನೀಡಲಾಗುವುದು. ಈ ಮ್ಯಾರಥಾನ್‌ನಲ್ಲಿ 16 ವರ್ಷ ಅಥವಾ ಅದಕ್ಕೂ ಮೇಲ್ಪಟ್ಟ ವಯಸ್ಸಿನವರಿಗಾಗಿ 30 ಕಿಮೀ ಹಾಗೂ 21 ಕಿಮೀ ಆಫ್ ಮ್ಯಾರಥಾನ್ ಆಯೋಜಿಸಿದ್ದು, 10 ಕಿ.ಮೀ ಓಟ ಸ್ಪರ್ಧಾತ್ಮಕ ಮ್ಯಾರಥಾನ್ ಇರಲಿದೆ. ಇದರಲ್ಲಿ 5 ಕಿಮೀ ಮ್ಯಾರಥಾನ್ ಸೆಲೆಬ್ರೇಶನ್ ಆಫ್ ಮೈಸೂರು ವರ್ಗವಾಗಿದೆ ಎಂದು ಸಂಸ್ಥೆಯ ಸುನೀಲ್ ಮತ್ತು ಸಿದ್ಧಾರ್ಥ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ವಿವರಗಳಿಗೆ ಮೊ.ಸಂ:98451–16505/ 76762–83748/ 96066–22006 ಅನ್ನು ಸಂಪರ್ಕಿಸಬಹುದು.

ಬೀಚನಹಳ್ಳಿ ಶಾಲೆ ಮಕ್ಕಳಿಗೆ ಸಮವಸ್ತ್ರ ವಿತರಣೆ

ಹೆಚ್.ಡಿ.ಕೋಟೆ, ಆ.27– ತಾಲೂಕಿನ ಬೀಚನಹಳ್ಳಿ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ 51 ವಿದ್ಯಾರ್ಥಿಗಳಿಗೆ ಉಚಿತವಾಗಿ ಸಮವಸ್ತ್ರ ವಿತರಿಸಲಾಗಿದೆ ಎಂದು ತಾಲೂಕು ಟೈಲರಿಂಗ್ ಕಾರ್ಮಿಕರ ಅಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ರಂಗಸ್ವಾಮಿ ತಿಳಿಸಿದರು.

ಶಾಲೆಯ ಹಳೇ ವಿದ್ಯಾರ್ಥಿ ಕಿರಣ್ ಅವರ ಸ್ಮರಣಾರ್ಥ 19ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ವ್ಯಾಸಂಗ ಮಾಡಿದ ಎಲ್ಲಾ ಹಳೇ ವಿದ್ಯಾರ್ಥಿಗಳ ಬಳಗದಿಂದ ಮೊದಲ ವರ್ಷ ಶಾಲೆಯ 60 ಮಕ್ಕಳಿಗೆ ಸಮವಸ್ತ್ರವನ್ನು ಉಚಿತವಾಗಿ ನೀಡಲಾಗಿದ್ದು, ಅದರಂತೆ ಈ ವರ್ಷವೂ 51 ವಿದ್ಯಾರ್ಥಿಗಳಿಗೆ ಉಚಿತವಾಗಿ ಸಮವಸ್ತ್ರ ನೀಡಿದ್ದೇವೆ ಎಂದರು.

ಇದೇ ವೇಳೆ 7 ತರಗತಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿನಿ ಮಹಾಲಕ್ಷ್ಮಿಯನ್ನು ಸನ್ಮಾನಿಸಲಾಯಿತು. ಅಲ್ಲದೇ ಶಾಲೆ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಎಲ್‌ಇಡಿ ಟಿವಿಯನ್ನು ಕೊಡುಗೆ ನೀಡಲಾಯಿತು.

ಮುಖ್ಯ ಶಿಕ್ಷಕಿ ದಾಕ್ಷಾಯಿಣಿ, ಶಿಕ್ಷಕರಾದ ಶೈಲಜಾ, ನಾಗರತ್ನ, ಜಾಣನಾಯಕ, ಮಂಜುನಾಥ, ಎಸ್‌ಡಿಎಂಸಿ ಅಧ್ಯಕ್ಷೆ ಲಲಿತಾ, ಸದಸ್ಯರಾದ ಮಂಜುಳಾ, ನಂದ, ಮುಖಂಡರಾದ ಕಾಶಿಪತಿ, ಶ್ರೀನಿವಾಸ್, ಮಂಜುಳಾ ಸೇರಿದಂತೆ ಇನ್ನಿತರರಿದ್ದರು.



ಹಳೇ ವಿದ್ಯಾರ್ಥಿ ಕಿರಣ್ ಸ್ಮರಣಾರ್ಥ ಮಕ್ಕಳಿಗೆ ಸಮವಸ್ತ್ರ ವಿತರಿಸಲಾಯಿತು.

ಶ್ರೀಕೃಷ್ಣನ ಸಂದೇಶಗಳು ಸಮಾಜಕ್ಕೆ ಪೂರಕ



ಲಯನ್ಸ್ ಅಕಾಡೆಮಿ ಶಾಲೆಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ನಡೆಯಿತು.

ಸರಗೂರು, ಆ.27– ಶ್ರೀಕೃಷ್ಣನ ಸಂದೇಶಗಳು ಸಮಾಜಕ್ಕೆ ಪೂರಕವಾಗಿದೆ ಎಂದು ಲಯನ್ಸ್ ಅಕಾಡೆಮಿ ಶಾಲೆ ಕಾರ್ಯದರ್ಶಿ ಎಸ್.ಎಸ್.ಪ್ರಭುಸ್ವಾಮಿ ತಿಳಿಸಿದರು. ಪಟ್ಟಣದ ಲಯನ್ಸ್ ಅಕಾಡೆಮಿ ಶಾಲೆಯಲ್ಲಿ ನಡೆದ ಶ್ರೀಕೃಷ್ಣ ಜನ್ಮಾಷ್ಟಮಿಯಲ್ಲಿ ಮಾತನಾಡಿದ ಅವರು, ಭಗವದ್ಗೀತೆಯ ಎಲ್ಲಾ ತತ್ವಗಳು ಯುವ ಪೀಳಿಗೆಗೆ ಮಾರ್ಗದರ್ಶಕವಾಗಿದೆ. ಅವುಗಳನ್ನು ಆದರ್ಶವಾಗಿ ಇಟ್ಟುಕೊಂಡು ಮಕ್ಕಳು ಉನ್ನತ ವ್ಯಾಸಾಂಗ ಮಾಡಬೇಕು ಎಂದು ತಿಳಿಸಿದರು.

ಇದೇ ವೇಳೆ 150ಕ್ಕಿಂತ ಹೆಚ್ಚು ಮಕ್ಕಳು ಶ್ರೀಕೃಷ್ಣ, ರಾಧೆ ವೇಷ ಧರಿಸಿದ್ದರು. ಅಲ್ಲದೇ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಲಯನ್ಸ್ ಅಕಾಡೆಮಿ ಶಾಲೆಯ ಮ್ಯಾನೇಜಿಂಗ್ ಟ್ರಸ್ಟಿಗಳಾದ ಬ್ರಹ್ಮದೇವಯ್ಯ, ಖಜಾಂಚಿ ಎಸ್.ಬಿ.ನಾಗರಾಜು, ಮಾಜಿ ಅಧ್ಯಕ್ಷರಾದ ಶ್ರೀಕಂಠಸ್ವಾಮಿ, ಸುರೇಶ್ ಜೈನ್ ಹಾಗೂ ಎಸ್.ನಾರಾಯಣ್, ಪ್ರಾಂಶುಪಾಲ ಬಿ.ಡಿ.ದಾಸಾಚಾರಿ, ಮುಖ್ಯ ಶಿಕ್ಷಕಿ ಪದ್ಮಶ್ರೀ, ಶಿಕ್ಷಕರು, ಪೋಷಕರು ಮತ್ತು ಮಕ್ಕಳು ಇದ್ದರು.

ಕ್ರೀಡಾ ಸಾಮಗ್ರಿ ವಿತರಣೆ



ಬನ್ನೂರಿನಲ್ಲಿ ಮಂಗಳವಾರ ನಡೆದ ಹೋಬಳಿ ಮಟ್ಟದ ಪ್ರೌಢಶಾಲಾ ವಿಭಾಗದ ಕ್ರೀಡಾಕೂಟದಲ್ಲಿ ರೋಟರಿ ಕ್ಲಬ್ ವತಿಯಿಂದ ಕ್ರೀಡಾ ಸಾಮಗ್ರಿ ನೀಡಲಾಯಿತು. ರೋಟರಿ ಅಧ್ಯಕ್ಷ ವೆಂಕಟೇಶ್, ರಾಜು, ಮಾಣಿಕ್‌ಚಂದ್, ಕೃಷ್ಣೇಗೌಡ, ರಮೇಶ್, ಜಿ.ಪಿ.ಪ್ರಸನ್ನ, ಉಮೇಶ್, ಕೆಟಿಇಎಸ್ ಶಾಲಾ ಮುಖ್ಯೋಪಾಧ್ಯಾಯ ನಾಗಲಿಂಗಸ್ವಾಮಿ, ಉಮೇಶ್, ಸಿದ್ದೇಗೌಡ, ಜಿ.ಪಿ.ಪ್ರತಾಪ್, ದೇವನಾಥ್ ಸೇರಿದಂತೆ ಹಲವರಿದ್ದರು.

ದೈಹಿಕ, ಮಾನಸಿಕ ಆರೋಗ್ಯಕ್ಕೆ ಕ್ರೀಡೆ ಸಹಕಾರಿ




ನಂಜನಗೂಡು, ಆ.27– ಮಾನವನ ದೈಹಿಕ, ಮಾನಸಿಕ ಆರೋಗ್ಯಕ್ಕೆ ಕ್ರೀಡೆ ಸಹಕಾರಿ. ಆದ್ದರಿಂದ ವಿದ್ಯಾರ್ಥಿಗಳು ಶಿಕ್ಷಣಕ್ಕೆ ನೀಡುವ ಆದ್ಯತೆಯನ್ನು ಕ್ರೀಡೆಗೂ ನೀಡಬೇಕು ಎಂದು ಶಾಸಕ ದರ್ಶನ್ ತಿಳಿಸಿದರು.

ನಗರದ ಜೂನಿಯರ್ ಕಾಲೇಜು ಮೈದಾನದಲ್ಲಿ ಕೆಂಪಿಸಿದ್ದನಹುಂಡಿ ಕನಕದಾಸ ಸಾರ್ವಜನಿಕ ಪ್ರೌಢಶಾಲೆ ಸಹಯೋಗದಲ್ಲಿ ಶಿಕ್ಷಣ ಇಲಾಖೆ ಆಯೋಜಿಸಿದ್ದ ಪೂರ್ವ ವಲಯ ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕ್ರೀಡೆಗಳು ವಿದ್ಯಾರ್ಥಿಗಳ ಮನಸ್ಸು ಮತ್ತು ದೇಹದ ಮೇಲೆ ಧನಾತ್ಮಕ ಪರಿಣಾಮ ಬೀರುತ್ತವೆ. ವ್ಯಕ್ತಿಯಲ್ಲಿ ಆತ್ಮವಿಶ್ವಾಸ ತುಂಬಿ, ಗುರಿ ಮುಟ್ಟುವ ಸಾಮರ್ಥ್ಯ ವೃದ್ಧಿಯಾಗುವುದಲ್ಲದೆ ನಾಯಕತ್ವ ಗುಣಗಳನ್ನು ಬೆಳೆಸುತ್ತದೆ ಆದ್ದರಿಂದ ವಿದ್ಯಾರ್ಥಿಗಳು ಪಠ್ಯದಷ್ಟೇ ಪಠ್ಯೇತರ ಚಟುವಟಿಕೆಗೂ ಆದ್ಯತೆ ನೀಡಬೇಕು. ಅಲ್ಲದೇ ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕು. ಜೀವನದಲ್ಲಿ ತಾಳ್ಮೆಯನ್ನು ಅಳವಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಇದೇ ವೇಳೆ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಕೆಂಪಿಸಿದ್ದನಹುಂಡಿ ಗ್ರಾಪಂ ಅಧ್ಯಕ್ಷ ರವಿ, ಹುಚ್ಚಯ್ಯ, ಕೆ.ಎನ್.ನಂಜಯ್ಯ, ಸಂತೋಷ್, ರವಿ, ಶೃತಿ, ಗ್ರಾಪಂ ಮಾಜಿ ಅಧ್ಯಕ್ಷ ನಂಜಯ್ಯ, ರಾಜೇಶ್, ಬಿಇಓ ಮಹೇಶ್ ಸೇರಿದಂತೆ ವಿವಿಧ ಶಾಲೆಯ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಇದ್ದರು.

ಶೈಕ್ಷಣಿಕ ಅಭಿವೃದ್ಧಿಗಾಗಿ ಶಿಕ್ಷಕರು ಕಾರ್ಯ ನಿರ್ವಹಿಸಿ

ಕ್ಷೇತ್ರ ಶಿಕ್ಷಣಾಧಿಕಾರಿ ಶಿವಮೂರ್ತಿ



ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನೂತನ ಅಧ್ಯಕ್ಷ ಸುಬ್ಬಣ್ಣ ಅವರನ್ನು ಅಭಿನಂದಿಸಲಾಯಿತು.

ತಿ.ನರಸೀಪುರ, ಆ.27– ತಾಲೂಕಿನಲ್ಲಿ 800 ಪ್ರಾಥಮಿಕ ಶಾಲಾ ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದು, ಶೈಕ್ಷಣಿಕ ಅಭಿವೃದ್ಧಿಗಾಗಿ ವಿಶೇಷ ಕಾರ್ಯಾಗಾರ ಹಮ್ಮಿಕೊಂಡು ಕೆಲಸ ಮಾಡಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಶಿವಮೂರ್ತಿ ತಿಳಿಸಿದರು.

ಪಟ್ಟಣದ ಗುರುಭವನದಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ನೂತನ ಅಧ್ಯಕ್ಷ ಶಿಕ್ಷಕ ಸುಬ್ಬಣ್ಣ ಅವರ ಪದಗ್ರಹಣ ಸಮಾರಂಭದಲ್ಲಿ ನೂತನ ಅಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿದ ಅವರು, ಶಿಕ್ಷಕರು ಯಾವುದೇ ಗೊಂದಲಕ್ಕೆ ಅವಕಾಶ ಮಾಡಿಕೊಡದೇ ಅಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಿಕೊಂಡಿರುವುದು ಉತ್ತಮ ಬೆಳವಣಿಗೆ. ತಾಲೂಕಿನಲ್ಲಿ 800 ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಸಣ್ಣ ಪುಟ್ಟ ಸಮಸ್ಯೆ ಸಹಜ. ಶಿಕ್ಷಕರು ಶೈಕ್ಷಣಿಕ ಅಭಿವೃದ್ಧಿಗಾಗಿ ವಿಶೇಷ ಕಾರ್ಯಾಗಾರ ಹಮ್ಮಿಕೊಂಡು ಕೆಲಸ ಮಾಡಬೇಕಾಗುತ್ತದೆ. ಆ ನಿಟ್ಟಿನಲ್ಲಿ ಶಿಕ್ಷಕರು ಕಾರ್ಯೋನ್ಮುಖರಾಗಬೇಕಿದೆ. ತಾಲೂಕಿನಲ್ಲಿ ಎಲ್ಲಾ ಶೈಕ್ಷಣಿಕ ಚಟುವಟಿಕೆಗಳು ಉತ್ತಮವಾಗಿ ನಡೆಯಬೇಕಾದರೆ, ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಜವಾಬ್ದಾರಿ ಬಹುಮುಖ್ಯ. ಶಿಕ್ಷಕರಿಗೆ ಎರಡ್ಮೂರು ವರ್ಷಕ್ಕೊಮ್ಮೆ ಅದಾಲತ್ ಕಾರ್ಯಕ್ರಮ ನಡೆಸಬೇಕು. ಶಿಕ್ಷಕರಿಗೆ ಬೇಕಾದ ಎಲ್ಲಾ ಸೇವೆಗಳನ್ನು ನೀಡಲು ಸಿದ್ಧರಿದ್ದು, ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರಕಬೇಕೆಂಬುದು ನಮ್ಮ ಆಶಯ ಎಂದರು.

ನೂತನ ಅಧ್ಯಕ್ಷ ಸುಬ್ಬಣ್ಣ ಮಾತನಾಡಿ, ಶಿಕ್ಷಕರು ನನ್ನ ಮೇಲೆ ವಿಶ್ವಾಸವಿಟ್ಟು ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ. ಅವರ ನಂಬಿಕೆಗೆ ಚ್ಯುತಿ ಬಾರದಂತೆ ಪ್ರಾಮಾಣಿಕವಾಗಿ ಶಿಕ್ಷಕರ ಹಿತ ಕಾಯಲು ಬದ್ಧನಾಗಿದ್ದೇನೆ ಎಂದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಶಿವಶಂಕರಮೂರ್ತಿ, ಜಿಲ್ಲಾ ಉಪಾಧ್ಯಕ್ಷ ಸುಬ್ರಹ್ಮಣ್ಯ, ಪ್ರಧಾನ ಕಾರ್ಯದರ್ಶಿ ಪುಟ್ಟಸ್ವಾಮಿ, ಖಜಾಂಚಿ ನಾಗೇಶ್, ಜಿಲ್ಲಾ ಉಪಾಧ್ಯಕ್ಷ ಗಜೇಂದ್ರ, ಗೌರವಾಧ್ಯಕ್ಷ ಸಿದ್ದರಾಜು, ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಮಲ್ಲಣ್ಣ, ಜಿಲ್ಲಾ ಉಪಾಧ್ಯಕ್ಷ ಬಸವರಾಜು, ಉಪಾಧ್ಯಕ್ಷೆ ಗೌರಮ್ಮಣಿ, ಪದವೀಧರ ಶಿಕ್ಷಕರ ಸಂಘದ ಕಾರ್ಯದರ್ಶಿ ಸ್ವಾಮಿನಾಥ್, ಬಿಆರ್‌ಸಿ ನಾಗೇಶ್, ನಿರ್ದೇಶಕ ಸೋಮಶೇಖರ್, ಅಕ್ಕಮಹಾದೇವಿ, ಸಂಘಟನಾ ಕಾರ್ಯದರ್ಶಿ ಸಿದ್ದಲಿಂಗಮ್ಮ, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಪ್ರಸಾದ್, ಟಿ.ಸಿ.ರಾಜೇಶ್, ಚಂದ್ರಶೇಖರ್, ಧರ್ಮೇಂದ್ರ ಪ್ರಸಾದ್, ಸೂರ್ಯಕುಮಾರ್, ನಾಗೇಂದ್ರ ಮತ್ತಿತರಿದ್ದರು.

ಮೈಸೂರು ಮಿತ್ರ

ಚಾಮರಾಜ ಕ್ಷೇತ್ರ ವ್ಯಾಪ್ತಿಯ ಆಶ್ರಯ ಫಲಾನುಭವಿಗಳಿಗೆ ವರ್ಷದಲ್ಲಿ ನಿವೇಶನ

● ಈಗಾಗಲೇ ಹಣ ಪಾವತಿಸಿದವರಿಗೆ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಭರವಸೆ ● 24 ವರ್ಷದಿಂದ ಚಾತಕ ಪಕ್ಷಿಯಂತೆ ಕಾಯುತ್ತಿರುವ ಆಕಾಂಕ್ಷಿಗಳು ● ಹಂಚ್ಯಾ, ಹೆಬ್ಬಾಳು ಸೇರಿದಂತೆ ಇತರೆಡೆ ಭೂಮಿ ಗುರುತು ● ತಿಂಗಳ ನಂತರ ಪ್ರಕ್ರಿಯೆ ಆರಂಭ; ಪಟ್ಟಿಯಿಂದ ಯಾರನ್ನು ಕೈ ಬಿಡಲ್ಲ



ಮೈಸೂರು ನಗರ ಪಾಲಿಕೆಯ ಕೌನ್ಸಿಲ್ ಸಭಾಂಗಣದಲ್ಲಿ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ಆಶ್ರಯ ಸಮಿತಿಯ ಸಭೆ ನಡೆಸಿದರು.

ದಾಖಲಾತಿ ಸಮೇತ ಇಂದಿನಿಂದ ಮಾಹಿತಿ ಕೊಡಿ

ಚಾಮರಾಜ ಕ್ಷೇತ್ರದಲ್ಲಿ ನಿವೇಶನಕ್ಕೆ ಅರ್ಜಿ ಸಲ್ಲಿಸಿ, ಹಣ ಪಾವತಿ ಮಾಡಿರುವವರು ನಾಳೆ (ಆಗಸ್ಟ್ 28) ಯಿಂದಲೇ ಆಶ್ರಯ ಯೋಜನೆ ಶಾಖೆಗೆ ದಾಖಲಾತಿ ಸಮೇತ ಮಾಹಿತಿ ನೀಡುವಂತೆ ಶಾಸಕ ಹರೀಶ್ ಗೌಡ ಸಲಹೆ ನೀಡಿದರು.

ನಗರದ ಆಕಾಶವಾಣಿ ಬಳಿ ಇರುವ ನಗರ ಪಾಲಿಕೆ ಗೆಸ್ಟ್ ಹೌಸ್ ಪಕ್ಕದ ಚಾಮರಾಜ ಕ್ಷೇತ್ರದ ಆಶ್ರಯ ಯೋಜನೆ ಶಾಖೆಯ ಅಧೀಕ್ಷಕ ಉಮೇಶ್ ಅವರಿಗೆ ದಾಖಲಾತಿ ಸಮೇತ ಮಾಹಿತಿ ನೀಡಬೇಕು ಎಂದು ಸಲಹೆ ನೀಡಿದ್ದಾರೆ.

ಈಗಾಗಲೇ ಮಂಜೂರಾತಿ ಆಗಿ ಹಣ ಪಾವತಿಸಿರುವ ಯಾರನ್ನು ಪಟ್ಟಿಯಿಂದ ಕೈ ಬಿಡುವುದಿಲ್ಲ ಎಂದು ಹರೀಶ್ ಗೌಡ ಸ್ಪಷ್ಟಪಡಿಸಿದ್ದಾರೆ.

ಮೈಸೂರು, ಆ.27(ಬಿಎಲ್‌ಯು)– ಮೈಸೂರಿನ ಚಾಮರಾಜ ಕ್ಷೇತ್ರದಲ್ಲಿ ಆಶ್ರಯ ಯೋಜನೆಯಡಿ ಸೂರಿಗಾಗಿ ಅರ್ಜಿ ಸಲ್ಲಿಸಿ, ಹಣ ಪಾವತಿಸಿರುವ 3,276 ಫಲಾನುಭವಿಗಳಿಗೆ ಒಂದು ವರ್ಷದಲ್ಲಿ ನಿವೇಶನ ನೀಡಲಾಗುವುದು ಎಂದು ಮೈಸೂರಿನ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ಭರವಸೆ ನೀಡಿದರು.

ಮೈಸೂರು ನಗರ ಪಾಲಿಕೆಯ ಕೌನ್ಸಿಲ್ ಸಭಾಂಗಣದಲ್ಲಿ ಇಂದು ಆಶ್ರಯ ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳ ಸಭೆಯ ನಂತರ ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ವಿವರ ನೀಡಿದ ಅವರು, 3,276 ಜನರಿಗೆ ನಿವೇಶನ ಮಂಜೂರಾತಿ ಆಗಿದ್ದು, ಹಣ ಕೂಡ ಪಾವತಿ ಮಾಡಿದ್ದಾರೆ. ಆದರೆ ಇನ್ನು ಕೂಡ ಅವರಿಗೆ ನಿವೇಶನ ನೀಡಿಲ್ಲ. ಅವರೆಲ್ಲಾ 24 ವರ್ಷದಿಂದ ನಿವೇಶನಕ್ಕಾಗಿ ಕಾಯುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಇನ್ನು ಒಂದು ತಿಂಗಳಲ್ಲಿ ನಿವೇಶನ ನೀಡುವ ಸಂಬಂಧ ಪ್ರಕ್ರಿಯೆ ಆರಂಭಿಸಿ, ಒಂದು ವರ್ಷದಲ್ಲಿ ನಿವೇಶನ ನೀಡಲಾಗುವುದು ಎಂದು ಆಶ್ವಾಸನೆ ನೀಡಿದರು.

ಮೈಸೂರು ನಗರದ ಹಂಚ್ಯಾದಲ್ಲಿ 24.9 ಎಕರೆ ಹಾಗೂ ಹೆಬ್ಬಾಳದಲ್ಲಿ 8.28 ಎಕರೆ ಭೂಮಿಯನ್ನು ನಿವೇಶನ ನೀಡಲು ಗುರುತಿಸಲಾಗಿದೆ. ಇದಲ್ಲದೆ ಶ್ರೀರಾಂಪುರದಲ್ಲಿ 36.24 ಎಕರೆ, ಶ್ಯಾದನಹಳ್ಳಿಯಲ್ಲಿ 10 ಎಕರೆ ಹಾಗೂ ಬಂಡಿಪಾಳ್ಯದಲ್ಲಿ 6.28 ಎಕರೆ ಭೂಮಿ ಗುರುತಿಸಿದ್ದು, ಇಲ್ಲಿ ನಿವೇಶನಗಳನ್ನು ನೀಡಲಾಗುವುದು ಎಂದು ಹರೀಶ್‌ಗೌಡ ತಿಳಿಸಿದರು.

ವಿವಿಧ ಸರ್ವೆ ನಂಬರ್‌ಗಳಲ್ಲಿ ಹಂಚಿ ಹೋಗಿರುವ ಭೂಮಿಗಳಲ್ಲಿ ಗುಂಪು ಮನೆಗಳನ್ನು ನಿರ್ಮಾಣ ಮಾಡಿ ವಿತರಣೆ ಮಾಡಲಾಗುವುದು. ಒಂದೇ ಕಡೆ ಹೆಚ್ಚು ಭೂಮಿ ಇರುವ ಸ್ಥಳದಲ್ಲಿ ನಿವೇಶನ ನೀಡಲಾಗುವುದು. ಚಾಮರಾಜ ಕ್ಷೇತ್ರದಲ್ಲಿ ಸರ್ಕಾರಿ ಭೂಮಿ ಇಲ್ಲದ ಕಾರಣ ಬೇರೆ ಕ್ಷೇತ್ರದಲ್ಲಿ ನೀಡಲಾಗುತ್ತಿದೆ ಎಂದರು.

ಈ ಮೊದಲು ನಗರದ ಅಜ್ಜಯನ ಹುಂಡಿ ಬಳಿ ರಿಂಗ್ ರಸ್ತೆಯಲ್ಲಿ 15 ಎಕರೆಯ ಪಕ್ಕ ನಿವೇಶನ ನೀಡಲು ಭೂಮಿ ಗುರುತಿಸಲಾಗಿತ್ತು. ಆದರೆ ಅದು ಕೆರೆ ಜಾಗವೆಂದು ಹೇಳಿದ ಕಾರಣ, ಅಲ್ಲಿ ಬಡಾವಣೆ ನಿರ್ಮಾಣ ಪ್ರಕ್ರಿಯೆ ಸ್ಥಗಿತಗೊಳಿಸಲಾಯಿತು ಎಂದು ತಿಳಿಸಿದರು.

ನಗರದ ಬೋಗಾದಿ ರಿಂಗ್ ರಸ್ತೆಯಲ್ಲಿ ಆಶ್ರಯ ಮನೆ ಕಳೆದುಕೊಂಡಿರುವ 33 ಮಂದಿಗೆ ಕೂಡ ನಿವೇಶನ ನೀಡಲು ತೀರ್ಮಾನಿಸಲಾಗಿದೆ ಎಂದು ಹರೀಶ್‌ಗೌಡ ಹೇಳಿದರು.

ಗರುಡ ಮಾಲ್‌ನಿಂದ 1.83 ಕೋಟಿ ಬಾಡಿಗೆ ಬಾಕಿ

ಮೈಸೂರಿನ ಕೆ.ಆರ್.ವೃತ್ತದ ಗರುಡ ಮಾಲ್‌ನವರು ನಗರ ಪಾಲಿಕೆಗೆ ಪಾವತಿ ಮಾಡಬೇಕಾದ 1.83 ಕೋಟಿ ರೂಪಾಯಿ ಬಾಡಿಗೆಯನ್ನು ಕೂಡಲೇ ವಸೂಲಿ ಮಾಡುವಂತೆ ಶಾಸಕ ಕೆ.ಹರೀಶ್ ಗೌಡ ಅಧಿಕಾರಿಗಳಿಗೆ ತಾಕೀತು ಮಾಡಿದರು. ಗರುಡ ಮಾಲ್ ನುತೆ ಚಾಮರಾಜ ಕ್ಷೇತ್ರದಲ್ಲಿ ನಗರ ಪಾಲಿಕೆ ಕಟ್ಟಡದ ಬಾಡಿಗೆದಾರರು ಬಾಕಿ ಉಳಿಸಿಕೊಂಡಿರುವ ಬಗ್ಗೆ ಕೂಡ ಅಂಕಿ ಅಂಶಗಳ ಸಹಿತ ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಪಡುವಾರಹಳ್ಳಿಯ ವಾಲ್ಮೀಕಿ ರಸ್ತೆಯ ಮಹಾರಾಣಿ ಕಾಲೇಜು ಬಳಿ ಹೋಟೆಲ್ ನಿರ್ಮಾಣ ಮಾಡಲಾಗುತ್ತಿದೆ. ಅದು ಯಾರ ಜಾಗ, ಯಾವ ಮಾನದಂಡದ ಮೇಲೆ ಕಟ್ಟಡ ನಿರ್ಮಾಣಕ್ಕೆ ಲೈಸೆನ್ಸ್ ನೀಡಲಾಗಿದೆ ಎಂಬ ಬಗ್ಗೆ ಕೂಡ ವಿವರ ನೀಡುವಂತೆ ಅಧಿಕಾರಿಗಳಿಗೆ ಹರೀಶ್ ಗೌಡ ಸೂಚನೆ ನೀಡಿದರು. ನಗರ ಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಷರೀಫ್, ಆಶ್ರಯ ಸಮಿತಿ ಸದಸ್ಯರಾದ ಮಂಜುನಾಥ್, ಅನಂತ ನಾರಾಯಣ್, ಇಬ್ರಾಹಿಂ, ರಾಣಿ ಸೇರಿದಂತೆ ಹಲವು ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ಮುಡಾ ಅಕ್ರಮದಲ್ಲಿ ಭಾಗಿಯಾಗಿರುವುದು ಸಾಬೀತಾದರೆ ರಾಜಕೀಯ ನಿವೃತ್ತಿ

ಮುಡಾ ಅಕ್ರಮದಲ್ಲಿ ನಾನು ಭಾಗಿಯಾಗಿಲ್ಲ. ಒಂದು ವೇಳೆ ಭಾಗಿಯಾಗಿರುವುದು ಸಾಬೀತಾದರೆ ರಾಜಕೀಯ ನಿವೃತ್ತಿ ಪಡೆಯುತ್ತೇನೆ, ಇಲ್ಲವೇ ಕತ್ತು ಕುಯ್ದುಕೊಳ್ಳುತ್ತೇನೆ ಎಂದು ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ತಿಳಿಸಿದರು. ಮುಡಾದಲ್ಲಿ ನಾನು ನಿವೇಶನ ಪಡೆದಿಲ್ಲ. ಆ ಅವಶ್ಯಕತೆ ಕೂಡ ನನಗೆ ಇಲ್ಲ ಎಂದು ಸ್ಪಷ್ಟಪಡಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರು ಮುಡಾದಿಂದ ಅಕ್ರಮವಾಗಿ ನಿವೇಶನ ಪಡೆದಿಲ್ಲ. ವೈಟ್ನರ್ ಹಾಕಿ ದಾಖಲೆ ತಿದ್ದಿದ್ದಾರೆ ಎಂಬುದು ಸುಳ್ಳು. ಆದರೆ ಪಾರ್ವತಿ ಅವರ ಪ್ರಕರಣ ಮುಂದಿಟ್ಟುಕೊಂಡು ಕೆಲವರು ಬಚಾವಾಗಲು ಪ್ರಯತ್ನ ಮಾಡುತ್ತಿದ್ದಾರೆ ಎಂದು ಹೇಳಿದರು.

ಮುಡಾದಲ್ಲಿ ಅಕ್ರಮ ನಡೆದಿಲ್ಲ ಎಂದು ನಾನು ನಿರಾಕರಣೆ ಮಾಡುವುದಿಲ್ಲ. ಅಕ್ರಮ ನಡೆದಿರುವುದು ಸತ್ಯ. ಆದರೆ ಅಕ್ರಮ ನಡೆದಿದೆ ಎಂದು ಈಗ ಆರೋಪ ಮಾಡುತ್ತಿರುವವರೇ ಅದರಲ್ಲಿ ಭಾಗಿಯಾಗಿದ್ದಾರೆ ಎಂದು ಬಿಜೆಪಿ ನಾಯಕರಿಗೆ ಪರೋಕ್ಷವಾಗಿ ತಿರುಗೇಟು ನೀಡಿದರು.

ಮುಡಾ ಅಕ್ರಮಗಳ ಬಗ್ಗೆ ದಾಖಲೆಗಳನ್ನು ಕಲೆ ಹಾಕುತ್ತಿದ್ದೇನೆ. ಸಮಯ ಬಂದಾಗ ಜನರಿಗೆ ಸತ್ಯಾಸತ್ಯತೆ ತಿಳಿಸುತ್ತೇನೆ. ಜೊತೆಗೆ ಮುಡಾ ಅಕ್ರಮದ ಬಗ್ಗೆ ತನಿಖೆ ನಡೆಸುತ್ತಿರುವ ದೇಸಾಯಿ ಆಯೋಗಕ್ಕೂ ದೂರು ನೀಡುತ್ತೇನೆ ಎಂದು ಹರೀಶ್‌ಗೌಡರು ತಿಳಿಸಿದರು.

ರಾಮಕೃಷ್ಣ ವೃತ್ತದ ಬಳಿಯ 24 ಎಕರೆ ಭೂಮಿಯಲ್ಲಿ 17 ಎಕರೆಯನ್ನು ಗೃಹ ನಿರ್ಮಾಣ ಸಂಘಕ್ಕೆ ನೀಡಲು ಮುಂದಾಗಿದ್ದರು. ಸುಮಾರು 400 ಕೋಟಿ ಮೌಲ್ಯದ ಭೂಮಿಯನ್ನು ಲಪಟಾಯಿಸದಂತೆ ಸ್ವತಃ ನಾನೇ ತಡೆದಿದ್ದೇನೆ ಎಂದರು.

ನನ್ನ ಯಾರೂ ಸಂಪರ್ಕಿಸಿಲ್ಲ: ಆಪರೇಷನ್ ಕಮಲ ದಾಳ ಉರುಳಿಸಿರುವ ಬಿಜೆಪಿ, ಕಾಂಗ್ರೆಸ್ ಶಾಸಕರಿಗೆ 100 ಕೋಟಿ ಆಸೆ ತೋರಿಸುತ್ತಿದೆ ಎಂಬ ಆರೋಪದ ಬಗ್ಗೆ ಪ್ರತಿಕ್ರಿಯೆ ನೀಡಿದ ಹರೀಶ್ ಗೌಡ, ನನ್ನನ್ನು ಯಾರು ಸಂಪರ್ಕಿಸಿಲ್ಲ. ಈ ವಿಚಾರ ನನ್ನ ಗಮನಕ್ಕೂ ಬಂದಿಲ್ಲ. ಆದರೆ ತಿಪ್ಪರಲಾಗ ಹಾಕಿದರೂ ಒಬ್ಬ ಕಾಂಗ್ರೆಸ್ ಶಾಸಕನೂ ಬಿಜೆಪಿಗೆ ಹೋಗುವುದಿಲ್ಲ ಎಂದು ಹೇಳಿದರು.

ಮುಡಾ ಪ್ರಕರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ತೀರ್ಮಾನದ ಬಗ್ಗೆ ರಾಷ್ಟ್ರಪತಿಗೆ ದೂರು ನೀಡಲು ತೀರ್ಮಾನಿಸಲಾಗಿದೆ. ಕೂಡಲೇ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ವಾಪಾಸು ಕರೆಸಿಕೊಳ್ಳುವಂತೆ ಮನವಿ ಮಾಡಲು ಸರ್ಕಾರ ತೀರ್ಮಾನ ಕೈಗೊಂಡಿದೆ ಎಂದು ಮಾಹಿತಿ ನೀಡಿದರು. ಮೈಸೂರಿನ ದೇವರಾಜ ಮಾರುಕಟ್ಟೆಯನ್ನು ನವೀಕರಣ ಮಾಡಲು ತೀರ್ಮಾನಿಸಲಾಗಿದೆ. ಆದರೆ ತಜ್ಞರ ಸಲಹೆಯಂತೆ ಲ್ಯಾನ್ಸ್ ಡೌನ್ ಬಿಲ್ಡಿಂಗ್ ನೆಲಸಮಗೊಳಿಸಿ ಹೊಸ ಕಟ್ಟಡ ನಿರ್ಮಿಸಲು ನಿರ್ಧಾರ ಮಾಡಲಾಗಿದೆ ಎಂದು ಹರೀಶ್ ಗೌಡ ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯರ ಬೆರಳಿಗೆ ಗಾಯ; ವಿಧಾನಸೌಧದ ಅಧಿಕಾರಿಗಳಲ್ಲಿ ತಳಮಳ!

ಬೆಂಗಳೂರು, ಆ.27(ಕೆಎಂಶಿ)–ಅರ್ಜಿಯೊಂದರ ಪರಿಶೀಲನೆ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬೆರಳಿಗೆ ಆಕಸ್ಮಿಕವಾಗಿ ಗುಂಡುಸೂಜಿ ಚುಚ್ಚಿ ಗಾಯವಾಗಿದ್ದೇ ವಿಧಾನಸೌಧದ ಮೊಗಸಾಲೆಗಳಲ್ಲಿ ಇಂದಿನ ಬಿಸಿಬಿಸಿ ಸುದ್ದಿಯಾಗಿದೆ.

ವಿಧಾನಸೌಧದಲ್ಲಿ ಸಿದ್ದರಾಮಯ್ಯ ಅರ್ಜಿ ಪರಿಶೀಲನೆ ನಡೆಸುತ್ತಿದ್ದರು. ಆಗ ಬೆರಳಿಗೆ ಗುಂಡುಸೂಜಿ ಚುಚ್ಚಿ ಒಂದಷ್ಟು ರಕ್ತವೂ ಬಂದಿತು. ಇದನ್ನು ಕಂಡ ಅಧಿಕಾರಿಗಳು ತಬ್ಬಿಬ್ಬಾದರು. ಮುಖ್ಯಮಂತ್ರಿಗಳ ಗಾಯಕ್ಕೆ ಔಷಧಿ ಹಚ್ಚಿದರು.

ವಿಷಯ ತಿಳಿಯುತ್ತಿದ್ದಂತೆ ಮುಖ್ಯಮಂತ್ರಿ ಅವರಿಗೆ ಚಿಕಿತ್ಸೆ ನೀಡಲು ಒಬ್ಬ ವೈದ್ಯ, ಒಬ್ಬ ನರ್ಸ್ ಪ್ರಥಮ ಚಿಕಿತ್ಸೆ ಕಿಟ್‌ನೊಂದಿಗೆ ಧಾವಿಸಿದರು. ಸಿದ್ದರಾಮಯ್ಯ ಅವರಿಗಾದ ಗಾಯದ ತಪಾಸಣೆ ಮಾಡಿ ಪ್ರಥಮ ಚಿಕಿತ್ಸೆ ನೀಡಿದರು.

ಇದಕ್ಕೂ ಮೊದಲು ಗಾಯ ಹೇಗಾಯಿತೆಂಬ ಮಾಹಿತಿ ಇಲ್ಲದೇ ಅಧಿಕಾರಿಗಳು, ವೈದ್ಯರು ಗಾಬರಿಗೊಂಡರು. ನಂತರ ಇದು ಗುಂಡು ಸೂಜಿ ಚುಚ್ಚಿದ ಗಾಯ ಎಂಬುದು ತಿಳಿಯಿತು.

ಈ ವೇಳೆ ಮುಖ್ಯಮಂತ್ರಿಗಳು ಬೆರಳಿಗೆ ಕರ್ಚೀಫ್ ಸುತ್ತಿಕೊಂಡು ಸಭೆಗೆ ತೆರಳಿದರು, ಆದರೂ, ಮುಖ್ಯಮಂತ್ರಿ ಅವರ ಕಚೇರಿ ಮುಂದೆ ಕಂಡುಬಂದ ವಾತಾವರಣ ಹೇಗಿತ್ತೆಂದರೆ, ಸಿದ್ದರಾಮಯ್ಯ ಅವರಿಗೆ ದೊಡ್ಡ ಗಾಯವೇ ಆಗಿರಬಹುದೇನೋ ಎಂಬಂತೆ ಇತ್ತು.

ಈ ಘಟನೆ ಬಗ್ಗೆ ಸೂಟು ಬೂಟು ಧರಿಸಿದ್ದ ಅಧಿಕಾರಿಯೊಬ್ಬರು ಸುದ್ದಿ ಮಾಧ್ಯಮಗಳಿಗೆ ವಸ್ತುಸ್ಥಿತಿ ವಿವರಿಸುತ್ತಿದ್ದುದು ಕಂಡುಬಂದಿತು. ವೈದ್ಯರು ಗಾಯಕ್ಕೆ ಡ್ರೆಸ್ಸಿಂಗ್ ಮಾಡಿ ವೈದ್ಯೋಪಚಾರ ನೀಡಿದ ನಂತರ ಮುಖ್ಯಮಂತ್ರಿ ವಿಶ್ರಾಂತಿಗೆ ತೆರಳಿದರು.

ಮೈಸೂರಿನ ಖಾಸಗಿ ಶಾಲೆಯಲ್ಲಿ ಪ್ರಪ್ರಥಮ ಎಐ ಟೀಚರ್ ಬೋಧನೆ!

ಸಂಸದ ಯದುವೀರರಿಂದ ಅತ್ಯಾಧುನಿಕ ಬೋಧನಾ ವಿಧಾನಕ್ಕೆ ಚಾಲನೆ

ಮೈಸೂರು,ಆ.27(ಎಂಟಿವೈ)–ಈಗಾಗಲೇ ವಿವಿಧ ಕ್ಷೇತ್ರಗಳಲ್ಲಿ ಗಮನ ಸೆಳೆಯುತ್ತಿರುವ ಕೃತಕ ಬುದ್ಧಿಮತ್ತೆ (ಆರ್ಟಿಫಿಷಿಯಲ್ ಇಂಟಲಿಜೆನ್ಸ್–ಎಐ) ಇದೀಗ ಶಿಕ್ಷಣ ಕ್ಷೇತ್ರಕ್ಕೂ ಪದಾರ್ಪಣೆ ಮಾಡಿದ್ದು, ಮೈಸೂರಿನ ಖಾಸಗಿ ಶಾಲೆಯೊಂದರಲ್ಲಿ ಮಕ್ಕಳಿಗೆ ಬೋಧನೆಗೆ ಸಜ್ಜಾಗಿದೆ.

ಮೈಸೂರಿನ ಸೆಂಟ್ ರೊಸೆಲ್ಲೋಸ್ ಸೆಂಟ್ರಲ್ ಸ್ಕೂಲ್ ಮೊದಲ ಬಾರಿಗೆ ಎಐ ಟೀಚರ್ ಬಳಕೆ ಮಾಡುತ್ತಿರುವ ಹೆಗ್ಗಳಿಕೆಗೆ ಪಾತ್ರವಾಗಿದ್ದು ಮಂಗಳವಾರ ಎಐ ಟೀಚರ್ ಅನ್ನು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅನಾವರಣಗೊಳಿಸಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಬದಲಾವಣೆಗಳು ಆಗುತ್ತಿವೆ. ಇದರಿಂದ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗುತ್ತದೆ. ಇದೀಗ ಶಿಕ್ಷಣ ಕ್ಷೇತ್ರದಲ್ಲಿ ಎಐ ಟೀಚರ್ ಬಳಕೆ ಪ್ರಾರಂಭವಾಗಿದ್ದು, ಸೆಂಟ್ ರೊಸೆಲ್ಲೋಸ್ ಸೆಂಟ್ರಲ್ ಸ್ಕೂಲ್‌ನಲ್ಲಿ ಮೊದಲಿಗೆ ಪರಿಚಯಿಸಿರುವುದು ಸಂತಸದ ವಿಚಾರ. ವಿದ್ಯಾರ್ಥಿಗಳ ಬೌದ್ಧಿಕ ವಿಕಸನಕ್ಕೆ ಎಐ ಟೀಚರ್ ಪೂರಕವಾಗಲಿದೆ. ಇದರಿಂದ ಮಕ್ಕಳು ಕಲಿಯಲು ಪ್ರಾರಂಭಿಸಿದರೆ ಅವರಿಗೆ ಸುಲಭವಾಗಿ ವಿಷಯಗಳು ಅರ್ಥವಾಗುತ್ತದೆ.



ಮೈಸೂರಿನ ಸೆಂಟ್ ರೊಸೆ ಲ್ಲೋಸ್ ಸೆಂಟ್ರಲ್ ಸ್ಕೂಲ್‌ನಲ್ಲಿ ಪರಿಚಯಿಸಲಾಗಿರುವ ಕೃತಕ ಬುದ್ಧಿಮತ್ತೆ ಟೀಚರ್ ಬೋಧನೆಗೆ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಚಾಲನೆ ನೀಡಿದರು.

ವಿಶ್ವವೇ ಎಐ ತಂತ್ರಜ್ಞಾನದ ಕಡೆ ಮುಖ ಮಾಡುತ್ತಿರುವ ಕಾಲಘಟ್ಟದಲ್ಲಿ ಶಾಲೆಗಳಲ್ಲಿ ಎಐ ತಂತ್ರಜ್ಞಾನ ಅಳವಡಿಸಿಕೊಳ್ಳುವ ಅವಶ್ಯಕತೆ ಇದೆ ಎಂದು ಹೇಳಿದರು.

ಎಐ ಟೀಚರ್: ಎಐ ಟೀಚರ್ ಅನ್ನು ಮೈಸೂರಿನಲ್ಲಿಯೇ ಅಭಿವೃದ್ಧಿಪಡಿಸಲಾಗಿದ್ದು, ಮಕ್ಕಳಲ್ಲಿ ಕಲಿಕಾ ಆಸಕ್ತಿ ಮೂಡಿಸುವ ವಿಶ್ವಾಸವಿದೆ. ಎಐ ಟೀಚರ್ ವಿದ್ಯಾರ್ಥಿಗಳು ಕೇಳುವ ಯಾವುದೇ ಮಾಹಿತಿಯನ್ನು ಕ್ಷಣ ಮಾತ್ರದಲ್ಲಿ ನೀಡಲಿದೆ. ಗೂಗಲ್ ಹಾಗೂ ಚಾಟ್ ಜಿಪಿಟಿಯ ಸಹಕಾರದೊಂದಿಗೆ ಕೃತಕ ಬುದ್ಧಿಮತ್ತೆ ಟೀಚರ್ ಮಾಹಿತಿ ಒದಗಿಸುತ್ತದೆ. ಮಕ್ಕಳ ಮನದಲ್ಲಿ ಮೂಡುವ ಪ್ರತಿಯೊಂದು ಪಶ್ನೆಗಳಿಗೂ ಉತ್ತರ ದೊರೆಯಬೇಕು ಎಂಬ ನಿರೀಕ್ಷೆಯಿಂದ ಎಐ ಟೀಚರ್ ಪರಿಚಯಿಸಲಾಗಿದೆ.

ಕಾರ್ಯಕ್ರಮದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ, ಸೆಂಟ್ ರೊಸೆಲ್ಲೋಸ್ ಸೆಂಟ್ರಲ್ ಸ್ಕೂಲ್ ಪ್ರಾಂಶುಪಾಲೆ ಎಂ.ಜೆ. ವಿನಿತಾ, ವ್ಯವಸ್ಥಾಪಕಿ ಮಾರ್ಗರೇಟ್, ಎಂಡಿಇಎಸ್ ಕಾರ್ಯದರ್ಶಿ ಎಡ್ವರ್ಡ್ ಸಾಲ್ಡಾನಾ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಮಿ. ಬಚ್ಚನ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಭೀಮಾ (ಕ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೀಮಾ (ಕ)	4 ಪ್ರದರ್ಶನಗಳು
ರಾಜಕಮಲ್	
ತಂಗಾಲಾನ್ (ತ)	4 ಪ್ರದರ್ಶನಗಳು
ಸಂಗಂ	
ಭೀಮಾ (ಕ)	4 ಪ್ರದರ್ಶನಗಳು
ಲಿಡೋ	
ಗೌರಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಸ್ತ್ರೀ–2 (ಹಿ)	4 ಪ್ರದರ್ಶನಗಳು
ಪ್ರಭಾ	
ತಾಜ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಹೆರಾಲ್ಡ್ ಅಂಡ್ ದಿ ಪರ್ಪಲ್ ಕ್ರಯಾನ್ (ಇಂ): ಬೆ.11ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.1ಕ್ಕೆ, ಸಂ.4.05ಕ್ಕೆ, ಸ್ತ್ರೀ 2 (ಹಿಂ): ರಾ.7.10ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 2	ಕೃಷ್ಣಂ ಪ್ರಣಯ ಸಖಿ (ಕ): ಬೆ.10.45ಕ್ಕೆ, ಹೆರಾಲ್ಡ್ ಅಂಡ್ ದಿ ಪರ್ಪಲ್ ಕ್ರಯಾನ್ (ಇಂ): ಮ.2.10ಕ್ಕೆ, ಪೌಡರ್ (ಕ): ಸಂ.4.30ಕ್ಕೆ, ರಾ.7.15ಕ್ಕೆ, ವಾಝಾ ಬಯೋಪಿಕ್ ಆಫ್ ಎ ಬಿಲಿಯನ್ ಬಾಯ್ಸ್ (ಮ): ರಾ.10ಕ್ಕೆ.
ಸ್ಕ್ರೀನ್ 3	ಏಲಿಯನ್ ರೊಮುಲಸ್ (ಇಂ): ಬೆ.10.55ಕ್ಕೆ, ಸಂ.4.50ಕ್ಕೆ, ರಾ.7.30ಕ್ಕೆ, ತಂಗಲಾನ್ (ತ): ಮ.1.25ಕ್ಕೆ, ಭೀಮಾ (ಕ): ರಾ.10ಕ್ಕೆ.
ಸ್ಕ್ರೀನ್ 4	ಸ್ತ್ರೀ 2 (ಹಿಂ): ಬೆ.10.20ಕ್ಕೆ, ಸಂ.4.10ಕ್ಕೆ, ಭೀಮಾ (ಕ): ಮ.1.15ಕ್ಕೆ, ಕೃಷ್ಣಂ ಪ್ರಣಯ ಸಖಿ (ತ): ರಾ.7.05ಕ್ಕೆ, ರಾ.10.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಭೀಮಾ (ಕ): ಬೆ.10.50ಕ್ಕೆ, ಪೌಡರ್ (ಕ): ಮ.1.45ಕ್ಕೆ, ಸಂ.4.20ಕ್ಕೆ, ಫೂಟೇಜ್ (ಮ): ಸಂ.6.55ಕ್ಕೆ, ನುನಕ್ಕುಝಿ (ಮ): ರಾ.9.25ಕ್ಕೆ.
ಸ್ಕ್ರೀನ್ 2	ಕೃಷ್ಣಂ ಪ್ರಣಯ ಸಖಿ (ಕ): ಮ.12.25ಕ್ಕೆ, ಸಂ.6.25ಕ್ಕೆ, ರಾ.9.30ಕ್ಕೆ, ಭೀಮಾ (ಕ): ಮ.3.50ಕ್ಕೆ.
ಸ್ಕ್ರೀನ್ 3	ಸ್ತ್ರೀ 2 (ಹಿಂ): ಬೆ.10ಕ್ಕೆ, ಮ.12.50ಕ್ಕೆ, ಸಂ.6.50ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.3.45ಕ್ಕೆ, ಹಂಟ್ (ಮ): ರಾ.9.40ಕ್ಕೆ.
ಸ್ಕ್ರೀನ್ 4	ಕೃಷ್ಣಂ ಪ್ರಣಯ ಸಖಿ (ಕ): ಬೆ.10.20ಕ್ಕೆ, ಭೀಮಾ (ಕ): ಮ.1.25ಕ್ಕೆ, ಸಂ.6.35ಕ್ಕೆ, ಹಂಟ್ (ಮ): ಸಂ.4.20ಕ್ಕೆ, ಸ್ತ್ರೀ 2 (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರಿನಲ್ಲಿ ಬಿಎಸ್‌ಪಿ ಧರಣಿ

ಮೈಸೂರು, ಆ.27(ಬಿಎಲ್‌ಯು)– ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೀಸಲಾತಿ ಹಕ್ಕು ಸಂರಕ್ಷಣೆಗೆ ಆಗ್ರಹಿಸಿ ಬಹುಜನ ಸಮಾಜ ಪಾರ್ಟಿ ಆಗಸ್ಟ್ 30 ರಂದು ಮೈಸೂರಿನಲ್ಲಿ ಧರಣಿ ಹಮ್ಮಿಕೊಂಡಿದೆ ಎಂದು ಪಕ್ಷದ ಜಿಲ್ಲಾ ಉಸ್ತುವಾರಿ ಚಂದ್ರಶೇಖರ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಅವರು, ಗಾಂಧಿನಗರದ ಅಂಬೇಡ್ಕರ್ ಸರ್ಕಲ್ ಬಳಿ ಅಂದು ಬೆಳಿಗ್ಗೆ 11 ಗಂಟೆಗೆ ಧರಣಿ ನಡೆಯಲಿದೆ ಎಂದು ತಿಳಿಸಿದರು.

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿಗೆ ಮೀಸಲಾದ ಎಸ್‌ಸಿ–ಎಸ್‌ಟಿ ಮತ್ತು ಟಿಎಸ್‌ಪಿ ಹಣವನ್ನು ದುರ್ಬಳಕೆ ಮಾಡಿಕೊಂಡು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಂಡಿದೆ ಎಂದು ಆರೋಪಿಸಿದರು.

ಈ ಹಿನ್ನೆಲೆ ಮನುವಾದಿಗಳಿಂದ ನಮ್ಮ ಹಕ್ಕು ಮತ್ತು ಅಧಿಕಾರವನ್ನು ಉಳಿಸಿಕೊಳ್ಳಲು ಹೋರಾಟ ರೂಪಿಸಲಾಗಿದೆ ಎಂದು ಚಂದ್ರಶೇಖರ್ ತಿಳಿಸಿದರು. ಪಕ್ಷದ ಮುಖಂಡರಾದ ಬಸವಣ್ಣ, ನಂಜುಂಡ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಗಜಪಡೆಗೆ ಬೆಳಗ್ಗೆ ಆರ್‌ಎಂಸಿ, ಸಂಜೆ ಕೆ.ಆರ್.ಆಸ್ಪತ್ರೆವರೆಗೆ ತಾಲೀಮು



ಅರಮನೆ ಆವರಣದಲ್ಲಿ ಕಂಜನ್ ಆನೆಗೆ ಕಾವಾಡಿ ಹಾಗೂ ಸಹಾಯಕರು ಸ್ನಾನ ಮಾಡಿಸುತ್ತಿರುವುದು

ಮೈಸೂರು,ಆ.27(ಎಂಟಿವೈ)– ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಮೊದಲ ತಂಡದಲ್ಲಿ ಆಗಮಿಸಿರುವ ಅಂಬಾರಿ ಆನೆ, ಕ್ಯಾಪ್ಟನ್ ಅಭಿಮನ್ಯು ನೇತೃತ್ವದ 8 ಆನೆಗಳಿಗೆ ಜಂಬೂಸವಾರಿ ಮಾರ್ಗದಲ್ಲಿ ತಾಲೀಮು ಚುರುಕುಗೊಳಿಸಲಾಗಿದ್ದು, ಮಂಗಳವಾರ ಬೆಳಗ್ಗೆ ಮತ್ತು ಸಂಜೆ ತಾಲೀಮು ನಡೆಸುವ ಮೂಲಕ ಆನೆಗಳನ್ನು ಮೆಗಾ ಇವೆಂಟ್ ಜಂಬೂ ಸವಾರಿಗೆ ಸಜ್ಜುಗೊಳಿಸಲಾಗುತ್ತಿದೆ.

ಕಳೆದ ಮೂರು ದಿನಗಳಿಂದ ಜಂಬೂ ಸವಾರಿ ಸಾಗುವ ಮಾರ್ಗದಲ್ಲಿ ದಸರಾ ಗಜಪಡೆಗೆ ತಾಲೀಮು ನಡೆಸಲಾಗುತ್ತಿದ್ದು, ಆನೆಗಳು ಎಲ್ಲಾ ವಾತಾವರಣಕ್ಕೆ ಹೊಂದಿಕೊಳ್ಳುವ ಉದ್ದೇಶದಿಂದ ಬೆಳಗ್ಗೆ ಮತ್ತು ಸಂಜೆ ಎರಡು ಬಾರಿ ತಾಲೀಮು ನಡೆಸಲಾಗುತ್ತಿದೆ. ಆ.25ರಂದು ಅರಮನೆಯಿಂದ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದವರೆಗೂ ಪೂರ್ಣ ಪ್ರಮಾಣದ ತಾಲೀಮು ನಡೆಸಲಾಗಿತ್ತು. ಆದರೆ, ಸೋಮವಾರ ಹಾಗೂ ಮಂಗಳವಾರ ದಿನಕ್ಕೆ ಎರಡು ಬಾರಿ ಆರ್‌ಎಂಸಿ ವೃತ್ತದವರೆಗೂ ತಾಲೀಮು ನಡೆಸಿ, ಆನೆಗಳಿಗೆ ತರಬೇತಿ ನೀಡಲಾಯಿತು.

ಇಂದು ಬೆಳಗ್ಗೆ ಅರಮನೆ ಆವರಣದ ಕೋಡಿ ಸೋಮೇಶ್ವರ ದೇವಾಲಯದ ಮುಂಭಾಗದಿಂದ ಬೆಳಗ್ಗೆ 7.20ಕ್ಕೆ ಹೊರಟ ಗಜಪಡೆ ಸಯ್ಯಾಜಿರಾವ್ ರಸ್ತೆಯ ಆರ್‌ಎಂಸಿ ವೃತ್ತದವರೆಗೂ ಸಾಗಿದವು. ಬಳಿಕ ಬಂದ ಮಾರ್ಗದಲ್ಲಿಯೇ ಅರಮನೆಗೆ ಹಿಂದಿರುಗಿದವು. ಸಂಜೆ 5.45ಕ್ಕೆ ಅರಮನೆಯಿಂದ ಹೊರಟ ಗಜಪಡೆ ಸರ್ಕಾರಿ ಆಯುರ್ವೇದ (ಕೆ.ಆರ್.ಆಸ್ಪತ್ರೆ) ಆಸ್ಪತ್ರೆವರೆಗೂ ಬಂದು ಮತ್ತೆ ವಾಪಸ್ಸಾದವು. ಪ್ರತಿದಿನ ದಸರಾ ಗಜಪಡೆಗೆ 5–6 ಕಿಮಿ ದೂರ ತಾಲೀಮು ನಡೆಸಿ ಸಜ್ಜುಗೊಳಿಸಲು ನಿರ್ಧರಿಸಿರುವುದರಿಂದ ದಿನಕ್ಕೆ ಎರಡು ಬಾರಿ ಆರ್‌ಎಂಸಿ ವೃತ್ತದವರೆಗೆ ಮಾತ್ರ ತಾಲೀಮು ನಡೆಸಲು ಉದ್ದೇಶಿಸಲಾಗಿದೆ.

ಕಂಜನ್ ಆರೋಗ್ಯದಲ್ಲಿ ಸುಧಾರಣೆ: ಕಳೆದ ನಾಲ್ಕು ದಿನದಿಂದ ಕಾಲು ನೋವಿನಿಂದ ನರಳುತ್ತಿದ್ದ ಕಂಜನ್ ಆರೋಗ್ಯದಲ್ಲಿ ಸುಧಾರಣೆ ಕಂಡಿದ್ದು, ಪಶುವೈದ್ಯರಿಂದ ಚಿಕಿತ್ಸೆ ಕೊಡಿಸಲಾಗುತ್ತಿದೆ. ಅರಮನೆ ಆವರಣದಲ್ಲೇ ವಿಶ್ರಾಂತಿಯಲ್ಲಿರುವ ಕಂಜನ್‌ಗೆ ಮಂಗಳವಾರವೂ ತಾಲೀಮಿನಿಂದ ವಿಶ್ರಾಂತಿ ನೀಡಲಾಗಿತ್ತು. ಮಾವುತ ಮತ್ತು ಕಾವಾಡಿಗಳು ಪ್ರತಿದಿನ ಕಂಜನ್‌ಗೆ ಸ್ನಾನ ಮಾಡಿಸಿ ಆರೈಕೆ ಮಾಡುತ್ತಿದ್ದು, ಕಾಲಿನ ನೋವು ಕಡಿಮೆಯಾದಂತೆ ಕಂಡು ಬಂದಿದೆ.

ಪ್ರತಿದಿನವೂ ತಪಾಸಣೆ: ಅರಮನೆಯಿಂದ ಜಂಬೂಸವಾರಿ ಮಾರ್ಗದಲ್ಲಿ ಗಜಪಡೆಯನ್ನು ತಾಲೀಮಿಗೆ ಕರೆದೊಯ್ಯುವ ವೇಳೆ ಜೀಪ್‌ನಲ್ಲಿ ಮ್ಯಾಗ್ನೆಟ್ ಟ್ರ್ಯಾಲಿಯನ್ನು ಎಳೆದುಕೊಂಡು ಹೋಗಲಾಗುತ್ತದೆ. ರಸ್ತೆಯಲ್ಲಿ ಬಿದ್ದಿರಬಹುದಾದ ಮೊಳೆ, ಲೋಹ ಚೂರು, ವಾಹನಗಳಿಂದ ಸಿಡಿಯುವ ಮೊನಚಾದ ಕಬ್ಬಿಣದ ಚೂರು ರಸ್ತೆಯಲ್ಲಿ ಬಿದ್ದಿದ್ದರೆ ಅದನ್ನು ಮ್ಯಾಗ್ನೆಟ್ ಟ್ರ್ಯಾಲಿ ಆಕರ್ಷಿಸುತ್ತದೆ. ಆದರೂ, ಮ್ಯಾಗ್ನೆಟ್ ಕಣ್ತಪ್ಪಿಸಿ ರಸ್ತೆಯಲ್ಲೇ ಉಳಿಯಬಹುದಾದ ಮೊನಚಾದ ಲೋಹದ ಚೂರು ಆನೆಗಳ ಪಾದ ಹೊಕ್ಕುವ ಸಾಧ್ಯತೆ ಇರುವುದರಿಂದ ಇದೇ ಮೊದಲ ಬಾರಿ ತಾಲೀಮು ಮುಗಿಸಿ ಅರಮನೆಗೆ ಹಿಂದಿರುಗಿದ ನಂತರ ಎಲ್ಲಾ ಆನೆಗಳ ಪಾದವನ್ನು ಮೆಟಲ್ ಡಿಟೆಕ್ಟರ್ ಮೂಲಕ ತಪಾಸಣೆ ನಡೆಸಲಾಗುತ್ತಿದೆ.

ಹುಣಸೂರು ಸರ್ಕಾರಿ ಬಾಲಕಿಯರ ಪಿಯು ಕಾಲೇಜ್ ಉಪನ್ಯಾಸಕ ಹೆಚ್.ಎನ್.ಗಿರೀಶ್‌ಗೆ 'ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ'

ಬೋಧನೆ ಜೊತೆಗೆ ಸಾಮಾಜಿಕವಾಗಿ ಮಹತ್ತರ ಕೊಡುಗೆ ಪರಿಗಣಿಸಿ ಪುರಸ್ಕಾರ

ಮೈಸೂರು, ಆ.27(ಎಸ್‌ಬಿಡಿ)– ಕೇಂದ್ರ ಶಿಕ್ಷಣ ಸಚಿವಾಲಯದ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ವತಿಯಿಂದ ಕೊಡಮಾಡುವ 'ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ'ಗೆ ಮೈಸೂರಿನ ಉಪನ್ಯಾಸಕ ಸೇರಿದಂತೆ ರಾಜ್ಯದ ಇಬ್ಬರು ಆಯ್ಕೆಯಾಗಿದ್ದಾರೆ.

ಮೈಸೂರು ಜಿಲ್ಲೆ, ಹುಣಸೂರು ಸರಕಾರಿ ಬಾಲಕಿಯರ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಹೆಚ್.ಎನ್.ಗಿರೀಶ್ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲೂಕು, ಬಾಶೆಟ್ಟಿಹಳ್ಳಿಯ ಸರ್ಕಾರಿ ಪ್ರೌಢಶಾಲೆ ಶಿಕ್ಷಕ ಆರ್.ನಾರಾಯಣಸ್ವಾಮಿ 2024ನೇ ಸಾಲಿನ 'ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ'ಗೆ ಭಾಜನರಾಗಿದ್ದಾರೆ. ಕರ್ನಾಟಕದ ಈ ಇಬ್ಬರು ಸೇರಿದಂತೆ ದೇಶದ ಒಟ್ಟು 50 ಶಿಕ್ಷಕರಿಗೆ ಈ ಪ್ರತಿಷ್ಠಿತ ಪ್ರಶಸ್ತಿ ಸಂದಿದೆ. ಇವರಿಗೆ ನವದೆಹಲಿಯ ವಿಜ್ಞಾನ ಭವನದಲ್ಲಿ ಸೆ.5ರಂದು ನಡೆಯಲಿರುವ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

ಪ್ರಶಸ್ತಿ ಪಡೆದ ಮೊದಲ ಉಪನ್ಯಾಸಕ: ಮೈಸೂರಿನ ಹೆಚ್.ಎನ್.ಗಿರೀಶ್ ಅವರು 'ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ' ಪಡೆದ ರಾಜ್ಯದ ಮೊದಲ ಉಪನ್ಯಾಸಕ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಈವರೆಗೆ ಪ್ರೌಢಶಾಲೆವರೆಗಿನ ಶಿಕ್ಷಕರಿಗೆ ಮಾತ್ರ ಈ ಪ್ರಶಸ್ತಿ ಸಂದಿದೆ. ಹುಣಸೂರು ಪಟ್ಟಣದ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜಿನಲ್ಲಿ ಜೀವಶಾಸ್ತ್ರ ಉಪನ್ಯಾಸಕರಾಗಿರುವ ಹೆಚ್.ಎನ್.ಗಿರೀಶ್, ಶೈಕ್ಷಣಿಕ ಚಟುವಟಿಕೆ ಜೊತೆಗೆ ಸಾಮಾಜಿಕ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುವ ಮೂಲಕ ಮಾದರಿಯಾಗಿದ್ದಾರೆ. ಕಳೆದ ವರ್ಷ ಇವರಿಗೆ ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಲಭಿಸಿದೆ. ಅಲ್ಲದೆ ಕೆಲ ದಿನಗಳ ಹಿಂದೆಯಷ್ಟೆ ಜಿ–20 ಶೃಂಗಸಭೆಯ ನ್ಯಾಷನಲ್ ಎಜುಕೇಷನ್ ಎಕ್ಸಲೆನ್ಸ್ ಅವಾರ್ಡ್ ಅನ್ನು ನೋಯ್ಡಾದಲ್ಲಿ ಸ್ವೀಕರಿಸಿದ್ದರು.

ಮೂರು ದಶಕಗಳಿಗೂ ಹೆಚ್ಚುಕಾಲದಿಂದ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಗಿರೀಶ್, ಏಡ್ಸ್ ಹಾಗೂ ಹೆಣ್ಣು ಮಕ್ಕಳ ಋತುಸ್ರಾವದ ಬಗ್ಗೆ ಸಮಾಜದಲ್ಲಿದ್ದ ಕೀಳು ಮನಃಸ್ಥಿತಿಯನ್ನು ಹೋಗಲಾಡಿಸುವಲ್ಲಿ ಸಾಕಷ್ಟು ಶ್ರಮಿಸಿದ್ದಾರೆ. ಏಡ್ಸ್ ಪೀಡಿತರಿಗೆ ಚಿಕಿತ್ಸೆ ಕೊಡಿಸುವುದರ ಬದಲು ಅವರನ್ನು ದೂರವಿಡುತ್ತಿದ್ದ ಸಮಾಜಕ್ಕೆ ಜಾಗೃತಿ ಮೂಡಿಸುವ ಉದ್ದೇಶದಿಂದ 25 ವರ್ಷಗಳ ಹಿಂದೆಯೇ ತಿ.ನರಸೀಪುರ ಸಮೀಪ ಏಡ್ಸಮ್ಮನ ದೇವಾಲಯ ನಿರ್ಮಿಸಿ, ಅಚ್ಚರಿ ಮೂಡಿಸಿದ್ದರು. ಅಮೆರಿಕಾದ ಹಾರ್ವರ್ಡ್ ಯೂನಿವರ್ಸಿಟಿಯ ಸಂಶೋಧನಾ ವಿದ್ಯಾರ್ಥಿನಿಯೊಬ್ಬರು ಮೈಸೂರಿಗೆ ಆಗಮಿಸಿ ಆ ದೇವಾಲಯದ ಬಗ್ಗೆ 'ಧರ್ಮ ಮತ್ತು ವಿಜ್ಞಾನ' ಶೀರ್ಷಿಕೆಯಡಿ ಪ್ರಬಂಧ ಮಂಡಿಸಿದ್ದರು.

ಸದಾ ಪಾದರಸದಂತೆ ಕಾರ್ಯ ನಿರ್ವಹಿಸುವ ಇವರು ಪ್ರಸ್ತುತ ಹುಣಸೂರು ಪಿಯು ಕಾಲೇಜಿನ ಅಭಿವೃದ್ಧಿಗೂ ಅವಿರತ ವಾಗಿ ಶ್ರಮಿಸುತ್ತಿದ್ದಾರೆ. ದಾನಿಗಳನ್ನು ಸಂಪರ್ಕಿಸಿ, ಅವರಿಂದ ಸಿಎಸ್‌ಆರ್ ನಿಧಿ ಪಡೆದು ಖಾಸಗಿ ಕಾಲೇಜು ಮಾದರಿಯ ಎಲ್ಲಾ ರೀತಿಯ ಸೌಕರ್ಯಗಳನ್ನು ಕಲ್ಪಿಸಿದ್ದಾರೆ.

ಜೀವಶಾಸ್ತ್ರ ಪ್ರಯೋಗಾಲಯವೂ ಕೂಡ ಅತ್ಯಾಧುನಿಕವಾಗಿದೆ. ಇಂಟರ್‌ನೆಟ್, ವೈಫೈ ಸೇರಿದಂತೆ ಎಲ್ಲಾ ರೀತಿಯ ಸೌಲಭ್ಯಗಳಿವೆ. ದ್ವಿತೀಯ ಪಿಯುಸಿಯಲ್ಲಿ ಶೇ.100ರಷ್ಟು ಫಲಿತಾಂಶ ಸಾಧನೆ ಜೊತೆಗೆ ಸಾಮಾಜಿಕ ಜವಾಬ್ದಾರಿಯನ್ನೂ ನಿರ್ವಹಿಸುವ ಮೂಲಕ ಎಲ್ಲರ ಮೆಚ್ಚುಗೆ ಗಳಿಸಿದ್ದಾರೆ.

ಗ್ರಾಮೀಣ ಪ್ರತಿಭೆ: ಹುಣಸೂರು ತಾಲೂಕು, ಹನಗೋಡು ಹೋಬಳಿ, ಹಿಂಡಗೂಡ್ಲು ಗ್ರಾಮದ ನಿಂಗೇಗೌಡರು ಹಾಗೂ ಎಂ.ಬಿ.ಲಲಿತಮ್ಮ ದಂಪತಿಯ ಪುತ್ರ ಹೆಚ್.ಎನ್.ಗಿರೀಶ್, ಅಪ್ಪಟ ಗ್ರಾಮೀಣ ಪ್ರತಿಭೆ. ಸ್ವಗ್ರಾಮ ಹಾಗೂ ಹನಗೂಡಿನಲ್ಲಿ ಪಿಯುಸಿವರೆಗೆ ಓದಿದ ಅವರು ಮೈಸೂರಿನ ಮಾನಸಗಂಗೋತ್ರಿಯಲ್ಲಿ ಎಂಎಸ್ಸಿ ಪದವಿ ಪಡೆದಿದ್ದಾರೆ. ಶಿಕ್ಷಕರಾಗಿದ್ದ ತಂದೆಯವರ ಆಸೆಯಂತೆ ಇವರೂ ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆ. 'ಲಾ ಗೈಡ್' ಕನ್ನಡ ಕಾನೂನು ಮಾಸಪತ್ರಿಕೆ ಸಂಪಾದಕರೂ ಆದ ಮೈಸೂರಿನ ಹಿರಿಯ ವಕೀಲ ಹೆಚ್.ಎನ್.ವೆಂಕಟೇಶ್, ಗಿರೀಶ್ ಅವರ ಹಿರಿಯ ಸಹೋದರ.

ಆನ್‌ಲೈನ್ ಪ್ರಕ್ರಿಯೆ: ಕೇಂದ್ರ ಶಿಕ್ಷಣ ಸಚಿವಾಲಯದಿಂದ ಆನ್‌ಲೈನ್ ಪ್ರಕ್ರಿಯೆ ಮೂಲಕ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತದೆ. ಶಿಕ್ಷಕರು ತಮ್ಮ ಸೇವೆ ಮತ್ತು ಸಾಧನೆ ಬಗ್ಗೆ ಫೋಟೋ ಇನ್ನಿತರ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಜಿಲ್ಲಾ ಸಮಿತಿ ಪರಿಶೀಲನೆ ನಡೆಸುತ್ತದೆ. ವಸ್ತುನಿಷ್ಠ ಸತ್ಯ ಪರಿಶೋಧನಾ ಸಮಿತಿ ಮೂಲಕ ಮಾಹಿತಿಯನ್ನು ಖಚಿತಪಡಿಸಿಕೊಂಡ ಬಳಿಕ ರಾಜ್ಯ ಮಟ್ಟದ ಸಮಿತಿ ನಂತರ ರಾಷ್ಟ್ರಮಟ್ಟದ ಸಮಿತಿಗೆ ವರ್ಗಾವಣೆ ಮಾಡಲಾಗುತ್ತದೆ. ಹೀಗೆ ಕರ್ನಾಟಕದಿಂದ 6 ಮಂದಿ ಸೇರಿದಂತೆ ದೇಶದೆಲ್ಲೆಡೆಯ 150ಕ್ಕೂ ಹೆಚ್ಚು ಶಿಕ್ಷಕರ ಹೆಸರನ್ನು ರಾಷ್ಟ್ರ ಮಟ್ಟದ ಸಮಿತಿಗೆ ಕಳುಹಿಸಲಾಗಿತ್ತು. ಅವರಲ್ಲಿ ಅಂತಿಮವಾಗಿ ರಾಜ್ಯದ ಇಬ್ಬರು ಸೇರಿ ದೇಶದ 50 ಮಂದಿಗೆ ಪ್ರಶಸ್ತಿ ಘೋಷಿಸಲಾಗಿದೆ.



ಹೆಚ್.ಎನ್.ಗಿರೀಶ್

> "ರಾಷ್ಟ್ರಮಟ್ಟದ ಪ್ರಶಸ್ತಿ ಸಿಕ್ಕಿರುವುದಕ್ಕೆ ಸಂತೋಷವಾಗಿದೆ. ಪಿಯು ಕಾಲೇಜಿನ ಉಪನ್ಯಾಸಕರೊಬ್ಬರಿಗೆ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ ಸಂದಿರುವುದು ಮೊದಲ ಬಾರಿ ಎಂದು ಪಿಯು ನಿರ್ದೇಶಕರು ಸೇರಿದಂತೆ ಹಲವು ಅಭಿನಂದಿಸಿದರು. ಶೈಕ್ಷಣಿಕ ಹಾಗೂ ಸಾಮಾಜಿಕ ಕೆಲಸದಲ್ಲಿ ನನಗೆ ಸಹಕರಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸುತ್ತೇನೆ.
> –ಹೆಚ್.ಎನ್.ಗಿರೀಶ್

ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಕೀಮೋಥೆರಪಿ ಕೇರ್ ಸೆಂಟರ್

ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ವಿವರಣೆ



ಬೆಂಗಳೂರು: ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳಲ್ಲಿ ಕೀಮೋಥೆರಪಿ ಡೇ ಕೇರ್ ಸೆಂಟರ್‌ಗಳನ್ನು ತಿಂಗಳೊಳಗಾಗಿ ಪ್ರಾರಂಭಿಸುವುದಾಗಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಕೆ.ಸಿ ಜನರಲ್ ಆಸ್ಪತ್ರೆಯ ಆವರಣದಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಕಟ್ಟಡ ನಿರ್ಮಾಣದ ಭೂಮಿಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಸುಮಾರು 150 ಕೋಟಿ ರೂ. ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಆ.27 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭೂಮಿ ಪೂಜೆ ನೆರವೇರಿಸಿದರು.

ಕ್ಯಾನ್ಸರ್ ರೋಗಿಗಳು ಕೀಮೋಥೆರಪಿಗಾಗಿ ಇಂದು ದೂರದ ನಗರಗಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಿಗೆ ಬರುವ ಪರಿಸ್ಥಿತಿಯಿದೆ. ಜನರಿಗೆ ಅವರ ಜಿಲ್ಲೆಯಲ್ಲಿಯೇ ಕೀಮೋಥೆರಪಿ ಸೇವೆ ಒದಗಿಸುವ ನಿಟ್ಟಿನಲ್ಲಿ ಎಲ್ಲ ಜಿಲ್ಲಾ ಆಸ್ಪತ್ರೆಗಳಲ್ಲಿ ಕೀಮೋಥೆರಪಿ ಡೇ ಕೇರ್ ಸೆಂಟರ್‌ಗಳನ್ನು ತೆರೆಯಲಾಗುವುದು. ಒಂದು ತಿಂಗಳ ಒಳಗಾಗಿ ಈ ಸೇವೆ ಲಭ್ಯವಾಗಲಿದೆ ಎಂದು ಸಚಿವರು ಆಶ್ವಾಸನೆ ನೀಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದ ಬಳಿಕ ಆರೋಗ್ಯ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಮಾಡಲಾಗಿದೆ. ಡಯಾಲಿಸಿಸ್ ವ್ಯವಸ್ಥೆಯಲ್ಲಿ ಸುಧಾರಣೆ ತರಲಾಗಿದ್ದು, 750ಕ್ಕೂ ಹೆಚ್ಚು ಏಕಬಳಕೆಯ ಡಯಾಲಿಸಿಸ್ ಹೊಸ ಯಂತ್ರಗಳನ್ನು ಅಳವಡಿಸಿದ್ದೇವೆ. ಸರ್ಕಾರಿ ಆಸ್ಪತ್ರೆಗಳಿಗೆ ಈ ಹಿಂದೆ ಶೇ.30 ರಷ್ಟು ಮಾತ್ರ ಔಷಧಿ ನಿಗಮದಿಂದ ಔಷಧಿಗಳು ಸರಬರಾಜು ಆಗುತ್ತಿದ್ದವು. ಇದೀಗ ಶೇ.70ರಷ್ಟು ಔಷಧಿಗಳನ್ನು ನಿಗಮದಿಂದ ಖರೀದಿಸಿ ಸರ್ಕಾರಿ ಆಸ್ಪತ್ರೆಗಳಿಗೆ ಪೂರೈಸಲಾಗುತ್ತಿದೆ. ಕೆಲವೇ ದಿನಗಳಲ್ಲಿ ಶೇ.90ರಷ್ಟು ಔಷಧಿಗಳು ದೊರಕಿಸುವತ್ತ ಆರೋಗ್ಯ ಇಲಾಖೆ ಹೆಜ್ಜೆಯಿಟ್ಟಿದೆ ಎಂದು ಭರವಸೆ ನೀಡಿದರು.

ಶೀಘ್ರ ಅಪಘಾತಕ್ಕೀಡಾದವರ ನೆರವಿಗೆ 65 ನೂತನ ಆಂಬುಲೆನ್ಸ್ ಸೇವೆ ಆರಂಭ

ಅಪಘಾತ ಸಂಭವಿಸುವ ಹಾಟ್‌ಸ್ಪಾಟ್‌ಗಳಲ್ಲಿ ಪ್ರತ್ಯೇಕ ಆಂಬುಲೆನ್ಸ್: ಅಪಘಾತಕ್ಕೆ ಒಳಗಾಗುವವರಿಗೆ ತುರ್ತು ಆರೋಗ್ಯ ಸೇವೆಗಾಗಿ ಪ್ರತ್ಯೇಕ ಆಂಬುಲೆನ್ಸ್ ಸೇವೆ ಶೀಘ್ರದಲ್ಲಿಯೇ ಪ್ರಾರಂಭಿಸುವುದಾಗಿ ತಿಳಿಸಿದರು. 65 ನೂತನ ಪ್ರತ್ಯೇಕ ಅಂಬುಲೆನ್ಸ್ ಸೇವೆಯನ್ನು ಅಪಘಾತಕ್ಕೀಡಾದವರ ನೆರವಿಗಾಗಿಯೇ ಒದಗಿಸಲಾಗುತ್ತಿದೆ. ಇದು ರಾಜ್ಯ ಸರ್ಕಾರದ ನೂತನ ಯೋಜನೆಯಾಗಿದ್ದು, ಶೀಘ್ರದಲ್ಲಿ ಸಿಎಂ ಸಿದ್ದರಾಮಯ್ಯ ಅವರು ಆಂಬುಲೆನ್ಸ್‌ಗಳಿಗೆ ಚಾಲನೆ ನೀಡಲಿದ್ದಾರೆ.

ಭೂಮಿಪೂಜೆ ನೆರವೇರಿಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಆರೋಗ್ಯ ಸೇವೆಗಳನ್ನು ನೀಡುವಲ್ಲಿ ಖಾಸಗಿ ಆಸ್ಪತ್ರೆಗಳಿಗಿಂತ ಸರ್ಕಾರಿ ಆಸ್ಪತ್ರೆಗಳು ಹಿಂದೆ ಬೀಳಬಾರದು. ಸರ್ಕಾರಿ ಆಸ್ಪತ್ರೆಗಳಲ್ಲಿಯೂ ಉತ್ತಮ ವೈದ್ಯರಿದ್ದಾರೆ. ಖಾಸಗಿ ಆಸ್ಪತ್ರೆಗಳಲ್ಲಿರುವ ವೈದ್ಯರಿಗೆ ಹೋಲಿಸಿದರೆ ಹೆಚ್ಚು ಅನುಭವ ಸರ್ಕಾರಿ ಆಸ್ಪತ್ರೆಗಳ ವೈದ್ಯರು ಹೊಂದಿದ್ದಾರೆ. ಹೈಟೆಕ್ ಆರೋಗ್ಯ ಸೇವೆಗಳು ಸರ್ಕಾರಿ ಆಸ್ಪತ್ರೆಗಳಲ್ಲಿ ದೊರೆಯುವಂತಾಗಬೇಕು. ಆಧುನಿಕ ಯುಗದಲ್ಲಿ ರೋಬೊಟಿಕ್ ಸರ್ಜರಿಗಳನ್ನು ನಡೆಸಲಾಗುತ್ತಿದೆ. ರೋಬೊಟಿಕ್ ಸರ್ಜರಿಯಂತಹ ಆರೋಗ್ಯ ಸೇವೆಗಳು ಸರ್ಕಾರಿ ಆಸ್ಪತ್ರೆಯಲ್ಲೂ ದೊರಕಿಸಿ ಕೊಡುವ ನಿಟ್ಟಿನಲ್ಲಿ ಸರ್ಕಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಡಿಸಿಎಂ ಡಿ.ಕೆ.ಶಿವಕುಮಾರ್, ಆರೋಗ್ಯ ಸಚಿವರಾಗಿ ದಿನೇಶ್ ಗುಂಡೂರಾವ್ ಇಲಾಖೆಯಲ್ಲಿ ಹಲವು ಸುಧಾರಣೆಗಳನ್ನು ತರುತ್ತಿದ್ದಾರೆ. ನಮ್ಮ ಸರ್ಕಾರ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುತ್ತಿದೆ ಎಂದರು.

ಆ.30ರಿಂದ ಅಮೇರಿಕಾದಲ್ಲಿ ಅಕ್ಕ ವಿಶ್ವ ಕನ್ನಡ ಸಮ್ಮೇಳನ



ಬೆಂಗಳೂರು: ಅಮೇರಿಕಾದ ವರ್ಜೀನಿಯಾದ ರಿಚ್ಮಂಡ್‌ನಲ್ಲಿ ಆಗಸ್ಟ್ 30 ರಿಂದ ಸೆಪ್ಟೆಂಬರ್ 1 ರವರೆಗೆ ನಡೆಯ ಲಿರುವ 12ನೇ ಅಕ್ಕ ವಿಶ್ವ ಕನ್ನಡ ಸಮ್ಮೇಳನದಲ್ಲಿ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಪಾಲ್ಗೊಳ್ಳಲಿದ್ದಾರೆ. ಗ್ರೇಟರ್ ರಿಚ್ಮಂಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ಸಮ್ಮೇಳನ ನಡೆಯಲಿದ್ದು ಬಸವರಾಜ ಹೊರಟ್ಟಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅಮೇರಿಕಾ ಸೇರಿದಂತೆ ಸುತ್ತಲಿನ ದೇಶಗಳಲ್ಲಿ ವಾಸಿಸುವ ಕನ್ನಡಿಗರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.


ಕನ್ನಡ ನಾಡು, ನುಡಿ, ಭಾಷಾ ಬೆಳವಣಿಗೆ, ಕನ್ನಡದ ಅಸ್ಮಿತೆ, ಕನ್ನಡ ಭಾಷೆಯ ಪ್ರಚಾರಕ್ಕೆ ಕೈಗೊಳ್ಳಬೇಕಾದ ಇಂದಿನ ತುರ್ತು ಅವಶ್ಯಕತೆಗಳು ಸೇರಿದಂತೆ ಹಲವಾರು ಮಹತ್ವದ ವಿಷಯಗಳ ಕುರಿತು ಬಸವರಾಜ ಹೊರಟ್ಟಿ ಅವರು ತಮ್ಮ ನಾಲ್ಕು ದಶಕಗಳಿಗಿಂತಲೂ ಹೆಚ್ಚು ಕಾಲದ ಅನುಭವ, ವಿಚಾರಗಳನ್ನು ಹಂಚಿಕೊಳ್ಳಲಿದ್ದಾರೆ. ನಾಳೆ ರಾತ್ರಿ ಅವರು ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಅಮೇರಿಕಾದ ವರ್ಜೀನಿಯಾ ರಾಜ್ಯದ ರಿಚ್ಮಂಡ್ ನಗರಕ್ಕೆ ಪ್ರಯಾಣ ಬೆಳೆಸಲಿದ್ದಾರೆ.

ಸಭಾಪತಿ ಬಸವರಾಜ ಹೊರಟ್ಟಿ ಭಾಗಿ

ಕರ್ನಾಟಕದ ಹೊರಗಡೆಯಿಂದ ನಡೆಯುತ್ತಿರುವ ಅತಿದೊಡ್ಡ ಕನ್ನಡದ ಉತ್ಸವ ಎಂದೇ ಪರಿಗಣಿಸಲಾಗುವ ಅಕ್ಕ ವಿಶ್ವ ಕನ್ನಡ ಸಮ್ಮೇಳನ ಈ ಬಾರಿ, ಅಮೇರಿಕಾದ ರಾಜಧಾನಿ ವಾಷಿಂಗ್‌ಟನ್ ಡಿಸಿ ಇಂದ ದಕ್ಷಿಣಾಭಿಮುಖವಾಗಿ ಸುಮಾರು 110 ಮೈಲು ದೂರದಲ್ಲಿರುವ ವರ್ಜೀನಿಯಾ ರಾಜ್ಯದ ರಾಜಧಾನಿಯಾಗಿರುವ ರಿಚ್ಮಂಡ್ ನಗರದಲ್ಲಿ ನಡೆಯಲಿದ್ದು, ಸುಮಾರು ಸಾವಿರಕ್ಕೂ ಹೆಚ್ಚು ಕನ್ನಡಿಗರು ಒಂದೇ ಸೂರಿನಡಿಯಲ್ಲಿ ಸೇರುತ್ತಿರುವುದು ವಿಶೇಷವಾಗಿದೆ.

ಸಮ್ಮೇಳನದಲ್ಲಿ ಕನ್ನಡ ನಾಡು, ನುಡಿ, ರಕ್ಷಣೆ ಕುರಿತು ವಿವಿಧ ಗೋಷ್ಠಿಗಳು, ಚಿಂತನ–ಮಂಥನ, ಸಂವಾದಗಳು ಜರುಗಲಿದ್ದು, ಅತ್ಯುತ್ತಮ ಮನರಂಜನಾ ಕಾರ್ಯಕ್ರಮಗಳನ್ನು ಸಹ ಆಯೋಜಿಸಲಾಗಿದೆ. ಕರ್ನಾಟಕದ ವಿವಿಧ ಬಗೆಯ ರುಚಿಕರ ತಿಂಡಿ–ತಿನಿಸುಗಳು, ವಿವಿಧ ವಾಣಿಜ್ಯ ಮತ್ತು ವ್ಯಾಪಾರ ಮೇಳ ಹಾಗೂ ಮಳಿಗೆಗಳು, ಕಲೆ ಮತ್ತು ಸಾಹಿತ್ಯಿಕ ವೇದಿಕೆಗಳು, ಮಹಿಳಾ ವೇದಿಕೆ, ಯುವ ವೇದಿಕೆ, ವಿದ್ಯಾ ಸಂಸ್ಥೆಗಳ ಹಳೇ ವಿದ್ಯಾರ್ಥಿಗಳ ಮಹಾಸಂಗಮ, ವಿವಿಧ ಕ್ರೀಡಾಕೂಟಗಳು, ಆರೋಗ್ಯ ಮತ್ತು ಅಧ್ಯಾತ್ಮಿಕ ವೇದಿಕೆಗಳು ಸೇರಿದಂತೆ ಹತ್ತು ಹಲವು ಕಾರ್ಯಕ್ರಮಗಳು ಈ ಬಾರಿಯ ಅಕ್ಕ ಸಮ್ಮೇಳನದ ವಿಶೇಷ ಆಕರ್ಷಣೆಗಳಾಗಿವೆ.

ನಟ ದರ್ಶನ್ ಸ್ವಾತಂತ್ರ್ಯ ಹೋರಾಟಗಾರನಲ್ಲ: ಎಂಎಲ್ಸಿ ಎಚ್.ವಿಶ್ವನಾಥ್ ಆಕ್ರೋಶ



ಬೆಂಗಳೂರು, ಆ.27– ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ ಜೈಲು ಸೇರಿರುವ ನಟ ದರ್ಶನ್ ಸ್ವಾತಂತ್ರ್ಯ ಹೋರಾಟಗಾರನಲ್ಲ. ಕೊಲೆ ಮಾಡಿ ಜೈಲು ಸೇರಿರುವ ಕ್ರಿಮಿನಲ್. ಆತನಿಗೆ ರಾಜೋಪಚಾರ ಮಾಡಬಾರದು ಎಂದು ವಿಧಾನಪರಿಷತ್ ಸದಸ್ಯ ಎಚ್.ವಿಶ್ವನಾಥ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಟ ದರ್ಶನ್ ಒಬ್ಬನನ್ನು ಕೊಲೆ ಮಾಡಿ ಬಂದವನು. ಆತನಿಗೆ ಜೈಲಿನಲ್ಲಿ ವಿಶೇಷ ಆತಿಥ್ಯ ನೀಡಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಈ ವಿಚಾರದಲ್ಲಿ ಗೃಹಸಚಿವ ಪರಮೇಶ್ವರ್ ಏಕೆ ಮೌನವಾಗಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಪ್ರತಿಕ್ರಿಯಿಸಿದ ವಿಶ್ವನಾಥ್, ಈ ವಿಚಾರವಾಗಿ ನಾನು ಮೌನವಾಗಿಲ್ಲ. ಹಾಗೆಂದು ಪ್ರತಿದಿನ ಮಾತನಾಡಲು ಸಾಧ್ಯವಿಲ್ಲ ಎಂದರು. ಮುಡಾದಿಂದ ಪಡೆದಿರುವ ನಿವೇಶನಗಳನ್ನು ವಾಪಸ್ ಕೊಡಿ ಎಂದು ಸಿಎಂ ಸಿದ್ದರಾಮಯ್ಯಗೆ ನಾನು ಮೊದಲೇ ಸಲಹೆ ನೀಡಿದ್ದೆ ಎಂದರು.

ನೈರುತ್ಯ ರೈಲ್ವೆ ವಿಭಾಗದ ನೌಕರರಿಗೆ ಯುಪಿಎಸ್ ಯೋಜನೆ ಅನ್ವಯ



ನೈರುತ್ಯ ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳಾದ ಕುಸುಮಾ ಹರಿಪ್ರಸಾದ್ ಹಾಗೂ ಸಿಪಿಓ/ಅಡ್ಮಿನ್ ಶುಜಾ ಮೊಹಮ್ಮದ್ ಅವರು ಏಕೀಕೃತ ಪಿಂಚಣಿ ಯೋಜನೆ(ಯುಪಿಎಸ್) ಕುರಿತು ವೀಡಿಯೋ ಕಾನ್ಫರೆನ್ಸ್ ಮೂಲಕ ಮಾಹಿತಿ ನೀಡಿದರು.

ಮೈಸೂರು, ಆ.27(ಎಸ್‌ಪಿಎನ್)–ಏಕೀಕೃತ ಪಿಂಚಣಿ ಯೋಜನೆ(ಯುಪಿಎಸ್) ಕುರಿತು ಇತ್ತೀಚೆಗೆ ಕೇಂದ್ರ ಸಚಿವ ಸಂಪುಟದಲ್ಲಿ ಅನುಮೋದನೆ ದೊರಕಿದ್ದು, ಈ ಯೋಜನೆ ಅಳವಡಿಸಿಕೊಳ್ಳಲು ನೈರುತ್ಯ ರೈಲ್ವೆ ಇಲಾಖೆ ಸಿದ್ಧತೆ ನಡೆಸಿದೆ ಎಂದು ನೈರುತ್ಯ ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳಾದ ಕುಸುಮಾ ಹರಿಪ್ರಸಾದ್ ಹಾಗೂ ಸಿಪಿಓ/ಅಡ್ಮಿನ್ ಶುಜಾ ಮೊಹಮ್ಮದ್ ತಿಳಿಸಿದರು.

ಹುಬ್ಬಳ್ಳಿ ನೈರುತ್ಯ ಪ್ರಧಾನ ಕಚೇರಿಯ ವೀಡಿಯೋ ಕಾನ್ಫರೆನ್ಸ್ ಮೂಲಕ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಏಕೀಕೃತ ಪಿಂಚಣಿ ಯೋಜನೆ(ಯುಪಿಎಸ್) 2025ರ ಏಪ್ರಿಲ್ 1ರಿಂದ ಜಾರಿಗೆ ಬರಲಿದೆ ಎಂದು ಕೇಂದ್ರ ಸರ್ಕಾರ ಪ್ರಕಟಿಸಿದ್ದು, ಪ್ರಸ್ತುತ ರೈಲ್ವೆ ಇಲಾಖೆಯಲ್ಲಿ ಎನ್‌ಪಿಎಸ್ ಜಾರಿಯಲ್ಲಿದೆ. ಈ ಯೋಜನೆಯಡಿ ಮೈಸೂರು ಮತ್ತು ಬೆಂಗಳೂರು ಕಚೇರಿ, ನೈರುತ್ಯ ರೈಲ್ವೆ ಪ್ರಧಾನ ಕಚೇರಿಯ ಸಿಬ್ಬಂದಿಗಳು, ಮೈಸೂರು ಮತ್ತು ಹುಬ್ಬಳ್ಳಿ ವರ್ಕ್‌ಶಾಪ್ ಸಿಬ್ಬಂದಿ ಸೇರಿದಂತೆ ಒಟ್ಟು 30,636 ಮಂದಿ ಬರಲಿದ್ದಾರೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಹಿರಿಯ ಅಧಿಕಾರಿಗಳ ಭರವಸೆ

ಸುಧಾರಿತ ಪಿಂಚಣಿ ಯೋಜನೆ: ಈಗ ಜಾರಿಗೆ ಬರಲಿರುವ ಯುಪಿಎಸ್ ಯೋಜನೆಯು ಹಳೆಯ ಪಿಂಚಣಿ ಯೋಜನೆ (ಒಪಿಎಸ್) ಹಾಗೂ ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್‌ಪಿಎಸ್) ನಡುವಿನ ಸುಧಾರಿತ ಪಿಂಚಣಿ ಯೋಜನೆಯಾಗಿದ್ದು, ಯುಪಿಎಸ್‌ನಲ್ಲಿ ಸರ್ಕಾರಿ ನೌಕರರಿಗೆ ಶೇ.50ರಷ್ಟು ಸರಾಸರಿ ಮೂಲ ವೇತನದ ಪಿಂಚಣಿ ಮೊತ್ತವನ್ನು ಖಾತರಿಪಡಿಸುತ್ತದೆ. ಅಲ್ಲದೆ, ಎನ್‌ಪಿಎಸ್ ಯೋಜನೆಯಡಿ ಇರುವ ನೌಕರರಿಗೂ ಯುಪಿಎಸ್ ಆಯ್ಕೆಗೆ ಅವಕಾಶ ಇರಲಿದೆ ಎಂದು ಮಾಹಿತಿ ನೀಡಿದರು.

ಖಚಿತ ಪಿಂಚಣಿ: ಏಕೀಕೃತ ಪಿಂಚಣಿ ಯೋಜನೆಯಡಿ ಕನಿಷ್ಠ 25 ವರ್ಷ ಸೇವೆ ಸಲ್ಲಿಸುವ ರೈಲ್ವೆ ನೌಕರರಿಗೆ ನಿವೃತ್ತಿಗೂ ಕೊನೆಯ 12 ತಿಂಗಳ ಮುನ್ನ ಪಡೆಯುವ ಸರಾಸರಿ ಮೂಲ ವೇತನದ ಶೇ.50ರಷ್ಟು ಮೊತ್ತವನ್ನು ಪಿಂಚಣಿ ಮೊತ್ತ ಪಡೆಯಲು ಖಾತರಿಪಡಿಸುತ್ತದೆ. ಅಂತೆಯೇ ಉದ್ಯೋಗಿಯ ಮರಣದ ಸನ್ನಿವೇಶಗಳಲ್ಲಿ, ಪಿಂಚಣಿದಾರನ ಕುಟುಂಬವು ಶೇ.60ರಷ್ಟು ಕುಟುಂಬ ಪಿಂಚಣಿ ಯೋಜನೆ ವ್ಯಾಪ್ತಿಗೆ ಬರಲಿದೆ ಎಂದರು.

ಕನಿಷ್ಠ ಭರವಸೆ ಪಿಂಚಣಿ: ಕನಿಷ್ಠ 10 ವರ್ಷ ಸೇವೆ ಸಲ್ಲಿಸಿದ ನೌಕರರಿಗೂ ನಿವೃತ್ತಿ ನಂತರ ಮಾಸಿಕ 10 ಸಾವಿರ ರೂ ಪಿಂಚಣಿಯ ಭರವಸೆಯನ್ನು ಒದಗಿಸಿದ್ದು, (AICPI-IW) ಅಖಿಲ ಭಾರತ ಗ್ರಾಹಕ ಬೆಲೆ ಸೂಚ್ಯಂಕವನ್ನು ಆಧರಿಸಿದ ಪರಿಹಾರ ಒದಗಿಸಲಿದೆ. ಜೊತೆಗೆ ಗ್ರ್ಯಾಚುಯಿಟಿ ದೊಡ್ಡ ಮೊತ್ತದ ಪಾವತಿ ಮಾಡಲಾಗುತ್ತದೆ ಎಂದು ತಿಳಿಸಿದರು.

ಮೈಸೂರು ವಿಭಾಗ: ಮೈಸೂರು ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು 5,952 ಉದ್ಯೋಗಿಗಳು ಹಾಗೂ ಮೈಸೂರು ರೈಲ್ವೆ ವರ್ಕ್‌ಶಾಪ್‌ನಲ್ಲಿನ ಒಟ್ಟು 1,358 ಉದ್ಯೋಗಿಗಳು ಯುಪಿಎಸ್ ಆಯ್ಕೆಗೆ ಅವಕಾಶ ಕಲ್ಪಿಸಲಾಗುವುದು ಎಂದರು.